ಸಂಪುಟ: 05 ಸಂಚಿಕೆ: 310 ಪುಟಗಳು: 08 ಶುಕ್ರವಾರ 23 ಜನವರಿ 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಸಾಧ್ಯವೇ ಇಲ್ಲ ಎಂದರೆ ಏನನ್ನೂ ಸಾಧಿಸಲಾಗದು. ಪ್ರಯತ್ನದಿಂದ ನಷ್ಟವೇನಿದೆ ಗೆದ್ದರೆ ಸಂತೋಷ ಸಿಗುವುದು, ಸೋತರೆ ಅನುಭವ ಖಚಿತ.

# ಗ್ರಾಮೀಣ ಸೇವೆಗೆ ನಿಯೋಜನೆಗೊಂಡ ವೈದ್ಯರ ಮಾಸಿಕ ವೇತನ ಕಡಿತ

• ಉದಯವಾಹಿನಿ,ಬೆಂಗಳೂರು



ಸರ್ಕಾರಿ ಕೋಟಾದಡಿ ಎಂಬಿಬಿಎಸ್ ಪ್ರವೇಶ ಪಡೆದು 2024 ಮತ್ತು 2025ನೇ ಸಾಲಿನಲ್ಲಿ ಕೋರ್ಸ್ ಪೂರ್ಣಗೊಳಿಸಿ ಗ್ರಾಮೀಣ ಭಾಗದ ಸರ್ಕಾರಿ ಆಸ್ಪತ್ರೆಗಳಲ್ಲಿ ಒಂದು ವರ್ಷದ ಕಡ್ಡಾಯ ಸೇವೆಗೆ ನಿಯೋಜನೆಗೊಂಡ ವೈದ್ಯರ ಮಾಸಿಕ ವೇತನ ಕಡಿತಗೊಳಿಸಿರುವುದನ್ನು ಪ್ರಶ್ನಿಸಿದ ಅರ್ಜಿ ಸಂಬಂಧ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

**ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್**

ಉತ್ತರಕನ್ನಡ ಜಿಲ್ಲೆ ಮುಂಡಗೋಡ ತಾಲ್ಲೂಕು ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸುತ್ತಿರುವ ಕಲಬುರಗಿ ನಿವಾಸಿ ಡಾ. ಶಶಿಕುಮಾರ್ ಸೇರಿ ರಾಜ್ಯದ ವಿವಿಧ ಸರ್ಕಾರಿ ಆಸ್ಪತ್ರೆಗಳಲ್ಲಿ ಕಿರಿಯ ವೈದ್ಯರಾಗಿ ಸೇವೆ ಸಲ್ಲಿಸುತ್ತಿರುವ 38 ಮಂದಿ ಎಂಬಿಬಿಎಸ್ ಪದವೀಧರರು ಸಲ್ಲಿಸಿರುವ ಅರ್ಜಿಯನ್ನು ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಗುರುವಾರ ವಿಚಾರಣೆ ನಡೆಸಿತು. ಕೆಲ ಕಾಲ ಅರ್ಜಿ ಆಲಿಸಿದ ನ್ಯಾಯಪೀಠ ಪ್ರತಿವಾದಿಗಳಾದ ಆರೋಗ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮತ್ತು ಆಯುಕ್ತರಿಗೆ ನೋಟಿಸ್ ಜಾರಿಗೊಳಿಸಿ, ಅರ್ಜಿಗೆ ನಾಲ್ಕು ವಾರಗಳಲ್ಲಿ ಆಕ್ಷೇಪಣೆ ಸಲ್ಲಿಸಲು ನಿರ್ದೇಶಿಸಿತು. ಇದೇ ವಿಷಯವಾಗಿ ಸಲ್ಲಿಕೆಯಾಗಿರುವ ಇತರ ಅರ್ಜಿಗಳನ್ನೂ ಸಹ ಈ ಅರ್ಜಿಯೊಂದಿಗೆ ವಿಚಾರಣೆಗೆ ನಿಗದಿಪಡಿಸಲು ರಿಜಿಸ್ಟ್ರಿಗೆ ಸೂಚಿಸಿ ವಿಚಾರಣೆ ಮುಂದೂಡಿತು.

**ಅರ್ಜಿದಾರರ ಮನವಿ ಏನು:** ರಾಜ್ಯದ ಸರ್ಕಾರಿ ಹಾಗೂ ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿ ಸರ್ಕಾರಿ ಕೋಟಾದಡಿ ಎಂಬಿಬಿಎಸ್ ಮುಗಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ ಒಂದು ವರ್ಷದ ಕಡ್ಡಾಯ ಸರ್ಕಾರಿ ಸೇವೆಗೆ ನಿಯೋಜನೆಗೊಂಡ ವೈದ್ಯರಿಗೆ ಮಾಸಿಕ 62 ಸಾವಿರ ರೂ. ಹಾಗೂ ರಾಷ್ಟ್ರೀಯ ಆರೋಗ್ಯ ಮಿಷನ್ ಅಡಿಯಲ್ಲಿ ನಿಯೋಜನೆಗೊಂಡ ವೈದ್ಯರಿಗೆ ಮಾಸಿಕ ವೇತನ 75 ಸಾವಿರ ರೂ. ನಿಗದಿಪಡಿಸಿ 2025ರ ಆಗಸ್ಟ್ 18ರಂದು ಅಧಿಸೂಚನೆ ಹೊರಡಿಸಲಾಗಿತ್ತು. ಆದರೆ, ಇಲ್ಲಿ ಏಕಾಏಕಿ 2025ರ ಅಕ್ಟೋಬರ್ 28ರಂದು ಪರಿಷ್ಕೃತ ಅಧಿಸೂಚನೆಯನ್ನು ಹೊರಡಿಸಿ, ವೇತನವನ್ನು ಮಾಸಿಕ 60 ಸಾವಿರ ರೂ. ಕಡಿತಗೊಳಿಸಲಾಗಿದೆ.

ಇದು ಕಾನೂನುಬಾಹಿರವಾಗಿದೆ. ಹಳೇ ಅಧಿಸೂಚನೆಯಂತೆ ಮಾಸಿಕ ವೇತನ ನೀಡಬೇಕು. ಅದರಂತೆಯೇ ಕಳೆದ ವರ್ಷ ಆಗಸ್ಟ್ ತಿಂಗಳಿನಿಂದ ಇಲ್ಲಿಯವರೆಗೆ ವೇತನದ ಹಿಂಬಾಕಿ ಪಾವತಿಸುವಂತೆ ನಿರ್ದೇಶನ ನೀಡಬೇಕು ಎಂದು ಅರ್ಜಿದಾರರು ಕೋರಿದ್ದಾರೆ.

## ಆಸ್ತಿ ದಾಖಲೆ ನಕಲಿ ತಡೆಗೆ ಬ್ಲಾಕ್ ಚೈನ್ ತಂತ್ರಜ್ಞಾನ: ಸುಪ್ರೀಂ

• ಉದಯವಾಹಿನಿ, ನವದೆಹಲಿ

ನೋಂದಾಯಿತ ದಾಖಲೆಗಳು ಮತ್ತು ಭೂ ದಾಖಲೆಗಳ ಡಿಜಿಟಲೀಕರಣಕ್ಕೆ ಬ್ಲಾಕ್‌ಚೈನ್‌ನಂತಹ ಸುರಕ್ಷಿತ ತಂತ್ರಜ್ಞಾನ ಬಳಸಿಕೊಂಡು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕ್ರಮ ಕೈಗೊಳ್ಳಬೇಕು ಎಂದು ಸುಪ್ರೀಂ ಕೋರ್ಟ್ ಗುರುವಾರ ತೀರ್ಪು ನೀಡಿದೆ. ಅಡಮಾನ ಪತ್ರ ವಿವಾದಕ್ಕೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್‌ನ ತೀರ್ಪು ಪ್ರಶ್ನಿಸಿ ಬೀದರ್‌ನ ಹೇಮಲತಾ ಎಂಬವರು ಸಲ್ಲಿಸಿದ್ದ ವಿಶೇಷ ಮೇಲ್ಮನವಿ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ರಾಜೇಶ್ ಬಿಂದಾಲ್ ಹಾಗೂ ಮನಮೋಹನ್ ಅವರ ಪೀಠವು, 'ನಕಲಿ ಆಸ್ತಿ ದಾಖಲೆಗಳನ್ನು ಸೃಷ್ಟಿಸುವ ಪಿಡುಗನ್ನು ಮಟ್ಟ ಹಾಕಲು ಇಂತಹ ಸುಧಾರಣೆ ಅಗತ್ಯ' ಎಂದು ಅಭಿಪ್ರಾಯಪಟ್ಟಿದೆ. ಬ್ಲಾಕ್ ಚೈನ್ ತಂತ್ರಜ್ಞಾನದಲ್ಲಿ ಆಸ್ತಿ ಮಾರಾಟ/ಖರೀದಿ/ವರ್ಗಾವಣೆಯ ದಿನಾಂಕ, ಆಸ್ತಿ ಮೌಲ್ಯ, ಮಾರಾಟಗಾರ/ಖರೀದಿದಾರ ಮೊದಲಾದ ಅಂಶಗಳು ಘಟಕಗಳ ರೂಪದಲ್ಲಿ ದಾಖಲಾಗಿರುತ್ತವೆ.

## ಲಷ್ಕರ್ ನಂಟು: ಉತ್ತರ ಕನ್ನಡದ ನಿವಾಸಿಗೆ 10 ವರ್ಷಗಳ ಶಿಕ್ಷೆ

• ಉದಯವಾಹಿನಿ, ನವದೆಹಲಿ

ಪಾಕಿಸ್ತಾನ ಮೂಲದ ಭಯೋತ್ಪಾದಕ ಸಂಘಟನೆ 'ಲಷ್ಕರ್-ಎ-ತಯಬಾ'ಕ್ಕೆ ಯುವಕರನ್ನು ನೇಮಕ ಮಾಡಿಕೊಳ್ಳುವ ಮತ್ತು ಭಯೋತ್ಪಾದನಾ ಕೃತ್ಯದಲ್ಲಿ ಭಾಗಿಯಾಗಿದ್ದಕ್ಕಾಗಿ ಉತ್ತರ ಕನ್ನಡದ ಸಯ್ಯದ್ ಎಂ.ಇದ್ರಿಸ್ ಎಂಬಾತನಿಗೆ ರಾಷ್ಟ್ರೀಯ ತನಿಖಾ ದಳದ (ಎನ್‌ಐಎ) ವಿಶೇಷ ನ್ಯಾಯಾಲಯವು 10 ವರ್ಷಗಳ ಕಠಿಣ ಶಿಕ್ಷೆ ವಿಧಿಸಿದೆ. ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯ್ದೆ (ಯುಎಪಿಎ) ಅಡಿಯಲ್ಲಿ ಇದ್ರೀಸ್‌ಗೆ ಕೋಲ್ಕತ್ತದ ವಿಶೇಷ ನ್ಯಾಯಾಲಯವು ಶಿಕ್ಷೆ ಹಾಗೂ 70 ಸಾವಿರ ದಂಡ ವಿಧಿಸಿ ಬುಧವಾರ ಆದೇಶ ಹೊರಡಿಸಿದೆ ಎಂದು ಎನ್‌ಐಎ ಪತ್ರಿಕಾ ಹೇಳಿಕೆ ತಿಳಿಸಿದೆ.

ಆರಂಭದಲ್ಲಿ ಪಶ್ಚಿಮ ಬಂಗಾಳ ಪೊಲೀಸರು ಪ್ರಕರಣ ದಾಖಲಿಸಿದ್ದರು. ಪ್ರಕರಣವನ್ನು ರಾಷ್ಟ್ರೀಯ ತನಿಖಾ ದಳಕ್ಕೆ 2020ರ ಏಪ್ರಿಲ್‌ನಲ್ಲಿ ಹಸ್ತಾಂತರಿಸಲಾಗಿತ್ತು. ಜಮ್ಮು ಮತ್ತು ಕಾಶ್ಮೀರದ ಅಲ್ತಾಫ್ ಅಹ್ಮದ್ ರಾದರ್ ಹಾಗೂ ಇದ್ರಿಸ್ ಅವರನ್ನು ತನಿಖಾ ದಳ ಬಂಧಿಸಿತ್ತು.

## ಕಲ್ಲಡ್ಕ ಪ್ರಭಾಕರ ಭಟ್ ವಿರುದ್ಧ ದ್ವೇಷಭಾಷಣ ಆರೋಪ

• ಉದಯವಾಹಿನಿ, ಬೆಂಗಳೂರು

ಆರ್‌ಎಸ್‌ಎಸ್ ಮುಖಂಡ ಕಲ್ಲಡ್ಕ ಪ್ರಭಾಕರ್ ಭಟ್‌ಗೆ ಕರ್ನಾಟಕ ಹೈಕೋರ್ಟ್ ಮಹತ್ವದ ರಿಲೀಫ್ ನೀಡಿದೆ. ಪುತ್ತೂರಿನಲ್ಲಿ ನಡೆದಿದ್ದ ವಿವಾದಾತ್ಮಕ ಭಾಷಣಕ್ಕೆ ಸಂಬಂಧಿಸಿದಂತೆ ಅವರ ವಿರುದ್ಧ ದಾಖಲಾಗಿದ್ದ ಪ್ರಕರಣದಲ್ಲಿ, ಪೊಲೀಸರು ಯಾವುದೇ ಬಲವಂತದ ಕ್ರಮ ಕೈಗೊಳ್ಳದಂತೆ ಹೈಕೋರ್ಟ್ ನಿರ್ದೇಶನ ನೀಡಿದೆ. 2026ರ ಜ. 12ರಂದು ಪುತ್ತೂರಿನ ವಿವೇಕಾನಂದ ಕಾಲೇಜಿನಲ್ಲಿ ನಡೆದಿದ್ದ ವಿವೇಕಾನಂದ ಜಯಂತಿ ಕಾರ್ಯಕ್ರಮದಲ್ಲಿ ಪ್ರಭಾಕರ್ ಭಟ್ ಅವರು, ಮುಸಲ್ಮಾನ ಮತ್ತು ಕ್ರೈಸ್ತ ಸಮುದಾಯದ ವಿರುದ್ಧ ಹಿಂಸೆಗೆ ಪ್ರಚೋದನೆ ನೀಡುವಂತಹ ಮಾತುಗಳನ್ನಾಡಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು.

ಈ ಹಿನ್ನೆಲೆಯಲ್ಲಿ ದಾಖಲಾಗಿದ್ದ ಎಫ್‌ಐಆರ್ ರದ್ದು ಕೋರಿ ಭಟ್ ಅವರು ನ್ಯಾಯಾಲಯದ ಮೊರೆ ಹೋಗಿದ್ದರು.


## ಬೆಂಗಳೂರು ಎರಡನೇ ಅತಿ ಹೆಚ್ಚು ವಾಹನ ದಟ್ಟಣೆಯ ನಗರ

• ಉದಯವಾಹಿನಿ, ಬೆಂಗಳೂರು

ಭಾರತದ ಐ.ಟಿ ಕೇಂದ್ರವಾದ ಬೆಂಗಳೂರು ಜಾಗತಿಕವಾಗಿ ಎರಡನೇ ಅತಿ ಹೆಚ್ಚು ವಾಹನದಟ್ಟಣೆಯ ನಗರ ಎಂದು ನೆದರ್‌ಲ್ಯಾಂಡ್‌ನ ಟಾಮ್‌ಟಮ್ ಸಂಸ್ಥೆ ಬಿಡುಗಡೆ ಮಾಡಿರುವ ಸಂಚಾರ ಸೂಚ್ಯಂಕದಲ್ಲಿ ಉಲ್ಲೇಖಿಸಲಾಗಿದೆ. ಮೆಕ್ಸಿಕೊ ಮೊದಲ ಸ್ಥಾನದಲ್ಲಿದೆ. ಬೆಂಗಳೂರಿನಲ್ಲಿ ಸರಾಸರಿ ದಟ್ಟಣೆಯು ಶೇ 74.4ರಷ್ಟಿದೆ. 2024ಕ್ಕೆ ಹೋಲಿಸಿದರೆ 2025ರಲ್ಲಿ ಶೇ 1.7ರಷ್ಟು ಹೆಚ್ಚಾಗಿದೆ. ಚಾಲಕರು 15 ನಿಮಿಷಗಳಲ್ಲಿ ಸರಾಸರಿ 4.2 ಕಿ.ಮೀ. ದೂರವನ್ನಷ್ಟೇ ಕ್ರಮಿಸಲು ಸಾಧ್ಯವಾಗಿದೆ. 10 ಕಿ.ಮೀ. ಸಾಗಲು ಸರಾಸರಿ 36 ನಿಮಿಷ ಒಂಬತ್ತು ಸೆಕೆಂಡ್ಸ್ ತೆಗೆದುಕೊಂಡಿತ್ತು. ದಟ್ಟಣೆ ಸಮಯದಲ್ಲಿ ಗಂಟೆಗೆ ಸರಾಸರಿ 13.9 ಕಿ.ಮೀ.ಗೆ ಇಳಿದಿತ್ತು ಎಂದು ವರದಿ ತಿಳಿಸಿದೆ. 2025ರ ಮೇ 17ರಂದು ನಗರದಲ್ಲಿ ಪ್ರಯಾಣದ ಅನುಭವ ತುಂಬಾ ಕೆಟ್ಟದಾಗಿತ್ತು ಎಂದು ಗುರುತಿಸಲಾಗಿದೆ. ದಟ್ಟಣೆಯ ಮಟ್ಟವು ಶೇ 101ರಷ್ಟಿತ್ತು.

# ಗವರ್ನರ್ v/s ಗವರ್ನಮೆಂಟ್

### ಭಾಷಣದ ಕೆಲ ಸಾಲು ಬದಲಾವಣೆಗೆ ನಿರ್ಧಾರ





• ಉದಯವಾಹಿನಿ, ಬೆಂಗಳೂರು

ಜಂಟಿ ಅಧಿವೇಶನದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಚುಟುಕಾಗಿ ಭಾಷಣ ಮಾಡಿದರೂ ಸಾಂವಿಧಾನಿಕ ಬಿಕ್ಕಟ್ಟು ಸೃಷ್ಟಿಗೆ ಅವಕಾಶ ಕೊಡದೇ ಜಾಣತನ ಮೆರೆದಿದ್ದಾರೆ. ಹೌದು. ಸಂವಿಧಾನದ ವಿಧಿ 176ರ ಪ್ರಕಾರ ಪ್ರತಿ ವರ್ಷದ ಮೊದಲ ಅಧಿವೇಶನವು ರಾಜ್ಯಪಾಲರ ಭಾಷಣದೊಂದಿಗೆ ಆರಂಭವಾಗುವುದು ಕಡ್ಡಾಯ. ಹೀಗಾಗಿ ರಾಜ್ಯ ಸರ್ಕಾರದ ಭಾಷಣದಲ್ಲಿ ಕೇಂದ್ರದ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸುವ ಅಂಶ ಇರುವ ಕಾರಣ ರಾಜ್ಯಪಾಲರು ಯಾವ ನಿರ್ಧಾರವನ್ನು ಕೈಗೊಳ್ಳುತ್ತಾರೆ ಎಂಬ ಕುತೂಹಲ ಇತ್ತು. ಸರ್ಕಾರ ಸಿದ್ಧಪಡಿಸಿದ ಭಾಷಣ ಮಾಡಲು ನಿರಾಕರಿಸಿ ಬೆಳಗ್ಗೆ 10:10ರ ತನಕವೂ ಅಧಿವೇಶನಕ್ಕೆ ಬರುವ ಬಗ್ಗೆ ಅಧಿಕೃತವಾಗಿ ಹೇಳದೇ ಸರ್ಕಾರವನ್ನು ಪೇಚಿಗೆ ಸಿಲುಕಿಸಿದರು. ಬಳಿಕ ಅಧಿವೇಶನಕ್ಕೆ ಬರುವ ಬಗ್ಗೆ ತಿಳಿಸಿ 11 ಗಂಟೆಗೆ ವಿಧಾನಸಭೆಗೆ ಆಗಮಿಸಿದ ರಾಜ್ಯಪಾಲರು ಒಂದೇ ನಿಮಿಷದಲ್ಲಿ ಭಾಷಣ ಮುಗಿಸಿ ಸರ್ಕಾರಕ್ಕೆ ಮತ್ತೊಂದು ಶಾಕ್ ನೀಡಿದರು. ಒಂದು ವೇಳೆ ಅಧಿವೇಶನಕ್ಕೆ ಬಾರದೇ ಇದ್ದರೆ ಸಾಂವಿಧಾನಿಕ ಬಿಕ್ಕಟ್ಟು ಸೃಷ್ಟಿಯಾಗುವ ಸಾಧ್ಯತೆ ಇತ್ತು. ಆದರೆ ಅಧಿವೇಶನಕ್ಕೆ ಹಾಜರಾಗುವ ಮೂಲಕ ಈ ಸಮಸ್ಯೆಯಿಂದ ಪಾರಾದರು. ರಾಜ್ಯ ಸರ್ಕಾರ ಹಾಗೂ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ನಡುವೆ ಸಂಘರ್ಷ ಶುರುವಾದಂತಿದೆ. ಗುರುವಾರ ವಿಶೇಷ ಅಧಿವೇಶನಕ್ಕಾಗಿ ಮಂಡಿಸಬೇಕಾದ ಭಾಷಣದಲ್ಲಿ ಕೆಲ ಆಕ್ಷೇಪಾರ್ಹ ಅಂಶಗಳ ಕೈಬಿಡಬೇಕೆಂಬ ರಾಜ್ಯಪಾಲರ ಸೂಚನೆಯನ್ನು ಸರ್ಕಾರ ತಿರಸ್ಕರಿಸಿದೆ. ಈ ಮಧ್ಯೆ, ಅಧಿವೇಶನಕ್ಕೆ ರಾಜ್ಯಪಾಲರು ಬಾರದಿದ್ದರೆ ಕಾನೂನು ಹೋರಾಟಕ್ಕೆ ರಾಜ್ಯ ಸರ್ಕಾರ ಸಜ್ಜುಗೊಂಡಿದೆ. ಕರ್ನಾಟಕ ರಾಜ್ಯ ಸರ್ಕಾರ ಸಿದ್ದಪಡಿಸಿದ ಭಾಷಣದಲ್ಲಿ ಕೇಂದ್ರದ ವಿರುದ್ಧ ಧೋರಣೆಗಳಿರುವ 11 ಪ್ಯಾರಾಗಳನ್ನು ಕೈ ಬಿಡಬೇಕೆಂದು ಸರ್ಕಾರಕ್ಕೆ ಸೂಚಿಸಿದ್ದರು. ಈ ಸಂಬಂಧ ಕಾನೂನು ಸಚಿವ ಹೆಚ್.ಕೆ.ಪಾಟೀಲ್ ನೇತೃತ್ವದ ನಿಯೋಗ ಅವರನ್ನು ಭೇಟಿ ಮಾಡಿ, ಮನವರಿಕೆ ಮಾಡಲು ಯತ್ನಿಸಿದರೂ ಫಲಕಾರಿಯಾಗಿರಲಿಲ್ಲ. ಈ ಬಗ್ಗೆ ಸಿಎಂ ಜೊತೆ ಚರ್ಚಿಸಿ ನಿರ್ಧಾರ ಕೈಗೊಳ್ಳುವುದಾಗಿ ಸಚಿವರು ತಿಳಿಸಿದ್ದರು. ಸಿಎಂ ನಿವಾಸದಲ್ಲಿ ನಡೆದ ಚರ್ಚೆಯ ವೇಳೆ ರಾಜ್ಯಪಾಲರು ಸೂಚಿಸಿದ 11 ಪ್ಯಾರಾಗಳಲ್ಲಿರುವ ಕೆಲ ವಿಷಯಗಳನ್ನು ಬದಲಾಯಿಸಲು ಸಹಮತಿ ವ್ಯಕ್ತಪಡಿಸಿದರೂ, ವಿಬಿ ರಾಮ್ ಜಿ ಯೋಜನೆಯ ವಿರೋಧ ನಿರ್ಧಾರವನ್ನು ಹಿಂಪಡೆಯುವುದಿಲ್ಲ. ಕೆಲವೊಂದು ಸಾಲುಗಳನ್ನು ಬದಲಾಯಿಸುವ ನಿರ್ಧಾರ ಸಭೆಯಲ್ಲಿ ತೆಗೆದುಕೊಳ್ಳಲಾಗಿದೆ ಎಂದು ಸಭೆಯ ಬಳಿಕ ಹೆಚ್.ಕೆ.ಪಾಟೀಲ್ ಹೇಳಿದರು.

ಸಿಎಂ ಕಾನೂನು ಸಲಹೆಗಾರ ಎ.ಎಸ್.ಪೊನ್ನಣ್ಣ ಅವರು ರಾಜ್ಯಪಾಲರು ಭೇಟಿ ಮಾಡಿ ಕೈಗೊಂಡಿರುವ ನಿರ್ಧಾರದ ಬಗ್ಗೆ ತಿಳಿಸಿದರು. ಬಳಿಕ ಹೊರಬಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮನರೇಗಾ ವಿಚಾರ ಯಾವುದೇ ಕಾರಣಕ್ಕೂ ಕೈ ಬಿಡಲ್ಲ, ರಾಜ್ಯದ ಹಿತ ಕಾಪಾಡುವ ಅಂಶವನ್ನು ನಾವು ಬಿಡುವ ಪ್ರಶ್ನೆಯೇ ಇಲ್ಲ, ಸಿಎಂ ಜೊತೆ ಮಾತುಕತೆ ಮಾಡಿದ್ದೇವೆ, ಆ ಭಾಷಣವನ್ನೇ ರಾಜ್ಯಪಾಲರು ಓದಬೇಕು ಎನ್ನುವುದು ಕ್ಯಾಬಿನೆಟ್ ನಿರ್ಧಾರವಾಗಿದೆ. ಜಂಟಿ ಅಧಿವೇಶನಕ್ಕೆ ರಾಜ್ಯಪಾಲರು ಬರುವ ವಿಶ್ವಾಸವಿದೆ. ಬೆಳಗ್ಗೆ ಅವರನ್ನು ಕರೆದೊಯ್ಯಲು ಲೋಕಭವನಕ್ಕೆ ಬರುತ್ತೇನೆ ಎಂದು ತಿಳಿಸಿದರು. ಈ ಬಗ್ಗೆ ಕಾನೂನು ಹೋರಾಟಕ್ಕೆ ರಾಜ್ಯ ಸರ್ಕಾರ ಮುಂದಾಗಿದೆ. 11.15ರ ವರೆಗೆ ರಾಜ್ಯಪಾಲರು ಅಧಿವೇಶನಕ್ಕೆ ಬಾರದಿದ್ದರೆ ಸುಪ್ರೀಂ ಕೋರ್ಟ್ ಮೊರೆ ಹೋಗಲು ತೀರ್ಮಾನಿಸಿದೆ. ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ಈಗಾಗಲೇ ದೆಹಲಿಗೆ ಪ್ರಯಾಣ ಬೆಳೆಸಿದ್ದಾರೆ. ಪೊನ್ನಣ್ಣ ಅವರಿಗೆ ಕಾನೂನು ಹೋರಾಟದ ಡ್ರಾಫ್ಟ್ ಮಾಡಲು ತಿಳಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

### ಸಿಎಂ ಸಿದ್ದರಾಮಯ್ಯ ವಾಗ್ದಾಳಿ

ರಾಜ್ಯಪಾಲರ ನಡೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಂವಿಧಾನದ ಪ್ರಕಾರ ಸರ್ಕಾರ ಸಿದ್ಧಪಡಿಸಿದ ಭಾಷಣವನ್ನೇ ರಾಜ್ಯಪಾಲರು ಓದಬೇಕು. ಆದರೆ ಅವರು ಕೇವಲ ಒಂದು ಪ್ಯಾರಾ ಓದಿ ಸಂವಿಧಾನವನ್ನು ಉಲ್ಲಂಘಿಸಿದ್ದಾರೆ. ಅವರು ತಮ್ಮ ಕರ್ತವ್ಯ ಪಾಲನೆ ಮಾಡಿಲ್ಲ, ಎಂದು ಕಿಡಿ ಕಾರಿದರು.

### ಸಂಘರ್ಷಕ್ಕೆ ಅಸಲಿ ಕಾರಣವೇನು

ಕೇಂದ್ರ ಸರ್ಕಾರವು 'ಮನರೇಗಾ' ಯೋಜನೆಯಲ್ಲಿ ಮಹಾತ್ಮ ಗಾಂಧಿ ಹೆಸರನ್ನು ಕೈಬಿಟ್ಟು, 'ವಿಬಿ ಜಿ ರಾಮ್ ಜಿ' ಯೋಜನೆ ಜಾರಿಗೆ ತಂದಿರುವುದನ್ನು ರಾಜ್ಯ ಸರ್ಕಾರ ವಿರೋಧಿಸುತ್ತಿದೆ. ಈ ಹೊಸ ಯೋಜನೆಯಡಿ ಜನರು ಎಲ್ಲಿ ಕೆಲಸ ಮಾಡಬೇಕೆಂಬುದನ್ನು ಕೇಂದ್ರವೇ ನಿರ್ಧರಿಸುತ್ತದೆ. ಮನರೇಗಾವನ್ನು ಮರುಸ್ಥಾಪಿಸಬೇಕು, ಅಲ್ಲಿಯವರೆಗೆ ರೈತ ಹೋರಾಟದ ಮಾದರಿಯಲ್ಲಿ ಹೋರಾಟ ಮಾಡುತ್ತೇವೆ, ಎಂಬ ಸರ್ಕಾರದ ನಿಲುವನ್ನು ಭಾಷಣದ ಪ್ರತಿಯಲ್ಲಿ ಸೇರಿಸಲಾಗಿತ್ತು. ಕೇಂದ್ರದ ತಪ್ಪನ್ನು ಮುಚ್ಚಿಹಾಕಲು ರಾಜ್ಯಪಾಲರು ಈ ಭಾಗವನ್ನು ಓದಲು ನಿರಾಕರಿಸಿದ್ದಾರೆ. ಅವರು ಕೇಂದ್ರದ ಕೈಗೊಂಬೆಯಂತೆ ವರ್ತಿಸುತ್ತಿದ್ದಾರೆ ಎಂದು ಸಿದ್ದರಾಮಯ್ಯ ಆರೋಪಿಸಿದರು. ಸರ್ಕಾರ ಸಿದ್ಧಪಡಿಸಿದ ಭಾಷಣದ ಪ್ರತಿಯನ್ನೇ ಎಲ್ಲಾ ಶಾಸಕರಿಗೆ ಹಂಚಲಾಗಿದೆ ಎಂದು ಸಿಎಂ ತಿಳಿಸಿದರು. ಅಲ್ಲದೆ, ಸಚಿವರ ಜೊತೆ ಚರ್ಚಿಸಿ ರಾಜ್ಯಪಾಲರ ವಿರುದ್ಧ ನಿರ್ಣಯ ಕೈಗೊಳ್ಳುವ ಬಗ್ಗೆ ತೀರ್ಮಾನಿಸುವುದಾಗಿ ಮತ್ತು ರಾಜ್ಯಾದ್ಯಂತ ಹೋರಾಟ ಹಮ್ಮಿಕೊಳ್ಳುವುದಾಗಿ ಹೇಳಿದರು.




**ಸದನಕ್ಕೆ ಬಂದು ಭಾಷಣ ಮಾಡದೆಯೇ ರಾಜ್ಯಪಾಲರು ವಾಪಸ್!**

### ಸದನದಲ್ಲಿ ಗದ್ದಲ, ನೂಕುನುಗ್ಗಲು

ರಾಜ್ಯಪಾಲರು ಭಾಷಣ ಮೊಟಕುಗೊಳಿಸಿ ಹೊರಡಲು ಅನುವಾಗುತ್ತಿದ್ದಂತೆ, ಕಾನೂನು ಸಚಿವ ಎಚ್.ಕೆ ಪಾಟೀಲ್ ಅವರು ಪೂರ್ಣ ಭಾಷಣ ಓದುವಂತೆ ತಾಕೀತು ಮಾಡಿದರು. ರಾಜ್ಯಪಾಲರು ಅದಕ್ಕೆ ಸೊಪ್ಪು ಹಾಕದೆ ಹೊರಡಲು ಮುಂದಾದಾಗ, ಕಾಂಗ್ರೆಸ್ ಸದಸ್ಯರಾದ ಎಚ್.ಸಿ ಬಾಲಕೃಷ್ಣ, ಬಿ.ಕೆ. ಹರಿಪ್ರಸಾದ್ ಮತ್ತು ಎಸ್. ರವಿ ಅವರು ರಾಜ್ಯಪಾಲರ ದಾರಿಗೆ ಅಡ್ಡಲಾಗಿ ನಿಂತರು. ಪರಿಸ್ಥಿತಿ ಕೈಮೀರುತ್ತಿದ್ದಂತೆ ಮಾರ್ಷಲ್‌ಗಳು ಮಧ್ಯಪ್ರವೇಶಿಸಿ, ಹರಿಪ್ರಸಾದ್ ಅವರನ್ನು ಪಕ್ಕಕ್ಕೆ ದೂಡಿ ರಾಜ್ಯಪಾಲರಿಗೆ ದಾರಿ ಮಾಡಿಕೊಟ್ಟರು. ಈ ವೇಳೆ ಕಾಂಗ್ರೆಸ್ ಶಾಸಕರು ರಾಜ್ಯಪಾಲರ ವಿರುದ್ಧ ಜೋರಾಗಿ ಧಿಕ್ಕಾರ ಕೂಗಿದರು.

**1** 1990ರಲ್ಲಿ ವೀರೇಂದ್ರ ಪಾಟೀಲರು ಮುಖ್ಯಮಂತ್ರಿಯಾಗಿದ್ದ ವೇಳೆಯೂ ರಾಜಭವನದ ನಡುವೆ ತಿಕ್ಕಾಟ

**2** ಯಡಿಯೂರಪ್ಪನವರು ಎರಡನೇ ಅವಧಿಯಲ್ಲಿ ಸಿಎಂ ಆಗಿದ್ದ ವೇಳೆ ತೀವ್ರಗೊಂಡಿದ್ದ ಸರ್ಕಾರ ಮತ್ತು ರಾಜಭವನದ ತಿಕ್ಕಾಟ

**3** ಸಿದ್ದರಾಮಯ್ಯ ಸರ್ಕಾರ ಬರೆದುಕೊಟ್ಟ ಭಾಷಣವನ್ನು ಓದದೇ ಎಲ್ಲರಿಗೂ ನಮಸ್ಕಾರ ಎಂದಷ್ಟೇ ಹೇಳಿ ಭಾಷಣ ಮುಗಿಸಿದ ಗೆಹ್ಲೋಟ್

# ರಾಜೀವ್ ಗೌಡ ವಿರುದ್ಧದ ಎಫ್‌ಐಆರ್ ರದ್ದತಿಗೆ ಹೈ ನಕಾರ

• ಉದಯವಾಹಿನಿ, ಬೆಂಗಳೂರು

ಸಚಿವ ಝುಮೀರ್ ಅಹ್ಮದ್ ಪುತ್ರ ಝುದ್ ಖಾನ್ ಅಭಿನಯದ 'ಕಲ್ಟ್' ಚಿತ್ರದ ಬ್ಯಾನರ್ ಮತ್ತು ಕಟೌಟ್‌ಗಳನ್ನು ತೆರವುಗೊಳಿಸಿದ ವಿಚಾರಕ್ಕೆ ಶಿಡ್ಲಘಟ್ಟ ಪೌರಾಯುಕ್ತ ಜಿ. ಅಮೃತಾ ಹಾಗೂ ಸ್ಥಳೀಯ ಜೆಡಿಎಸ್ ಶಾಸಕ ಬಿ.ಎನ್. ರವಿಕುಮಾರ್ ಅವರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿ, ಬೆದರಿಕೆಯೊಡ್ಡಿದ ಆರೋಪಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಮುಖಂಡ ಬಿ.ವಿ. ರಾಜೀವ್ ಗೌಡ ವಿರುದ್ಧ ದಾಖಲಾಗಿರುವ ಪ್ರಕರಣ ರದ್ದುಪಡಿಸಲು ಹೈಕೋರ್ಟ್ ನಿರಾಕರಿಸಿದೆ.

**ಎರಡು ಪ್ರತ್ಯೇಕ ಎಫ್‌ಐಆರ್ ದಾಖಲು**




ಶಿಡ್ಲಘಟ್ಟ ಟೌನ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಎರಡು ಪ್ರತ್ಯೇಕ ಎಫ್‌ಐಆರ್‌ಗಳನ್ನು ರದ್ದು ಕೋರಿ ಕಾಂಗ್ರೆಸ್ ಮುಖಂಡ ಬಿ.ವಿ. ರಾಜೀವ್ ಗೌಡ ಸಲ್ಲಿಸಿದ್ದ ಅರ್ಜಿ ವಿಚಾರಣೆ ಪೂರ್ಣಗೊಳಿಸಿ ಕಾಯ್ದಿರಿಸಿದ್ದ ತೀರ್ಪನ್ನು ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಗುರುವಾರ ಪ್ರಕಟಿಸಿತು.

ಅರ್ಜಿಗಳಲ್ಲಿ ಯಾವುದೇ ಮೆರಿಟ್ ಇಲ್ಲ. ಆದ್ದರಿಂದ, ಅವುಗಳನ್ನು ವಜಾಗೊಳಿಸಲಾಗಿದೆ. ಅವುಗಳನ್ನು ವಜಾಗೊಳಿಸಲಾಗಿದೆ. ಆದೇಶದಲ್ಲಿ ವ್ಯಕ್ತಪಡಿಸಲಾಗಿರುವ ಅಭಿಪ್ರಾಯಗಳು ಪ್ರಕರಣ ರದ್ದು ಕೋರಿ ಸಲ್ಲಿಸಿರುವ ಹಾಲಿ ಅರ್ಜಿ ಪರಿಗಣಿಸುವುದಕ್ಕಷ್ಟೇ ಸೀಮಿತವಾಗಿದ್ದು, ಆ ಅಭಿಪ್ರಾಯಗಳು ಪ್ರಕರಣ ತನಿಖೆಯ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ವಿಸ್ತ್ರತ ತೀರ್ಪಿನ ಪ್ರತಿ ಇನ್ನಷ್ಟೇ ಲಭ್ಯವಾಗಬೇಕಿದೆ.

**ಪ್ರಕರಣವೇನು:** ಸಾರ್ವಜನಿಕರ ದೂರಿನ ಮೇರೆಗೆ 'ಕಲ್ಟ್' ಚಲನಚಿತ್ರದ ಬ್ಯಾನರ್ ಮತ್ತು ಕಟೌಟ್ ತೆಗೆಸಿದ್ದಕ್ಕೆ ರಾಜೀವ್ ಗೌಡ ಅವರು ಅವಾಚ್ಯ ಶಬ್ದಗಳಿಂದ ನಿಂದಿಸಿ, ಬೆದರಿಕೆಯೊಡ್ಡಿದ್ದಾರೆ ಎಂದು ಆರೋಪಿಸಿ ಪೌರಾಯುಕ್ತ ಅಮೃತಾ ಅವರು 2026ರ ಜನವರಿ 14ರಂದು ಶಿಡ್ಲಘಟ್ಟ ನಗರ ಠಾಣೆಗೆ ದೂರು ನೀಡಿದ್ದರು.

ಜತೆಗೆ, ಅಮೃತಾ ಅವರ ಜತೆ ಫೋನ್‌ನಲ್ಲಿ ಮಾತನಾಡುವಾಗ ಜೆಡಿಎಸ್ ಶಾಸಕರಾದ ಬಿ.ಎನ್. ರವಿಕುಮಾರ್ ಅವರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿ, ಗಲಭೆಗೆ ಪ್ರಚೋದನೆ ನೀಡಿದ ಆರೋಪದ ಮೇಲೆ ಜೆಡಿಎಸ್ ಶಿಡ್ಲಘಟ್ಟ ತಾಲ್ಲೂಕು ಉಪಾಧ್ಯಕ್ಷ ಎನ್.ಸಿ. ಶ್ರೀನಿವಾಸ್ ಗೌಡ ಸಹ ದೂರು ನೀಡಿದ್ದರು.

ಈ ಎರಡೂ ದೂರುಗಳ ಆಧಾರದಲ್ಲಿ ರಾಜೀವ್ ಗೌಡ ಅವರ ವಿರುದ್ಧ ಶಿಡ್ಲಘಟ್ಟ ಟೌನ್ ಪೊಲೀಸ್ ಠಾಣೆಯಲ್ಲಿ ಎರಡು ಪ್ರತ್ಯೇಕ ಎಫ್‌ಐಆರ್‌ಗಳು ದಾಖಲಾಗಿದ್ದವು. ಇದರಿಂದ, ಎಫ್‌ಐಆರ್ ರದ್ದು ಕೋರಿ ರಾಜೀವ್ ಗೌಡ ಹೈಕೋರ್ಟ್ ಮೆಟ್ಟಿಲೇರಿದ್ದರು. ಮಂಗಳವಾರ (ಜನವರಿ 20) ಅರ್ಜಿ ವಿಚಾರಣೆ ನಡೆಸಿದ್ದ ಹೈಕೋರ್ಟ್, ಮಹಿಳೆ ಎಂದರೆ ಗೌರವವೇ ಇಲ್ಲವೇ ನಾಲಿಗೆ ಶುದ್ಧವಿರಬೇಕು. ನಾಲಿಗೆಯೇ ಎಲ್ಲವನ್ನೂ ಯಾವಾಗಲೂ ನಾಶ ಮಾಡಿದೆ. ಈಗ ನೀವು ಕ್ಷಮೆ ಕೋರಿದರೂ ಬಿರುಕು ಹಾಗೆ ಉಳಿಯಲಿದೆ ಎನ್ನುವುದು ನಿಮ್ಮ ಗಮನಕ್ಕೆ ಇರಬೇಕು ಎಂದು ರಾಜೀವ್ ಗೌಡ ಅವರನ್ನು ತೀವ್ರ ತರಾಟೆಗೆ ತೆಗೆದುಕೊಂಡಿತ್ತಲ್ಲದೆ, ಅರ್ಜಿ ಕುರಿತ ತೀರ್ಪನ್ನು ಕಾಯ್ದಿರಿಸಿತ್ತು.

# ಡಿಜಿಪಿ ರಾಮಚಂದ್ರ ರಾವ್ ಹುದ್ದೆಗೆ ಹಿರಿಯ ಪೊಲೀಸ್ ಅಧಿಕಾರಿ ನೇಮಕ


## ಡಿಜಿಪಿ ಉಮೇಶ್ ಕುಮಾರ್ ಅವರಿಗೆ ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯದ ಹೆಚ್ಚುವರಿ ಜವಾಬ್ದಾರಿ

• ಉದಯವಾಹಿನಿ, ಬೆಂಗಳೂರು

ಹಿರಿಯ ಐಪಿಎಸ್ ಅಧಿಕಾರಿ ಕೆ. ರಾಮಚಂದ್ರ ರಾವ್ ಅಮಾನತುಗೊಂಡ ನಂತರ ಅವರು ನಿರ್ವಹಿಸುತ್ತಿದ್ದ ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯದ (ಡಿಸಿಆರ್‌ಇ) ಜವಾಬ್ದಾರಿಯನ್ನು ಮತ್ತೊಬ್ಬ ಹಿರಿಯ ಐಪಿಎಸ್ ಅಧಿಕಾರಿಗೆ ನೀಡಿ ಸರ್ಕಾರ ಆದೇಶ ಹೊರಡಿಸಿದೆ.

ಹಿರಿಯ ಪೊಲೀಸ್ ಅಧಿಕಾರಿ ನೇಮಕಾತಿ ವಿಭಾದ ಡಿಜಿಪಿ ಉಮೇಶ್ ಕುಮಾರ್ ಅವರಿಗೆ ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯದ ಹೆಚ್ಚುವರಿ ಜವಾಬ್ದಾರಿಯನ್ನು ನೀಡಿದೆ. ಮುಂದಿನ ಆದೇಶದವರೆಗೂ ಈ ಹುದ್ದೆಯನ್ನು ಉಮೇಶ್ ಕುಮಾರ್ ನಿರ್ವಹಣೆ ಮಾಡಬೇಕು ಎಂದು ಸರ್ಕಾರ ಸೂಚಿಸಸಿದೆ.

**ಸರ್ಕಾರಿ ಕಚೇರಿಯಲ್ಲೇ ಮಹಿಳೆಯೊಬ್ಬರ ಜತೆಗಿನ ಅಸಭ್ಯ ವರ್ತನೆ:** ಬೆಂಗಳೂರು ಸರ್ಕಾರಿ ಕಚೇರಿಯಲ್ಲೇ ಮಹಿಳೆಯೊಬ್ಬರ ಜತೆಗಿನ ಅಸಭ್ಯ ವರ್ತನೆ ತೋರಿದ್ದ ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯದ (ಡಿಸಿಆರ್‌ಇ) ಡಿಜಿಪಿ ರಾಮಚಂದ್ರ ರಾವ್ ಅವರ ತಲೆದಂಡವಾಗಿತ್ತು. ರಾವ್, ಪೊಲೀಸ್ ಸಮವಸ್ತ್ರದಲ್ಲಿಯೇ ಸರ್ಕಾರಿ ಕಚೇರಿಯಲ್ಲಿ ಮಹಿಳೆಯನ್ನು ತಬ್ಬಿ ಮುದ್ದಾಡಿ ಚುಂಬಿಸಿದ್ದ ಹಳೆಯ ವಿಡಿಯೋ ಕಳೆದ ಸೋಮವಾರ ಬಹಿರಂಗವಾಗಿತ್ತು. ರಾಮಚಂದ್ರ ರಾವ್ ಅವರ ಈ ಅಸಭ್ಯ ವರ್ತನೆಯು ಸರಕಾರವನ್ನು ಮುಜುಗರಕ್ಕೀಡು ಮಾಡಿತ್ತು.



### ಅಖಿಲ ಭಾರತ ಸೇವಾ (ನಡತೆ) ನಿಯಮಗಳ ಉಲ್ಲಂಘನೆ

ಈ ಸಂಬಂಧ ಸುದ್ದಿವಾಹಿನಿಗಳು ಹಾಗೂ ಮಾಧ್ಯಮದಲ್ಲಿ ಪ್ರಸಾರವಾದ ವಿಡಿಯೋ, ವರದಿಗಳನ್ನು ಪರಿಶೀಲಿಸಿದಾಗ ರಾಮಚಂದ್ರ ರಾವ್ ಅಧಿವಧಿರ ನಡವಳಿಕೆಯಿಂದ ಅಖಿಲ ಭಾರತ ಸೇವಾ (ನಡತೆ) ನಿಯಮಗಳು-1968ರ ನಿಯಮ 3ರ ಉಲ್ಲಂಘನೆ ಆಗಿದೆ ಎಂದು ಮನವರಿಕೆಯಾಗಿದೆ. ಹೀಗಾಗಿ, ತಕ್ಷಣದಿಂದಲೇ ಜಾರಿಗೆ ಬರುವಂತೆ ಅವರ ವಿರುದ್ಧ ವಿಚಾರಣೆ ಬಾಕಿ ಇರಿಸಿ ಅಮಾನತು ಮಾಡಲಾಗಿದೆ ಎಂದು ಆದೇಶದಲ್ಲಿ ಹೇಳಲಾಗಿದೆ.

### ವಜಾ ಸುಳಿವು ಕೊಟ್ಟ ಗೃಹ ಸಚಿವ

"ಡಿಜಿಪಿ ರಾಮಚಂದ್ರ ರಾವ್ ವಿರುದ್ಧ ಮುಲಾಜಿಲ್ಲದೆ ತುರ್ತು ಕ್ರಮ ಕೈಗೊಂಡಿದ್ದೇವೆ. ಹಿರಿಯ ಅಧಿಕಾರಿ ಎಂಬುದನ್ನು ನೋಡದೆ ಕ್ರಮ ಜರುಗಿಸಿದ್ದೇವೆ. ಪ್ರಕರಣ ಸಾಬೀತಾದರೆ ಅವರು ವಜಾ ಕೂಡ ಆಗಬಹುದು

-ಪರಮೇಶ್ವರ್, ಸಚಿವ

ರಾಮಚಂದ್ರ ರಾವ್ ವಿರುದ್ಧ ಕೆಂಡಾಮಂಡಲರಾಗಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ, ಶಿಸ್ತು ಕ್ರಮದ ಖಡಕ್ ಎಚ್ಚರಿಕೆ ಕೊಟ್ಟಿದ್ದರು. ಈ ಮಧ್ಯೆ, ರಾಮಚಂದ್ರ ರಾವ್, ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ಬೆಂಗಳೂರಿನ ಸದಾಶಿವನಗರದ ಮನೆಯಲ್ಲಿ ಸೋಮವಾರ ಭೇಟಿಯಾಗಿ ಪ್ರಕರಣ ಸಂಬಂಧ ಸ್ಪಷ್ಟನೆ ಕೊಡಲು ಪ್ರಯತ್ನಿಸಿದ್ದರು. ಆದರೆ, ಪರಮೇಶ್ವರ್ ಅವರು ರಾಮಚಂದ್ರ ರಾವ್ ಭೇಟಿಗೆ ಅನುಮತಿ ನಿರಾಕರಿಸಿ ಮನೆಯ ಗೇಟ್‌ನಿಂದಲೇ ವಾಪಸ್ ಕಳುಹಿಸಿದ್ದರು.

ಉತ್ತರ ಕರ್ನಾಟಕ ಭಾಗದಲ್ಲಿ ಪ್ರವಾಸದಲ್ಲಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಅಲ್ಲಿಂದಲೇ ರಾಮಚಂದ್ರ ರಾವ್ ಅಮಾನತಿಗೆ ಸೂಚನೆ ಕೊಟ್ಟಿದ್ದರು.

ಅದರಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಡಿಪಿಎಆರ್) ಅಧೀನ ಕಾರ್ಯದರ್ಶಿಯು ಸೋಮವಾರ ತಡರಾತ್ರಿ ಡಿಜಿಪಿ ರಾಮಚಂದ್ರ ರಾವ್ ಅವರನ್ನು ಅಮಾನತು ಮಾಡಿ ಆದೇಶ ಹೊರಡಿಸಿತ್ತು.

**ಈ ದಿನದ ದರ** ಪೆಟ್ರೋಲ್: 102.92 ₹/L ಡೀಸೆಲ್ : 90.99 ₹/L ಬಂಗಾರ: ₹15,431/Gram24ct ₹14,145/Gram22ct ಬೆಳ್ಳಿ: ₹325.00/Gram


# ನವೀಕರಣಗೊಂಡ ಶ್ರೀ ಆದಿಶಕ್ತಿ ದೇವಾಲಯವನ್ನು ಸಚಿವರಾದ ರಾಮಲಿಂಗಾರೆಡ್ಡಿ ಉದ್ಘಾಟನೆ

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ-ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಸಹಕಾರದಿಂದ ಜಿಬಿಎ ಕೇಂದ್ರ ಕಛೇರಿ ಆವರಣದಲ್ಲಿರುವ ಏಳು ಸುತ್ತಿನಕೋಟೆ ಸಹಿತ ಶ್ರೀ ಆದಿಶಕ್ತಿ ದೇವಾಲಯದ ನವೀಕರಣ, ಜೀರ್ಣೋದ್ಧಾರದ ದೇವಸ್ಥಾನ ಉದ್ಘಾಟನೆ ಮತ್ತು ದೇವತಾ ಕಾರ್ಯಕ್ರಮ ಚಾಲನೆ.

ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿರವರು, ಜಯನಗರ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಎನ್ ನಾಗರಾಜು, ಜಿಬಿಎ-ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು ಉದ್ಘಾಟನೆ ನೇರವೇರಿಸಿದರು.

ಸಚಿವರಾದ ರಾಮಲಿಂಗಾರೆಡ್ಡಿರವರು ಮಾತನಾಡಿ 1983ರಲ್ಲಿ ನಾನು ಪಾಲಿಕೆ


ಉದಯವಾಹಿನಿ ಚಿತ್ರ

ಸದಸ್ಯನಾಗಿದ್ದ ಸಂದರ್ಭದಲ್ಲಿ ಶ್ರೀ ಆದಿಶಕ್ತಿ ದೇವಾಲಯ ಶೆಡ್ ನಲ್ಲಿತ್ತು. ಜಿಬಿಎ ಅಧಿಕಾರಿ, ನೌಕರರ 2ಕೋಟಿ ಅಧಿಕ ದೇಣಿಗೆ ನೀಡುವ ಮೂಲಕ ಸಹಕಾರದಿಂದ ದೇವಾಲಯ ನವೀಕರಣಗೊಂಡಿದೆ. ರಾಜ್ಯದಲ್ಲಿ ಎಲ್ಲ ದೇವಾಲಯಗಳು ಭಕ್ತರಿಂದ ತುಂಬಿ ತುಳುತ್ತಿದೆ. ಇದಕ್ಕೆ ಕಾರಣ ಕಾಂಗ್ರೆಸ್ ಪಕ್ಷದ ಸರ್ಕಾರ ಗ್ಯಾರೆಂಟಿಯ ಯೋಜನೆ ಶಕ್ತಿ ಯೋಜನೆ ಕಾರಣ. ಶಕ್ತಿ ಯೋಜನೆ ಮಹಿಳೆಯರಿಗೆ ಬಸ್ ಪ್ರಯಾಣ ಉಚಿತದಿಂದ ದೇವಸ್ಥಾನಗಳಿಗೆ ಭೇಟಿ ನೀಡುವ ಭಕ್ತರ ಸಂಖ್ಯೆ ಹೆಚ್ಚವಾಗಿದೆ ಮತ್ತು ದೇವಾಲಯ ಸುತ್ತಮುತ್ತಲ ಹೂವು, ಹಣ್ಣು ಮತ್ತು ಇನ್ನಿತರೆ ವ್ಯಾಪಾರಸ್ಥರು ಆರ್ಥಿಕವಾಗಿ ಸಬಲರಾಗಿದ್ದಾರೆ ಮತ್ತು ದೇವಾಲಯದ ಅದಾಯವು ಸಹ ಹೆಚ್ಚಳವಾಗಿದೆ ಎಂದು ಹೇಳಿದರು. ಎ.ಅಮೃತ್ ರಾಜ್ ರವರು ಶ್ರೀ ಅದಿಶಕ್ತಿ ದೇವಾಲಯ ಐತಿಹಾಸಿಕ, ಇತಿಹಾಸವಿರುವ ದೇವಾಲಯವಾಗಿದ್ದು . ದೇವಾಲಯ ಹಳೆಯದಾಗಿ ಶೀಥಾಲವಸ್ಥೆಯಲ್ಲಿ ಇತ್ತು. ದೇವಸ್ಥಾನ ಆಡಳಿತ ಮಂಡಳಿಯವರು ದೇವಸ್ಥಾನ ನವೀಕರಣ ಕಾರ್ಯಕ್ಕೆ ಸಹಕಾರ ಕೋರಿದರು. ನಮ್ಮ ಸಂಘದಲ್ಲಿ ಅಧಿಕಾರಿ, ನೌಕರರು ತೀರ್ಮಾನ ಮಾಡಿ ಪ್ರತಿಯೊಬ್ಬ ನೌಕರರು ತಲಾ 1ಸಾವಿರ ಸಂಬಳ ಕಟಾವಣೆ ಮಾಡಿ ದೇವಸ್ಥಾನ ಅಭಿವೃದ್ಧಿ ಕಾರ್ಯ ನೀಡಲಾಗಿದೆ ನಂತರ ಇನ್ನು ಹಣದ ಅವಶ್ಯಕತೆ ಇದ್ದ ಕಾರಣದಿಂದ ಬಿಬಿಎಂಪಿ ನೌಕರರ ಸಹಕಾರ ಸಂಘದಿಂದ 20 ಮತ್ತು ಅಧಿಕಾರಿ, ನೌಕರರ ದೇಣಿಗೆಯಿಂದ 1ಕೋಟಿ 60ಲಕ್ಷ ರೂಪಾಯಿಗಳನ್ನು ದೇವಾಲಯ ಜೀರ್ಣೋದ್ಧಾರಕ್ಕೆ ವಿನಿಯೋಗಿಸಲಾಯಿತು. ಜ್ಯೋತಿಷಿ, ಅಗಮ ಶಾಸ್ತ್ರ ಪಂಡಿತರಾದ ಭಾನುಪ್ರಕಾಶ್ ಶರ್ಮಾ 40ಜನ ಪಂಡಿತರಿಂದ ಅಷ್ಟಮವರ್ಣ ಪೂಜಾ, ಮಹಾಗಣಪತಿ ಹೋಮ, ಪಂಚದೇವತೆಗಳಿಗೆ ಅಷ್ಟವಾರಣ ಪೂಜಾ, ನವಗ್ರಹಶಾಂತಿ ಹೋಮ, ಶನ್ವೇವರ ಹೋಮ, ಬಲಿಹರಣ ಪೂಜಾ ಹೋಮ, ದೇವತೆಗಳಿಗೆ ಚಕ್ರ ಸ್ಥಾಪನೆ , ದುರ್ಗ ದೀಪ ನಮಸ್ಕಾರ ಮತ್ತು ಪ್ರಸಾದ ವಿನಿಯೋಗ ನೇರವೇರಿತು.

## ರಾಯರ ಮಠದಲ್ಲಿ ಪ್ರಾತಃ ಸ್ಮರಣೀಯರಾದ ಶ್ರೀ ಶ್ರೀ ಸುಜಯೀಂದ್ರತೀರ್ಥರ ಆರಾಧನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಜಯನಗರ 5ನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಆರ್ ಕೆ ವಾದೀಂದ್ರಾಚಾರ್ ಅವರ ನೇತೃತ್ವದಲ್ಲಿ ಜನವರಿ 22, ಗುರುವಾರ ಬೆಳಗ್ಗೆ ಪ್ರಾತಃ ಸ್ಮರಣೀಯರಾದ ಶ್ರೀ ಶ್ರೀ ಸುಜಯೀಂದ್ರತೀರ್ಥ ಶ್ರೀಪಾದಂಗಳವರ ಆರಾಧನೆಯ ಪ್ರಯುಕ್ತ ಪಂಚಾಮೃತ ಅಭಿಷೇಕ, ಕನಕಾಭಿಷೇಕ, ವಿಶೇಷ ಅಲಂಕಾರ, ಮಹಾಮಂಗಳಾರತಿ ಹಾಗೂ ಅನ್ನದಾನ ಸೇವೆ ಕಾರ್ಯಕ್ರಮಗಳು ನಡೆದವು. ಸಂಜೆಯ ಕಾರ್ಯಕ್ರಮದಲ್ಲಿ ರಥೋತ್ಸವ, ಗಜವಾಹನೋತ್ಸವ, ಅಷ್ಟಾವಧಾನ, ತೊಟ್ಟಿಲು ಪೂಜೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದ ಅಂಗವಾಗಿ ತಮೋಹ ಆರ್ಟ್ ಫೌಂಡೇಷನ್ ವಿದುಷಿ ಶ್ರೀಮತಿ ಗಾಯತ್ರಿ ಮಯ್ಯ , ಅವರ ವಿದ್ಯಾರ್ಥಿಗಳಿಂದ ನರ್ತನ ಸೇವೆಗಳು ಜರುಗಿದವು ಎಂದು ಶ್ರೀ ನಂದಕಿಶೋರ್ ಆಚಾರ್ ಅವರು ತಿಳಿಸಿದ್ದಾರೆ

## ಅತಿ ವೇಗದ ಚಾಲನೆ: ಲ್ಯಾಂಬೋರ್ಗಿನಿ ಕಾರು ಚಾಲಕನ ವಿರುದ್ಧ ಎಫ್ಐಆರ್

• ಉದಯವಾಹಿನಿ, ಬೆಂಗಳೂರು

ಇಲ್ಲಿನ ಮೈಸೂರು ರಸ್ತೆಯಲ್ಲಿ ಅತಿ ವೇಗವಾಗಿ ಕಾರು ಚಾಲನೆ ಮಾಡಿ ಪಾದಚಾರಿಗಳು ಹಾಗೂ ವಾಹನ ಸವಾರರ ಜೀವಕ್ಕೆ ಅಪಾಯ ಉಂಟುಮಾಡಿದ್ದ ಲ್ಯಾಂಬೋರ್ಗಿನಿ ಕಾರು ಚಾಲಕನ ವಿರುದ್ಧ ಕೆಂಗೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೈಸೂರು ರಸ್ತೆಯ ರಾಜರಾಜೇಶ್ವರಿನಗರ ಆರ್ಚ್ ಬಳಿ 2025ರ ಡಿ.14ರಂದು ಹಸಿರು ಬಣ್ಣದ ಲ್ಯಾಂಬೋರ್ಗಿನಿ ಕಾರು ಅತಿ ವೇಗದಲ್ಲಿ ಸಂಚರಿಸಿತ್ತು.

ಈ ದೃಶ್ಯವನ್ನು ಸಹ ವಾಹನ ಸವಾರರು, ಮೊಬೈಲ್‌ನಲ್ಲಿ ಸೆರೆಹಿಡಿದು, ಜ.19ರಂದು 'ಎಕ್ಸ್' ಖಾತೆಯಲ್ಲಿ ಅದರ ವಿಡಿಯೋ ಪೋಸ್ಟ್ ಮಾಡಿದ್ದರು. ಕೆಂಗೇರಿ ಸಂಚಾರ ಠಾಣೆ ಪೊಲೀಸರು, ವಿಡಿಯೋ ಪರಿಶೀಲನೆ ನಡೆಸಿದಾಗ, ಅತಿ ವೇಗವಾಗಿ ಕಾರು ಚಾಲನೆ ಮಾಡಿದ್ದು ಪತ್ತೆಯಾಗಿತ್ತು. ಲ್ಯಾಂಬೋರ್ಗಿನಿ ಕಾರಿನ ನೋಂದಣಿ ಸಂಖ್ಯೆ ಆಧರಿಸಿ ವಾಹನದ ಮಾಲೀಕರನ್ನು ಪತ್ತೆ ಹಚ್ಚಿ, ಪ್ರಕರಣ ದಾಖಲಿಸಿದ್ದಾರೆ ಎಂದು ಗೊತ್ತಾಗಿದೆ. ಇಂದಿರಾನಗರದ ರೇವತಿಕುಮಾರ್ ಎಂಬುವರಿಗೆ ಸೇರಿದ ಲ್ಯಾಂಬೋರ್ಗಿನಿ ಕಾರಿನಲ್ಲಿ ಅವರ ಸಂಬಂಧಿ ರಾಜೇಂದ್ರ ಎಂಬುವರು ಡಿ.14ರಂದು ಕಾರು ಚಾಲನೆ ಮಾಡಿಕೊಂಡು ಮೈಸೂರಿಗೆ ಹೋಗಿದ್ದರು. ಅತಿ ವೇಗವಾಗಿ ಮತ್ತು ಪಥ ಬದಲಿಸುತ್ತಾ ಕಾರು ಚಾಲನೆ ಮಾಡಿದ್ದರು. ಅಲ್ಲದೇ ಕಾರಿನ ಸೈಲೆನ್ಸರ್ ಸಹ ಮಾರ್ಪಾಡು ಮಾಡಲಾಗಿತ್ತು. ಸಂಚಾರ ನಿಯಮ ಉಲ್ಲಂಘನೆ ಮಾಡಿರುವುದು ವಿಡಿಯೋದಲ್ಲಿ ಸ್ಪಷ್ಟವಾಗಿ ದಾಖಲಾಗಿದೆ. ಈ ಸಂಬಂಧ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿ, ಕಾರು ಜಪ್ತಿ ಮಾಡಿದ್ದೇವೆ ಎಂದು ಸಂಚಾರ ಪೊಲೀಸರು ಹೇಳಿದರು.

## ಕ್ಯಾನ್ಸರ್ ಆರೈಕೆ: ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ ಆಸ್ಪತ್ರೆಗೆ ಪ್ರಥಮ ಸ್ಥಾನ

• ಉದಯವಾಹಿನಿ, ಬೆಂಗಳೂರು

ಅತ್ಯುತ್ತಮ ಆಸ್ಪತ್ರೆಗಳ ಸಮೀಕ್ಷೆಯಲ್ಲಿ ನಗರದ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ ಕರ್ನಾಟಕದ ಪೈಕಿ ಪ್ರಥಮ ಸ್ಥಾನ ಪಡೆದಿದೆ.2025ರಲ್ಲಿ 'ದಿ ವೀಕ್ ಹನ್ಸಾ ಸಂಶೋಧನಾ ಸಮೀಕ್ಷೆ'ಯಲ್ಲಿ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ ಭಾರತದಲ್ಲಿ 5ನೇ ಸ್ಥಾನ. ಕ್ಯಾನ್ಸರ್ ಆರೈಕೆಯಡಿ ಸರ್ಕಾರಿ ಆಸ್ಪತ್ರೆಗಳ ಪೈಕಿ ಕಿದ್ವಾಯಿ 3ನೇ ಸ್ಥಾನ ಪಡೆದಿದೆ ಎಂದು ಸಂಸ್ಥೆಯ ನಿರ್ದೇಶಕರಾದ ಡಾ.ಟಿ.ನವೀನ್ ತಿಳಿಸಿದ್ದಾರೆ.

ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯು ಅತ್ಯಾಧುನಿಕ ಕ್ಯಾನ್ಸರ್ ಆರೈಕೆ ಮತ್ತು ತಂತ್ರಜ್ಞಾನ ಆಧಾರಿತ ಸೇವೆ ಒದಗಿಸುತ್ತಿದೆ. ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸಿ ತಡೆಗಟ್ಟುವಿಕೆ, ಆರಂಭಿಕ ಹಂತದಲ್ಲೇ ಪತ್ತೆಹಚ್ಚುವಲ್ಲಿ ಮುಂಚೂಣಿಯಲ್ಲಿದೆ. ರಾಜ್ಯದಲ್ಲಿ ಪೆರಿಫೆರಲ್ ಕ್ಯಾನ್ಸರ್ ಘಟಕ ನಿರ್ಮಿಸಿ ರೋಗಿಗಳಿಗೆ ಶೀಘ್ರ ತಪಾಸಣೆ ನಡೆಸಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಹೇಳಿದ್ದಾರೆ.

## ಬೆಂಗಳೂರು: ಹೂಡಿಕೆ ಹೆಸರಿನಲ್ಲಿ ರೂ.5.14 ಕೋಟಿ ವಂಚನೆ

• ಉದಯವಾಹಿನಿ, ಬೆಂಗಳೂರು

ನಗರದ ಮಲ್ಟಿನ್ಯಾಷನಲ್ ಕಂಪನಿಯೊಂದರಲ್ಲಿ (ಎಂಎನ್‌ಸಿ) ಕೆಲಸ ಮಾಡುತ್ತಿರುವ 58 ವರ್ಷದ ವ್ಯಕ್ತಿಯಿಂದ ಸೈಬರ್ ವಂಚಕರು ಹೂಡಿಕೆಯ ಹೆಸರಿನಲ್ಲಿ ರೂ.5.14 ಕೋಟಿ ದೋಚಿದ್ದಾರೆ. ಹಣ ಕಳೆದುಕೊಂಡವರು ಆರ್.ಟಿ. ನಗರದಲ್ಲಿ ನೆಲಸಿದ್ದಾರೆ. ಅವರು ನೀಡಿದ ದೂರಿನ ಮೇರೆಗೆ ಮಾಹಿತಿ ತಂತ್ರಜ್ಞಾನ ಕಾಯ್ದೆ ಅಡಿ ಪ್ರಕರಣ ದಾಖಲಿಸಿಕೊಂಡಿರುವ ಉತ್ತರ ವಿಭಾಗದ ಸೈಬರ್ ಠಾಣೆಯ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ವಂಚಕರು ಕಳುಹಿಸಿದ್ದ ಲಿಂಕ್ ಮೂಲಕ ವಿವಿಧ ವಾಟ್ಸ್‌ಆ್ಯಪ್ ಗ್ರೂಪ್‌ಗಳಿಗೆ ದೂರುದಾರರು ಸೇರ್ಪಡೆ ಆಗಿದ್ದರು. ಆ ಗ್ರೂಪ್‌ನಲ್ಲಿ ಹೂಡಿಕೆ ಮಾಡುವಂತೆ ದೀಪಾ ದಿನೇಶ್ ಕೆ. ವಘೇವಾ ಅವರು ದೂರುದಾರರ ಮನವೊಲಿಸಿದ್ದರು. ವಂಚಕರು ನೀಡಿದ ಸೂಚನೆಯಂತೆ ನಕಲಿ ಆ್ಯಪ್ ಎಲ್‌ಕೆಪಿಎನ್‌ಡ್ಬ್ಲುಎಲ್ ಡೌನ್‌ಲೋಡ್ ಮಾಡಿಕೊಂಡು ಹೂಡಿಕೆ ಮಾಡಲು ಆರಂಭಿಸಿದ್ದರು. 2025ರ ನವೆಂಬರ್ 12ರಿಂದ 2026ರ ಜನವರಿ 7ರ ವರೆಗೆ ಹಂತ ಹಂತವಾಗಿ ದೂರುದಾರರು, ರೂ.5.14 ಕೋಟಿ ಹೂಡಿಕೆ ಮಾಡಿದ್ದರು. ಕೆಲವು ದಿನಗಳು ಕಳೆದ ಮೇಲೆ ನಕಲಿ ಆ್ಯಪ್‌ನಲ್ಲಿ ರೂ.19 ಕೋಟಿ ಲಾಭಾಂಶ ಬಂದಿರುವಂತೆ ತೋರಿಸಲಾಗುತ್ತಿತ್ತು. ಅದನ್ನು ನಂಬಿದ್ದ ದೂರುದಾರರು, ಆ ಹಣವನ್ನು ವಾಪಸ್ ಪಡೆಯಲು ಮುಂದಾಗಿದ್ದರು. ಆಗ ವಂಚಕರು ಕರೆ ಮಾಡಿ, ರೂ.19 ಕೋಟಿ ಹಣವನ್ನು ಡ್ರಾ ಮಾಡಿಕೊಳ್ಳಬೇಕಾದರೆ, ಹೆಚ್ಚುವರಿಯಾಗಿ ರೂ.2 ಕೋಟಿ ಪಾವತಿಸುವಂತೆ ಸೂಚಿಸಿದ್ದರು. ಆಗ ವಂಚನೆ ನಡೆದಿರುವುದು ಅರಿವಿಗೆ ಬಂದು ದೂರು ನೀಡಿದ್ದಾರೆ ಎಂದು ಪೊಲೀಸ್ ಮೂಲಗಳು ಹೇಳಿವೆ.

ರೂ.3 ಕೋಟಿ ಮೇಲ್ಪಟ್ಟ ವಂಚನೆ ಪ್ರಕರಣಗಳ ತನಿಖೆಯನ್ನು ಸಿಐಡಿ ನಡೆಸಲಿದೆ. ಸಿಐಡಿ ಪೊಲೀಸರು ಈ ಪ್ರಕರಣದ ತನಿಖೆ ಕೈಗೆತ್ತಿಕೊಳ್ಳುವವರೆಗೆ ಉತ್ತರ ವಿಭಾಗದ ಸೈಬರ್ ಅಪರಾಧ ಠಾಣೆಯ ಪೊಲೀಸರೇ ತನಿಖೆ ನಡೆಸಲಿದ್ದಾರೆ' ಎಂದು ಮೂಲಗಳು ಹೇಳಿವೆ.

# ವಿಶ್ವದ ಸಂಚಾರ ದಟ್ಟಣೆ ನಗರಗಳ ಪಟ್ಟಿಯಲ್ಲಿ ಬೆಂಗಳೂರಿಗೆ 2ನೇ ಸ್ಥಾನ

### ಬೆಂಗಳೂರು ವಾಸಿಗಳು ವರ್ಷಕ್ಕೆ ಸರಾಸರಿ 168 ಗಂಟೆ ಸಂಚಾರದಟ್ಟಣೆಯಲ್ಲೇ ಸಮಯ ಕಳೆಯುತ್ತಿದ್ದಾರೆ

• ಉದಯವಾಹಿನಿ, ಬೆಂಗಳೂರು

ಟ್ರಾಫಿಕ್ ಬಗ್ಗೆ ಮಾತನಾಡುವುದು ರಾಜ್ಯಕ್ಕಷ್ಟೇ ಸೀಮಿತವಾಗಿಲ್ಲ. ವಿದೇಶದಲ್ಲಿಯೂ ಚರ್ಚೆಯಾಗುತ್ತಿದೆ. ಎಷ್ಟೇ ಯೋಜನೆ ಕೈಗೊಂಡರು ಸಹ ಟ್ರಾಫಿಕ್ ಪರಿಸ್ಥಿತಿ ವರ್ಷದಿಂದ ವರ್ಷಕ್ಕೆ ಹದಗೆಡುತ್ತಿದೆ. ಟ್ರಾಫಿಕ್ ಕುಖ್ಯಾತಿ ಪಡೆದ ನಗರಗಳ ಪಟ್ಟಿಯ ಪೈಕಿಯಲ್ಲಿ ಬೆಂಗಳೂರು 2ನೇ ಸ್ಥಾನ ಪಡೆದಿದೆ. ಆ ಮೂಲಕ ಸಂಚಾರ ದಟ್ಟಣೆಯಲ್ಲಿ ಹೊಸ ದಾಖಲೆ ಬರೆದಿದೆ.

ಇತ್ತೀಚೆಗೆ ಸಾಮಾನ್ಯ ಜನರು ಮಾತ್ರವಲ್ಲ ವಿದೇಶಿ ಉದ್ಯಮಿ ಹಾಗೂ ಕ್ರಿಕೆಟಿಗರು, ಟಾಲಿವುಡ್ ಸಿನಿಮಾ ಸ್ಟಾರ್‌ಗಳು ಸಹ ಈ ಬಗ್ಗೆ ಅಸಾಮಾಧಾನ ವ್ಯಕ್ತಪಡಿಸಿದ್ದುಂಟು. ವಿದೇಶಿ ಉದ್ಯಮಿಯೊಬ್ಬರು ಬೆಂಗಳೂರಿನ ರಸ್ತೆ, ಕಸದ ಸಮಸ್ಯೆ ಬಗ್ಗೆ ಮಾತನಾಡಿದಾಗ ಕಿರಣ್ ಮಜುಂದಾರ್ ಅವರು ರಾಜ್ಯ ಸರ್ಕಾರವನ್ನು ಉಲ್ಲೇಖಿಸಿ ಈ ವಿಚಾರದ ವಿರುದ್ಧ ಮಾತನಾಡಿದ್ದರು. ಇನ್ನು ಶುಭಾಂಶು ಶುಕ್ಲ ಅವರು 2025ರಲ್ಲಿ ಬೆಂಗಳೂರು ಟೆಕ್ ಶೃಂಗಸಭೆಯಲ್ಲಿಯೂ ವ್ಯಕ್ತಪಡಿಸಿದ್ದರು.


ಉದಯವಾಹಿನಿ ಚಿತ್ರ

ನಿಖಿಲ್ ಕಾಮತ್ ತಮ್ಮ ಪಾಡ್‌ಕಾಸ್ಟ್‌ನಲ್ಲಿ ಅವರು ಸಹ ಆಮೆವೇಗದ ಮೆಟ್ರೋ ಕಾಮಗಾರಿ ಬಗ್ಗೆ ವಿಷಾದ ವ್ಯಕ್ತಪಡಿಸಿದ್ದರು.

**ಮುಂಬೈಗೆ 18ನೇ ಸ್ಥಾನ:** ಟಾಮ್‌ಟಾಮ್ ಟ್ರಾಫಿಕ್ ಇಂಡೆಕ್ಸ್ ವರದಿಯ ಪ್ರಕಾರ, 2025ರಲ್ಲಿ ಬೆಂಗಳೂರಿನಲ್ಲಿ ಪೀಕ್ ಅವರ್ ಇರುವಾಗ ವಾಹನಗಳ ಸರಾಸರಿ ವೇಗ ಗಂಟೆಗೆ 13.9 ಕಿ.ಮೀ ಮಾತ್ರ. ಇದು 2024ಕ್ಕೆ ಹೋಲಿಸಿದರೆ 1 ಕಿ.ಮೀನಷ್ಟು ಕಡಿಮೆಯಾಗಿದೆ.

ನಗರದಲ್ಲಿ ಕೇವಲ 10 ಕಿ.ಮೀ ದೂರ ಕ್ರಮಿಸಲು 36 ನಿಮಿಷ 9 ಸೆಕೆಂಡ್ ಸಮಯ ತಗಲುತ್ತಿದೆ. ಇದು ಕಳೆದ ವರ್ಷಕ್ಕಿಂತ 2 ನಿಮಿಷ 4 ಸೆಕೆಂಡ್ ಹೆಚ್ಚು. ಇನ್ನು ಸಂಚಾರ ದಟ್ಟಣೆಯ ಮಟ್ಟ ಶೇ.74.4 ರಷ್ಟಿದ್ದು, ಇದು 2024ಕ್ಕಿಂತ ಶೇ.1.7 ರಷ್ಟು ಹೆಚ್ಚಾಗಿದೆ. 2025ರ ಮೇ 17ರ ಶನಿವಾರದಂದು ಬೆಂಗಳೂರಿನ ರಸ್ತೆಗಳು ಅತ್ಯಂತ ಭೀಕರ ಸಂಚಾರ ದಟ್ಟಣೆಯಿಂದ ಪ್ರಯಾಣಿಕರು ಕಂಗಾಲಾಗಿದ್ದರು. ಅಂದು ಸಂಜೆ ಕೇವಲ 2.5 ಕಿ.ಮೀ ಕ್ರಮಿಸಲು ವಾಹನ ಸವಾರರು 15 ನಿಮಿಷ ತೆಗೆದುಕೊಂಡಿದ್ದರು. ಟಾಮ್ ಟಾಮ್ ಪಟ್ಟಿಯ ಮೊದಲ 20 ನಗರಗಳಲ್ಲಿ ಭಾರತದ ಇತರ ಎರಡು ನಗರಗಳೂ ಇವೆ. ಪುಣೆ 5ನೇ ಸ್ಥಾನದಲ್ಲಿದ್ದರೆ , ಮುಂಬೈ 18ನೇ ಸ್ಥಾನದಲ್ಲಿದೆ.

**ಮೆಕ್ಸಿಕೋಗೆ ಮೊದಲ ಸ್ಥಾನ**

**ರಾಜ್ಯ ಸರ್ಕಾರವು ಜಾಗತಿಕ ವೇದಿಕೆಗಳಲ್ಲಿ ಬೆಂಗಳೂರನ್ನು ಭಾರಿ ಕೊಂಡಾಡಿ, ಭವಿಷ್ಯ ರೂಪಿಸುವ ನಗರ ಎಂದು ಬಿಂಬಿಸುತ್ತಿದೆ. ಆದರೆ, ಆ ಬೆನ್ನಲ್ಲೇ ಸಂಚಾರ ದಟ್ಟಣೆಗೆ ಸಂಬಂಧಿಸಿದಂತೆ ಆಘಾತಕಾರಿ ವರದಿಯೊಂದು ಹೊರಬಿದ್ದಿದೆ. ವಾರ್ಷಿಕ ಸಂಚಾರ ಪ್ರವೃತ್ತಿಗಳನ್ನು ವಿಶ್ಲೇಷಿಸುವ ಟಾಮ್‌ಟಾಮ್ ಟ್ರಾಫಿಕ್ ಇಂಡೆಕ್ಸ್ ಪ್ರಕಾರ, 2025ರಲ್ಲಿ ಬೆಂಗಳೂರು ವಿಶ್ವದ ಎರಡನೇ ಅತೀ ಹೆಚ್ಚು ಸಂಚಾರ ದಟ್ಟಣೆ ಇರುವ ನಗರವಾಗಿದೆ. ಮೆಕ್ಸಿಕೋ ಸಿಟಿ ಮೊದಲ ಸ್ಥಾನದಲ್ಲಿದ್ದರೆ, ಐರ್ಲೆಂಡ್‌ನ ಡಬ್ಲಿನ್ ನಗರ ಬೆಂಗಳೂರಿನ ನಂತರದ ಸ್ಥಾನದಲ್ಲಿದೆ.**

## ಕಾಂಗ್ರೆಸ್ ಶಾಸಕರ ಅಶಿಸ್ತಿನ ವರ್ತನೆ ವಿರುದ್ಧ ಶರವಣ ಆಕ್ರೋಶ

• ಉದಯವಾಹಿನಿ, ಬೆಂಗಳೂರು

ವಿಧಾನ ಮಂಡಲದ ಜಂಟಿ ಅಧಿವೇಶನವನ್ನು ಉದ್ದೇಶಿಸಿ ರಾಜ್ಯಪಾಲರು ಸಾಂಕೇತಿಕವಾಗಿ ಭಾಷಣ ಮಾಡಿದ್ದು ಸಂಪೂರ್ಣ ಕಾನೂನುಬದ್ಧವಾಗಿದೆ. ಆದರೆ, ಸದನದಲ್ಲಿ ಕಾಂಗ್ರೆಸ್ ಶಾಸಕರು ತೋರಿದ ವರ್ತನೆ ಹದ್ದು ಮೀರಿದೆ ಎಂದು ವಿಧಾನ ಪರಿಷತ್ ಶಾಸಕ ಟಿ.ಎ. ಶರವಣ ಅವರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿರುವ ಅವರು, ರಾಜ್ಯಪಾಲರು ಸಾಂಕೇತಿಕವಾಗಿ ಭಾಷಣ ಮಾಡಿ, ಉಳಿದ ಪ್ರತಿಯನ್ನು ಸದನದಲ್ಲಿ ಮಂಡಿಸಲು ಕಾನೂನಿನಲ್ಲಿ ಅವಕಾಶವಿದೆ. ಸಾಂವಿಧಾನಿಕ ಹುದ್ದೆಯಲ್ಲಿರುವ ಅವರಿಗೆ ಈ ನಿಯಮಗಳು ಚೆನ್ನಾಗಿ ತಿಳಿದಿವೆ. ಇಡೀ ಭಾಷಣವನ್ನು ಓದಲೇಬೇಕೆಂಬ ಯಾವುದೇ ಕಡ್ಡಾಯ ನಿಯಮವಿಲ್ಲ ಎಂದು ಶರವಣ ಸ್ಪಷ್ಟಪಡಿಸಿದ್ದಾರೆ.

**ರಾಜಕೀಯ ಸಂಚು ವಿಫಲ:**


ಉದಯವಾಹಿನಿ ಚಿತ್ರ

ರಾಜ್ಯ ಕಾಂಗ್ರೆಸ್ ಸರ್ಕಾರವು ರಾಜ್ಯಪಾಲರ ಬಾಯಲ್ಲಿ ಕೇಂದ್ರದ ಆಡಳಿತ ವ್ಯವಸ್ಥೆ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರನ್ನು ಟೀಕಿಸುವಂತೆ ಮಾಡಲು ಭಾಷಣ ರೂಪಿಸಿತ್ತು. ಜಂಟಿ ಅಧಿವೇಶನದಲ್ಲಿ ಕ್ಷುಲ್ಲಕ ರಾಜಕೀಯ ಮಾಡಲು ಸರ್ಕಾರ ಸಂಚು ರೂಪಿಸಿತ್ತು. ಆದರೆ, ರಾಜ್ಯಪಾಲರು ಈ ರಾಜಕೀಯ ಯತ್ನವನ್ನು ವಿಫಲಗೊಳಿಸಿದ್ದಾರೆ ಎಂದು ಶರವಣ ವಿಶ್ಲೇಷಿಸಿದ್ದಾರೆ.

**ಶಿಸ್ತು ಕ್ರಮಕ್ಕೆ ಒತ್ತಾಯ**

**ರಾಜಕೀಯ ಭಿನ್ನಾಭಿಪ್ರಾಯಗಳು ಏನೇ ಇರಲಿ, ಸಾಂವಿಧಾನಿಕ ಹುದ್ದೆಯಲ್ಲಿರುವವರ ಜೊತೆ ನಡೆದುಕೊಳ್ಳುವ ರೀತಿ ಇದಲ್ಲ. ಸದನದಲ್ಲಿ ರಾಜ್ಯಪಾಲರ ಜೊತೆ ಅನುಚಿತವಾಗಿ ವರ್ತಿಸಿದ, ಅವರನ್ನು ಅಡ್ಡಗಟ್ಟಿ ಮುಖಕ್ಕೆ ರಾಚುವಂತೆ ಟೀಕಿಸಿದ ಸದಸ್ಯರ ನಡೆ ಖಂಡನೀಯ. ಇಂತಹ ಕೆಟ್ಟ ಸಂಸ್ಕೃತಿ ಮರುಕಳಿಸಬಾರದು. ಹೀಗಾಗಿ, ಅಶಿಸ್ತು ತೋರಿದ ಸದಸ್ಯರ ಮೇಲೆ ಸಭಾಪತಿಗಳು ಕಠಿಣ ಕ್ರಮ ಜರುಗಿಸಬೇಕು ಎಂದು ಶರವಣ ಅವರು ಇದೇ ವೇಳೆ ಒತ್ತಾಯಿಸಿದ್ದಾರೆ.**

## ಟ್ರಾಮಾ ಸೆಂಟರ್ ಮಾರ್ಚ್‌ನಲ್ಲಿ ಲೋಕಾರ್ಪಣೆ

• ಉದಯವಾಹಿನಿ, ಬೆಂಗಳೂರು

ಮಲ್ಲೇಶ್ವರದ ಕೆ.ಸಿ. ಜನರಲ್ ಆಸ್ಪತ್ರೆಯ ನೂತನ ಕಟ್ಟಡದಲ್ಲಿ ನಿರ್ಮಿಸಿರುವ ಟ್ರಾಮಾ ಕೇರ್ ಸೆಂಟರ್ ಮಾರ್ಚ್ ತಿಂಗಳಲ್ಲಿ ಪ್ರಾರಂಭವಾಗಲಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

ಆಸ್ಪತ್ರೆಗೆ ಭೇಟಿ ನೀಡಿ ವಿವಿಧ ಕಾಮಗಾರಿ ಪರಿಶೀಲನೆ, ಸಮಸ್ಯೆ ಆಲಿಸಿದ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ಬೆಂಗಳೂರು ಉತ್ತರ ಭಾಗ ಸುತ್ತಮುತ್ತಲ ಪ್ರದೇಶದ ಜನರಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಟ್ರಾಮಾ ಸೆಂಟರ್ ನಿರ್ಮಿಸಲಾಗಿದೆ. 50 ಹಾಸಿಗೆಯ ಸೌಲಭ್ಯದ ಸೆಂಟರ್‌ನಲ್ಲಿ 14 ಎಚ್‌ಡಿಯು ಹಾಸಿಗೆ, 15 ಐಸಿಯು, 2 ಶಸ್ತ್ರಚಿಕಿತ್ಸೆ ಕೊಠಡಿಯ ಸೌಲಭ್ಯ ಇರಲಿದೆ.

ಬ್ಲಡ್ ಬ್ಯಾಂಕ್, ಡಿಎನ್‌ಬಿ ಅಧ್ಯಯನಕ್ಕಾಗಿ



ನೂತನ ಕಟ್ಟಡ ಸಿದ್ಧವಾಗುತ್ತಿದೆ ಎಂದು ತಿಳಿಸಿದರು.

ತಾಯಿ-ಮಕ್ಕಳ ಆಸ್ಪತ್ರೆಯು ಸುಸಜ್ಜಿತ ಕಟ್ಟಡದಲ್ಲಿ ಡಿಸೆಂಬರ್ ವೇಳೆಗೆ ಲೋಕಾರ್ಪಣೆ ಆಗಲಿದೆ. ಆಸ್ಪತ್ರೆ ಸಿಬ್ಬಂದಿ ಕೊರತೆ ನೀಗಿಸಲಾಗುವುದು. ಅಗತ್ಯ ಬಿದ್ದರೆ ವೈದ್ಯರನ್ನು ಗುತ್ತಿಗೆ ಆಧಾರದಲ್ಲಿ ಭರ್ತಿ ಮಾಡಿಕೊಳ್ಳುತ್ತೇವೆ ಎಂದರು. ಆಸ್ಪತ್ರೆಯ ಆವರಣದಲ್ಲಿರುವ ಜಯದೇವ ಹೃದ್ರೋಗ ಆಸ್ಪತ್ರೆಯ ಕೇಂದ್ರ, ಮಕ್ಕಳ ಐಸಿಯು ಕೇಂದ್ರ, ಆಸ್ಪತ್ರೆಯ ವಿವಿಧ ವಿಭಾಗಗಳಿಗೆ ದಿನೇಶ್ ಗುಂಡೂರಾವ್ ಭೇಟಿ ನೀಡಿ, ರೋಗಿಗಳಿಂದ ಮಾಹಿತಿ ಪಡೆದರು.

## ಕಟ್ಟಡ ಕಾಮಗಾರಿ ಚುರುಕುಗೊಳಿಸಿ: ನಿರ್ಮಲಾನಂದನಾಥ ಸ್ವಾಮಿ

• ಉದಯವಾಹಿನಿ, ಬೆಂಗಳೂರು

ವಿಶ್ವವಿದ್ಯಾಲಯ ಜ್ಞಾನಭಾರತಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಕೆಂಪೇಗೌಡ ಅಧ್ಯಯನ ಕೇಂದ್ರ ಕಟ್ಟಡದ ಕಾಮಗಾರಿ ತ್ವರಿತಗತಿಯಲ್ಲಿ ಪೂರ್ಣಗೊಳಿಸುವಂತೆ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷ ನಿರ್ಮಲಾನಂದನಾಥ ಸ್ವಾಮೀಜಿ ಸೂಚಿಸಿದರು.ಕಾಮಗಾರಿಯ ಪ್ರಗತಿ ಪರಿಶೀಲಿಸಿದ ಬಳಿಕ ಅವರು ಮಾತನಾಡಿ, 2017ರಲ್ಲಿ ಈ ಕಟ್ಟಡದ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿದ್ದೆ.

ರಾಜ್ಯ ಸರ್ಕಾರ ಮತ್ತು ಜಿಬಿಎ ಅನುದಾನದ ರೂ.50 ಕೋಟಿ ವೆಚ್ಚದೊಂದಿಗೆ, 3 ಎಕರೆ ಪ್ರದೇಶದಲ್ಲಿ ಈ ಕಟ್ಟಡ


ಉದಯವಾಹಿನಿ ಚಿತ್ರ

ನಿರ್ಮಾಣಗೊಳ್ಳುತ್ತಿದ್ದು. ಈಗಾಗಲೇ ಶೇ 50ರಷ್ಟು ಕಾಮಗಾರಿ ಪೂರ್ಣಗೊಂಡಿದೆ. ಉಳಿದ ಕಾಮಗಾರಿಗಳನ್ನು ಶೀಘ್ರ ಮುಗಿಸಬೇಕಿದೆ ಎಂದು ತಿಳಿಸಿದರು.

ನೂತನ ಕಟ್ಟಡವು ಕೆಂಪೇಗೌಡರ ಪರಂಪರೆ ಬಿಂಬಿಸುವ ಭವನ, ಸಭಾಂಗಣ, ಆಡಳಿತ ಕಚೇರಿ, ವಸ್ತು ಸಂಗ್ರಹಾಲಯವನ್ನು ಒಳಗೊಂಡಿದೆ. ಅವರ ಜೀವನ ಚರಿತ್ರೆ, ಆಡಳಿತ ಶೈಲಿ ಹಾಗೂ ನಗರ ನಿರ್ಮಾಣ ಕಾರ್ಯ, ಗುಡಿ ಗೋಪುರ, ಕೆರೆಕಟ್ಟೆಗಳ ನಿರ್ಮಾಣ ಕಾರ್ಯಗಳ ಕುರಿತು ಸಮಗ್ರ ಮಾಹಿತಿ ಒದಗಿಸುವ ಉದ್ದೇಶದಿಂದ ನಿರ್ಮಾಣಗೊಳ್ಳುತ್ತಿದೆ ಎಂದರು.

ಕೆಂಪೇಗೌಡರ 25 ಅಡಿ ಅಶ್ವಾರೋಹಿ ಪ್ರತಿಮೆ ಸ್ಥಾಪಿಸಲಾಗುವುದು ಎಂದು ಮಾಹಿತಿ ನೀಡಿದರು. ಬೆಂಗಳೂರು ವಿಶ್ವವಿದ್ಯಾಲಯದ ಕುಲಪತಿ ಜಯಕರ ಎಸ್.ಎಂ., ಕುಲಸಚಿವೆ ಕೆ.ಟಿ. ಶಾಂತಲಾ, ಪರೀಕ್ಷಾಂಗ ಕುಲಸಚಿವ ಸಿ.ಎಸ್. ಕರಿಗಾರ್, ಕೆಂಪೇಗೌಡ ಅಧ್ಯಯನ ಕೇಂದ್ರದ ನಿರ್ದೇಶಕ ಎಸ್. ಪುಟ್ಟಸ್ವಾಮಯ್ಯ ಉಪಸ್ಥಿತರಿದ್ದರು.

## ಅನುದಾನ ದುರುಪಯೋಗವಾದರೆ ಕ್ರಮ: ಶಿವರಾಜ ತಂಗಡಗಿ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು

ರಾಜ್ಯ, ಜಿಲ್ಲೆ, ತಾಲ್ಲೂಕು ಮಟ್ಟದಲ್ಲಿ ಮಹಾಪುರುಷರ ಜಯಂತಿ ಆಚರಿಸಲು ಸರ್ಕಾರ ನೀಡುತ್ತಿರುವ ಅನುದಾನ ದುರುಪಯೋಗಪಡಿಸಿಕೊಂಡರೆ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಕನ್ನಡ ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಎಚ್ಚರಿಕೆ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇಲ್ಲಿ ಆಯೋಜಿಸಿದ್ದ ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಕಾರ್ಯಕ್ರಮದಲ್ಲಿ ಅನುದಾನ ದುರುಪಯೋಗ ಕುರಿತು ಅಂಬಿಗರ ಚೌಡಯ್ಯ ಪೀಠದ ಶಾಂತ ಭೀಷ್ಮ ಚೌಡಯ್ಯ ಸ್ವಾಮೀಜಿ ಅವರು ಪ್ರಸ್ತಾಪಿಸಿದರು. ಇದಕ್ಕೆ ಭಾಷಣದ ವೇಳೆ ಸಚಿವರು ಪ್ರತಿಕ್ರಿಯಿಸಿದರು.

'ವಿವಿಧ ಸಮುದಾಯಗಳ ಮಹಾಪುರುಷರಿಗೆ ಗೌರವ ಸೂಚಿಸಬೇಕು. ಅವರ ವಿಚಾರಗಳನ್ನು ಜನರಿಗೆ ಮುಟ್ಟಿಸಬೇಕು ಎಂದು ನಮ್ಮ ಸರ್ಕಾರ ಜಯಂತಿಯನ್ನು ಆಚರಿಸುತ್ತಿದೆ. 2014ರಲ್ಲಿ ಅಂಬಿಗರ ಚೌಡಯ್ಯ ಜಯಂತಿ ಆರಂಭಿಸಲಾಗಿದೆ. ಇದಕ್ಕಾಗಿ ಮೂರು


ಉದಯವಾಹಿನಿ ಚಿತ್ರ

ಹಂತಗಳಲ್ಲಿ ಅನುದಾನ ನೀಡುತ್ತಿದ್ದು. ಇದನ್ನು ಸರಿಯಾಗಿ ಬಳಕೆ ಮಾಡಿಕೊಳ್ಳಬೇಕು ಎಂದರು.

ರಾಜ್ಯದ ಇತಿಹಾಸದಲ್ಲೇ ಯಾವುದೇ ಸರ್ಕಾರ ನಿಗಮಗಳಿಗೆ ಹೆಚ್ಚಿನ ಅನುದಾನ ನೀಡಿಲ್ಲ. ಕಾಂಗ್ರೆಸ್ ಸರ್ಕಾರ ರೂ.1,500 ಕೋಟಿಯನ್ನು ನಿಗಮಗಳಿಗೆ ನೀಡಿ ಆಯಾ ಸಮುದಾಯಗಳ ಅಭಿವೃದ್ಧಿಗೆ ಒತ್ತು ನೀಡಿದೆ. ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮಕ್ಕೂ ರೂ.23.73 ಕೋಟಿ ಅನುದಾನ ಒದಗಿಸಿದ್ದೇವೆ. ಅಂಬಿಗರ ಚೌಡಯ್ಯ ಅವರ ಮೂರ್ತಿ ನಿರ್ಮಿಸುವ ಬೇಡಿಕೆಯಿದ್ದು, ಆದಷ್ಟು ಬೇಗನೇ ಈಡೇರಿಸಲಾಗುವುದು ಎಂದು ತಿಳಿಸಿದರು. ದಾವಣಗೆರೆಯ ಪ್ರಾಧ್ಯಾಪಕ ಎಚ್.ಸ್ವಾಮಿ ಉಪನ್ಯಾಸ ನೀಡಿದರು. ಮೀನುಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ ನಾರಾಯಣರಾವ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಾರ್ಯದರ್ಶಿ ಜೆ.ಮಂಜುನಾಥ್, ನಿರ್ದೇಶಕಿ ಕೆ.ಎಂ.ಗಾಯತ್ರಿ ಉಪಸ್ಥಿತರಿದ್ದರು.

**ನಿಜ ಶರಣ ಎನ್ನುವ ಬಿರುದನ್ನು ಪಡೆದ ಮೊದಲ ದಾರ್ಶನಿಕರು ಚೌಡಯ್ಯನವರು. ಜಾತಿ ತಾರತಮ್ಯ ವಿರೋಧಿಸಿ ಹೋರಾಟ ರೂಪದಲ್ಲಿ ವಚನಗಳನ್ನು ರಚಿಸಿದವರು. ಅವರ 330 ವಚನಗಳು ದೊರೆತಿದ್ದು, ಇನ್ನಷ್ಟು ಸಂಗ್ರಹಿಸಲಾಗುತ್ತಿದೆ.**

**ಅಂಬಿಗರ ಚೌಡಯ್ಯ ಪೀಠದ ಶಾಂತ ಭೀಷ್ಮ ಚೌಡಯ್ಯ ಸ್ವಾಮೀಜಿ**

## ಅಂಗೈ ತೋರಿಸಿ ಅವಲಕ್ಷಣ ಎನಿಸಿಕೊಳ್ಳೋದು ಬೇಡ ಎಂದ ತಜ್ಞರು!

• ಉದಯವಾಹಿನಿ, ಬೆಂಗಳೂರು

ದೇಶಾದ್ಯಂತದ ಇತರ ನಗರ ನಿಗಮಗಳು ಸ್ವಚ್ಛ ಸರ್ವೇಕ್ಷಣ ಸಮೀಕ್ಷೆಗಾಗಿ ಈಗಾಗಲೇ ಕೆಲಸವನ್ನು ಪ್ರಾರಂಭಿಸಿವೆ, ಆದರೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಇನ್ನೂ ಪ್ರಾರಂಭಿಸಿಲ್ಲ ಎಂದು ಘನತ್ಯಾಜ್ಯ ನಿರ್ವಹಣಾ ತಜ್ಞರು ಹೇಳಿದ್ದಾರೆ. ಕಳೆದ ವರ್ಷ ಬೆಂಗಳೂರು ಭಾರತದ ಐದನೇ ಕೊಳಕು ನಗರವಾಗಿತ್ತು.

ಈಗ ಆಗಿರುವ ಹಿಂದಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ , ಸ್ವಚ್ಛ ಸರ್ವೇಕ್ಷಣ ಸಮೀಕ್ಷೆ 2024-2025ರಲ್ಲಿ 40 ರಲ್ಲಿ 36ನೇ ರಾಷ್ಟ್ರೀಯ ಶ್ರೇಯಾಂಕವನ್ನು ಪಡೆದುಕೊಂಡಿತು. ಸ್ವಚ್ಛ ಸರ್ವೇಕ್ಷಣೆಗೆ ಸಂಪೂರ್ಣವಾಗಿ ಸಿದ್ಧವಾಗಿಲ್ಲದ ಬೆಂಗಳೂರು, 2025-2026 ಸಮೀಕ್ಷೆಯನ್ನು ಬಿಟ್ಟುಬಿಡುವುದು ಉತ್ತಮ ಎಂದು ತಜ್ಞರು ಸಲಹೆ ನೀಡುತ್ತಿದ್ದಾರೆ, ಇದು ನಗರದ ಕಳಪೆ ಮೂಲಸೌಕರ್ಯ ಮತ್ತು ಸಂಚಾರದಿಂದಾಗಿ ಈಗಾಗಲೇ ತೀವ್ರ ಹೊಡೆತ ಬಿದ್ದಿರುವ ಬ್ರ್ಯಾಂಡ್ ಬೆಂಗಳೂರು ಇಮೇಜ್ ಮೇಲೆ ಮತ್ತಷ್ಟು ಪರಿಣಾಮ ಬೀರುತ್ತದೆ ಎಂದಿದ್ದಾರೆ. ಘನತ್ಯಾಜ್ಯ ನಿರ್ವಹಣಾ ತಜ್ಞ ಮತ್ತು ಫ್ರೆಂಡ್ಸ್ ಆಫ್ ಲೇಕ್ಸ್‌ನ ಸಂಸ್ಥಾಪಕ ವಿ ರಾಮ್ ಪ್ರಸಾದ್, ಬೆಂಗಳೂರು ಒಂದು ಘಟಕವಾಗಿ ಸ್ಪರ್ಧಿಸಲು ಅಥವಾ ಐದು ವಿಭಿನ್ನ ನಿಗಮಗಳಾಗಿ ಭಾಗವಹಿಸಲು ಅವಕಾಶವಿದ್ದರೂ, ಇನ್ನೂ ಸ್ಪಷ್ಟತೆ ಇಲ್ಲ. ಕಳೆದ ಸಮೀಕ್ಷೆಯಲ್ಲಿ, ಬಿಬಿಎಂಪಿ ಒಂದು ನಿಗಮವಾಗಿತ್ತು.

# ಜಮೀರ್ ಪಿಎಸ್ ಸರ್ಫರಾಜ್ ಖಾನ್ ಬಳಿ 14 ಕೋಟಿ ಅಕ್ರಮ ಆಸ್ತಿ

### ಸಚಿವ ಜಮೀರ್ ಅಹಮ್ಮದ್ ಖಾನ್ ಅವರ ಆಪ್ತ ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ

• ಉದಯವಾಹಿನಿ, ಬೆಂಗಳೂರು

ವಸತಿ ಸಚಿವ ಜಮೀರ್ ಅಹಮ್ಮದ್ ಖಾನ್ ಆಪ್ತ ಕಾರ್ಯದರ್ಶಿ ಸರ್ದಾರ್ ಸರ್ಫರಾಜ್ ಖಾನ್ ಅವರು 38 ಎಕರೆ ಭೂಮಿ ಸೇರಿದಂತೆ 14.38 ಕೋಟಿ ರೂ. ಮೌಲ್ಯದ ಅಕ್ರಮ ಆಸ್ತಿ ಹೊಂದಿರುವುದು ತನಿಖೆಯಿಂದ ಪತ್ತೆಯಾಗಿದೆ ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.

ಅಕ್ರಮ ಆಸ್ತಿ ಗಳಿಕೆ ಪ್ರಕರಣ ಸಂಬಂಧ ಲೋಕಾಯುಕ್ತ ಪೊಲೀಸರು ಸರ್ಫರಾಜ್ ಖಾನ್ ಅಧಿವರ ಮನೆ, ರೆಸಾರ್ಟ್, ವಾಣಿಜ್ಯ ಕಟ್ಟಡಗಳು ಹಾಗೂ ಎಸ್ಟೇಟ್‌ಗಳೂ ಸೇರಿದಂತೆ 13 ಸ್ಥಳಗಳ ಮೇಲೆ ಡಿ.24ರಂದು ದಾಳಿ ನಡೆಸಿದ್ದರು. ಬೆಂಗಳೂರಿನ ಹಲಸೂರಿನಲ್ಲಿರುವ ಸರ್ಫರಾಜ್ ಖಾನ್‌ರ ನಿವಾಸ ಮತ್ತು ಸಂಬಂಧಿಕರ ಮನೆಗಳು, ಕೊಡಗು ಜಿಲ್ಲೆಯಲ್ಲಿರುವ ಅವರ ಒಡೆತನದ ಕಾಫಿ ಎಸ್ಟೇಟ್‌ಗಳು ಹಾಗೂ ಎಚ್.ಡಿ. ಕೋಟೆಯಲ್ಲಿನ ರೆಸಾರ್ಟ್ ಮೇಲೆ ದಾಳಿಯಾಗಿತ್ತು.

ದಾಳಿ ವೇಳೆ ಸರ್ಫರಾಜ್ ಖಾನ್ ಅವರ ಕುಟುಂಬದ ಸದಸ್ಯರ ಹೆಸರಿನಲ್ಲಿದ್ದ ಸ್ಥಿರಾಸ್ತಿಗಳು, ಹಣಕಾಸು ವ್ಯವಹಾರದ



ಉದಯವಾಹಿನಿ ಚಿತ್ರ

**38 ಎಕರೆ ಭೂಮಿ 14.38 ಕೋಟಿ ರೂ. ಮೌಲ್ಯದ ಅಕ್ರಮ ಆಸ್ತಿ**

ದಾಖಲೆಪತ್ರಗಳನ್ನು ಲೋಕಾಯುಕ್ತ ಪೊಲೀಸರು ವಶಪಡಿಸಿಕೊಂಡಿದ್ದರು.

ಅಲ್ಲದೆ, ಸರ್ಫರಾಜ್ ಖಾನ್ ಮತ್ತು ಅವರ ಕುಟುಂಬದ ಸದಸ್ಯರ ಬ್ಯಾಂಕ್ ಖಾತೆಗಳಲ್ಲಿನ ಠೇವಣಿ ಹಣವನ್ನು ಜಪ್ತಿ ಮಾಡಿದ್ದರು. ಸರ್ಫರಾಜ್ ಖಾನ್‌ರ 4 ಮನೆ, ಅಂದಾಜು 8.44 ಕೋಟಿ ರೂ. ಮೌಲ್ಯದ 37 ಎಕರೆ ಕೃಷಿ ಭೂಮಿ, 3 ಕೋಟಿ ರೂ. ಮೌಲ್ಯದ ಆಭರಣಗಳು, 1.64 ಕೋಟಿ ರೂ. ಮೌಲ್ಯದ ವಾಹನಗಳು, ಬ್ಯಾಂಕ್ ಖಾತೆಗಳಲ್ಲಿನ ಸ್ಥಿರ ಠೇವಣಿಗಳು ಮತ್ತು 5.94 ಕೋಟಿ ರೂ. ಮೌಲ್ಯದ ಇತರೆ ಹೂಡಿಕೆಗಳನ್ನು ಪತ್ತೆ ಹಚ್ಚಲಾಗಿದೆ ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ. ಸಹಕಾರ ಇಲಾಖೆಯಲ್ಲಿ ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ವಿಭಾಗದ ನಿರ್ದೇಶಕರಾಗಿರುವ ಸರ್ಫರಾಜ್ ಖಾನ್ ಅವರು ನಿಯೋಜನೆ ಮೇರೆಗೆ ವಸತಿ ಮತ್ತು ಅಲ್ಪ ಸಂಖ್ಯಾಂತರ ಕಲ್ಯಾಣ ಇಲಾಖೆಯಲ್ಲಿದ್ದಾರೆ. ಸದ್ಯ, ಅವರು ಸಚಿವ ಜಮೀರ್ ಅಹಮ್ಮದ್ ಖಾನ್ ಅವರ ಆಪ್ತ ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

**ಇ.ಡಿ ಸೂಚನೆಯಂತೆ ತನಿಖೆ**

**ತೆರಿಗೆ ವಂಚನೆ ಸಂಬಂಧ ಆದಾಯ ತೆರಿಗೆ ಇಲಾಖೆಯ ದೂರಿನ ಹಿನ್ನೆಲೆಯಲ್ಲಿ ಜಾರಿ ನಿರ್ದೇಶನಾಲಯದ (ಇ.ಡಿ) ಅಧಿಕಾರಿಗಳು ಈ ಹಿಂದೆ ಸಚಿವ ಜಮೀರ್ ಅಹಮ್ಮದ್ ಖಾನ್ ಮನೆಯಲ್ಲಿ ಶೋಧ ನಡೆಸಿದ್ದರು. ಆಗ ಪತ್ತೆಯಾಗಿದ್ದ ಹಣಕಾಸು ವ್ಯವಹಾರದ ಲೆಕ್ಕಪತ್ರಗಳನ್ನು ಇ.ಡಿ ಅಧಿಕಾರಿಗಳು, ಲೋಕಾಯುಕ್ತ ಪೊಲೀಸರಿಗೆ ಹಸ್ತಾಂತರಿಸಿ ತನಿಖೆ ನಡೆಸುವಂತೆ ಕೋರಿದ್ದರು. ಅದರಂತೆ ತನಿಖೆ ಆರಂಭಿಸಿರುವ ಲೋಕಾಯುಕ್ತ ಅಧಿಕಾರಿಗಳು ಸಚಿವ ಜಮೀರ್ ಆಪ್ತ ಕಾರ್ಯದರ್ಶಿ ಸರ್ಫರಾಜ್ ಖಾನ್ ಅವರ ಮನೆ ಮತ್ತು ಆಸ್ತಿಗಳ ಮೇಲೆ ದಾಳಿ ನಡೆಸಿದ್ದರು. ಸರ್ಫರಾಜ್ ಖಾನ್ ರಾಜಕೀಯ ಪ್ರಾಬಲ್ಯ ಹೊಂದಿರುವ ವ್ಯಕ್ತಿಯಾಗಿದ್ದು, ಈ ಹಿಂದೆ ಬಿಬಿಎಂಪಿ ಘನತ್ಯಾಜ್ಯ ವಿಭಾಗದ ಜಂಟಿ ಆಯುಕ್ತರಾಗಿ ಸೇವೆ ಸಲ್ಲಿಸಿದ್ದರು. ಅಲ್ಲದೆ, ಸರಕಾರದ ವಿವಿಧ ಇಲಾಖೆಗಳಲ್ಲಿ ಕಾರ್ಯ ನಿರ್ವಹಿಸಿದ್ದರು.**

# ಸಿಲ್ಕ್ ರೀಲರ್ಸ್‌ಗಳ ಸಮಸ್ಯೆ ಬಗೆಹರಿಸಲು ಸಚಿವರಿಗೆ ಮನವಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ರಾಮನಗರ

ರೇಷ್ಮೆ ನೂಲು ಬಿಚ್ಚಾಣಿಕೆದಾರರಿಗೆ ವಿವಿಧ ಯೋಜನೆಗಳಡಿ ಸರ್ಕಾರದ ವತಿಯಿಂದ ಸಿಗುವ ಸವಲತ್ತುಗಳನ್ನು ನೀಡುವಂತೆ ರೇಷ್ಮೆ ಖಾತೆ ಸಚಿವರಾದ ಕೆ.ವೆಂಕಟೇಶ್ ಅವರಿಗೆ ಯೂತ್ ಸಿಲ್ಕ್ ರೀಲರ್ಸ್ ವೆಲ್‌ಫೇರ್ ಅಸೋಷಿಯೇಸನ್‌ನ ಪದಾಧಿಕಾರಿಗಳು ಮನವಿ ಸಲ್ಲಿಸಿ ಹಲವು ಬೇಡಿಕೆಗಳ ಬಗ್ಗೆ ಗಮನ ಸೆಳೆದಿದ್ದಾರೆ. ಈ ಕುರಿತು ಅಸೋಷಿಯೇಷನ್‌ನ ಉಪಾಧ್ಯಕ್ಷ ಪ್ಯಾರಿ ಪಯ್ಯಾಜ್ ಪಾಷ ಮಾತನಾಡಿ, ಸರ್ಕಾರದ ವತಿಯಿಂದ ರೈತರಿಗೆ ಒಳ್ಳೆಯ ಗುಣಮಟ್ಟದ ರೇಷ್ಮೆ ಬಿತ್ತನೆ ತಳಿಯನ್ನು ಸರಬರಾಜು ಮಾಡಬೇಕು. ಇದರಿಂದ ಉತ್ತಮ ಇಳುವರಿಯೊಂದಿಗೆ ಗುಣಮಟ್ಟದ ಗೂಡು ಬರುತ್ತದೆ. ರೀಲ್‌ಗಳಿಗೂ ಉತ್ತಮವಾದ ರೇಷ್ಮೆ ನೂಲು ಬಿಚ್ಚಾಣಿಕೆಯೊಂದಿಗೆ ಉತ್ತಮ ದರ ಸಿಗುತ್ತದೆ. ಬಹು ಮುಖ್ಯವಾಗಿ ರೇಷ್ಮೆ ರೀಲರ್‌ಗಳು ಅನುಭವಿಸುತ್ತಿರುವ ಕಷ್ಟ-ಕಾರ್ಪಣ್ಯಗಳ ಬಗ್ಗೆ ಸಚಿವರ ಬಳಿ ಅಳಲು ತೋಡಿಕೊಂಡಿದ್ದು, ಸಚಿವರು ಸಕಾರಾತ್ಮಕವಾಗಿ ನಮ್ಮ ಬೇಡಿಕೆಗಳಿಗೆ ಸ್ಪಂದಿಸುವುದಾಗಿ ಹೇಳಿದರು.

ರೇಷ್ಮೆ ಮಾರುಕಟ್ಟೆಯ ಸಮಸ್ಯೆಗಳು, ರೈತರು ಮತ್ತು ರೀಲರ್ಸ್‌ಗಳಿಗೆ ರೇಷ್ಮೆ ಮಾರುಕಟ್ಟೆಯಲ್ಲಿ ಮೂಲಭೂತ ಸೌಕರ್ಯಗಳು ಮತ್ತು ಸವಲತ್ತುಗಳನ್ನು ಒದಗಿಸುವ ಬಗ್ಗೆ ನಮ್ಮ ಅಸೋಷಿಯೇಷನ್‌ನ ಪದಾಧಿಕಾರಿಗಳೆಲ್ಲರೂ ಸಚಿವರಲ್ಲಿ ಮನವಿ ಸಲ್ಲಿಸಿದ್ದೆವು. ಇದೀಗ ಮತ್ತೆ ಸರ್ಕಾರದ ಆದೇಶದ ಪ್ರಕಾರ ಸಿಲ್ಕ್ ರೀಲರ್ಸ್‌ಗಳಿಕೆ ಬಾಕಿ ಇರುವ 11 ತಿಂಗಳ ಸಬ್ಸಿಡಿ ಹಣವನ್ನು ಶೀಘ್ರವಾಗಿ ಬಿಡುಗಡೆ ಮಾಡಬೇಕು. ಸರ್ಕಾರದ ವತಿಯಿಂದ ರಿಯಾಯಿತಿ ದರದಲ್ಲಿ ರೀರಸ್‌ಗಳು ಉತ್ತಮ ಗುಣಮಟ್ಟದ ರೇಷ್ಮೆ ಉತ್ಪಾದಿಸಲು ಸರ್ಕಾರದ ಅಧಿಸೂಚನೆಯಂತೆ 80ಎಳೆ ಎಆರ್‌ಎಂ ಯಂತ್ರಗಳನ್ನು ರೀರಸ್‌ಗಳಿಗೆ ವಿತರಿಸುವಂತೆ ಮನವಿ ಮಾಡಿರುವುದಾಗಿ ತಿಳಿಸಿದರು. ಸಚಿವರ ಬೇಟಿ ವೇಳೆ ಯೂತ್ ಸಿಲ್ಕ್ ರೀಲರ್ಸ್ ವೆಲ್‌ಫೇರ್ ಅಸೋಷಿಯೇಸನ್‌ನ ಅಧ್ಯಕ್ಷ ಸಯ್ಯದ್ ಅಕ್ಲೀಂ ಇಬ್ರಾರ್, ಪ್ರಧಾನ ಕಾರ್ಯದರ್ಶಿ ಮುಸಾಯಿಬ್‌ಪಾಷ, ಕಾರ್ಯದರ್ಶಿ ಮೂಸಿನ್‌ಪಾಷ, ಖಜಾಂಚಿ ಬೇಗ್, ನಿರ್ದೇಶಕರಾದ ಪರ್ವಿಜ್, ಟಿಪ್ಪು, ಜಮೀಲ್, ಯಾಸಿರ್, ಶೇಖ್ ಮುಜ್ಜೀಬ್, ಲಾಲೂ ಇದ್ದರು.

# ಕೆಆರ್ ನಗರದಲ್ಲಿ ಬಾಲಕಿಯರ ಹಾಸ್ಟೆಲ್‌ಗಿಲ್ಲ ಭದ್ರತೆ

## ■ ಬೀದಿ ದೀಪವಿಲ್ಲದೇ ಭಯದಲ್ಲೇ ದಿನ ದೂಡುತ್ತಿರುವ ವಿದ್ಯಾರ್ಥಿನಿಯರು

• ಉದಯವಾಹಿನಿ, ಕೃಷ್ಣರಾಜನಗರ

ಪಟ್ಟಣದಿಂದ ಸುಮಾರು 2 ಕಿ.ಮೀ.ಗಿಂತಲೂ ದೂರದಲ್ಲಿ, ಅಸುರಕ್ಷಿತ ಪ್ರದೇಶದಲ್ಲಿರುವ ಹೆಣ್ಣು ಮಕ್ಕಳ ವಿದ್ಯಾರ್ಥಿ ನಿಲಯಕ್ಕೆ ರಕ್ಷಣಾಗೋಡೆ, ಕಾವಲುಗಾರರಿಲ್ಲ, ಬೀದಿ ದೀಪವಿಲ್ಲ, ಹೀಗಾಗಿ ವಿದ್ಯಾರ್ಥಿನಿಯರು ಭಯದ ವಾತಾವರಣದಲ್ಲೇ ಕಾಲ ಕಳೆಯುವಂತಾಗಿದೆ. ದಶಕಗಳ ಹಿಂದೆ ಕಾಳೇನಹಳ್ಳಿ ಗ್ರಾಮದ ಬಳಿ ಆದರ್ಶ ಶಾಲೆ ಹಿಂಭಾಗ ವಿದ್ಯಾರ್ಥಿನಿಯರಿಗೆಂದು ಆರಂಭಿಸಲಾದ ವಿದ್ಯಾರ್ಥಿ ನಿಲಯ ನಿರ್ಮಾಣವಾದಾಗ ಹೇಗಿತ್ತೋ ಇಂದಿಗೂ ಅದೇ ಸ್ಥಿತಿಯಲ್ಲಿದೆ.

ಮೂಲ ಸೌಲಭ್ಯಗಳಿಲ್ಲದೆ ವಿದ್ಯಾರ್ಥಿನಿಯರು ನಿತ್ಯ ಪರದಾಡುವಂತಾಗಿದೆ. ವಿದ್ಯಾರ್ಥಿ ನಿಲಯದ ಸುಮಾರು ಒಂದೂವರೆ ಕಿ.ಮೀ. ವ್ಯಾಪ್ತಿಯಲ್ಲಿಯಾರೂ ವಾಸವಿಲ್ಲದ ಸ್ಮಶಾನವಿರುವ ನಿರ್ಜನ ಪ್ರದೇಶದಲ್ಲಿದೆ. ವಿದ್ಯಾರ್ಥಿನಿಯರು ವ್ಯಾಸಂಗಕ್ಕಿಂತ ಭದ್ರತೆ ಬಗ್ಗೆ ಚಿಂತೆ ಮಾಡುವಂತಾಗಿದೆ. ಆತಂಕದಲ್ಲೇ ದಿನ ದೂಡುವಂತಾಗಿದೆ.

**ಮೂಲ ಸೌಲಭ್ಯವೇ ಒದಗಿಸಿಲ್ಲ:** 9ನೇ ತರಗತಿಯಿಂದ ದ್ವಿತೀಯ ಪಿಯುಸಿವರೆಗೆ ವ್ಯಾಸಂಗ ಮಾಡುವ 100ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ತಂಗಿರುವ ಹಾಸ್ಟೆಲ್ ಮುಂಭಾಗ ವಿದ್ಯುತ್ ದೀಪದ ವ್ಯವಸ್ಥೆಯಿಲ್ಲ. ರಾತ್ರಿ ವೇಳೆ ವಿದ್ಯಾರ್ಥಿನಿಯರಿಗೆ ಆರೋಗ್ಯದಲ್ಲಿ ವ್ಯತ್ಯಾಸವಾದರೆ, ಸಂಬಂಧಿಕರನ್ನು ಭೇಟಿಯಾಗಲು ಹೊರಗೆ ಹೋಗಬೇಕೆಂದರೆ ಕತ್ತಲೆಯಲ್ಲಿ ಬ್ಯಾಟರಿ ಹಿಡಿದು ಬೇರೆಯವರ ರಕ್ಷಣೆಯಲ್ಲಿ ಹೋಗಬೇಕಾದ ಪರಿಸ್ಥಿತಿಯಿದೆ. ಒಬ್ಬ ಮಹಿಳಾ ವಾರ್ಡನ್, ಇಬ್ಬರು ಮಹಿಳಾ ಸಿಬ್ಬಂದಿ ಮಾತ್ರ ಇಲ್ಲಿದ್ದು, ಏನೇ ಅನಾಹುತ ಸಂಭವಿಸಿದರೂ ಸಹಾಯಕ್ಕೆ ಬೇರೆ ಯಾರೂ ಇಲ್ಲ. ಸಂಬಂಧಪಟ್ಟ ಅಧಿಕಾರಿಗಳು ಹಾಸ್ಟೆಲ್ ಸುತ್ತ ಬೀದಿ ದೀಪ ಅಳವಡಿಸಬೇಕು. ಕಾಂಪೌಂಡ್ ನಿರ್ಮಿಸಿ ಅಗತ್ಯ ರಕ್ಷಣಾ ಸಿಬ್ಬಂದಿ ನೇಮಕ ಮಾಡುವಂತೆ ವಿದ್ಯಾರ್ಥಿನಿಯರು, ಪೋಷಕರು ಮನವಿ ಸಲ್ಲಿಸಿದರೂ ಸ್ಪಂದಿಸಿಲ್ಲ.


ಉದಯವಾಹಿನಿ ಚಿತ್ರ

- ಕೆ.ಆರ್.ನಗರ ವಿದ್ಯಾರ್ಥಿನಿಯರಿಗೆ ರಕ್ಷಣೆಯದ್ದೇ ಚಿಂತೆ
- ರಕ್ಷಣಾಗೋಡೆ, ಕಾವಲುಗಾರರ ನೇಮಕಕ್ಕೆ ಪೋಷಕರ ಒತ್ತಾಯ
- ಬೀದಿ ದೀಪ ಸೇರಿ ಮೂಲಸೌಲಭ್ಯವಿಲ್ಲದೆ ವಿದ್ಯಾರ್ಥಿನಿಯರ ಪರದಾಟ
- ಕಾಳೇನಹಳ್ಳಿ ಗ್ರಾಮದ ಬಳಿ ಇರುವ 100ಕ್ಕೂ ಹೆಚ್ಚು ಬಾಲಕಿಯರು ತಂಗಿರುವ ಹಾಸ್ಟೆಲ್

**ಸಹಾಯಕ್ಕೆ ಬೇರೆ ಯಾರೂ ಇಲ್ಲ**

**ಮೋಟುಗೋಡೆಯಂತಿದೆ ಕಾಂಪೌಂಡ್:** ಸಿಸಿ ಟಿವಿ ಕ್ಯಾಮೆರಾ ಹಾಸ್ಟೆಲ್ ಒಳಗಡೆ ಮಾತ್ರ ಅಳವಡಿಸಿದ್ದು, ಹೊರಗಡೆ ಇಲ್ಲದ ಕಾರಣ ಯಾರಾದರೂ ಅಪರಿಚಿತರು ಬಂದರೆ ನೋಡಲು ಮಹಿಳಾ ಸಿಬ್ಬಂದಿ ಹೊರಗೆ ಬರಬೇಕಾಗಿದೆ. ಈ ನಡುವೆ ದೊಡ್ಡೇಕೊಪ್ಪಲು ಗ್ರಾ.ಪಂ.ನವರು ಹಾಸ್ಟೆಲ್ ಮುಂಭಾಗ ನರೇಗಾ ಯೋಜನೆಯಲ್ಲಿ 50 ಅಡಿ ಮೋಟುಗೋಡೆಯಂತೆ ಕಾಂಪೌಂಡ್ ನಿರ್ಮಾಣ ಮಾಡಿದ್ದಾರೆ. ಆದರೆ, ಇದು ಅವೈಜ್ಞಾನಿಕವಾಗಿ ನಿರ್ಮಿಸಿದ್ದರಿಂದ ಉಪಯೋಗಕ್ಕೆ ಬಾರದಂತಾಗಿದೆ. ಹಾಸ್ಟೆಲ್ ಅವ್ಯವಸ್ಥೆ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿರುವ ಪೋಷಕರು, ಹೆಣ್ಣುಮಕ್ಕಳ ಹಿತದೃಷ್ಟಿಯಿಂದ ಸಂಬಂಧಪಟ್ಟ ಅಧಿಕಾರಿಗಳು, ಜನ ಪ್ರತಿನಿಧಿಗಳು ತುರ್ತುಕ್ರಮ ಕೈಗೊಳ್ಳಬೇಕು. ಹಾಸ್ಟೆಲ್ ಆವರಣದಲ್ಲಿ ವಿದ್ಯುತ್‌ದೀಪ, ಸಿಸಿ ಟಿವಿ ಕ್ಯಾಮೆರಾ, ರಕ್ಷಣಾ ಗೋಡೆಯೊಂದಿಗೆ, ರಕ್ಷಣಾ ಸಿಬ್ಬಂದಿಯನ್ನು ನೇಮಕ ಮಾಡುವಂತೆ ಒತ್ತಾಯಿಸಿದ್ದಾರೆ.

### ದಿನನಿತ್ಯ ಬದುಕುವ ಪರಿಸ್ಥಿತಿ

**ಕೃಷ್ಣರಾಜನಗರದಲ್ಲಿರುವ ವಿದ್ಯಾರ್ಥಿನಿಯರ ಹಾಸ್ಟೆಲ್ ಕಳೆದ ಹಲವು ವರ್ಷಗಳಿಂದ ಮೂಲ ಸೌಲಭ್ಯಗಳಿಲ್ಲದೆ, ಅಸುರಕ್ಷಿತ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿದೆ. ರಕ್ಷಣಾಗೋಡೆ, ಬೀದಿದೀಪ, ಕಾವಲುಗಾರರಿಲ್ಲದೆ ವಿದ್ಯಾರ್ಥಿನಿಯರು ಭಯದ ವಾತಾವರಣದಲ್ಲಿ ದಿನನಿತ್ಯ ಬದುಕುವ ಪರಿಸ್ಥಿತಿ ಇದೆ. ಈ ಕೂಡಲೇ ಅಗತ್ಯ ಸೌಲಭ್ಯ ಕಲ್ಪಿಸುವಂತೆ ಪೋಷಕರು ಹಾಗೂ ಹೋರಾಟಗಾರರು ಒತ್ತಾಯಿಸಿದ್ದಾರೆ. ಈ ಬಗ್ಗೆ ಬಿಇಒ ಮಾತನಾಡಿದ್ದು, ಕಾಮಗಾರಿ ಶುರುಮಾಡುವ ಭರವಸೆಯನ್ನು ಕೊಟ್ಟಿದ್ದಾರೆ.**

**ಯಾರು ಏನಂದ್ರು?:** ವಿದ್ಯಾರ್ಥಿನಿಯರ ಹಾಸ್ಟೆಲ್‌ಊರಿನಿಂದ ಹೊರಗೆ ನಿರ್ಜನ ಪ್ರದೇಶದಲ್ಲಿರುವುದರಿಂದ ಮಹಿಳಾ ಸಿಬ್ಬಂದಿಯೊಂದಿಗೆ ವಿದ್ಯಾರ್ಥಿನಿಯರು ಭಯದ ವಾತಾವರಣದಲ್ಲಿ ದಿನದೂಡುವಂತಾಗಿದೆ. ಸಂಬಂಧಪಟ್ಟವರು ಕೂಡಲೇ ಅಲ್ಲಿಗೆ ಬೇಕಾದ ಬೀದಿದೀಪ, ಸಿಸಿ ಟಿವಿ ಕ್ಯಾಮೆರಾ, ರಕ್ಷಣಾಗೋಡೆ, ರಕ್ಷಣಾ ಸಿಬ್ಬಂದಿಯೊಂದಿಗೆ ಅಗತ್ಯ ಸೌಲಭ್ಯ ನೀಡಲಿ ಎಂದು ರೈತಪರ ಹೋರಾಟಗಾರರಾದ ಸಿ.ಕೆ.ರವೀಂದ್ರ ಅವರು ಹೇಳಿದರು. ಸೆಸ್ಕ್‌ಗೆ ಪತ್ರ ಬರೆದು ಕಂಬಗಳನ್ನು ಹಾಕಿ ಬೀದಿದೀಪ ಅಳವಡಿಸಲು ಸೂಚನೆ ಹೊರಡಿಸಲಾಗುವುದು. ರಕ್ಷಣಾಗೋಡೆ ನಿರ್ಮಾಣ ಮಾಡುವುದು ಸೇರಿದಂತೆ ಅಗತ್ಯ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಬಿಇಒ ಆರ್. ಕೃಷ್ಣಪ್ಪ ಅವರು ಭರವಸೆಯನ್ನು ನೀಡಿದರು.



## ಮಿನಿ ನ್ಯೂಸ್

### ಬೆಳ್ಳಿ ಕರಗಿಸಿದ್ದ ಇಬ್ಬರು ಆರೋಪಿಗಳ ಬಂಧನ


ಉದಯವಾಹಿನಿ ಚಿತ್ರ


• ಉದಯವಾಹಿನಿ, ಚಿಕ್ಕಬಳ್ಳಾಪುರ

ನಗರದ ಬಿಬಿ ರಸ್ತೆಯ ಎಯು ಚಿನ್ನಾಭರಣ ಮಾರಾಟ ಅಂಗಡಿಯಲ್ಲಿ ಡಿಸೆಂಬರ್‌ನಲ್ಲಿ ನಡೆದಿದ್ದ 78 ಕೆ.ಜಿ ಬೆಳ್ಳಿ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ರಾಜಸ್ಥಾನದ ಹನುಮಂತ್ ಸಿಂಗ್ ಚೌಹಾಣ್ (26), ಬೈರು ಸಿಂಗ್ ಚೌಹಾಣ್ (26) ಬಂಧಿತರು. ಮತ್ತೊಬ್ಬ ಆರೋಪಿ ರಮೇಶ್ ಕುಮಾರ್ ಪಂಡಿತ್ ತಲೆ ಮರೆಸಿಕೊಂಡಿದ್ದು, ಆತನ ಪತ್ತೆಗೆ ಬಲೆ ಬೀಸಲಾಗಿದೆ ಎಂದು ನಗರದಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಾಲ್ ಚೌಕ್ಸೆ ತಿಳಿಸಿದರು.

ಮೊದಲ ಆರೋಪಿ ಹನುಮಂತ್ ಸಿಂಗ್ ವಿರುದ್ಧ ಈ ಹಿಂದೆ ದಾವಣಗೆರೆಯಲ್ಲಿಯೂ ಕಳ್ಳತನ ಪ್ರಕರಣ ದಾಖಲಾಗಿದೆ ಆರೋಪಿಗಳಿಂದ 20 ಕೆ.ಜಿ ಬೆಳ್ಳಿ, ಕಾರು ವಶಕ್ಕೆ ಪಡೆದಿದ್ದೇವೆ. 10 ಕೆ.ಜಿ ಬೆಳ್ಳಿಯನ್ನು ಕರಗಿಸಿ ಮಾರಾಟ ಮಾಡಿದ್ದು ಇದರಿಂದ ಗಳಿಸಿದ್ದ 13 ಲಕ್ಷವನ್ನೂ ವಶಕ್ಕೆ ಪಡೆದಿದ್ದೇವೆ ಎಂದು ತಿಳಿಸಿದರು.

ಮೂರು ದಿನ ಎಯು ಚಿನ್ನಾಭರಣ ಅಂಗಡಿಯಲ್ಲಿ ಕಳ್ಳತನಕ್ಕೆ ಯತ್ನ ನಡೆಸಿದ್ದಾರೆ. ಪೊಲೀಸರಿಗೆ ಮೊದಲ ದಿನ ಆರೋಪಿಗಳು ಎದುರಾಗಿದ್ದಾರೆ. ಆಗ ಯಾರು ನೀವು ಎಂದು ಪ್ರಶ್ನಿಸಿದಾಗ ನಾವು ಈಶಾ ಯೋಗ ಕೇಂದ್ರಕ್ಕೆ ಬಂದಿದ್ದೇವೆ ಎಂದು ತಿಳಿಸಿದ್ದರು. ಎರಡನೇ ದಿನ ಪೊಲೀಸ್ ವಾಹನ ನೋಡಿ ವಾಪಸ್ಸಾಗಿದ್ದರು. ಮೂರನೇ ಬಾರಿ ಕೃತ್ಯ ಎಸಗಿದ್ದಾರೆ ಎಂದು ಹೇಳಿದರು. ಚಿನ್ನಾಭರಣ ಅಂಗಡಿಯ ಸುತ್ತಮುತ್ತ ಯಾವ ರೀತಿಯ ವ್ಯವಸ್ಥೆ ಇದೆ. ಸಿಸಿಟಿವಿ ಕ್ಯಾಮೆರಾಗಳು ಎಲ್ಲಿವೆ ಎನ್ನುವ ಎಲ್ಲಾ ಮಾಹಿತಿ ಸಹ ಕಲೆ ಹಾಕಿದ್ದಾರೆ. ಆ ಸುತ್ತಮುತ್ತ ಓಡಾಟ ಸಹ ನಡೆಸಿದ್ದಾರೆ ಎಂದು ತಿಳಿಸಿದರು.

# ಗಡುವು ಮುಗಿದರೂ ಈಡೇರದ ಭರವಸೆ; ಆಕ್ರೋಶ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚೇಳೂರು

ತಾಲ್ಲೂಕಿನ ದಲಿತ ಸಮುದಾಯದ ದಶಕಗಳ ಬೇಡಿಕೆಗಳನ್ನು ಈಡೇರಿಸುವಲ್ಲಿ ಸರ್ಕಾರ ಮತ್ತು ತಾಲ್ಲೂಕು ಆಡಳಿತ ವಿಫಲವಾಗಿದೆ ಎಂದು ಆರೋಪಿಸಿ ದಲಿತ ಸಂಘರ್ಷ ಸಮಿತಿ ಪಟ್ಟಣದಲ್ಲಿ ತಮಟೆ ಚಳವಳಿ, ಪ್ರತಿಭಟನಾ ಮೆರವಣಿಗೆ ನಡೆಸಿತು. ಕಾರ್ಯಕರ್ತರು ಜಮಾಯಿಸಿ ಪಟ್ಟಣ ಎಪಿಎಂಸಿ ಮಾರುಕಟ್ಟೆಯಿಂದ ತಹಶೀಲ್ದಾರ್ ಕಚೇರಿಯವರೆಗೆ ಘೋಷಣೆ ಕೂಗುತ್ತ ಬೃಹತ್ ಮೆರವಣಿಗೆ ನಡೆಸಿದರು.

ಸಂಘಟನೆಯ ಮುಖಂಡರು, ಕಳೆದ ಬಾರಿ ಹನ್ನೊಂದು ದಿನಗಳ ಕಾಲ ಧರಣಿ ನಡೆಸಿದಾಗ ಭರವಸೆ ನೀಡಿದ್ದ ಅಧಿಕಾರಿಗಳು ಈವರೆಗೂ ಯಾವುದೇ ಬೇಡಿಕೆಗಳನ್ನು ಈಡೇರಿಸಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಸುಳ್ಳು ಭರವಸೆಗಳನ್ನು ಕೊಟ್ಟು ದಲಿತ ಸಂಘಟನೆಗಳ ದಿಕ್ಕು ತಪ್ಪಿಸಿದ್ದ ಆಡಳಿತ ವ್ಯವಸ್ಥೆಯ ವಿರುದ್ಧ ಹೋರಾಟ ಮಾಡುವ ಎಚ್ಚರಿಕೆಯನ್ನೂ ನೀಡಿದರು.

ದಸಂಸ ರಾಜ್ಯ ಸಂಚಾಲಕ ಕೆ.ಸಿ. ರಾಜಾಕಾಂತ್ ಮಾತನಾಡಿ, ದಲಿತರ ಭೂಮಿ ಹಕ್ಕು, ವಸತಿ ಸೌಲಭ್ಯ ಸೇರಿದಂತೆ ಮೂಲ ಸೌಕರ್ಯಗಳ ಬಗ್ಗೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆ. ಒಂದು ವರ್ಷದ ಹಿಂದೆ ಇದೇ ತಾಲ್ಲೂಕು ಕಚೇರಿ ಸೇರಿದಂತೆ ಜಿಲ್ಲೆಯ ಎಲ್ಲಾ ತಾಲ್ಲೂಕು ಕಚೇರಿಗಳ ಮುಂದೆ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಹನ್ನೊಂದು ದಿನಗಳ ಕಾಲ ಧರಣಿ ಮಾಡಿದ್ದೆವು. ಆಗ ಜಿಲ್ಲಾಧಿಕಾರಿ ಸಂಬಂಧಪಟ್ಟ ಎಲ್ಲಾ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆಗಳನ್ನು ನಡೆಸಿದ್ದರು ಎಂದರು. ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಸುಮಾರು ಶೇ 60 ರಿಂದ 70 ರಷ್ಟು ಬೇಡಿಕೆಗಳನ್ನು ಈಡೇರಿಸಿದ್ದರು. ಆದರೆ ಚೇಳೂರು ತಾಲ್ಲೂಕಿನಲ್ಲಿ ಮಾತ್ರ ಯಾವುದೇ ಬದಲಾವಣೆ ಆಗಿಲ್ಲ. ಈ ನಿಟ್ಟಿನಲ್ಲಿ 2ನೇ ಬಾರಿಗೆ ಧರಣಿ ಹಮ್ಮಿಕೊಳ್ಳಲಾಗಿದೆ ಎಂದರು.

ತಾಲ್ಲೂಕು ಸಂಚಾಲಕ ಜಿ. ನರಸಿಂಹಪ್ಪ ಮಾತನಾಡಿ, ಸ್ಥಳೀಯ ಮಟ್ಟದ ಸಮಸ್ಯೆಗಳ ಬಗ್ಗೆ ಪಟ್ಟಿ ನೀಡಿದರೂ ವಿಳಂಬ ಧೋರಣೆ ಅನುಸರಿಸಲಾಗುತ್ತಿದೆ ಎಂದರು. ಕಲಾವಿದ ಮುನಿರೆಡ್ಡಿ ಕ್ರಾಂತಿ ಗೀತೆಗಳನ್ನು ಹಾಡಿದರು. ಸ್ಥಳಕ್ಕೆ ಬಂದ ತಹಶೀಲ್ದಾರ್ ಶ್ವೇತಾ ಬಿ.ಕೆ, ಒಂದು ವರ್ಷದ ಹಿಂದೆ ನೀವು ಪ್ರತಿಭಟನೆ ಮಾಡಿ ಸಲ್ಲಿಸಿದ್ದ 34 ಬೇಡಿಕೆಗಳನ್ನು ಪರಿಶೀಲಿಸಿದ್ದೇವೆ. ಈಗಾಗಲೇ ಶೇ 70 ರಷ್ಟು ಬೇಡಿಕೆಗಳನ್ನು ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ವರದಿ ಸಲ್ಲಿಸಲಾಗಿದೆ ಎಂದರು. ಶೇ 30 ರಷ್ಟು ಬೇಡಿಕೆಗಳಲ್ಲಿ 20ರಷ್ಟು ಬೇಡಿಕೆಗಳು ಭೂಮಿ ವಿಚಾರದ್ದಾಗಿವೆ. ಬಗರ್ ಹುಕುಂ ಆ್ಯಪ್ ತಾಂತ್ರಿಕ ಸಮಸ್ಯೆಯಿಂದ ಅನುಮೋದನೆ ಸಾಧ್ಯವಾಗಿಲ್ಲ. 765 ಕಡತಗಳು ಇನ್ನೂ ಬಾಕಿಯಾಗಿ ಉಳಿದಿವೆ ಎಂದರು.


ಈಗ ನೀಡಿರುವ 18 ಬೇಡಿಕೆಗಳನ್ನು ನಮ್ಮ ಹಂತದಲ್ಲಿ ನಿಯಮಾನುಸಾರ ಪರಿಹರಿಸುತ್ತೇವೆ. ಸರ್ಕಾರದ ಮಟ್ಟದಲ್ಲಿ ಬಗೆಹರಿಯಬೇಕಾದ ವಿಷಯಗಳನ್ನು ಮೇಲಧಿಕಾರಿಗಳಿಗೆ ತಿಳಿಸುತ್ತೇವೆ ಎಂದು ಭರವಸೆ ನೀಡಿದರು.

# ಉದಯವಾಹಿನಿ ವರದಿಗೆ ಎಚ್ಚೆತ್ತು ಸ್ಥಗಿತ ಗೊಂಡಿದ್ದ ರಸ್ತೆ ಕಾಮಗಾರಿ ಆರಂಭ

• ಉದಯವಾಹಿನಿ, ಗುಂಡ್ಲುಪೇಟೆ

ಉದಯವಾಹಿನಿ ಪತ್ರಿಕೆ ವರದಿಗೆ ಎಚ್ಚೆತ್ತ ಅಧಿಕಾರಿಗಳು ಸ್ಥಗಿತಗೊಂಡಿದ್ದ ತೆರಕಣಾಂಬಿ ಮಾರ್ಗದ ರಸ್ತೆ ಕಾಮಗಾರಿಯನ್ನ ಮರು ಆರಂಭಿಸಿದ್ದು ಶೀಘ್ರದಲ್ಲೇ ಡಾಂಬರೀಕರಣ ಪೂರ್ಣಗೊಳಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ. ವಾಹನ ಸವಾರರಿಗೆ ಧೂಳಿನಾ ಅಭಿಷೇಕ ಶೀರ್ಷಿಕೆಯಡಿ ವರದಿ ಬಿತ್ತರಿಸಿ ಗುತ್ತಿಗೆದಾರ, ಅಧಿಕಾರಿಗಳ ಕಣ್ತೆರೆಸಿದ


ಉದಯವಾಹಿನಿ ಚಿತ್ರ


ನೆನೆಗುದಿಗೆ ಬಿದ್ದ ರಸ್ತೆ ಕಾಮಗಾರಿ: ಗುತ್ತಿಗೆದಾರನ ವಿರುದ್ಧ ಸಾರ್ವಜನಿಕರ ಹಿಡಿಶಾಪ

ಉದಯವಾಹಿನಿ ಪತ್ರಿಕೆಗೆ ಸಾರ್ವಜನಿಕರು ಧನ್ಯವಾದ ತಿಳಿಸಿದ್ದಾರೆ.

ಲೋಕೋಪಯೋಗಿ ಇಲಾಖೆ ವತಿಯಿಂದ ಎರಡೂವರೆ ಕೋಟಿ ವೆಚ್ಚದಲ್ಲಿ ಪ್ರಗತಿ ಅಲ್ಲಿದ್ದ ಒಂದೂವರೆ ಕಿಲೋ ಮೀಟರ್ ರಸ್ತೆ ಕಾಮಗಾರಿ ಸ್ಥಗಿತಗೊಂಡ ಹಿನ್ನೆಲೆ ವಾಹನ ಸವಾರರಿಗೆ ತೊಂದರೆಯುಂಟಾಗಿತ್ತು, ಅಪಘಾತಗಳು ಸಂಭವಿಸಿ ಸಣ್ಣಪುಟ್ಟ ಗಾಯಗೊಳಗಾಗಿದ್ದ ಸಾರ್ವಜನಿಕರು ಹಿಡಿಶಾಪ ಹಾಕಿದ್ದರು.

ಗುತ್ತಿಗೆದಾರ, ಇಲಾಖೆ ಅಧಿಕಾರಿಗಳ ನಿರ್ಲಕ್ಷ್ಯ ನಡೆ ಕುರಿತು ಸಾರ್ವಜನಿಕರ ತೆರಿಗೆ ಹಣ ಪೋಲಾಗುತ್ತಿರುವ ಕುರಿತು ಅಧಿಕಾರಿಗಳಿಗೆ ಚುರುಕು ಮುಟ್ಟಿಸಿದ ಬೆನ್ನಲ್ಲೇ ಕಾಮಗಾರಿ ಆರಂಭವಾಗಿದ್ದು ಶೀಘ್ರದಲ್ಲೇ ಪೂರ್ಣಗೊಳಿಸುವ ಭರವಸೆ ಸಿಕ್ಕಿದೆ.

# ತಾಯಿ ಮತ್ತು ಮಗನಿಗೆ ಕುಡ್ಲದಲ್ಲಿ ಮೆಚ್ಚುಗೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕಾಸರಗೋಡು

ಮಂಗಳೂರಿನ ಕೋಟೆಕಾರ್ ಮಡ್ಯಾರ್, ಶಾಸ್ತಾರ ಬಳಗ (ರಿ), ಇವರ ವತಿಯಿಂದ ಕಾಸರಗೋಡು ಕನ್ನಡ ಭವನದ ರಜತ ಮಹೋತ್ಸವದಲ್ಲಿ ಸಮಾಜ ಸೇವಾ ರತ್ನ ಪ್ರಶಸ್ತಿಗೆ ಭಾಜನರಾಗಿರುವ ಕೃಷ್ಣಕುಮಾರ್, ಮಾತೃಶ್ರೀ ಚೂಡಾರತ್ನಮ್ಮನವರನ್ನು ಸ್ವಾಗತಿಸಿ, ಗೌರವಿಸಲಾಯಿತು. ಮಾತೃ ಸೇವಾ ಸಂಕಲ್ಪ ಯಾತ್ರೆಯ ಸಂದೇಶ ಇಂದಿನ ಯುವ ಜನಾಂಗದ ಉತ್ತಮ ಸಂಸ್ಕಾರಯುಕ್ತ ಬಾಳ್ವೆಗೆ ಸಹಕಾರಿಯಾಗಲಿದೆ, ಮುಂದೆಯೂ ನಿಮ್ಮಿಂದ ವಿವೇಕಯುಕ್ತವಾದ ಸಂದೇಶಗಳು ಬರುತ್ತಿರಲಿ ಎಂದರು.

# ಮಧುಗಿರಿಗೆ ಇನ್ನೂ ಹೆಚ್ಚಿನ ಸಾಲ ರಂಗನಾಥ್ ಹೇಳಿಕೆಗೆ ರಾಜಣ್ಣ ತಿರುಗೇಟು

• ಉದಯವಾಹಿನಿ, ಕೊಡಿಗೇನಹಳ್ಳಿ

**ಹೆಚ್ಚಿನ ಸಾಲ ನೀಡುತ್ತೇನೆ**



ರಾಜ್ಯದಲ್ಲಿನ ಅಂಗನವಾಡಿ ಕೇಂದ್ರಗಳ ಮಕ್ಕಳಿಗೆ ಸಮವಸ್ತ್ರ ವಿತರಿಸಲು ಬಜೆಟ್‌ನಲ್ಲಿ ಹಣ ಮೀಸಲಿಡುವಂತೆ ಸಿಎಂಗೆ ಒತ್ತಾಯಿಸುವೆ ಎಂದು ಶಾಸಕ ಕೆ.ಎನ್. ರಾಜಣ್ಣ ತಿಳಿಸಿದರು. ಹೋಬಳಿಯ ಚಿಕ್ಕಮಾಲೂರು ಗ್ರಾಮದಲ್ಲಿ ಅಂಗನವಾಡಿ ಕೇಂದ್ರ, ಕುಡಿಯುವ ನೀರಿನ ಘಟಕ ಉದ್ಘಾಟನೆ, ಶಾಲೆ ಕೊಠಡಿ, ರಂಗಮಂದಿರ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು. ಕುಣಿಗಲ್ ಶಾಸಕರು ಇತ್ತೀಚೆಗೆ ಕೆ.ಎನ್. ರಾಜಣ್ಣ ಮಧುಗಿರಿ ತಾಲ್ಲೂಕಿಗೆ ಡಿಸಿಸಿ ಬ್ಯಾಂಕ್ ನಿಂದ ಹೆಚ್ಚು ಸಾಲ ನೀಡಿದ್ದಾರೆ ಎಂದು ಹೇಳಿಕೆ ಕೊಟ್ಟಿದ್ದರು. ಹೌದು ಅವರು ಹೇಳಿದ್ದು ನಿಜ ಈ ತಾಲ್ಲೂಕು ಆರ್ಥಿಕವಾಗಿ ಹಿಂದುಳಿದ ಪ್ರದೇಶ ಹಾಗಾಗಿ ನೀಡಿದ್ದೇನೆ. ಮುಂದೆ ಮಧುಗಿರಿ ತಾಲ್ಲೂಕಿಗೆ ಇನ್ನೂ ಹೆಚ್ಚಿನ ಸಾಲ ನೀಡುತ್ತೇನೆ ಎಂದರು. ಉಪ ವಿಭಾಗಾಧಿಕಾರಿ ಗೋಟೂರು ಶಿವಪ್ಪ ಮಾತನಾಡಿ, ಶಿಕ್ಷಣಕ್ಕೆ ಮಾತ್ರ ಜೀವನ ಹಾಗೂ ಬದುಕನ್ನು ಬದಲಾಯಿಸುವ ಶಕ್ತಿ ಇರುವುದೆಂದು ಅರಿತು ಶಾಸಕ ಕೆ.ಎನ್. ರಾಜಣ್ಣ ಚಿಕ್ಕಮಾಲೂರು ಸರ್ಕಾರಿ ಶಾಲೆಗೆ 1.10 ಕೋಟಿ ಅನುದಾನ ನೀಡಿದ್ದಾರೆ ಎಂದರು.

# ಇ-ಸ್ವತ್ತು ಸೇವೆಗೆ ತಪ್ಪದ ಹೆಣಗಾಟ

• ಉದಯವಾಹಿನಿ, ಗುಬ್ಬಿ

ಸಾರ್ವಜನಿಕರ ಸ್ವತ್ತುಗಳಿಗೆ ಸುರಕ್ಷಿತ ಮತ್ತು ಸುಲಭ ದಾಖಲಾತಿ ಒದಗಿಸುವ ಉದ್ದೇಶದಿಂದ ಸರ್ಕಾರ ಜಾರಿಗೆ ತಂದ ಮನೆ ಬಾಗಿಲಿನಲ್ಲೇ ಇ-ಸ್ವತ್ತು ಯೋಜನೆ, ತಾಂತ್ರಿಕ ಸಮಸ್ಯೆಗಳ ಕಾರಣದಿಂದ ಗ್ರಾಮೀಣ ಪ್ರದೇಶಗಳಲ್ಲಿ ಸ್ಥಗಿತಗೊಂಡಿದೆ ಯೋಜನೆ ಘೋಷಣೆ ದಿನದಿಂದಲೂ ಹಲವು ತಾಂತ್ರಿಕ ದೋಷಗಳು ಎದುರಾಗುತ್ತಿದೆ. ತಾಲ್ಲೂಕಿನ 37 ಗ್ರಾಮ ಪಂಚಾಯಿತಿಗಳಲ್ಲಿ ಸಾರ್ವಜನಿಕರು ಈ ಸೇವೆ ಪಡೆಯಲು ಹೆಣಗಾಡುತ್ತಿದ್ದಾರೆ.

ಸಾರ್ವಜನಿಕರು ಪ್ರತಿದಿನವೂ ಅಧಿಕಾರಿಗಳನ್ನು ಕಂಡು ಹಿಡಿಯಲು ಹೋಗುತ್ತಿದ್ದಾರೆ ಅದು ಸಾಧ್ಯ ಆಗದಿದ್ದರೆ ಗ್ರಾಮ ಪಂಚಾಯಿತಿ ಕಚೇರಿ ಬಳಿ ದಿನಗಟ್ಟಲೇ ಕಾಯುವುದೇ ಅವರ ಕೆಲಸವಾಗಿದೆ. ಇದು ಸುಗ್ಗಿ ಕಾಲ. ಹೊಲ-ತೋಟಗಳ ಕೆಲಸ ಹೆಚ್ಚು. ನೀರಿಗೂ ಕಾಯಬೇಕು. ಕೆಲಸ ಬಿಟ್ಟು ಇಡೀದಿನ ಇಲ್ಲಿ ಕಾಯುವುದು ನಮ್ಮ ಗತಿ ಎಂದು ಗ್ರಾಮಸ್ಥರು ಅಳಲು ತೋಡಿಕೊಂಡರು.

ಇ-ಖಾತೆ ಸೃಷ್ಟಿಗಾಗಿ ಸಿಟಿಜನ್ ಪೋರ್ಟಲ್ ಮೂಲಕ ದಾಖಲೆ ಆಲ್‌ಲೈನ್ ಅಪ್ಲೋಡ್ ಮಾಡುವ ವ್ಯವಸ್ಥೆ ಇದ್ದರೂ, ತಾಂತ್ರಿಕ ದೋಷ ಇದನ್ನು ನಿಷ್ಕ್ರಿಯಗೊಳಿಸಿವೆ. ಯಾವ ದಾಖಲೆ ಅಗತ್ಯ, ಯಾವುವು ಅಲ್ಲ ಎಂಬ ಸ್ಪಷ್ಟ ಮಾರ್ಗದರ್ಶನದ ಕೊರತೆ ಸಾರ್ವಜನಿಕರನ್ನು ಹೆಚ್ಚು ಗೊಂದಲಕ್ಕೀಡು ಮಾಡಿದೆ. ಮನೆ ಬಾಗಿಲಿಗೆ ಸೇವೆ ಎಂದಾಗ ಸಂತೋಷಪಟ್ಟೆವು. ಆದರೆ, ಈಗ ಏನಾಗುವುದೋ ಎಂಬ ಆತಂಕ ಕಾಡುತ್ತಿದೆ ಎಂದು ಸಾರ್ವಜನಿಕರು ಹೇಳುತ್ತಾರೆ.



ಉದಯವಾಹಿನಿ ಚಿತ್ರ

ಪಂಚಾಯತ್ ರಾಜ್ ಇಲಾಖೆ ಸಿಬ್ಬಂದಿಯೊಬ್ಬರು, ಯೋಜನೆಯನ್ನು ಪ್ರಾರಂಭಿಸುವ ಮೊದಲು ಸಿಬ್ಬಂದಿಗೆ ಸಮರ್ಪಕ ತರಬೇತಿ, ತಾಂತ್ರಿಕ ಸಿದ್ಧತೆ ಅಗತ್ಯವಿತ್ತು. ಪ್ರಸ್ತುತ ತಂತ್ರಾಂಶಕ್ಕೆ ಸಿಬ್ಬಂದಿ ತರಬೇತಿ ಹೊಂದಿಕೆಯಾಗುತ್ತಿಲ್ಲ. ಮತ್ತೆ ತರಬೇತಿ ನೀಡಿದರೆ ಮಾತ್ರ, ಯೋಜನೆ ಯಶಸ್ವಿ ಆಗಬಹುದು ಎಂದರು.

### ಸಾರ್ವಜನಿಕರಿಗೆ ಅರಿವು

**ಸಾರ್ವಜನಿಕರು ಪದೇ ಪದೇ ಕಚೇರಿಗೆ ತಿರುಗಾಡುವುದನ್ನು ತಪ್ಪಿಸಲು ಆನ್‌ಲೈನ್‌ನಲ್ಲಿ ಯಾವ ರೀತಿ ದಾಖಲೆ ಗಣಕೀಕರಣಗೊಳಿಸಬೇಕು ಎನ್ನುವ ಅರಿವು ಮೂಡಿಸಲು ತಾಲ್ಲೂಕಿನಲ್ಲಿ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಪ್ರಸ್ತುತ ಇರುವ ತಾಂತ್ರಿಕ ದೋಷವನ್ನು ತಾಲ್ಲೂಕು ಹಂತದಲ್ಲಿ ಪರಿಹರಿಸಲು ಸಾಧ್ಯವಿಲ್ಲ. ಮೇಲಿನಿಂದ ಆದೇಶ ಬರುವವರೆಗೂ ಕಾಯಲೇಬೇಕಾದ ಅನಿವಾರ್ಯತೆ ಇದೆ. ಸಾರ್ವಜನಿಕರು ಸಹಕರಿಸಬೇಕಾದ ಅಗತ್ಯವಿದೆ.**

- ರಂಗನಾಥ್, ತಾ. ಪಂ. ಇಒ

# ರೈತರ ಬೆವರಿನ ಫಲವೇ ಸಂಕ್ರಾಂತಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕನಕಪುರ

ಸಂಕ್ರಾಂತಿ ಹೊಸ ವರ್ಷಕ್ಕೂ ಮೊದಲು ಬರುವ ಹಬ್ಬವಾಗಿದೆ. ರೈತರು ವರ್ಷವಿಡೀ ದುಡಿದು ಬೆವರು ಹರಿಸಿದ ಫಲವೇ ಸಂಕ್ರಾಂತಿ ಎಂದು ಪ್ರಗತಿಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಕುಮಾರಸ್ವಾಮಿ ಅಭಿಪ್ರಾಯಪಟ್ಟರು. ಜಿಲ್ಲಾ ಲೇಖಕರ ವೇದಿಕೆ ವತಿಯಿಂದ ಇಲ್ಲಿನ ರಂಗನಾಥ ಬಡಾವಣೆ ಹೊಂಗಿರಣ ಆವರಣದಲ್ಲಿ ಗುರುವಾರ ನಡೆದ ಜಿಲ್ಲಾ ಮಟ್ಟದ ಕವಿಗೋಷ್ಠಿ ಮತ್ತು ಕೃತಿ ಬಿಡುಗಡೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಈ ಕಾಲದಲ್ಲಿ ಸೂರ್ಯ ತನ್ನ ದಿಕ್ಕು ಬದಲಿಸುತ್ತಾನೆ ವಸಂತ ಕಾಲ ಆರಂಭವಾಗುತ್ತದೆ. ಇಂತಹ ಸಂದರ್ಭದಲ್ಲಿ ಪ್ರತಿ ವರ್ಷವೂ ವೇದಿಕೆಯಿಂದ ಸಂಕ್ರಾಂತಿ ಕವಿಗೋಷ್ಠಿ ಏರ್ಪಡಿಸಿ ಜಿಲ್ಲೆಯಲ್ಲಿರುವ ಸಾಹಿತಿಗಳನ್ನು ಕರೆಸಿ, ವೈವಿಧ್ಯತೆಯಿಂದ ಕೂಡಿದ ಕವಿತೆಗಳನ್ನು ವಾಚಿಸುವುದು ಒಂದು ಒಳ್ಳೆಯ ಕಾರ್ಯಕ್ರಮ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಾಹಿತಿ ಮಲ್ಲತಳ್ಳಿ ಎಚ್.ತುಕರಾಮ್ ಮಾತನಾಡಿ, ಜಿಲ್ಲಾ ಲೇಖಕರ ವೇದಿಕೆಯು ಜಿಲ್ಲೆಯಲ್ಲಿ ಸಾಹಿತ್ಯ ಬೆಳವಣಿಗೆಗೆ ಶ್ರಮವಹಿಸುತ್ತಿದೆ. ಹೊಸ ತಲೆಮಾರಿನ ಕವಿಗಳನ್ನು ಪ್ರೋತ್ಸಾಹಿಸಿ ಹೊಸ ಸಾಹಿತ್ಯ, ಉದಯಕ್ಕೆ ಕಾರಣವಾಗಲಿದೆ ಎಂದು ತಿಳಿಸಿದರು.

# ಜಲಾಶಯಕ್ಕೆ ಕೃಷಿ ಭೂಮಿ ಬಿಡೆವು: ಸಂತ್ರಸ್ತ ರೈತರ ಹೋರಾಟ ಸಮಿತಿ ಸಭೆಯಲ್ಲಿ ನಿಲುವು

• ಉದಯವಾಹಿನಿ, ಬಾಗೇಪಲ್ಲಿ

ರೈತರ ಜಮೀನುಗಳನ್ನು ಸ್ವಾಧೀನಪಡಿಸಿಕೊಳ್ಳದೆ ತಾಲ್ಲೂಕಿನ ಗಂಟಮಲ್ಲಮ್ಮ ಕಣಿವೆ ಬಳಿಯ ಜಲಾಶಯ ನಿರ್ಮಿಸಬೇಕು. ಜಲಾಶಯಕ್ಕೆ ಯಾವುದೇ ಕಾರಣಕ್ಕೂ ತಮ್ಮ ಕೃಷಿ ಜಮೀನುಗಳನ್ನು ನೀಡಲಾಗದು ಎಂದು ಗಂಟಮಲ್ಲಮ್ಮ ಜಲಾಶಯ ಸಂತ್ರಸ್ತ ರೈತರ ಹೋರಾಟ ಸಮಿತಿ ಹೇಳಿದೆ. ತಾಲ್ಲೂಕಿನ ಹಿರಣೇಶ್ವರ ದೇವಾಲಯದ ಆವರಣದಲ್ಲಿ ಗಂಟಮಲ್ಲಮ್ಮ ಕಣಿವೆ ಜಲಾಶಯ ಸಂತ್ರಸ್ಥ ರೈತರ ಹೋರಾಟ ಸಮಿತಿ ನೇತೃತ್ವದಲ್ಲಿ ರೈತರು ಮತ್ತು ಮುಖಂಡರ ಸಭೆ ನಡೆಯಿತು. ಸಭೆಯಲ್ಲಿ ಸಮಿತಿ ಅಧ್ಯಕ್ಷ ಆಗಿ ಚಂದ್ರ, ಕಾರ್ಯದರ್ಶಿಯಾಗಿ ತಿಪ್ಪರಾಜು, ಗೌರವಾಧ್ಯಕ್ಷರಾಗಿ ಡಿ.ಟಿ. ಮುನಿಸ್ವಾಮಿ ಅವರನ್ನು ಆಯ್ಕೆ ಮಾಡಲಾಯಿತು.

ಗಂಟಮಲ್ಲಮ್ಮ ಕಣಿವೆ ಜಲಾಶಯ ನಿರ್ಮಿಸಿ, ಪಾತಪಾಳ್ಯ, ಚೇಳೂರು, ಗೂಳೂರು ಭಾಗಗಳಿಗೆ ನೀರು ವಿತರಿಸಬೇಕು ಎಂಬುದು ತಮ್ಮ ಬೇಡಿಕೆ. ನೀರು ಕಲ್ಪಿಸುವ ಯೋಜನೆಗೆ ರಾಜ್ಯ ಸರ್ಕಾರ 200 ಕೋಟಿ ಹಣ ಅನುದಾನ ನೀಡಿದೆ. ಆದರೆ, ಈಗಿನ ಕಟ್ಟೆ ಮೇಲೆ ಜಲಾಶಯ ನಿರ್ಮಿಸುವುದನ್ನು ಬಿಟ್ಟು, ಜಲಾಶಯದ ಕಟ್ಟೆಗಾಗಿ 34 ಮಂದಿಯ ರೈತರ ಜಮೀನುಗಳ ಸ್ವಾಧೀನಕ್ಕೆ ಗುರುತಿಸಲಾಗಿದೆ. ಪ್ರಾಸ್ತಾಪಿತ ಮುಳುಗಡೆಯಾಗುವ ಜಮೀನುಗಳ ಸರ್ವೆ ನಂಬರ್, ರೈತರ ಹೆಸರುಗಳ ಪಟ್ಟಿ ಬಿಡುಗಡೆ ಮಾಡಲಾಗಿದೆ ಎಂದು ರೈತರು ಆತಂಕ ವ್ಯಕ್ತಪಡಿಸಿದರು. ಸಮಿತಿ ಕಾರ್ಯದರ್ಶಿ ಸಂಗಟಪಲ್ಲಿಯ ತಿಪ್ಪೇಸ್ವಾಮಿ ಮಾತನಾಡಿ, ಅನೇಕ ವರ್ಷಗಳಿಂದ ಭೂಮಿ ನಂಬಿ ಜೀವನ ನಡೆಸುತ್ತಿದ್ದೇವೆ. ಗಂಟಮಲ್ಲಮ್ಮ ಜಲಾಶಯ ನಿರ್ಮಾಣದ ಹೆಸರಿನಲ್ಲಿ ರೈತರ ಜಮೀನು ಸ್ವಾಧೀನಪಡಿಸಿಕೊಂಡರೆ, ಮುಂದೆ ನಮ್ಮ ಗತಿ ಏನು ಎಂದು ಪ್ರಶ್ನಿಸಿದರು. ಜಲಾಶಯ ನಿರ್ಮಿಸಲು ನಮ್ಮ ತಕರಾರು ಇಲ್ಲ. ಆದರೆ ಕಟ್ಟೆಯ ದೂರದ 34 ರೈತರ ಜಮೀನುಗಳಲ್ಲಿ ಜಲಾಶಯದ ಕಟ್ಟಡ ನಿರ್ಮಾಣಕ್ಕೆ ಹೊರಟಿರುವುದಕ್ಕೆ ನಮ್ಮ ತಕಾರರು ಇದೆ ಎಂದರು. ಸಮಿತಿಯ ಅಧ್ಯಕ್ಷ ಚಂದ್ರ ಮಾತನಾಡಿ, ನಮ್ಮ ಜಮೀನುಗಳನ್ನು ಸ್ವಾಧೀನಪಡಿಸಲು ಬಿಡಲ್ಲ. ಈ ಸಂಬಂಧ ಅಧಿಕಾರಿಗಳಿಗೆ ಅರ್ಜಿ ಸಲ್ಲಿಸಲಾಗುವುದು ಎಂದರು.


ಉದಯವಾಹಿನಿ ಚಿತ್ರ

# ಜನವರಿ ಅಂತ್ಯಕ್ಕೆ ರಾಮನಗರದಲ್ಲಿ ರಾಗಿ ಖರೀದಿ ಆರಂಭ

## ● ಬ್ರೋಕರ್‌ಗಳಿಗೆ ಕಡಿವಾಣ ಹಾಕಲು ಡಿಸಿ ಕಟ್ಟುನಿಟ್ಟಿನ ಸೂಚನೆ, ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ಭತ್ತ ಕೂಡ ಖರೀದಿ

• ಉದಯವಾಹಿನಿ, ರಾಮನಗರ

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ರಾಗಿ ಮತ್ತು ಭತ್ತ ಖರೀದಿಸಲು ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಬೇಕೆಂದು ಜಿಲ್ಲಾಧಿಕಾರಿ ಯಶವಂತ್ ವಿ.ಗುರುಕರ್ ಅವರು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಹಾಗೂ ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ 2025-26ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಎಂಎಸ್‌ಪಿ ರಾಗಿ ಮತ್ತು ಭತ್ತ ಖರೀದಿಸಲು ನಿಗದಿಯಾಗಿರುವ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

**12265 ರೈತರಿಂದ ನೋಂದಣಿ:** ಜಿಲ್ಲೆಯಲ್ಲಿ ತಾಲ್ಲೂಕುವಾರು ಚನ್ನಪಟ್ಟಣದಲ್ಲಿ 373, ಕನಕಪುರದಲ್ಲಿ 3,325, ಹಾರೋಹಳ್ಳಿಯಲ್ಲಿ937, ಮಾಗಡಿಯಲ್ಲಿ 7,158 ಹಾಗೂ ರಾಮನಗರದಲ್ಲಿ 472 ರೈತರು ಸೇರಿದಂತೆ ಒಟ್ಟಾರೆ 12,265 ರೈತರು ರಾಗಿ ಖರೀದಿಗೆ ನೋಂದಾಯಿಸಿಕೊಂಡಿದ್ದಾರೆ. ನೋಂದಣಿ ಪ್ರಕ್ರಿಯೆ ಮುಕ್ತಾಯಗೊಂಡಿದ್ದು, ನೋಂದಾಯಿತ ರೈತರಿಂದ 2,88,284 ಕ್ವಿಂಟಾಲ್ ರಾಗಿ ಖರೀದಿಸಲಾಗುವುದು ಎಂದು ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದಾಗ ಜಿಲ್ಲಾಧಿಕಾರಿ ಅವರು ಮಾತನಾಡಿ, ರೈತರಿಂದ ಖರೀದಿಸಲಾಗುವ ರಾಗಿ ದಾಸ್ತಾನನ್ನು ಸುರಕ್ಷಿತವಾಗಿ ಸಂಗ್ರಹಿಸಲು ಹಾಗೂ ದಾಸ್ತಾನಿನ ಪ್ರಮಾಣದಲ್ಲಿವ್ಯತ್ಯಯವಾಗದಂತೆ ಅಧಿಕಾರಿ, ಸಿಬ್ಬಂದಿ ಎಚ್ಚರಿಕೆಯಿಂದ ಕರ್ತವ್ಯ ನಿರ್ವಹಿಸಬೇಕೆಂದು ಸೂಚಿಸಿದರು.


ಉದಯವಾಹಿನಿ ಚಿತ್ರ

**4,886 ರೂ. ಬೆಂಬಲ ಬೆಲೆ:** ಕ್ವಿಂಟಾಲ್ ರಾಗಿಗೆ 4,886 ರೂ. ಭತ್ತ 2,369 ರೂ., ಗ್ರೇಡ್ 'ಎ' ಭತ್ತಕ್ಕೆ 2,389 ರೂ. ಬೆಂಬಲ ಬೆಲೆಯನ್ನು ಸರಕಾರ ನಿಗದಿಪಡಿಸಿದೆ. ಖರೀದಿ ಕೇಂದ್ರಗಳಲ್ಲಿಮಧ್ಯವರ್ತಿಗಳ ಹಾವಳಿ ಇಲ್ಲದಂತೆ ರೈತರೇ ನೇರವಾಗಿ ರಾಗಿ ಖರೀದಿಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳುವಂತೆ ಸೂಚಿಸಿದ ಅವರು, ಗುಣಮಟ್ಟ ಪರಿವೀಕ್ಷಕರು ರೈತರಿಂದ ಉತ್ತಮ ಗುಣಮಟ್ಟದ ರಾಗಿ ಖರೀದಿಸಬೇಕು. ಗುಣಮಟ್ಟದಲ್ಲಿ ಯಾವುದೇ ವ್ಯತ್ಯಾಸವಾದಲ್ಲಿಅಥವಾ ಕಳಪೆ ಗುಣಮಟ್ಟದ ರಾಗಿ ಖರೀದಿಸಿದಲ್ಲಿಸಂಬಂಧಿಸಿದ ಗುಣಮಟ್ಟ ಪರಿವೀಕ್ಷಕರು, ಖರೀದಿ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

**ಕನಕಪುರದಲ್ಲಿ ಸಿಸಿ ಕ್ಯಾಮೆರಾ**

**ಕನಕಪುರ ತಾಲ್ಲೂಕು ಖರೀದಿ ಕೇಂದ್ರಗಳಲ್ಲಿಸಿಸಿ ಕ್ಯಾಮರಾಗಳನ್ನು ಕಡ್ಡಾಯವಾಗಿ ಅಳವಡಿಸಬೇಕು ಎಂದ ಅವರು ಕಳೆದ ವರ್ಷ ತಮಿಳುನಾಡಿನ ರಾಗಿಯನ್ನು ಕನಕಪುರ ತಾಲ್ಲೂಕಿನ ಖರೀದಿ ಕೇಂದ್ರಕ್ಕೆ ತರುತ್ತಿರುವುದಾಗಿ ದೂರುಗಳು ಸ್ವೀಕೃತವಾಗಿರುತ್ತವೆ. ಈ ಹಿನ್ನೆಲೆಯಲ್ಲಿಅತ್ಯಂತ ಎಚ್ಚರಿಕೆಯಿಂದ ಹೊರ ರಾಜ್ಯದ ರೈತರು ಬಾರದಂತೆ ಕ್ರಮವಹಿಸಲಾಗುವುದು.**

-ಯಶವಂತ್ ವಿ. ಗುರುಕರ್ ಜಿಲ್ಲಾಧಿಕಾರಿ

**ಬ್ರೋಕರ್‌ಗಳಿಗೆ ಕಡಿವಾಣ ಹಾಕಿ:** ಜಿಲ್ಲೆಯಲ್ಲಿ ಐದು ತಾಲ್ಲೂಕುಗಳಿಗೆ ಒಂದರಂತೆ ಒಟ್ಟು ಐದು ಖರೀದಿ ಕೇಂದ್ರ, ಸಂಗ್ರಹಣ ಕೇಂದ್ರಗಳನ್ನು 2026ರ ಜನವರಿ ಅಂತ್ಯದೊಳಗೆ ತೆರೆಯಲಾಗುವುದು. ಖರೀದಿ ಕೇಂದ್ರಗಳಲ್ಲಿ ರೈತರು ಮಾತ್ರ ಹಾಜರಿರಬೇಕು. ರಾಗಿ ಹಾಗೂ ಭತ್ತ ನೀಡಿದ ರೈತರಿಗೆ ನಿಗದಿತ ದಿನಾಂಕದೊಳಗೆ ಹಣ ಪಾವತಿಸಬೇಕು. ಖರೀದಿ ಕೇಂದ್ರಗಳ ಎದುರು ಬ್ಯಾನರ್ ಅಳವಡಿಸಿ ನೋಡಲ್ ಅಧಿಕಾರಿಗಳ ಹೆಸರು ಹಾಗೂ ದೂರವಾಣಿ ಸಂಖ್ಯೆ ಪ್ರದರ್ಶಿಸುವಂತೆ, ಖರೀದಿ ಕೇಂದ್ರಗಳಲ್ಲಿರೈತರಿಗೆ ನೆರಳು, ಕುಡಿವ ನೀರು, ಇನ್ನಿತರ ಮೂಲಸೌಲಭ್ಯಗಳನ್ನು ಒದಗಿಸಬೇಕು ಎಂದು ತಿಳಿಸಿದರು.

### ಕಳೆದ ವರ್ಷವೇ ರೈತರಿಂದ ನೋಂದಣಿ

**ಕರ್ನಾಟಕ ಸರ್ಕಾರವು ರೈತರಿಗೆ ಬೆಂಬಲ ಬೆಲೆ ಯೋಜನೆಯಡಿ ರಾಗಿ, ಜೋಳ ಹಾಗೂ ಭತ್ತವನ್ನು ಖರೀದಿಸಲು 2025ರ ಸೆಪ್ಟಂಬರ್- ಅಕ್ಟೋಬರ್ ನಲ್ಲಿ ನಿರ್ಧರಿಸಿತ್ತು. ಈ ಯೋಜನೆಯ ಮೂಲಕ ರಾಜ್ಯದ ರೈತರಿಗೆ ಸರ್ಕಾರವು ಆರ್ಥಿಕ ನೆರವಿನ ಸಿಹಿ ಸುದ್ದಿಯನ್ನು ನೀಡಿತ್ತು. ಎಂಎಸ್‌ಪಿ ನೋಂದಣಿಗಾಗಿ ಪ್ರತಿಯೊಂದು ಧಾನ್ಯಕ್ಕೂ ಪ್ರತ್ಯೇಕ ಸಮಯವನ್ನು ನಿಗದಿಪಡಿಸಲಾಗಿತ್ತು. ಅದರಂತೆ ಭತ್ತದ ಖರೀದಿಗಾಗಿ ನೋಂದಣಿ ಪ್ರಕ್ರಿಯೆಯು ಸೆಪ್ಟೆಂಬರ್ ಮತ್ತು ಅಕ್ಟೋಬರ್ ತಿಂಗಳಲ್ಲೇ ಯಶಸ್ವಿಯಾಗಿ ಆರಂಭಗೊಂಡಿತ್ತು.**

ಅಂತರಾಳದಿಂದ...
EDITORIAL

# ರಾಜ್ಯಪಾಲರು ಕೇಂದ್ರ-ರಾಜ್ಯಗಳ ನಡುವೆ ಸೇತುವೆಯಾಗಲಿ

ಜಂಟಿ ಅಧಿವೇಶನವನ್ನುದ್ದೇಶಿಸಿ ಭಾಷಣ ಮಾಡಲು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ನಿರಾಕರಿಸಿದ್ದಾರೆ ಎನ್ನುವ ಮಾತುಗಳು ಕೇಳಿ ಬರುತ್ತಿದೆ. ಈ ಮೂಲಕ ಹಿರಿಯಕ್ಕನ ಚಾಳಿ ಮನೆ ಮಂದಿಗೆಲ್ಲ ಎಂಬಂತೆ ನೆರೆಯ ತಮಿಳುನಾಡು, ಕೇರಳಕ್ಕೆ ಸೀಮಿತವಾಗಿದ್ದ ರಾಜ್ಯಪಾಲರ ಸರ್ವಾಧಿಕಾರಿ ವರ್ತನೆ ಇದೀಗ ಕರ್ನಾಟಕಕ್ಕೂ ವಿಸ್ತರಿಸಿದಂತಾಗಿದೆ. ರಾಜ್ಯದಲ್ಲಿ ಸರಕಾರ ಮತ್ತು ರಾಜ್ಯಪಾಲರ ನಡುವೆ ಸಣ್ಣಪುಟ್ಟ ಸಂಘರ್ಷಗಳು ಈ ಹಿಂದೆಯು ನಡೆಯುತ್ತಾ ಬಂದಿವೆಯಾದರೂ, ಜಂಟಿ ಅಧಿವೇಶದಲ್ಲಿ ರಾಜ್ಯಪಾಲರು ಭಾಷಣ ಮಾಡಲು ನಿರಾಕರಿಸುತ್ತಿರುವುದು ಇದೇ ಮೊದಲ ಬಾರಿಯಾಗಿದೆ. ಈ ಸಂಬಂಧ ರಾಜ್ಯಪಾಲರ ಮನವೊಲಿಸುವ ಪ್ರಯತ್ನ ಮುಂದುವರಿದಿದೆ. ನಿನ್ನೆಯಷ್ಟೇ ತಮಿಳುನಾಡಿನ ವಿಧಾನಸಭಾ ಅಧಿವೇಶನದಲ್ಲಿ ಭಾಷಣ ಮಾಡಲು ರಾಜ್ಯಪಾಲರು ತೋರಿಸಿದ ಅಸಹಕಾರ ರಾಷ್ಟ್ರಮಟ್ಟದಲ್ಲಿ ಸುದ್ದಿಯಾಗಿತ್ತು. ತಮಿಳುನಾಡಿನಲ್ಲಿ ಸರಕಾರ ಮತ್ತು ರಾಜ್ಯಪಾಲರ ನಡುವಿನ ತಿಕ್ಕಾಟ ಸುಪ್ರೀಂಕೋರ್ಟ್ ಮೆಟ್ಟಿಲೇರಿತ್ತು.

**ರಾಜ್ಯಪಾಲರ ಈ ನಿರ್ಧಾರದ ಹಿಂದಿನ ಕಾರಣವೂ ಸ್ಪಷ್ಟವಿದೆ. ನರೇಗಾ ಬದಲಿಗೆ ಕೇಂದ್ರ ಸರಕಾರ ಜಾರಿಗೆ ತಂದಿರುವ ಪರಿಷ್ಕೃತ ವಿಬಿ -ಜಿ ರಾಮ್ ಜಿ ಕಾಯ್ದೆಯ ವಿರುದ್ಧ ಈ ಬಾರಿಯ ಜಂಟಿ ಅಧಿವೇಶನದ ಜತೆ ಜತೆಗೇ ವಿಶೇಷ ಅಧಿವೇಶನವನ್ನು ಕರೆದಿರುವುದು ರಾಜ್ಯಪಾಲರ ಅಸಮಾಧಾನಕ್ಕೆ ಕಾರಣವಾಗಿದೆ. ಸರಕಾರ ಸಿದ್ಧಪಡಿಸಿರುವ ಭಾಷಣದಲ್ಲಿನ 11 ಪ್ಯಾರಾಗಳ ಬಗ್ಗೆ ರಾಜ್ಯಪಾಲರು ಆಕ್ಷೇಪ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ. ತಾವು ಬೊಟ್ಟು ಮಾಡಿರುವ ಅಂಶಗಳನ್ನು ಕೈ ಬಿಡದಿದ್ದರೆ ಭಾಷಣವನ್ನು ಮಾಡುವುದಿಲ್ಲ ಎಂದು ರಾಜ್ಯಪಾಲರ ಕಚೇರಿ ಸಂದೇಶ ನೀಡಿದೆ.**

ತಮಿಳು ನಾಡಿನ ಅಧಿವೇಶದಲ್ಲಿ ರಾಜ್ಯಪಾಲರು ಭಾಷಣ ಮಾಡಲು ನಿರಾಕರಿಸಿರುವುದು ಮೂರನೆಯ ಬಾರಿಗೆ. ಹಾಗೆಯೇ ನಾಲ್ಕು ಬಾರಿ ಅಧಿವೇಶನದಿಂದ ಹೊರ ನಡೆದಿದ್ದಾರೆ. 2025ರಂತೆಯೇ ಈ ಬಾರಿಯೂ ರಾಜ್ಯಪಾಲ ರವಿ ಅವರು ರಾಷ್ಟ್ರಗೀತೆಗೆ ಅಪಮಾನವಾಗಿದೆ ಎಂಬ ನೆಪವನ್ನು ಮುಂದಿಟ್ಟು ಅಧಿವೇಶನದಿಂದ ಅರ್ಧದಲ್ಲೇ ಹೊರನಡೆದಿದ್ದಾರೆ.

ಆದರೆ ಅವರ ಅಸಮಾಧಾನದ ಹಿಂದಿನ ಕಾರಣ ಬೇರೆಯೇ ಇದೆ.

ಕೇಂದ್ರದ ಯಾವುದೇ ಯೋಜನೆಗಳನ್ನು ಅಥವಾ ನೀತಿಗಳನ್ನು ರಾಜ್ಯ ಸರಕಾರ ಸಾರಾಸಗಟಾಗಿ ವಿರೋಧಿಸಿದಾಗ ಕೆಲವೊಮ್ಮೆ ರಾಜ್ಯಪಾಲರು ಸಂದಿಗ್ಧ ಸ್ಥಿತಿಯನ್ನು ಎದುರಿಸಬೇಕಾಗುತ್ತದೆ. ರಾಜ್ಯಪಾಲರನ್ನು ನೇಮಕ ಮಾಡಿರುವುದು ರಾಷ್ಟ್ರಪತಿಯೇ ಆಗಿದ್ದರೂ, ಅವರು ಕೇಂದ್ರ ಸರಕಾರದ ಸೂತ್ರದ ಗೊಂಬೆಗಳಾಗಿರುತ್ತಾರೆ.

ಆದರೆ ತಮಿಳು ನಾಡಿನಲ್ಲಿ ರಾಜ್ಯಪಾಲರು ಜನತೆಯ ಹಿತಾಸಕ್ತಿಯನ್ನು ಮುಂದಿಟ್ಟು ಯಾವುದೇ ಪ್ರತಿರೋಧ ನಡೆಸಿದ ಉದಾಹರಣೆಯಿಲ್ಲ. ಅವರು ತನ್ನ ಅಧಿಕಾರವನ್ನು ತಮಿಳು ಅಸ್ಮಿತೆಯ ಮೇಲೆ ಪದೇ ಪದೇ ದಾಳಿ ನಡೆಸಲು ದುರುಪಯೋಗ ಪಡಿಸಿಕೊಂಡಿರುವುದು ಕಂಡು ಬರುತ್ತದೆ. 2023ರಲ್ಲಿ ಭಾಷಣದಲ್ಲಿರುವ ಅಂಬೇಡ್ಕರ್, ಪೆರಿಯಾರ್, ಕಾಮರಾಜ್ ಹೆಸರುಗಳು ರಾಜ್ಯಪಾಲರಿಗೆ ಅಪಥ್ಯವಾಯಿತು. ಅಷ್ಟೇ ಅಲ್ಲ ಭಾಷಣದಲ್ಲಿ ಪ್ರಸ್ತಾಪಿಸಿರುವ ದ್ರಾವಿಡ ಮಾದರಿಯನ್ನು ಉಲ್ಲೇಖಿಸಲು ಅವರು ಇಷ್ಟಪಡಲಿಲ್ಲ. ರಾಜ್ಯಪಾಲರು ಭಾಷಣವನ್ನು ಅರ್ಧದಲ್ಲೇ ನಿಲ್ಲಿಸಿ ಸಭಾ ತ್ಯಾಗ ಮಾಡಿದರು. ಅವರೆಗೆ ಜನಪ್ರತಿನಿಧಿಗಳು ಕಲಾಪದ ನಡುವೆ ಸಭಾತ್ಯಾಗ ಮಾಡುವುದು ಎಷ್ಟು ಸರಿ ಎಂದು ಮಾಧ್ಯಮಗಳು ಚರ್ಚೆ ನಡೆಸುತ್ತಿದ್ದವು. ಆದರೆ ರಾಜಕಾರಣಿಗಳಂತೆ ರಾಜ್ಯಪಾಲರು ಕೂಡ ಸಭಾತ್ಯಾಗದ ರಾಜಕಾರಣಕ್ಕೆ ಮೊರೆ ಹೋದರೆ ಸರಕಾರಕ್ಕೆ ಮಾರ್ಗದರ್ಶನ ಮಾಡುವವರು ಯಾರು? ಎನ್ನುವ ಪ್ರಶ್ನೆ ಎದ್ದಿತು. ಅನಗತ್ಯವಾಗಿ ರಾಜ್ಯ ಸರಕಾರದ ನೀತಿ, ನಿಲುವುಗಳನ್ನು ಪ್ರಶ್ನಿಸುವ ಅಧಿಕಾರ ರಾಜ್ಯಪಾಲರಿಗಿಲ್ಲ. ಒಕ್ಕೂಟ ವ್ಯವಸ್ಥೆಯನ್ನು ಹಿಡಿದಿಟ್ಟುಕೊಳ್ಳುವ ಮಹತ್ತರ ಹೊಣೆಗಾರಿಕೆ ರಾಜ್ಯಪಾಲರಿಗಿದೆ. ಒಂದು ರೀತಿಯಲ್ಲಿ ಅವರು ಕೇಂದ್ರ ಮತ್ತು ರಾಜ್ಯಗಳ ನಡುವೆ ಸೇತುವೆಯಾಗಬೇಕು. ಆದರೆ ಇಂದು ರಾಜ್ಯಪಾಲರು ಗೋಡೆಯಾಗಿ ನಿಲ್ಲುತ್ತಿದ್ದಾರೆ ಎಂಬ ಆರೋಪಗಳು ಕೇಳಿ ಬರುತ್ತಿವೆ. ಒಂದು ರಾಜ್ಯವು ಅದು ಹತ್ತು ಹಲವು ಸಾಮಾಜಿಕ, ರಾಜಕೀಯ ಚಳವಳಿಗಳನ್ನು ಹಾದು ಬಂದಿರುತ್ತದೆ. ದ್ರಾವಿಡ ಚಳವಳಿಯನ್ನು ಹೊರಗಿಟ್ಟು ತಮಿಳು ನಾಡನ್ನು ನೋಡುವುದಕ್ಕೆ ಸಾಧ್ಯವಿಲ್ಲ. ಗೋಕಾಕ್ ಚಳವಳಿಯಂತಹ ಭಾಷಾಪರವಾದ, ರೈತಪರವಾದ ಕೆಲವು ಚಳವಳಿಗಳನ್ನು ಹೊರಗಿಟ್ಟು ಕರ್ನಾಟಕವನ್ನೂ ನೋಡಲು ಸಾಧ್ಯವಿಲ್ಲ. ಕೇಂದ್ರದಿಂದ ನೇಮಕವಾಗಿರುವ ರಾಜ್ಯಪಾಲರು ಹೊರಗಿನವರಾಗಿರುತ್ತಾರೆ. ಅವರು ಆಯಾ ರಾಜ್ಯದ ಭಾವನೆಗಳಿಗೆ ಸ್ಪಂದಿಸುತ್ತಾ ತನ್ನ ಮಾರ್ಗದರ್ಶನವನ್ನು ಮಾಡಬೇಕಾಗುತ್ತದೆ. ಮುಖ್ಯವಾಗಿ ದಕ್ಷಿಣ ರಾಜ್ಯಗಳ ಅಸ್ಮಿತೆಗಳ ಬೇರುಗಳನ್ನು ಪ್ರಶ್ನೆ ಮಾಡಿದರೆ ಅದು ಒಕ್ಕೂಟ ವ್ಯವಸ್ಥೆಯ ಮೇಲೆ ಕೆಟ್ಟ ಪರಿಣಾಮವನ್ನು ಬೀರಬಹುದು. ಜನರಿಂದ ನೇರವಾಗಿ ರಚನೆಯಾಗಿರುವ ಸರಕಾರಕ್ಕೆ ಜನರ ಹಿತಾಸಕ್ತಿಯನ್ನು ಕಾಯುವ ಹೊಣೆಗಾರಿಕೆಗಳಿರುತ್ತವೆ. ಒಂದು ವೇಳೆ, ಕೇಂದ್ರದ ನಿರ್ಧಾರದಿಂದ ರಾಜ್ಯಕ್ಕೆ ಅನ್ಯಾಯವಾಗುವುದಾದರೆ ಅದರ ವಿರುದ್ಧ ನಿರ್ಣಯವನ್ನು ತೆಗೆದುಕೊಳ್ಳುವ ಅಧಿಕಾರ ರಾಜ್ಯ ಸರಕಾರಕ್ಕಿದೆ. ರಾಜ್ಯ ಸರಕಾರದ ಆಗ್ರಹವನ್ನು ಕೇಂದ್ರಕ್ಕೆ ತಲುಪಿಸುವ ಹೊಣೆಗಾರಿಕೆಯನ್ನು ರಾಜ್ಯಪಾಲರು ಈ ಸಂದರ್ಭದಲ್ಲಿ ಹೊತ್ತುಕೊಳ್ಳಬೇಕು. ಆಗ ಕೇಂದ್ರ-ರಾಜ್ಯದ ನಡುವಿನ ಬಿಕ್ಕಟ್ಟು ಶಮನವಾಗುತ್ತದೆ. ಆದರೆ ರಾಜ್ಯಪಾಲರೇ ರಾಜಕಾರಣ ಮಾಡಲು ಮುಂದಾದಾಗ ಅದು ಸಾಂವಿಧಾನಿಕ ಬಿಕ್ಕಟ್ಟಿಗೆ ಕಾರಣವಾಗುತ್ತದೆ.ಕರ್ನಾಟಕದಲ್ಲಿ ಯಾವ ಕಾರಣಕ್ಕೂ ರಾಜ್ಯಪಾಲರು ಇಂತಹದೊಂದು ಸ್ಥಿತಿ ನಿರ್ಮಾಣಕ್ಕೆ ಅವಕಾಶ ಮಾಡಿಕೊಡಬಾರದು. ಸಚಿವ ಸಂಪುಟ ಸಿದ್ಧಪಡಿಸಿದ ಭಾಷಣವನ್ನು ಓದುವುದು ರಾಜ್ಯಪಾಲರ ಕರ್ತವ್ಯವಾಗಿದೆ. ಯಾಕೆಂದರೆ ರಾಜ್ಯಪಾಲರು ರಾಜ್ಯ ಸರಕಾರವನ್ನು ಪ್ರತಿನಿಧಿಸುತ್ತಾರೆ. ಕೇಂದ್ರದ ಮೂಗಿನ ನೇರಕ್ಕೆ ತಾವೇ ಸಿದ್ಧಪಡಿಸಿದ ಭಾಷಣ ಓದಲು ರಾಜ್ಯಪಾಲರಿಗೆ ಅವಕಾಶವಿಲ್ಲ. ಭಾಷಣದಲ್ಲಿ ಒಕ್ಕೂಟ ವ್ಯವಸ್ಥೆಗೆ ಅಥವಾ ದೇಶದ ಸಾರ್ವಭೌಮತೆಗೆ ಧಕ್ಕೆ ತರುವ ಅಂಶಗಳಿದ್ದರೆ ಅದನ್ನು ಓದಲು ನಿರಾಕರಿಸಬಹುದು. ಹಾಗೆಯೇ ರಾಷ್ಟ್ರಪತಿಯ ಗಮನಕ್ಕೆ ತರಬಹುದು. ಆದರೆ, ಕೇಂದ್ರ ಸರಕಾರ ಜಾರಿಗೆ ತರಲು ಉದ್ದೇಶಿಸಿರುವ ಕಾಯ್ದೆಯಲ್ಲಿರುವ ಅಂಶಗಳನ್ನು ಆಕ್ಷೇಪಿಸುತ್ತದೆ ಎನ್ನುವ ಕಾರಣಕ್ಕೆ ಭಾಷಣವನ್ನು ಓದದೇ ಇರುವುದು ತಪ್ಪಾಗುತ್ತದೆ. ಭಾಷಣದಲ್ಲಿರುವ ಕೆಲವು ಅಂಶಗಳ ಬಗ್ಗೆ ಸಂಶಯಗಳಿದ್ದರೆ ಅದನ್ನು ಮಾತುಕತೆಯ ಮೂಲಕ ನಿವಾರಿಸಿಕೊಳ್ಳಬಹುದು.



# ರಾಮಾಯಣ

ಶ್ರೀರಾಮನ ದುಃಖಾತಿರೇಕ

• ಹಿಂದಿನ ಸಂಚಿಕೆಯಿಂದ

## 120 ನೆಯ ಅಧ್ಯಾಯ

ಫಲಾದಿಗಳನ್ನು ಸೇವಿಸುತ್ತ ನಿನ್ನೊಡನೆ ಯುದ್ಧವನ್ನು ಮಾಡದಿದ್ದ ನನ್ನನ್ನು ಕಪಟಾಚಾರವುಳ್ಳ ನೀನು ವ್ಯರ್ಥವಾಗಿ ಕೊಂದೆ. ಪಾಪಾತ್ಮನಾದ ನೀನು ಧರ್ಮಮಾರ್ಗ ಪ್ರವರ್ತಕವಾದ ಇಕ್ಷ್ವಾಕುವಂಶದಲ್ಲಿ ಜನಿಸಿ ಧರ್ಮಿಷ್ಟನೆನಿಸಿಕೊಂಡು ಪಾಪಬುದ್ಧಿಯಿಂದ ಸಂಚರಿಸುತ್ತಿದ್ದೀಯೆ. ಶ್ರೀರಾಮ, ವನದಲ್ಲಿ ಕಂದಮೂಲಫಲಾಹಾರಗಳನ್ನು ಮಾಡಿಕೊಂಡು ಸಂಚರಿಸುವುದು ಕಪಿಗಳಾದ ನಮ್ಮ ಸ್ವಭಾವ. ನೀನು ಪುರುಷೋತ್ತಮನಾಗಿ ರಾಜಶ್ರೇಷ್ಠರಾದ ರಾಜರ್ಷಿಗಳ ಕುಲದಲ್ಲಿ.

ಹುಟ್ಟಿದವನು. ಅರಸರು ಭೂಮಿ ಚಿನ್ನ ಬೆಳ್ಳಿ ಮೊದಲಾದ ವಸ್ತುಗಳಲ್ಲಿ ಯಾವುದಾದರೊಂದನ್ನು ಬಯಸಿ ಒಬ್ಬರನ್ನು ದಂಡಿಸುವರು. ನನ್ನಲ್ಲಿ ಯಾವ ವಸ್ತುವಿದೆಯೆಂದು ನನ್ನನ್ನು ಕೊಂದೆ ನೀತಿ ವಿನಯ ನಿಗ್ರಹಾನುಗ್ರಹಗಳಿಂದ ಒಂದರಿಂದೊಂದು ಕೆಡದ ಹಾಗೆ ನಡೆಯಿಸುವುದು ರಾಜಧರ್ಮ, ಅರಸರು ಕಾಮುಕರಾಗಿ ವಿನಯಾದಿಗುಣಗಳನ್ನ ತಿಕ್ರಮಿಸಿ ತಮ್ಮ ಮನಸ್ಸು ಬಂದಂತೆ ನಡೆಯುವರೆ ಶ್ರೀರಾಮ, ನೀನು ಎಲ್ಲವನ್ನೂ ಬಲ್ಲವನಾದರೂ ಮರ್ಯಾದೆಯನ್ನು ತಪ್ಪಿ ನನ ಮೇಲೆ ಕೋಪವನ್ನು ತೋರಿಸಿದೆ. ನೀನು ರಾಜಧರ್ಮವನ್ನು ಬಿಟ್ಟು ಬೇಡರಂತೆ ಕೇವಲ ಧನುರ್ವಿದ್ಯಾಪರಾಯಣನಾಗಿದ್ದೀಯೆ.

ನೀನು ಧರ್ಮಮಾರ್ಗವನ್ನರಿತವನಲ್ಲ. ನೀನು ಇಂದ್ರಿಯ ವಶನಾಗಿ ದುರ್ಬುದ್ಧಿಯಿಂದ ನಿರಾಪರಾಧಿಯಾದ ನನ್ನನ್ನು ಕೊಂದು ದೊಡ್ಡ ಅಪರಾಧವನ್ನು ಮಾಡಿದೆ. ನೀನು ಸತ್ಪುರುಷರ ಸಭೆಗೆ ಹೋದರೆ ಅವರಿಗೆ ಏನೆಂದು ಉತ್ತರವನ್ನು ಕೊಡುತ್ತೀಯೆ ಅಪರಾಧ ಮಾಡದವನನ್ನು ಕೊಲ್ಲುವವನು, ಬ್ರಾಹ್ಮಣನನ್ನು ಕೊಲ್ಲುವವನು, ಕಳ್ಳನನ್ನು ದಂಡಿಸದೆ ಇರುವವನು, ದೈವವಿಲ್ಲವೆನ್ನುವವನು, ಧರ್ಮವನ್ನು ಅಲ್ಲಗಳೆದು ನುಡಿಯುವವನು, ಚಾಡಿಹೇಳು ವವನು, ನಿಂದೆಯನ್ನು ಹೊತ್ತಿರುವವನು, ಸ್ನೇಹಿತನನ್ನು ಕೊಲ್ಲುವವನು, ಗುರುಪತ್ನಿಗಾಮಿ ಇವರೇ ಮೊದಲಾದವರು ನರಕಲೋಕವನ್ನೈದುವರು. ಶ್ರೀರಾಮ ನೀನು ನನ್ನನ್ನು ಕೊಂದದ್ದರಿಂದ ನಿನಗೆ ಬಂದ ಪ್ರಯೋಜನವೇನು ಸತ್ಪುರುಷರು ಕಪಿಗಳ ಚರ್ಮ ಆಸ್ಥಿ ರೋಮಗಳನ್ನು ಮುಟ್ಟರು. ಧರ್ಮಿಷ್ಠರಿಗೆ ನನ್ನ ಮಾಂಸವು ಭಕ್ಷಿಸುವುದಕ್ಕೆ ಯೋಗ್ಯವಲ್ಲ. ಉಗುರುಗಳುಳ್ಳ ಐದುಬಗೆಯ ಮೃಗಗಳೇ ಬ್ರಾಹ್ಮಣ ಕ್ಷತ್ರಿಯರಿಗೆ ಭಕ್ಷಣಯೋಗ್ಯವಾಗಿವೆ. ನಾನು ಆ ಮೃಗಜಾತಿಗಳೊಳಗೆ ಒಂದಕ್ಕೂ ಸಂಬಂಧಿಸಿದವನಲ್ಲ. ಹಾಗಾದರೂ ನನ್ನನ್ನು ವ್ಯರ್ಥವಾಗಿ ಕೊಂದೆ. ವಿದುಷಿಯಾದ ನನ್ನ ಪತ್ನಿಯಾದ ತಾರಾದೇವಿಯು ನನ್ನನ್ನು ಹೋಗಬೇಡವೆಂದು ತಡೆದಳು. ಹಾಗಾದರೂ ಮೃತ್ಯುವಶನಾಗಿ ಅಜ್ಞಾನದಿಂದ ಇಲ್ಲಿಗೆ ಬಂದೆನು! ಪಂಚತ್ವವನ್ನೈದಿದ ಪರುಷನಿಂದ ಪತಿವ್ರತೆಯೂ ಶೀಲವಂತೆಯೂ ಆದ ಸ್ತ್ರೀಯು ವಿಧವೆಯಾಗುವಂತೆ, ನಿನ್ನಿಂದ ಕೊಲ್ಲಲ್ಪಟ್ಟ ನನ್ನಿಂದ ನನ್ನ ಭೂಮಿಯು ಒಡೆಯನಿಲ್ಲದ್ದಾಯಿತು! ಅಕಟಕಟಾ ಅಂತರಂಗದಲ್ಲಿ ಪರರಿಗೆ ದ್ರೋಹವನ್ನೆಣಿಸುವವನಾಗಿಯೂ ಕ್ಷುದ್ರನಾಗಿಯೂ ಅನೃತವನ್ನು ನುಡಿಯುವವನಾಗಿಯೂ ಪಾಪಿಷ್ಠನೂ ಆದ ನೀನು ಮಹಾತ್ಮನಾದ ದಶರಥರಾಯನ ಉದರದಲ್ಲಿ ಹೇಗೆ ಜನಿಸಿದೆ ಸಚ್ಚರಿತ್ರವೆಂಬ ಹಗ್ಗವನ್ನು ಕಿತ್ತೆಸೆದ, ಸನ್ಮಾರ್ಗವನ್ನು ಮೀರಿದ,

**ಮುಂದುವರಿಯುವುದು...**

**1921 ರಲ್ಲಿ ಪ್ರಿನ್ಸ್ ಆಫ್ ವೇಲ್ಸ್ ಭಾರತಕ್ಕೆ ಬಂದಿದ್ದಾಗ ಅವರ ಭೇಟಿಯನ್ನು ವಿರೋಧಿಸಿ ಕಲ್ಕತ್ತೆಯಲ್ಲಿ ಭಾರಿ ಮೆರವಣಿಗೆಯನ್ನು ಏರ್ಪಡಿಸಲಾಗಿತ್ತು. ಸುಭಾಷರು ಅದರಲ್ಲಿ ಪ್ರಮುಖ ಪಾತ್ರವಹಿಸಿದ್ದರು. ಬ್ರಿಟಿಷ್ ಸರ್ಕಾರ ಅವರನ್ನು ಬಂಧಿಸಿ ಆರು ವರ್ಷದವರೆಗೆ ಸೆರೆಮನೆ ಶಿಕ್ಷೆ ವಿಧಿಸಿ ಬರ್ಮಾದಲ್ಲಿನ ಮಂಡಾಲ ಜೈಲಿಗೆ ಕಳಿಸಿದ್ದರು. 1927ರಲ್ಲಿ ಸುಭಾಷರ ಬಿಡುಗಡೆಯಾಯಿತು. 1938ರಲ್ಲಿ ಸುಭಾಷ್ ಚಂದ್ರ ಬೋಸರು ಭಾರತೀಯ ಕಾಂಗ್ರೆಸ್ಸಿನ ಅಧ್ಯಕ್ಷರಾದರು. ಎರಡನೇ ಬಾರಿಯೂ ಅವರು ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾದರು. 1939 ಏಪ್ರಿಲ್‌ನಲ್ಲಿ ಪಕ್ಷದ ಸಿದ್ಧಾಂತಗಳ ಬಗ್ಗೆ ಗಾಂಧೀಜಿಯವರೊಡನೆ ಭಿನ್ನಾಭಿಪ್ರಾಯಗಳು ಉಂಟಾದಾಗ ಬೋಸರು ಪಕ್ಷದ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದರು.**

# ನೇತಾಜಿ ಸುಭಾಷ್ ಚಂದ್ರ ಬೋಸ್‌ರ 129ನೇ ವರ್ಷದ ಜನ್ಮಜಯಂತಿ



ಕಲಾ ಸಾಹಿತ್ಯ

**ಕೃಷ್ಣಪ್ಪ**
**ಲೇಖಕರು ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು**

ನೇತಾಜಿ ಸುಭಾಷ್ ಚಂದ್ರ ಬೋಸ್ ರವರು 1897 ಜನವರಿ 23 ರಂದು ಒರಿಸ್ಸಾದ ಕಟಕ್ನಲ್ಲಿ ಜನಿಸಿದರು. ತಂದೆ ಜಾನಕಿನಾಥ ಬೋಸ್, ತಾಯಿ ಪ್ರಭಾವತಿ. ಬೋಸರವರ ಪ್ರಾಥಮಿಕ ವಿದ್ಯಾಭ್ಯಾಸ ಕಟಕ್ನಲ್ಲಿಯೇ ನಡೆಯಿತು. ಆ ಬಳಿಕ ಕಲ್ಕತ್ತೆಗೆ ತೆರಳಿ ಪ್ರೆಸಿಡೆನ್ಸಿ ಕಾಲೇಜು ಸೇರಿದರು.ಆ ಕಾಲೇಜಿನಿಂದ ಎಂ.ಎ., ಪದವಿ ಪಡೆದ ಮೇಲೆ ಇಂಡಿಯನ್ ಸಿವಿಲ್ ಸರ್ವಿಸ್ ಪರೀಕ್ಷೆಗೆ ಪ್ರವೇಶ ಪಡೆಯಲು ಇಂಗ್ಲೆಂಡಿಗೆ ಹೊರಟರು.

ಪ್ರತಿಭಾವಂತರಾಗಿದ್ದ ಬೋಸ್ ಅವರು ಐಸಿಎಸ್ ಪರೀಕ್ಷೆಯಲ್ಲಿ ತೇರ್ಗಡೆಯಾಗಿ ಆಯ್ಕೆಯಾದರು. ಆದರೆ ಸರ್ಕಾರಕ್ಕೆ ಸೇವೆ ಸಲ್ಲಿಸಬಾರದೆಂದು ನಿರ್ಧರಿಸಿದ ಅವರು ಐಸಿಎಸ್ ಹುದ್ದೆಯನ್ನು ತ್ಯಜಿಸಿ ಭಾರತ ಸ್ವಾತಂತ್ರ್ಯ ಹೋರಾಟದಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಂಡರು.

ನನಗೆ ರಕ್ತ ಕೊಡಿ ನಾನು ನಿಮಗೆ ಸ್ವಾತಂತ್ರ್ಯ ತಂದು ಕೊಡುತ್ತೇನೆ ಎಂದು ಘೋಷಿಸಿದರು. ಇವರು ಮಹಾನ್ ದೇಶಭಕ್ತರಾಗಿ, ಸ್ವಾತಂತ್ರ್ಯ ಹೋರಾಟಗಾರರಾಗಿದ್ದರು ಸ್ವಾಮಿ ವಿವೇಕಾನಂದರು ಅರವಿಂದ್ ಘೋಷ್ ರವರಿಂದ ಪ್ರೇರಣೆ ಪಡೆದಿದ್ದರು. ರಾಜಕೀಯದಲ್ಲಿ ದೇಶಬಂಧು ಚಿತ್ತರಂಜನದಾಸರು ಅವರಿಗೆ ಮಾರ್ಗದರ್ಶಕರಾಗಿದ್ದರು. ವಿಶ್ವಕವಿ ರವೀಂದ್ರನಾಥ ಟಾಗೋರ್ ಅವರು ಸುಭಾಷ್ ಚಂದ್ರ ಬೋಸ್ ಅವರ ನಿಲುವನ್ನು ಬೆಂಬಲಿಸಿದರಲ್ಲದೆ, ಅವರನ್ನು ಪ್ರಶಂಸಿಸಿ ಅವರ ನಾಯಕತ್ವದಲ್ಲಿ ತಾವು ಪೂರ್ಣ ಭರವಸೆ ಹೊಂದಿರುವುದಾಗಿ ತಿಳಿಸಿದರು. 1939 ರಲ್ಲಿ ಬೋಸರು ಕಾಂಗ್ರೆಸ್ ಪಕ್ಷದಲ್ಲಿಯೇ ಫಾರ್ವರ್ಡ್ ಬ್ಲಾಕ್ ಕಟ್ಟಿದರು. ಭಾರತದಲ್ಲಿ ಬ್ರಿಟಿಷರ ಆಳ್ವಿಕೆ ವಿರುದ್ಧ ಪೂರ್ಣ ಸ್ವರೂಪದ ಆಂದೋಲನವನ್ನು ಅವರು ಪ್ರಾರಂಭಿಸಿದರು. 1940 ರಲ್ಲಿ ಸರ್ಕಾರ ಅವರನ್ನು ಬಂಧಿಸಿ ಸೆರೆಮನೆಗೆ ಕಳುಹಿಸಿತು. ಅವರಿಗೆ ನೀಡಿದ ಶಿಕ್ಷೆ ನ್ಯಾಯಬದ್ಧವಾಗಿ ಇರಲಿಲ್ಲ.ಸೆರೆಮನೆಯಲ್ಲಿ ಅವರ ಆರೋಗ್ಯ ಹದಗೆಟ್ಟಿತು.ಸರ್ಕಾರ ಅವರನ್ನು ಬಿಡುಗಡೆಗೊಳಿಸಿದರೂ ಗೃಹಬಂಧನದಲ್ಲಿರಿಸಿತು.

ಇದೇ ವೇಳೆಯಲ್ಲಿ ಬೋಸರು ಪಠಾಣರ ವೇಷತೊಟ್ಟು ಕಾಬೂಲಿನ ಮೂಲಕವಾಗಿ ರಷ್ಯಾಕ್ಕೆ ಹೋದರು. ಅಲ್ಲಿಂದ ಅವರು ಜರ್ಮನಿ ದೇಶದ ಬರ್ಲಿನ್‌ಗೆ ಹೋಗಿ ಅಲ್ಲಿ ಹಿಟ್ಲರ್ ಅವರನ್ನು ಭೇಟಿ ಮಾಡಿದರು.ಬ್ರಿಟಿಷರಿಂದ ಭಾರತವನ್ನು ಮುಕ್ತಗೊಳಿಸಲು ನೆರವು ನೀಡುವುದಾಗಿ ಹಿಟ್ಲರ್ ಬೋಸರಿಗೆ ಭರವಸೆ ನೀಡಿದರು. ಬೋಸರು ಜರ್ಮನಿಯಲ್ಲಿ ಆಜಾದ್ ಹಿಂದ್ ಸೇನೆಯನ್ನು ಕಟ್ಟಿದರು.ಭಾರತೀಯ ಯುದ್ಧ ಕೈದಿಗಳನ್ನು ಸೇನಾಪಡೆಗೆ ಸೇರಿಸಿಕೊಳ್ಳಲಾಯಿತು.

ಸುಭಾಷ್ ಚಂದ್ರ ಬೋಸರು ಜಪಾನ್‌ಗೆ ತೆರಳಿ ಅಲ್ಲಿನ ಪ್ರಧಾನ ಮಂತ್ರಿಗಳಾಗಿದ್ದ ಟೋಜೋ ಅವರನ್ನು ಭೇಟಿ ಮಾಡಿ ಭಾರತದ ಬಿಡುಗಡೆಗೆ ನೆರವು ಕೇಳಿದರು. ಟೊಜೋ ಅವರು ಬೋಸರ ವಿಶಿಷ್ಟ ವ್ಯಕ್ತಿತ್ವ,ಧೈರ್ಯ, ದೇಶಪ್ರೇಮವನ್ನು ಕಂಡು ಮೆಚ್ಚಿ ಬೋಸರಿಗೆ ಎಲ್ಲಾ ರೀತಿಯ ನೆರವು ನೀಡುವುದಾಗಿ ಆಶ್ವಾಸನೆ ನೀಡಿದರು. 1943 ಅಕ್ಟೋಬರ್‌ನಲ್ಲಿ ಬೋಸರು ಸಿಂಗಪುರದಲ್ಲಿ ಆಜಾದ್ ಹಿಂದ್ ಸೇನೆಯ ನಾಯಕತ್ವವನ್ನು ವಹಿಸಿಕೊಂಡರು. ಅಲ್ಲಿಯೇ ಸ್ವಾತಂತ್ರ್ಯ ಭಾರತದ ತಾತ್ಕಾಲಿಕ ಸರ್ಕಾರವನ್ನು ಸ್ಥಾಪಿಸಿದರು. ಸುಭಾಷರು ತಮ್ಮ ಸೇನಾಪಡೆಯೊಂದಿಗೆ ಬರ್ಮಾ ಮುಖಾಂತರವಾಗಿ ಭಾರತದತ್ತ ಹೊರಟರು. ಇಂಡೋ ಜಪಾನಿ ಸೈನಿಕರ ನೆರವಿನಿಂದ ಅಂಡಮಾನ್-ನಿಕೋಬರ್ ದ್ವೀಪಗಳನ್ನು ತಮ್ಮ ನಿಯಂತ್ರಣಕ್ಕೆ ತೆಗೆದುಕೊಂಡರು. 1943ರಲ್ಲಿ ಅಸಾಧಾರಣ ಶೌರ್ಯ ಪರಾಕ್ರಮಗಳ ಪ್ರದರ್ಶನದಿಂದ ಅಜಾದ್ ಹಿಂದ್ ಸೇನಾಪಡೆ ಬರ್ಮಾವನ್ನು ವಶಪಡಿಸಿಕೊಂಡಿತು. 1945 ರಲ್ಲಿ ಅಮೇರಿಕ ದೇಶ ಜಪಾನಿನ ಹಿರೋಷಿಮಾ ಮತ್ತು ನಾಗಸಾಕಿ ಪಟ್ಟಣಗಳ ಮೇಲೆ ಅಣುಬಾಂಬ್ ದಾಳಿ ನಡೆಸಿತು. ಲಕ್ಷಾಂತರ ಜನರು ಸತ್ತರು. 1945 ಆಗಸ್ಟ್ 14 ರಂದು ಜಪಾನ್ ದೇಶ ಯಾವ ನಿಬಂಧನೆಗಳಿಲ್ಲದೇ ಬ್ರಿಟನ್ ನೇತೃತ್ವದ ಒಕ್ಕೂಟಕ್ಕೆ ಶರಣಾಯಿತು. ವಿಧಿಯಿಲ್ಲದೇ ಬೋಸರು ಯುದ್ಧವನ್ನು ನಿಲ್ಲಿಸಬೇಕಾಯಿತು.




ಬೋಸರು 1945 ಆಗಸ್ಟ್ 17 ರಂದು ಸಿಂಗಪುರದಿಂದ ಟೋಕಿಯೋಗೆ ಹೊರಟರು. ಅವರು ಪ್ರಯಾಣಿಸಿದ ವಿಮಾನ ಬಾಂಬರ್ ವಿಮಾನ ವಾಗಿದ್ದು, ಕರ್ನಲ್ ರಹಮಾನ್ ಅವರೊಂದಿಗೆ ಹೊರಟರು. ಬೋಸರು ಪ್ರಯಾಣಿಸುತ್ತಿದ್ದ ವಿಮಾನ ಅಪಘಾತಕ್ಕೀಡಾಗಿ ಬೋಸರು ಮರಣಿಸಿದರೆಂಬ ಧಾರಣ ವಾರ್ತೆಯನ್ನು ಟೋಕಿಯೋ ಆಕಾಶವಾಣಿ ಪ್ರಸಾರ ಮಾಡಿತು. ಇಂತಹ ದೇಶಭಕ್ತ ಸ್ವಾತಂತ್ರ್ಯ ಹೋರಾಟಗಾರ,ದೇಶದ ಸ್ವಾತಂತ್ರ್ಯಕ್ಕಾಗಿ ದಿಟ್ಟತನದಿಂದ ಹೋರಾಡಿದ,ರಾಷ್ಟ್ರಭಕ್ತ ಹಾಗೂ ಯುವಕರಿಗೆ ಚೈತನ್ಯ ಸ್ಫೂರ್ತಿಯಾಗಿದ್ದ ಸುಭಾಷ್ ಚಂದ್ರ ಬೋಸರು ಹುತಾತ್ಮರಾಗಿ ಅಮರರಾದರು. ಇವರ ಮರಣ ಇನ್ನೂ ನಿಗೂಢವಾಗಿದೆ. ರಾಷ್ಟ್ರದ ಕೆಲವು ನಾಗರೀಕರು ಅವರ ಸಾವಿನ ನಿಖರ ಸ್ಪಷ್ಟತೆಯನ್ನು ತಿಳಿಯಲು ಬಯಸುತ್ತಿದ್ದಾರೆ. 1992 ರಲ್ಲಿ ಭಾರತ ಸರ್ಕಾರ ಸುಭಾಷ್ಚಂದ್ರಬೋಸ್ ರವರಿಗೆ ಮರಣೋತ್ತರವಾಗಿ ಭಾರತ ರತ್ನ ಪ್ರಶಸ್ತಿ ನೀಡಿ ಗೌರವಿಸಿತು. ಆದರೆ ಅವರ ಕುಟುಂಬದವರು ಪ್ರಶಸ್ತಿಯನ್ನು ನಿರಾಕರಿಸಿದರು. ಇಂತಹ ಮಹಾನ್ ರಾಷ್ಟ್ರದ ಸೂರ್ಯ, ಸ್ವಾತಂತ್ರ್ಯ ಹೋರಾಟಗಾರ,ಯುವ ಚೈತನ್ಯ ಪುರುಷ,ಯುವ ಸ್ಫೂರ್ತಿದಾಯಕ ಸುಭಾಷ್ ಚಂದ್ರ ಬೋಸ್‌ರವರನ್ನು ಸ್ಮರಿಸಿ ಹಾಗೂ ನೆನೆದು ಇಂದು ಅವರ 129 ನೇ ವರ್ಷದ ಜನ್ಮ ಜಯಂತಿಯನ್ನು ನಾಡಿನಾದ್ಯಂತ ಆಚರಿಸುವುದು ಭಾರತೀಯರಾದ ನಮ್ಮೆಲ್ಲರ ಆದ್ಯ ಕರ್ತವ್ಯ, ಹೊಣೆಗಾರಿಕೆ, ಜವಾಬ್ದಾರಿ. ಇಲ್ಲಿಗೆ ಅವರು ಕಣ್ಮರೆಯಾಗಿ 80 ವರ್ಷವಾಯಿತು.ಇಂತಹ ದೇಶಭಕ್ತ,ಯುವಚೈತನ್ಯ ಹಾಗೂ ಸ್ಫೂರ್ತಿದಾಯಕ ಪುರುಷರಂತವರಿಗೆ ಭಾರತಾಂಬೆ ಜನ್ಮ ನೀಡಲಿ ಎಂದು ಆಶಿಸೋಣ.

**ಸತ್ಯಂ ಶಿವಂ ಸುಂದರಂ**

# ಸುಲಭದ ನೀರ್ ದೋಸೆ ನೀರ್ ಚಟ್ನಿ



**ನೀರ್ ದೋಸೆ ನೀರ್ ಚಟ್ನಿ ಮಾಡಲು ಬೇಕಾಗುವ ಪದಾರ್ಥಗಳು**

- ಅಕ್ಕಿ
- ಉಪ್ಪು
- ತೆಂಗಿನಕಾಯಿ
- ಹುರಿಗಡಲೆ
- ಹುಣಸೆ ಹುಳಿ
- ಹಸಿ ಮೆಣಸು
- ಒಣ ಮೆಣಸು
- ಕರಿಬೇವು
- ಕೊತ್ತಂಬರಿ ಸೊಪ್ಪು
- ಶುಂಠಿ
- ಇಂಗು, ಎಣ್ಣೆ

ಬೆಳಗ್ಗೆ ತಿಂಡಿಗೆ ನೀವು ನೀರ್ ದೋಸೆ ಸವಿಯಲು ಬಹಳ ಇಷ್ಟಪಡುವ ಮಂದಿ ಆಗಿರಬಹುದು. ಉದ್ದಿನ ದೋಸೆಗಿಂತ ರುಚಿ ರುಚಿಯ ನೀರ್ ದೋಸೆ ಬಹಳ ಇಷ್ಟವಾಗುತ್ತೆ. ಹಾಗೆ ಇದನ್ನು ಬಹಳ ಸುಲಭವಾಗಿ ಮಾಡಿ ಮುಗಿಸಬಹುದು. ಹಾಗೆ ಮಕ್ಕಳಿಗೂ ಸಹ ನೀರ್ ದೋಸೆ ಹೆಚ್ಚು ಇಷ್ಟವಾಗುತ್ತೆ. ಕರಾವಳಿ, ಮಲೆನಾಡು ಭಾಗದಲ್ಲಿ ಹೆಚ್ಚಾಗಿ ಈ ರೀತಿ ನೀರ್ ದೋಸೆ ಬಹಳ ಫೇಮಸ್ ಆಗಿರುವುದು ನೋಡಬಹುದು. ನೀರ್ ದೋಸೆ ಹಲವರ ಫೇವರಿಟ್ ತಿಂಡಿಯೂ ಹೌದು.

ಈಗಂತು ಹೋಟೆಲ್‌ಗಳಲ್ಲಿ, ನಾನ್ ವೆಜ್ ಜೊತೆಗೆ, ಕ್ಯಾಂಟೀನ್‌ನಲ್ಲಿಯೂ ವಿಶೇಷ ರೀತಿಯ ನೀರ್ ದೋಸೆಗಳು ದೊರೆಯುತ್ತವೆ. ಹಾಗೆ ನೀರ್ ದೋಸೆಯೊಂದಿಗೆ ಕಾಯಿ ಚಟ್ನಿ, ಅದ್ರಲ್ಲೂ ನೀರ್ ಚಟ್ನಿ ಮಾಡಿ ಸವಿಯೋದರ ರುಚಿ ಅದ್ಭುತ ಆಗಿರಲಿದೆ. ಹೀಗಾಗಿ ನಾವಿಂದು ಸುಲಭವಾಗಿ ಈ ಎರಡೂ ರೆಸಿಪಿ ಮನೆಯಲ್ಲಿ ಮಾಡಿ ಸವಿಯುವ ಕುರಿತಾಗಿ ತಿಳಿದುಕೊಳ್ಳೋಣ. ನೀರ್ ದೋಸೆಯೊಂದಿಗೆ ಈ ನೀರ್ ಚಟ್ನಿ ಇದ್ದರೆ ಅರ್ಧ ಡಜನ್ ದೋಸೆ ತಿನ್ನಬಹುದು. ಹಾಗೆ ಮಾಡುವ ವಿಧಾನದ ಕುರಿತಾಗಿ ನಾವಿಂದು ತಿಳಿದುಕೊಳ್ಳೋಣ. ನೀರ್ ದೋಸೆ ನೀರ್ ಚಟ್ನಿ ಮಾಡಲು ಯಾವೆಲ್ಲಾ ವಸ್ತುಗಳು ಬೇಕು ಮಾಡುವ ವಿಧಾನವೇನು ಎಷ್ಟು ಸಮಯ ಹಿಡಿಯಲಿದೆ ಎಂಬ ಕುರಿತಾದ ಸಂಪೂರ್ಣ ಮಾಹಿತಿ ಇಲ್ಲಿದೆ.

**ನೀರ್ ದೋಸೆ ನೀರ್ ಚಟ್ನಿ ಮಾಡುವ ಸುಲಭದ ವಿಧಾನವೇನು :** ಹಿಂದಿನ ದಿನ ರಾತ್ರಿ 2 ಕಪ್ ರೇಷನ್ ಅಕ್ಕಿಯನ್ನು ಚೆನ್ನಾಗಿ ತೊಳೆದು ಅನಂತರ ನೆನೆಸಿಡಬೇಕು. 6 ಗಂಟೆ ಬಿಟ್ಟು ಅದನ್ನು ಮಿಕ್ಸಿ ಜಾರ್‌ಗೆ ಹಾಕಿಕೊಂಡು ಇದಕ್ಕೆ 1 ಕಪ್ ತೆಂಗಿನಕಾಯಿ ತುರಿ ಸಹ ಹಾಕಿಕೊಂಡು ರುಬ್ಬಿಕೊಳ್ಳಬೇಕು. ತೆಂಗಿನಕಾಯಿ ತುರಿ ಹಾಕಿದ್ರೆ ದೋಸೆ ಮೃದುವಾಗಿ ರುಚಿಯಾಗಿ ಬರಲಿದೆ. ಈ ರುಬ್ಬಿದ ಹಿಟ್ಟನ್ನು ಒಂದು ಪಾತ್ರೆಗೆ ಹಾಕಿಟ್ಟುಕೊಳ್ಳಿ. ಈ ಹಿಟ್ಟು ತೆಳುವಾಗಿ ಬರಲು ನೀರು ಹೆಚ್ಚು ಹಾಕಿಕೊಳ್ಳಿ. ಇದಕ್ಕೆ ರುಚಿಗೆ ತಕ್ಕಷ್ಟು ಉಪ್ಪು ಸಹ ಹಾಕಿಕೊಂಡು ಮಿಶ್ರಣ ಮಾಡಿ ಇಟ್ಟುಕೊಳ್ಳಿ. ಈಗ ಚಟ್ನಿ ಮಾಡಲು ಮಿಕ್ಸಿ ಜಾರ್‌ಗೆ ತೆಂಗಿನಕಾಯಿ ತುರಿ, ಅರ್ಧ ಕಪ್ ಹುರಿಗಡಲೆ, ಬೆಳ್ಳುಳ್ಳಿ, ಶುಂಠಿ, ಹುಣಸೆ ಹುಳಿ, ಪುದಿನ ಸೊಪ್ಪು, ಕೊತ್ತಂಬರಿ ಸೊಪ್ಪು, ಹಸಿ ಮೆಣಸು, ಉಪ್ಪು ಹಾಗೆ ನೀರು ಸಹ ಹಾಕಿಕೊಂಡು ನುಣ್ಣಗೆ ರುಬ್ಬಿಕೊಳ್ಳಬೇಕು. ಇದು ತೆಳುವಾಗಿ ಇರಬೇಕು. ಚಟ್ನಿಯನ್ನು ಪಾತ್ರೆಗೆ ಹಾಕಿ ನೀವು ನೀರು ಸೇರಿಸಿ ತೆಳು ಮಾಡಿಕೊಳ್ಳಿ. ಅನಂತರ ಈ ಚಟ್ನಿಗೆ ಒಗ್ಗರಣೆ ಹಾಕಿ.

ಒಲೆ ಮೇಲೆ ಬಾಣಲೆ ಇಟ್ಟು ಅದಕ್ಕೆ ಎಣ್ಣೆ ಹಾಕಿ ಬಳಿಕ ಸಾಸಿವೆ, ಒಣ ಮೆಣಸು, ಕರಿಬೇವು, ಉದ್ದಿನ ಬೇಳೆ, ಇಂಗು ಹಾಕಿ ಒಗ್ಗರಣೆ ಮಾಡಿ ಚಟ್ನಿಗೆ ಸೇರಿಸಿದರೆ ನೀರು ದೋಸೆ ಸಿದ್ಧವಾಗುತ್ತೆ. ಈಗ ದೋಸೆ ಹಿಟ್ಟನ್ನು 15 ನಿಮಿಷ ಹಾಗೆಯೇ ಬಿಡಿ. ಇದು ಗಟ್ಟಿಯಾಗಿದ್ದರೆ ನೀರು ಹಾಕಿಕೊಳ್ಳಿ. ನಂತರ ಒಲೆ ಮೇಲೆ ಕಾವಲಿ ಇಟ್ಟು ಕಾಯಲು ಬಿಡಿ. ಅನಂತರ ಎಣ್ಣೆ ಹಚ್ಚಿಕೊಂಡು, ಅಥವಾ ಎಣ್ಣೆ ಹಾಕದೆಯೂ ಹಿಟ್ಟನ್ನು ಹಾಕಿಕೊಂಡು ದೋಸೆ ಮಾಡಿಕೊಳ್ಳಿ. ನೀರ್ ದೋಸೆಯನ್ನು ಒಂದು ಕಡೆ ಮಾತ್ರ ಬೇಯಿಸಿಕೊಳ್ಳಿ. ಇಷ್ಟಾದರೆ ನಿಮ್ಮ ಮುಂದೆ ರುಚಿ ರುಚಿಯಾದ ನೀರ್ ದೋಸೆ ನೀರ್ ಚಟ್ನಿ ಸಿದ್ದವಾಗುತ್ತೆ.

# ದಿನಕ್ಕೆ ಎಷ್ಟು ಮೊಟ್ಟೆ ತಿನ್ನಬೇಕು?

ಮೊಟ್ಟೆ ಸೇವನೆ ಆರೋಗ್ಯಕ್ಕೆ ಒಳ್ಳೆಯದು. ಆದರೆ ದಿನಕ್ಕೆ ಎಷ್ಟು ಮೊಟ್ಟೆ ತಿನ್ನೋದು ಒಳ್ಳೆಯದು ಅನ್ನೋದು ಬಹುತೇಕರಿಗೆ ತಿಳಿದಿಲ್ಲ. ಈ ಬಗ್ಗೆ ಏಮ್ಸ್‌ನ ಡಾ. ಸೌರಭ್ ಸೇಥಿ ಕೆಲವೊಂದು ಮಾಹಿತಿಯನ್ನು ತಿಳಿಸಿದ್ದಾರೆ. ಮೊಟ್ಟೆಯು ಅತ್ಯಂತ ಪೌಷ್ಟಿಕ ಆಹಾರವಾಗಿದೆ. ಅನೇಕ ಜನರಿಗೆ ದಿನಕ್ಕೆ ಎಷ್ಟು ಮೊಟ್ಟೆಗಳನ್ನು ಸೇವಿಸಬೇಕು ಎನ್ನುವುದು ಗೊತ್ತಿರುವುದಿಲ್ಲ. ಆದರೆ ಅತಿಯಾದ ಮೊಟ್ಟೆಯ ಸೇವನೆಯು ಆರೋಗ್ಯಕ್ಕೆ ಹಾನಿಕಾರಕವಾಗಿದೆ.

ಆದ್ದರಿಂದ ಸರಿಯಾದ ಪ್ರಮಾಣವನ್ನು ತಿಳಿದುಕೊಳ್ಳುವುದು ಬಹಳ ಮುಖ್ಯ. ಹಾರ್ವರ್ಡ್ ಮತ್ತು ಸ್ಟ್ಯಾನ್‌ಫೋರ್ಡ್‌ನ ಏಮ್ಸ್‌ನ ಗ್ಯಾಸ್ಟ್ರೋಎಂಟರಾಲಜಿಸ್ಟ್ ಸೌರಭ್ ಸೇಥಿ ಅವರು ತಮ್ಮ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ದಿನಕ್ಕೆ ಎಷ್ಟು ಮೊಟ್ಟೆಗಳನ್ನು ಸೇವಿಸಬೇಕು ಎಂಬುದನ್ನು ತಿಳಿಸಿದ್ದಾರೆ.

**ಉತ್ತಮ ಗುಣಮಟ್ಟದ ಪ್ರೋಟೀನ್‌ನ ಮೂಲ:** ಮೊಟ್ಟೆಗಳು ಸಂಪೂರ್ಣ ಪ್ರೋಟೀನ್ ಅನ್ನು ಹೊಂದಿರುತ್ತವೆ, ಅಂದರೆ ಅವು ಎಲ್ಲಾ ಒಂಬತ್ತು ಅಗತ್ಯ ಅಮೈನೋ ಆಮ್ಲಗಳನ್ನು ಹೊಂದಿರುತ್ತವೆ. ಇದು ಸ್ನಾಯುಗಳನ್ನು ನಿರ್ಮಿಸಲು ಮತ್ತು ಸರಿಪಡಿಸಲು ಸಹಾಯ ಮಾಡುತ್ತದೆ. ಜಿಮ್‌ಗೆ ಹೋಗುವವರಿಗೆ, ಇದು ಕೈಗೆಟುಕುವ ಮತ್ತು ಅತ್ಯುತ್ತಮ ಚೇತರಿಕೆಯ ಆಯ್ಕೆಯಾಗಿದೆ.

**ಹಸಿ ಮೊಟ್ಟೆಗಳು ಉತ್ತಮವೇ ಅಥವಾ ಬೇಯಿಸಿದ ಮೊಟ್ಟೆ ಉತ್ತಮವೇ:** ಡಾ. ಸೌರಭ್ ಸೇಥಿ ಅವರು ಹಸಿ ಮೊಟ್ಟೆಗಳು ಆರೋಗ್ಯಕ್ಕೆ ಹಾನಿಕಾರಕವಾಗಬಹುದು ಎಂದು ಹೇಳುತ್ತಾರೆ. ಅವು ಸಾಲ್ಮೊನೆಲ್ಲಾ ಸೋಂಕಿನ ಅಪಾಯವನ್ನುಂಟುಮಾಡುತ್ತವೆ. ಅಂತಹ ಪರಿಸ್ಥಿತಿಯಲ್ಲಿ, ಯಾವಾಗಲೂ ಬೇಯಿಸಿದ ಮೊಟ್ಟೆಗಳನ್ನು ಸೇವಿಸಿ. ದೇಹವು ಬೇಯಿಸಿದ ಮೊಟ್ಟೆಗಳಲ್ಲಿರುವ ಪ್ರೋಟೀನ್ ಅನ್ನು ಉತ್ತಮವಾಗಿ ಹೀರಿಕೊಳ್ಳುತ್ತದೆ.

**ಮೊಟ್ಟೆಯಲ್ಲಿರುವ ಪೋಷಕಾಂಶಗಳು:** ಮೊಟ್ಟೆಗಳು ಪ್ರೋಟೀನ್, ವಿಟಮಿನ್‌ಗಳು (ಎ, ಡಿ, ಇ, ಬಿ 12), ಮತ್ತು ಖನಿಜಗಳು (ಕಬ್ಬಿಣ, ಸೆಲೆನಿಯಮ್, ರಂಜಕ) ಗಳಲ್ಲಿ ಸಮೃದ್ಧವಾಗಿವೆ. ಆದ್ದರಿಂದ, ಅವುಗಳ ಸೇವನೆಯು ಆರೋಗ್ಯಕ್ಕೆ ಅತ್ಯಂತ ಪ್ರಯೋಜನಕಾರಿಯಾಗಿದೆ.

**ದಿನಕ್ಕೆಷ್ಟು ಮೊಟ್ಟೆ ಸುರಕ್ಷಿತ:** ಡಾ. ಸೌರಭ್ ಸೇಥಿ ಅವರ ಪ್ರಕಾರ, ಪ್ರತಿದಿನ 1 ರಿಂದ 2 ಮೊಟ್ಟೆಗಳನ್ನು ತಿನ್ನುವುದು ಹೆಚ್ಚಿನ ಜನರಿಗೆ ಸುರಕ್ಷಿತವಾಗಿದೆ. ಮೊಟ್ಟೆಗಳು ಹಲವಾರು ಆರೋಗ್ಯ ಪ್ರಯೋಜನಗಳನ್ನು ಒದಗಿಸುವ ಸೂಪರ್‌ಫುಡ್ ಎಂದು ಅವರು ಹೇಳುತ್ತಾರೆ. ಸರಿಯಾದ ಪ್ರಮಾಣದಲ್ಲಿ ಮತ್ತು ಸರಿಯಾದ ರೀತಿಯಲ್ಲಿ ಸೇವಿಸಿದರೆ, ಅವು ತೂಕ ನಷ್ಟ, ಸ್ನಾಯುಗಳ ನಿರ್ಮಾಣ ಮತ್ತು ಒಟ್ಟಾರೆ ಆರೋಗ್ಯಕ್ಕೆ ಬಹಳ ಪ್ರಯೋಜನಕಾರಿಯಾಗಬಹುದು.



# ಚಹಾ ರುಚಿ ಬರಲು ಟೀ ಪುಡಿ–ಸಕ್ಕರೆ ಯಾವಾಗ ಸೇರಿಸಬೇಕು



**ಪ್ಲಾಸ್ಟಿಕ್ ಸ್ಟ್ರೈನರ್ ಬಳಸುವುದು**

**ಅನೇಕ ಜನರು ಮನೆಯಲ್ಲಿ ಚಹಾ ಸೋಸಲು ಪ್ಲಾಸ್ಟಿಕ್ ಸ್ಟ್ರೈನರ್‌ಗಳನ್ನು ಬಳಸುತ್ತಾರೆ. ಆದಾಗ್ಯೂ, ಪ್ಲಾಸ್ಟಿಕ್ ಸ್ಟ್ರೈನರ್ ಬಳಸುವುದರಿಂದ ಗಂಭೀರ ಹಾನಿ ಉಂಟಾಗುತ್ತದೆ. ಏಕೆಂದರೆ ಪ್ಲಾಸ್ಟಿಕ್ ಸ್ಟ್ರೈನರ್ ಮೂಲಕ ಬಿಸಿ ಚಹಾವನ್ನು ಸೋಸುವುದರಿಂದ ಚಹಾಕ್ಕೆ ಪ್ಲಾಸ್ಟಿಕ್ ಸಂಯುಕ್ತಗಳು ಸೋರಿಕೆಯಾಗಬಹುದು ಇದು ದೇಹದಲ್ಲಿ ಸಂಗ್ರಹವಾಗಬಹುದು ಗಂಭೀರ ಅನಾರೋಗ್ಯಕ್ಕೆ ಕಾರಣವಾಗಬಹುದು. ಆದ್ದರಿಂದ, ಆರೋಗ್ಯವಾಗಿರಲು ಸ್ಟೀಲ್ ಸ್ಟ್ರೈನರ್ ಬಳಸಿ.**

ನಮ್ಮಲ್ಲಿ ಬಹುತೇಕ ಜನರು ಕಾಫಿಕ್ಕಿಂತ ಚಹಾ ಕುಡಿಯಲು ಇಷ್ಟಪಡುತ್ತಾರೆ ಆದರೆ ಮನೆಯಲ್ಲಿ ಚಹಾ ಮಾಡುವಾಗ ನಾವುಮಾಡುವ ಕೆಲವೊಂದು ಸಣ್ಣಪುಟ್ಟ ತಪ್ಪುಗಳು ಚಹಾದ ರುಚಿಯನ್ನು ಹಾಳು ಮಾಡುತ್ತವೆ ಹಾಗೂ ಆರೋಗ್ಯಕ್ಕೂ ಕೂಡ ಸಮಸ್ಯೆ ತಂದೊಡುತ್ತದೆ ನಮ್ಮಲ್ಲಿ ಬಹುತೇಕರಿಗೆ ದಿನಾ ಬೆಳಗ್ಗೆ ಎದ್ದ ಬಳಿಕ ನಿತ್ಯ ಕರ್ಮಗಳನ್ನು ಮುಗಿಸಿಕೊಂಡ ಬಳಿಕ ಒಂದು ಕಪ್ ಬಿಸಿಬಿಸಿ ಚಹಾ ಕುಡಿಯುವುದು ನಮಗೆಲ್ಲಾ ಅಭ್ಯಾಸವಾಗಿ ಬಿಟ್ಟಿದೆ. ಆ ಬಳಿಕ ದಿನದಲ್ಲಿ ಮನಸ್ಸು ಬಯಸಿದ್ದಾಗಲೆಲ್ಲಾ ಚಹಾ ಕುಡಿಯುವ ಅಭ್ಯಾಸ ನಮ್ಮಲ್ಲಿ ಹೆಚ್ಚಿನವರಿಗಿದೆ. ಇನ್ನು ಮನೆಗೆ ನೆಂಟರು ಅಥವಾ ನೆರೆಹೊರೆಯವರು ಬಂದರೂ ಅವರಿಗೂ ಕೂಡ ಚಹಾ ಮಾಡಿ ಕೊಟ್ಟು,ಅವರ ಜೊತೆಗೆ ನಾವು ಕೂಡ ಒಂದು ಕಪ್ ಟೀ ಕುಡಿಯುತ್ತೇವೆ. ಹೀಗೆ ದಿನದಲ್ಲಿ ಎರಡು 3 ಬಾರಿಯಾದರೂ ಚಹಾ ಕುಡಿಯುತ್ತೇವೆ. ಅದರಲ್ಲೂ ಚಳಿಗಾಲದ ಸಂದರ್ಭದಲ್ಲಿ ಬಿಸಿಬಿಸಿ ಚಹಾ ಕುಡಿಯುವುದರಿಂದ, ದೇಹದ ಉಷ್ಣತೆ ಹೆಚ್ಚಾಗಿ ಮನಸ್ಸಿಗೆ ಒಂದು ರೀತಿಯ ಉಲ್ಲಾಸ ಸಿಗುತ್ತದೆ ಹಾಗೂ ಕೆಲಸ ಮಾಡಲು ಕೂಡ ಹೊಸ ಹುರುಪು ಸಿಕ್ಕಂತಾಗುತ್ತದೆ ಎನ್ನುವುದು ಚಹಾ ಪ್ರಿಯರ ಅಭಿಪ್ರಾಯ. ಒಟ್ಟಾರೆಯಾಗಿ ಹೇಳಬೇಕೆಂದರೆ ದಿನನಿತ್ಯ ಚಹಾ ಕುಡಿಯುವುದು ನಮ್ಮ ದೈನಂದಿನ ಜೀವನದ ಅವಿಭಾಜ್ಯ ಅಂಗವಾಗಿ ಬಿಟ್ಟಿದೆ.

**ಪೌಷ್ಟಿಕತಜ್ಞ ಕಿರಣ್ ಕುಕ್ರೇಜಾ ಅವರು ಹೇಳುವ ಪ್ರಕಾರ :** ಇನ್ನು ಚಹಾ ಮಾಡುವುದು ಏನೂ ರಾಕೆಟ್ ಸೈನ್ಸ್ ಅಲ್ಲ! ಈಸಿಯಾಗಿ ಟೀ ಅಥವಾ ಚಹಾವನ್ನು ರೆಡಿ ಮಾಡಿಕೊಳ್ಳಬಹುದು. ಆದರೆ ಚಹಾ ರೆಡಿ ಮಾಡುವ ಸಂದರ್ಭದಲ್ಲಿ ಕೆಲವೊಂದು ವಿಚಾರಗಳನ್ನು ತಿಳಿದುಕೊಳ್ಳಬೇಕು ಇಲ್ಲಾಂದ್ರೆ ಆರೋಗ್ಯಕ್ಕೆ ಸಮಸ್ಯೆಗಳು ಕಾಣಿಸಿಕೊಳ್ಳಬಹುದು ಎನ್ನುತ್ತಾರೆ ಪೌಷ್ಟಿಕತಜ್ಞ ಕಿರಣ್ ಕುಕ್ರೇಜಾ ಅವರು. ಇವರು ತಮ್ಮ ಇನ್‌ಸ್ಟಾಗ್ರಾಮ್‌ನಲ್ಲಿ ಹಂಚಿಕೊಂಡಿರುವ ಮಾಹಿತಿಯ ಪ್ರಕಾರ, ಚಹಾ ತಯಾರಿಸುವಾಗ ನಾವು ಮಾಡುವ ಕೆಲವೊಂದು ತಪ್ಪುಗಳು ಆರೋಗ್ಯದ ಮೇಲೆ ಹೇಗೆಲ್ಲಾ ಅಡ್ಡಪರಿಣಾಮಗಳು ಬೀರುತ್ತವೆ ಎನ್ನುವುದರ ಬಗ್ಗೆ ಮಾಹಿತಿಯನ್ನು ಹಂಚಿಕೊಂಡಿದ್ದಾರೆ

**ಚಹಾ ಮಾಡುವಾಗ ಮಾಡುವ ತಪ್ಪುಗಳು :** ಚಹಾ ತಯಾರಿಸುವಾಗ ನಾವು ಮಾಡುವ ಕೆಲವೊಂದು ತಪ್ಪುಗಳು ನಮ್ಮ ಆರೋಗ್ಯಕ್ಕೆ ಅತ್ಯಂತ ಹಾನಿಕಾರಕ ಎಂದು ಪೌಷ್ಟಿಕತಜ್ಞರು ಎಚ್ಚರಿಕೆಯನ್ನು ನೀಡುತ್ತಾರೆ. ಅನೇಕ ಜನರು ಚಹಾ ತಯಾರಿಸುವಾಗ ಮೊದಲು ಟೀ ಪಾಟ್‌ಗೆ ಹಾಲನ್ನು ಸೇರಿಸುತ್ತಾರೆ, ಆದರೆ ಇದು ಸಂಪೂರ್ಣವಾಗಿ ಸ್ವೀಕಾರಾರ್ಹವಲ್ಲ.

ಹಾಲಿನಲ್ಲಿರುವ ಪ್ರೋಟೀನ್‌ಗಳು ಚಹಾದಲ್ಲಿರುವ ಉತ್ಕರ್ಷಣ ನಿರೋಧಕಗಳಿಗೆ ಬಂಧಿಸುತ್ತವೆ,ಇದು ಕೆಲವು ಸಮಸ್ಯೆಗಳನ್ನು ಉಂಟುಮಾಡ ಬಹುದು. ಆದ್ದರಿಂದ, ಚಹಾ ಮಾಡಲು, ಮೊದಲು ಒಂದು ಪಾತ್ರೆಗೆ ನೀರನ್ನು ಸುರಿಯಿರಿ, ನಂತರ ಚಹಾ ಪುಡಿಯನ್ನುಸೇರಿಸಿ ಮತ್ತು ಚೆನ್ನಾಗಿ ಕುದಿಸಿ. ಎಲ್ಲಾ ಪದಾರ್ಥಗಳನ್ನು ಸೇರಿಸಿದ ನಂತರ, ಕೊನೆಯದಾಗಿ ಹಾಲು ಸೇರಿಸಿ. ಇದು ಚಹಾ ತಯಾರಿ ಸಲು ಸರಿಯಾದ ಮತ್ತು ಸುರಕ್ಷಿತ ಮಾರ್ಗವಾಗಿದೆ.

**ಚಹಾವನ್ನು ಮತ್ತೆ ಬಿಸಿ ಮಾಡುವುದು:** ಚಹಾವನ್ನು ಪದೇ ಪದೇ ಬಿಸಿ ಮಾಡುವುದು ನಿಮ್ಮ ಆರೋಗ್ಯಕ್ಕೆ ಹಾನಿ ಮಾಡುವ ದೊಡ್ಡ ತಪ್ಪು. ವಾಸ್ತವವಾಗಿ, ತಯಾರಿಸಿದ ಚಹಾವನ್ನು ಪದೇ ಪದೇ ಬಿಸಿ ಮಾಡುವುದರಿಂದ ಅದರ ಆಮ್ಲೀಯ ಅಂಶ ಹೆಚ್ಚಾಗುತ್ತದೆ. ಇದು ಹೊಟ್ಟೆಯ ಸಮಸ್ಯೆಗಳು ಮತ್ತು ಆಮ್ಲೀಯತೆಗೆ ಕಾರಣವಾಗಬಹುದು. ಆದ್ದರಿಂದ, ಇಂದು ಚಹಾವನ್ನು ಮತ್ತೆ ಬಿಸಿ ಮಾಡುವ ನಿಮ್ಮ ಅಭ್ಯಾಸವನ್ನು ಬದಲಾಯಿಸಿ.

## ಮಹಿಳೆ, ಮಕ್ಕಳ ಸುರಕ್ಷತೆಗೆ ಅಕ್ಕಪಡೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಬಳ್ಳಾರಿ

ಜಿಲ್ಲೆಯಲ್ಲಿ ಮಹಿಳೆ ಮತ್ತು ಮಕ್ಕಳ ಸುರಕ್ಷತೆಗಾಗಿ ಅಕ್ಕ ಪಡೆಗೆ ಚಾಲನೆ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಹೇಳಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಕ್ಕ ಪಡೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಸಮಾಜದಲ್ಲಿ ಮಹಿಳೆ ಮತ್ತು ಮಕ್ಕಳಿಗಿರುವ ಹಕ್ಕುಗಳು, ಕಾನೂನುಗಳ ಅರಿವು ಮೂಡಿಸುವುದು ಮತ್ತು ಅವು ಉಲ್ಲಂಘನೆಯಾದಲ್ಲಿ ಅವರು ನ್ಯಾಯ ಪಡೆಯಲು ಇರುವ ವಿಧಾನಗಳ ಕುರಿತು ಅರಿವು ಮೂಡಿಸುವುದು ಅಕ್ಕ ಪಡೆ ಉದ್ದೇಶ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ ಪೆನ್ನೇಕರ್ ಮಾತನಾಡಿ, ದೌರ್ಜನ್ಯಕ್ಕೊಳಗಾದ ಮಹಿಳೆಯರು ಮತ್ತು ಮಕ್ಕಳಿಗೆ ತಕ್ಷಣದ ಸಹಾಯ, ಕಾನೂನು ಜಾಗೃತಿ ಮತ್ತು ಸಲಹೆ ನೀಡುವುದು 'ಅಕ್ಕ ಪಡೆ' ಕಾರ್ಯವಾಗಿದೆ. ಇದರ ಮೇಲ್ವಿಚಾರಣೆಗಾಗಿ ಪರಿಶೀಲನಾ ಸಮಿತಿ ರಚಿಸಲಾಗಿದ್ದು, ಪ್ರತಿ ಮೂರು ತಿಂಗಳಿಗೊಮ್ಮೆ ವರದಿಯ ಪರಿಶೀಲನೆ ನಡೆಸಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ರಾಜೇಶ್ ಎನ್.ಹೊಸಮನೆ ಮಾತನಾಡಿ, ಅಕ್ಕ ಎಂದರೆ ಒಬ್ಬ ಸ್ತ್ರೀ, ತಾಯಿ, ಅಕ್ಕ, ಮಗಳು ಎಲ್ಲವೂ. ಮಹಿಳೆಯರ ಸುರಕ್ಷತೆ ಸಮಾಜದ ಜವಾಬ್ದಾರಿ. ಮಹಿಳೆಯರು ಮತ್ತು ಮಕ್ಕಳ ಮೇಲೆ ನಡೆಯುವ ಕೌಟುಂಬಿಕ ಹಿಂಸೆ, ಬಾಲ್ಯ ವಿವಾಹ, ಲೈಂಗಿಕ ದೌರ್ಜನ್ಯ, ವರದಕ್ಷಿಣೆ ಕಿರುಕುಳ, ಮಹಿಳಾ ಕಳ್ಳಸಾಗಣೆ ಸೇರಿದಂತೆ ಸಾಮಾಜಿಕ ಕೆಡುಕುಗಳನ್ನು ತಡೆಯಲು ಅಕ್ಕ ಪಡೆ ಒಂದು ಸಮುದಾಯ ಆಧಾರಿತ ರಕ್ಷಣಾ ಪಡೆಯಾಗಿದೆ' ಎಂದರು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್ ಮಾತನಾಡಿ, 'ಅಪರಾಧ ನಡೆಯುವುದಕ್ಕೂ ಮುನ್ನ ಮುನ್ನೆಚ್ಚರಿಕೆ ವಹಿಸುವುದು ಬಹಳ ಮುಖ್ಯ. ಹಾಗಾಗಿ ಎಲ್ಲಾ ಇಲಾಖೆಗಳ ಸಹಕಾರದೊಂದಿಗೆ ಪೋಕ್ಸೋ, ಬಾಲ್ಯವಿವಾಹದಿಂದಾಗುವ ದುಷ್ಪರಿಣಾಮ ಕುರಿತು ಅರಿವು ಮೂಡಿಸುವ ಕಾರ್ಯವಾಗಬೇಕಿದೆ' ಎಂದರು.

### ಕಾಮಗಾರಿಗಳ ಅನುಷ್ಠಾನಕ್ಕೂ, ಸಕಾಲಕ್ಕೆ ಅನುದಾನ ಬಿಡುಗಡೆಯಲ್ಲಿಯೂ ವಿಳಂಬ

# 15ನೇ ಹಣಕಾಸು ಯೋಜನೆ: ಕಾಮಗಾರಿ ಕುಂಠಿತ

• ಉದಯವಾಹಿನಿ ಹುಬ್ಬಳ್ಳಿ

ಜಿಲ್ಲೆಯ ಗ್ರಾಮಗಳ ಸಮಗ್ರ ಅಭಿವೃದ್ಧಿಗಾಗಿ 2021-26ನೇ ಅವಧಿಯ 15ನೇ ಹಣಕಾಸು ಯೋಜನೆಯಡಿಯಲ್ಲಿ ರೂ.85 ಕೋಟಿ ಅನುದಾನ ಬಿಡುಗಡೆಯಾಗಿದ್ದು, ಕಳೆದ 4 ವರ್ಷಗಳ ಅವಧಿಯಲ್ಲಿ ಇದುವರೆಗೆ ಕೇವಲ ರೂ.32 ಕೋಟಿ ಅನುದಾನ ಮಾತ್ರ ಖರ್ಚಾಗಿದ್ದು, ಇನ್ನೂ ರೂ.53 ಕೋಟಿ ಅನುದಾನ ಉಳಿಕೆಯಿದೆ.

ಜಿಲ್ಲೆಯ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಯೋಜನೆಗೆ ಸಂಬಂಧಿಸಿದ ಶೇ 60ರ ನಿರ್ಬಂಧಿತ ಅನುದಾನದಲ್ಲಿ ಗ್ರಾಮಗಳಲ್ಲಿ ನೈರ್ಮಲೀಕರಣ, ಬಯಲು ಬಹಿರ್ದೆಸೆ ಮುಕ್ತ ಗ್ರಾಮ ನಿರ್ಮಾಣ, ಶುದ್ಧ ಕುಡಿಯುವ ನೀರು ಸರಬರಾಜು ಸಂಬಂಧಿತ ಕಾಮಗಾರಿಗಳ ಕ್ರಿಯಾಯೋಜನೆ ತಯಾರಿಸುವುದು.

**ಸಕಾಲಕ್ಕೆ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿಲ್ಲ**

ಶೇ 40 ಅನಿರ್ಬಂಧಿತ ಅನುದಾನದಲ್ಲಿ ಗ್ರಾಮಗಳಲ್ಲಿ ರಸ್ತೆ, ಒಳಚರಂಡಿ ನಿರ್ಮಾಣ, ಬೀದಿ ದೀಪ ಅಳವಡಿಕೆ, ಅಂಗನವಾಡಿ ಕಟ್ಟಡ ನಿರ್ಮಾಣ, ಸರ್ಕಾರಿ ಕಟ್ಟಡಗಳ ದುರಸ್ತಿ ಸೇರಿದಂತೆ ಅಗತ್ಯ ಮೂಲಸೌಕರ್ಯ ಕಲ್ಪಿಸಿಕೊಡುವ ಉದ್ದೇಶದಿಂದ 5 ವರ್ಷದ ಕ್ರಿಯಾ ಯೋಜನೆ ವರದಿ ಸಿದ್ಧಪಡಿಸಿ, ಸಕಾಲಿಕವಾಗಿ ಅವುಗಳ ಅನುಷ್ಠಾನಕ್ಕಾಗಿ ಮಾರ್ಗಸೂಚಿ ನೀಡಲಾಗಿರುತ್ತದೆ.

ಆದರೆ, ಗ್ರಾಮ ಪಂಚಾಯಿತಿಯಲ್ಲಿ ಚುನಾಯಿತ ಸದಸ್ಯರ ಹಾಗೂ ಅಧಿಕಾರಿಗಳ ಇಚ್ಛಾಶಕ್ತಿ ಕೊರತೆಯಿಂದಾಗಿ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಸಕಾಲಕ್ಕೆ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿಲ್ಲ. ಕ್ರಿಯಾಯೋಜನೆಯಲ್ಲಿ ಪ್ರಸ್ತಾಪಿಸಿದ ಕಾಮಗಾರಿಗಳ ಅನುಷ್ಠಾನಕ್ಕೂ ಸಕಾಲಕ್ಕೆ ಅನುದಾನ ಬಿಡುಗಡೆಯಲ್ಲಿಯೂ ವಿಳಂಬ ಆಗುತ್ತಿರುವುದೇ ಪ್ರಮುಖ ಕಾರಣವಾಗಿದೆ ಎನ್ನುವ ಆರೋಪಗಳಿವೆ.

**ಕ್ರಿಯಾ ಯೋಜನೆಗೆ ಸಮ್ಮತಿ ಕೊರತೆ:** 15ನೇ ಹಣಕಾಸು ಯೋಜನೆಗೆ ಸಂಬಂಧಿಸಿದ ಅನುದಾನವು ನೇರವಾಗಿ ಆಯಾ ಗ್ರಾಮ ಪಂಚಾಯಿತಿಗಳ ಖಾತೆಗೆ ಹಂತ ಹಂತವಾಗಿ ಬಿಡುಗಡೆಯಾಗುತ್ತದೆ. ಈ ಅನುದಾನದಲ್ಲಿ ಸಂಬಂಧಿಸಿದ ಆಯಾ ಪಂಚಾಯಿತಿ ಅಧಿಕಾರಿಗಳು ಕೇಂದ್ರ ಸರ್ಕಾರದ ಮಾರ್ಗಸೂಚಿ ಅನ್ವಯ ಗ್ರಾಮೀಣ ಅಭಿವೃದ್ಧಿ ಕಾಮಗಾರಿಗಳ ಕ್ರಿಯಾ ಯೋಜನೆ ತಯಾರಿಸಿ, ಕಾಮಗಾರಿ ಕೈಗೊಳ್ಳಬೇಕು. ಇದಕ್ಕೆ ಪಂಚಾಯಿತಿ ಸದಸ್ಯರ ಸಮ್ಮತಿಯೂ ಅಗತ್ಯವಾಗಿರುತ್ತದೆ. ಆದರೆ, ಕೆಲವೊಮ್ಮೆ ಕ್ರಿಯಾಯೋಜನೆಗೆ ಸದಸ್ಯರ ಒಪ್ಪಿಗೆ ಸೂಚಿಸುವುದಿಲ್ಲ. ಇದರಿಂದಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಸಕಾಲಿಕವಾಗಿ ಕೈಗೊಳ್ಳುವಲ್ಲಿ ವಿಳಂಬವಾಗುತ್ತದೆ' ಎನ್ನುತ್ತಾರೆ ಜಿಲ್ಲಾ ಪಂಚಾಯಿತಿ ಅಧಿಕಾರಿಗಳು. ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರು ಪೂರೈಕೆ ಮತ್ತು ನೈರ್ಮಲ್ಯ ಯೋಜನೆಯ ಕಾಮಗಾರಿಗಳಿಗೆ ಶೇ 60 ಅನುದಾನವನ್ನು ಕಡ್ಡಾಯವಾಗಿ ಬಳಸಬೇಕು. ಆದರೆ, ಈ ಕಾಮಗಾರಿಗಳನ್ನೂ ಕೈಗೊಳ್ಳಲು ಸಾಧ್ಯವಾಗುತ್ತಿಲ್ಲ. ಇದರಿಂದಾಗಿ ಜಿಲ್ಲೆಯ ಕೆಲ ಗ್ರಾಮಗಳಲ್ಲಿ ಇಂದಿಗೂ ಕುಡಿಯುವ ನೀರಿನ ಸಮಸ್ಯೆ, ನೈರ್ಮಲ್ಯಕರಣ ಹಾಗೂ ಮೂಲಸೌಕರ್ಯಗಳ ಸಮಸ್ಯೆಯಿದೆ ಎನ್ನುತ್ತಾರೆ ಅಧಿಕಾರಿಗಳು. ಗ್ರಾಮಗಳಲ್ಲಿ ರಸ್ತೆ, ಚರಂಡಿ ಸೇರಿದಂತೆ ಅಗತ್ಯ ಮೂಲಸೌಕರ್ಯಗಳಿಗೆ ಸಂಬಂಧಿಸಿದ ಯೋಜನೆಗಳ ಅನುಷ್ಠಾನದಲ್ಲಿಯೂ ಸದಸ್ಯರಿಂದ ಕೆಲವೊಮ್ಮೆ ಸಹಕಾರ ಸಿಗಲ್ಲ. ಕ್ರಿಯಾಯೋಜನೆಯಲ್ಲಿ ನಮ್ಮ ವಾರ್ಡ್ ವ್ಯಾಪ್ತಿಗೆ ಸಂಬಂಧಿಸಿದ ಕೆಲಸಗಳನ್ನು ಸೇರಿಸಿಲ್ಲ ಎಂಬ ಕಾರಣ ನೀಡಿ, ಯೋಜನೆ ಅನುಷ್ಠಾನಕ್ಕೆ ಸಹಕರಿಸಲ್ಲ. ಇದರಿಂದಾಗಿ ವಿಳಂಬವಾಗುತ್ತಿದೆ.

ಕೆಲವೊಮ್ಮೆ ಮುಗಿದಿರುವ ಕಾಮಗಾರಿಗಳಿಗೆ ಅನುದಾನ ಬಿಡುಗಡೆಯಲ್ಲಿಯೂ ವಿಳಂಬವಾಗುತ್ತಿದೆ. ಈ ಕಾರಣಗಳಿಂದಾಗಿ ನಿಗದಿತ ಅವಧಿಯಲ್ಲಿ ಅನುದಾನ ಸಮರ್ಪಕವಾಗಿ ಬಳಕೆಯಾಗುತ್ತಿಲ್ಲ. ಅನುದಾನ ಉಳಿಕೆಯಾಗುತ್ತಿದೆ. ಉಳಿದ ಅನುದಾನದ ಬಳಕೆಗೆ ಮಾರ್ಗಸೂಚಿ ಅನ್ವಯ ಹೆಚ್ಚುವರಿಯಾಗಿ ಇನ್ನೂ ಒಂದು ವರ್ಷ ಸಮಯ ದೊರೆಯುತ್ತದೆ. ಆಗ ಅನುದಾನ ಬಳಕೆಗೆ ಪಿಡಿಒಗಳಿಗೆ ಸೂಚಿಸಲಾಗುತ್ತದೆ ಎನ್ನುತ್ತಾರೆ ಅಧಿಕಾರಿಗಳು. ನಮ್ಮ ತಾಲ್ಲೂಕು ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಿಗೆ ಯೋಜನೆಗೆ ಸಂಬಂಧಿಸಿದ 2025-26ನೇ ಅನುದಾನ ಇನ್ನೂ ಬಂದಿಲ್ಲ. ಬಂದ ತಕ್ಷಣ ಗ್ರಾಮಗಳಲ್ಲಿ ಅಭಿವೃದ್ಧಿ ಕಾಮಗಾರಿಗಳು ನಡೆಯಲಿವೆ' ಎನ್ನುತ್ತಾರೆ ಜಿಲ್ಲೆಯ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿಯೊಬ್ಬರು.


ಉದಯವಾಹಿನಿ ಚಿತ್ರ

**ಬಿಲ್ ಪಾವತಿ ಮಾಡಲು ಹಣವಿಲ್ಲ**

**ನವಲಗುಂದ ತಾಲ್ಲೂಕಿನ ಗುಡಿಸಾಗರ ಗ್ರಾಮ ಪಂಚಾಯಿತಿಗೆ ಯೋಜನೆಗೆ ಸಂಬಂಧಿಸಿದ 2025-26ನೇ ಸಾಲಿಗೆ ರೂ. 30 ಲಕ್ಷ ಅನುದಾನ ಬರಬೇಕಿತ್ತು. ಇನ್ನೂ ಬಂದಿಲ್ಲ. ಕಳೆದ ಏಪ್ರಿಲ್ ನಲ್ಲಿಯೇ ಗ್ರಾಮೀಣ ಅಭಿವೃದ್ಧಿ ಕಾಮಗಾರಿಗಳ ವಾರ್ಷಿಕ ಕ್ರಿಯಾಯೋಜನೆ ವರದಿ ಸಲ್ಲಿಸಲಾಗಿತ್ತು. ಅನುದಾನ ಬಿಡುಗಡೆಯಾಗಿಲ್ಲ. ಇದರಿಂದಾಗಿ ಪಂಚಾಯಿತಿ ವ್ಯಾಪ್ತಿಯ ಗುಡಿಸಾಗರ ನಾಗನೂರು ಸೊಟಕನಾಳ ಹಾಗೂ ಕಡದಳ್ಳಿ ಗ್ರಾಮಗಳಲ್ಲಿ ಯಾವುದೇ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಆಗುತ್ತಿಲ್ಲ' ಎಂದು ಗುಡಿಸಾಗರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರತ್ನಮ್ಮ ಗಂಗಪ್ಪ ಗುಡಸಲ ಮನಿ ದೂರುತ್ತಾರೆ. 'ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ನಡೆಯುವ ಸಣ್ಣಪುಟ್ಟ ಕಾಮಗಾರಿಗಳಿಗೆ ಬಿಲ್ ಪಾವತಿ ಮಾಡಲು ಹಣವಿಲ್ಲ. ಪಂಚಾಯಿತಿಗೆ ಬರುವ ತೆರಿಗೆಯೂ ತುಂಬಾ ಕಡಿಮೆ. ಯೋಜನೆಗೆ ಸಂಬಂಧಿಸಿದ ಅನುದಾನ ಬಂದರೆ ಅರ್ಧಕ್ಕೆ ನಿಂತಿರುವ ಕಾಮಗಾರಿ ಹೊಸ ಕಾಮಗಾರಿಗಳನ್ನು ಕೈಗೊಳ್ಳಲು ಅನುಕೂಲವಾಗುತ್ತದೆ' ಎನ್ನುತ್ತಾರೆ ಅವರು.**

## ಮಿನಿ ನ್ಯೂಸ್

### ಜೂಜಾಟ: ಓರ್ವನ ಬಂಧನ

• ಉದಯವಾಹಿನಿ ಗೋಕಾಕ

ಕೊಣ್ಣೂರ ಪಟ್ಟಣದ ಅಂಬಿಗರ ಚೌಡಯ್ಯ ವೃತ್ತದ ಜನನಿಬಿಡ ಪ್ರದೇಶದಲ್ಲಿ ಸಾರ್ವಜನಿಕರನ್ನು ಓಸಿ-ಜೂಜಾಟದಲ್ಲಿ ನಿರತವಾಗುವಂತೆ ಪುಸಲಾಯಿಸಿ, ಅವರಿಂದ ಹಣವನ್ನು ಪಡೆದು, ಚೀಟಿಗಳ ಮೇಲೆ ಅಂಕಿ-ಸಂಖ್ಯೆ ಬರೆಯುತ್ತ ಜೂಜಾಟದಲ್ಲಿ ತೊಡಗಿದ್ದ ವ್ಯಕ್ತಿಯನ್ನು ಗೋಕಾಕ ಗ್ರಾಮೀಣ ಪೊಲೀಸರು ಈಚೆಗೆ ಬಂಧಿಸಿದ್ದು. ಬಂಧಿತನಿಂದ ರೂ. 300 ಜಪ್ತಿ ಮಾಡಿಕೊಂಡಿದ್ದಾರೆ. ಕೊಣ್ಣೂರಿನ ಮಲ್ಲಿಕಾರ್ಜುನ ಬ. ಚಿನಗುಡಿ ಬಂಧಿತ ಆರೋಪಿ.

### ಪಂಚಾಕ್ಷರಿ ಗವಾಯಿ ಜೀವನ ಮಾದರಿ: ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರು

• ಉದಯವಾಹಿನಿ ಹಾನಗಲ್

ಶರಣ ಪರಂಪರೆ, ಸಂಸ್ಕೃತಿಯ ಮೌಲ್ಯಗಳನ್ನು ಯುವ ಪೀಳಿಗೆಗೆ ತಲುಪಿಸುವಲ್ಲಿ ಪಂ.ಪಂಚಾಕ್ಷರಿ ಗವಾಯಿಗಳ ಕಾಳಜಿ ಅನುಕರಣೀಯ ಎಂದು ಗದಗ ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರು ಹೇಳಿದರು. ತಾಲ್ಲೂಕಿನ ಕಾಡಶೆಟ್ಟಿಹಳ್ಳಿ ಗ್ರಾಮದಲ್ಲಿ ಸಂಜೆ ನಡೆದ ಪಂಚಾಕ್ಷರಿ ಗವಾಯಿಗಳ 135ನೇ ಜಯಂತ್ಯುತ್ಸವ, ಸಂಗೀತೋತ್ಸವ ಹಾಗೂ ಹಕ್ಕಲ ಬಸವೇಶ್ವರ ಜಾತ್ರಾ ಮಹೋತ್ಸವದ ಧರ್ಮಸಭೆಯ ಸಾನಿಧ್ಯವಹಿಸಿ ಅವರು ಆಶೀರ್ವಚನ ನೀಡಿದರು.

ಅಂಧರಾಗಿ ಹುಟ್ಟಿದ ಗವಾಯಿಗಳು ಸಾವಿರಾರು ವಿದ್ಯಾರ್ಥಿಗಳಿಗೆ ವಿದ್ಯಾದಾನ ಮಾಡಿದವರು. ಹಾನಗಲ್ ಲಿಂ.ಕುಮಾರ ಶಿವಯೋಗಿಗಳ ಕರುಣೆಯ ಕಂದನಾಗಿ ಬೆಳೆದು ಸಂಗೀತದಲ್ಲಿ ಪರಿಣಿತರಾಗಿ ಶ್ರೇಷ್ಠ ಗವಾಯಿಗಳೆನಿಸಿದರು ಎಂದರು. ಶಾಸಕ ಶ್ರೀನಿವಾಸ ಮಾನೆ, ಪಂಚಾಕ್ಷರಿ ಗವಾಯಿಗಳ ಗಾಯನದಲ್ಲಿ ಭಕ್ತಿ, ಶುದ್ಧತೆ ಮತ್ತು ಆತ್ಮಸ್ಪರ್ಶ ಭಾವನೆಗಳು ಸ್ಪಷ್ಟವಾಗಿ ಅನಾವರಣಗೊಳ್ಳುತ್ತಿದ್ದವು. ಶಿಸ್ತು ಮತ್ತು ಸತ್ಯನಿಷ್ಠೆಗೆ ಅವರ ಜೀವನ ಸರಳತೆಯು ಅತ್ಯುತ್ತಮ ಉದಾಹರಣೆ ಎಂದು ಹೇಳಿದರು.

### ಅಭ್ಯರ್ಥಿ ಆಯ್ಕೆ; ಹೈಕಮಾಂಡ್ ತೀರ್ಮಾನ: ಮಲ್ಲಿಕಾರ್ಜುನ್

• ಉದಯವಾಹಿನಿ ದಾವಣಗೆರೆ

ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಎದುರಾಗಲಿರುವ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯನ್ನು ಪಕ್ಷದ ಹೈಕಮಾಂಡ್ ತೀರ್ಮಾನಿಸುತ್ತದೆ. ಪಕ್ಷದ ಅಭ್ಯರ್ಥಿಯ ಗೆಲುವಿಗೆ ಕೆಲಸ ಮಾಡುತ್ತೇವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ತಿಳಿಸಿದರು.

ಶಾಮನೂರು ಶಿವಶಂಕರಪ್ಪ ನಿಧನದಿಂದ ಎದುರಾಗಲಿರುವ ಉಪಚುನಾವಣೆಯಲ್ಲಿ ಅಹಿಂದ ವರ್ಗದ ನಾಯಕರಿಗೆ ಕಾಂಗ್ರೆಸ್ ಟಿಕೆಟ್ ನೀಡಬೇಕು ಎಂಬ ಒತ್ತಾಯಕ್ಕೆ ಸಂಬಂಧಿಸಿದಂತೆ ಸಚಿವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಚುನಾವಣೆಗೆ ಸ್ಪರ್ಧಿಸುವ ಅಪೇಕ್ಷೆ ಅನೇಕರಲ್ಲಿದೆ. ಕ್ಷೇತ್ರದಲ್ಲಿ ಕುಟುಂಬದ ಸದಸ್ಯರೇ ಸ್ಪರ್ಧೆ ಮಾಡಬೇಕು ಎಂಬ ಹಠವಿಲ್ಲ. ಕ್ಷೇತ್ರ ಗೆಲ್ಲುವುದು ಮಾತ್ರವೇ ಪಕ್ಷದ ಗುರಿ. ಹೈಕಮಾಂಡ್ ಕೇಳಿದಾಗ ಕೂಲಂಕಷವಾಗಿ ಮಾತನಾಡುವೆ ಎಂದು ಹೇಳಿದರು. ಪುತ್ರ ಸಮರ್ಥ ಸ್ಪರ್ಧೆಯ ಕುರಿತು ಪ್ರತಿಕ್ರಿಯಿಸಿದ ಸಚಿವರು, ಮನೆ ಮಂದಿಯಲ್ಲಿ ರಾಜಕೀಯ ಮಾಡಿದರೆ ಹೊಟ್ಟೆಪಾಡಿಗೆ ಏನು ಮಾಡುವುದು ಎಂದು ಮರುಪ್ರಶ್ನಿಸಿದರು. ಸಮರ್ಥ ಇನ್ನೂ ಯುವಕ. ಸಾಕಷ್ಟು ಕಾಲಾವಕಾಶವಿದೆ. ಸಹೋದರ ಎಸ್.ಎಸ್. ಗಣೇಶ್ ಹೆಸರು ಮುನ್ನೆಲೆಗೆ ಬರುತ್ತಿದೆ. ಅವರೊಂದಿಗೆ ಚರ್ಚೆ ಮಾಡುತ್ತೇನೆ. ಈ ವಿಚಾರದಲ್ಲಿ ಕುಟುಂಬ ಇನ್ನೂ ತೀರ್ಮಾನಕ್ಕೆ ಬಂದಿಲ್ಲ ಎಂದು ಸ್ಪಷ್ಟಪಡಿಸಿದರು.

### ಜೈವಿಕ ಇಂಧನ ನೀತಿ ಜಾರಿ ತರಲು ಕ್ರಮ

• ಉದಯವಾಹಿನಿ ಕಲಬುರಗಿ

ಜೈವಿಕ ಇಂಧನಗಳು, ತ್ಯಾಜ್ಯದಿಂದ ಶಕ್ತಿ ಉತ್ಪಾದನೆ, ಹಸಿರು ರಾಸಾಯನಿಕಗಳ ಸಂಶೋಧನೆ ಮತ್ತು ಅಭಿವೃದ್ಧಿ ಮತ್ತು ನವೋದ್ಯಮ ನೇತೃತ್ವದ ಪರಿಹಾರಗಳನ್ನು ಬೆಂಬಲಿಸಲು ಜೈವಿಕ ಇಂಧನ ಇನ್ನೋವೇಶನ್ ಲ್ಯಾಬ್‌ಗಳನ್ನು ಸ್ಥಾಪಿಸುವ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಸದಸ್ಯರು ಮತ್ತು ಇತರ ಪ್ರಮುಖ ಪಾಲುದಾರರೊಂದಿಗೆ ಸಭೆ ನಡೆಸಿದರು. ಕರ್ನಾಟಕದ ಮುಂಬರುವ ಜೈವಿಕ ಇಂಧನ ನೀತಿಯನ್ನು ಪರಿಶೀಲಿಸಿದ ಸಚಿವರು ಸರ್ಕಾರ ಜೈವಿಕ ಇಂಧನ ನೀತಿಯನ್ನು ತರಲು ಬದ್ಧವಾಗಿದೆ ಎಂದು ಪ್ರಕಟಿಸಿದರು. ಇದರಿಂದ ಗ್ರಾಮೀಣ ಪ್ರದೇಶಗಳಲ್ಲಿ ಪರ್ಯಾಯ ಇಂಧನ ಬಳಸಿಕೊಳ್ಳಲು ಅನುಕೂಲವಾಗಲಿದೆ ಎಂದೂ ಸಚಿವರು ಹೇಳಿದರು. ರಾಜ್ಯಾದ್ಯಂತ ಪ್ರಾದೇಶಿಕ ಜೈವಿಕ ಇಂಧನ ವಲಯಗಳನ್ನು ಅಭಿವೃದ್ಧಿಪಡಿಸುವ ಸಂಬಂಧ ನಾವು ಚರ್ಚಿಸಿದ್ದೇವೆ, ಇದರಿಂದಾಗಿ ಪೂರೈಕೆ ಸರಪಳಿಗಳು, ಸಂಸ್ಕರಣಾ ಘಟಕಗಳು ಮತ್ತು ಅಂತಿಮ ಬಳಕೆದಾರರು ಸಹ-ಸ್ಥಳೀಯ ಮತ್ತು ಆರ್ಥಿಕವಾಗಿ ಪ್ರಯೋಜನ ಪಡೆಯುತ್ತಾರೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ವ್ಯವಸ್ಥಾಪಕ ನಿರ್ದೇಶಕ ಶಿವಶಂಕರ್ ನಾಯಕ್ ಹಾಗೂ ಇನ್ನಿತರ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

## ಇಲ್ಲದ ತಂಗುದಾಣ ಪ್ರಯಾಣಿಕರು ಹೈರಾಣ

### ಮಳೆ, ಬಿಸಿಲು ಲೆಕ್ಕಿಸದೆ ರಸ್ತೆಯಲ್ಲೇ ನಿಂತು ಬಸ್ಸಿಗಾಗಿ ಕಾಯುವ ಸ್ಥಿತಿ

• ಉದಯವಾಹಿನಿ ಔರಾದ್

ಬೀದರ್-ಔರಾದ್ ರಾಜ್ಯ ಹೆದ್ದಾರಿ ಮಧ್ಯದಲ್ಲಿ ಇರುವ ಬೋರಾಳ ಗ್ರಾಮದಿಂದ ದಿನನಿತ್ಯ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಸಂಚರಿಸುತ್ತಿದ್ದು, ಇಲ್ಲಿ ಬಸ್ ತಂಗುದಾಣವಿಲ್ಲದೆ ಪರದಾಡುತ್ತಿದ್ದಾರೆ. ತಾಲ್ಲೂಕಿನ ಎಕಲಾರ ಗ್ರಾಪಂಗೆ ಸಮಿಪವಿರುವ ಎಕಲಾರ, ತುಳಜಾಪುರ್, ಕೊಳ್ಳುರು, ಬರದಾಪುರ್ ಹಾಗೂ ಬೋರಾಳ್ ಗ್ರಾಮಗಳಿಂದ ದಿನನಿತ್ಯ ಸಾಕಷ್ಟು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಔರಾದ್ ಹಾಗೂ ಬೀದರಕ್ಕೆ ಪ್ರಯಾಣಿಸುತ್ತಿದ್ದು ಮಳೆ ಬಿಸಿಲೆನ್ನದೆ ಜನರು ಬಿಸಿಲಿನಲ್ಲಿ ಇಲ್ಲವೇ ಗಿಡ ಮರದ ಕೆಳಗೆ ನಿಂತು ಬಸ್‌ಗಳಿಗೆ ಕಾಯಬೇಕಾದ ಸ್ಥಿತಿ ಇದೆ.

**ಶಾಲಾ ಮಕ್ಕಳ ಪರದಾಟ:** ಬೇಸಿಗೆ ಸಮಯದಲ್ಲಿ ರಸ್ತೆ ಪಕ್ಕದ ಮರದ ಕೆಳಗೆ ನಿಲ್ಲಬಹುದು. ಆದರೆ ಮಳೆಗಾಲದಲ್ಲಿ ಶಾಲಾ ಕಾಲೇಜಿಗೆ ತೆರಳುವ ಮಕ್ಕಳ ಪಠ್ಯಪುಸ್ತಕ ಹಾಗೂ ನೋಟ್ ಬುಕ್ಸ್ ಹಾಗೂ ಇನ್ನಿತರೆ ವಸ್ತುಗಳೆಲ್ಲ ಮಳೆ ನೀರಿನಲ್ಲಿ ನೆನೆಯುವುದಲ್ಲದೇ, ರಸ್ತೆ ಪಕ್ಕದಲ್ಲಿ ನಿಲ್ಲುವ ನೀರಿನಿಂದ ಬಟ್ಟೆಗಳೆಲ್ಲ ಕೊಳೆಯಾಗುತ್ತದೆ.

ಶಾಲಾ ಕಾಲೇಜುಗಳಿಗೆ ತೆರಳಿದರೆ ಶಿಕ್ಷಕರು ಮತ್ತು ಉಪನ್ಯಾಸಕರಿಂದ ಬೈಸಿಕೊಳ್ಳುವುದು ಅನಿವಾರ್ಯವಾಗಿದೆ. ಶಾಸಕ, ಸಂಸದರ ಅನುದಾನದಲ್ಲಿ ಲೋಕೋಪಯೋಗಿ ಇಲಾಖೆ, ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಗಮ, ನಿರ್ಮಿತಿ ಕೇಂದ್ರದ ಮೂಲಕ ಗಡಿಭಾಗದಲ್ಲಿ ಬಸ್ ತಂಗುದಾಣಗಳನ್ನು ನಿರ್ಮಿಸಿಲ್ಲ ಎಂದು ಗ್ರಾಮಸ್ಥರೂ ಆರೋಪಿಸಿದ್ದಾರೆ. ವೃದ್ಧರು, ಮಹಿಳೆಯರು, ಮಕ್ಕಳಿಗೂ ತೊಂದರೆ ಆಗುತ್ತಿರುವುದರಿಂದ ನಮಗೆ ತಕ್ಷಣವೇ ಬೋರಾಳನಲ್ಲಿ ಬಸ್ ತಂಗುದಾಣ ನಿರ್ಮಿಸಬೇಕು. ಇಲ್ಲದಿದ್ದಲ್ಲಿ ಜನ ಪ್ರತಿನಿಧಿಗಳು ಹಾಗೂ ಅಧಿಕಾರಿಗಳ ವಿರುದ್ಧ ಬಸ್‌ಗಳನ್ನು ತಡೆದು ಪ್ರತಿಭಟಿಸಬೇಕಾಗುತ್ತದೆ ಎಂದು ಈ ಭಾಗದ ಗ್ರಾಮಸ್ಥರು ಎಚ್ಚರಿಸಿದ್ದಾರೆ.


ಉದಯವಾಹಿನಿ ಚಿತ್ರ

**ನಿತ್ಯವೂ ನಾವು ಸುಡು ಬಿಸಿಲಿನಲ್ಲೇ ನಿಂತು ಬಸ್‌ಗಾಗಿ ಕಾಯಬೇಕಾದ ಪರಿಸ್ಥಿತಿ ಉಂಟಾಗಿದೆ. ಕೆಲವು ಸಂದರ್ಭದಲ್ಲಿ ಬಸ್‌ಗಳು ನಿಲ್ಲಿಸುವುದಿಲ್ಲ. ಆಗ ಪ್ರಯಾಣಿಕರು ಬಸ್ ಹಿಂದೆ ಓಡಬೇಕಾಗುತ್ತದೆ ತಕ್ಷಣವೇ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಿ ಸೂಕ್ತ ಬಸ್ಸು ತಂಗುದಾಣ ನಿರ್ಮಿಸಬೇಕು ಇಲ್ಲಾವಾದಲ್ಲಿ ರಾಜ್ಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಲಾಗುತ್ತದೆ. -ಉಮಕಾಂತ ಸೋನೆ, ಸ್ಥಳೀಯ ನಿವಾಸಿ**

**ಪ್ರಯಾಣಿಕರ ಸಮಸ್ಯೆ ನಮಗೆ ನೋಡಲು ಆಗುತ್ತಿಲ್ಲ. ಹೆದ್ದಾರಿ ಪ್ರಾಧಿಕಾರದವರು ಇಲ್ಲವೇ ಸರ್ಕಾರದವರು ತಂಗುದಾಣದ ವ್ಯವಸ್ಥೆ ಮಾಡಿಕೊಡಬೇಕು. ಇಲ್ಲವಾದಲ್ಲಿ ನಾವು ಪ್ರಯಾಣಿಕರ ಜತೆ ಸೇರಿ ಹೋರಾಟ ಮಾಡಬೇಕಾಗುತ್ತದೆ. -ಸುಭಾಷ್ ಲಾಢಾ, ದಲಿತ ಸಂಘರ್ಷ ಸಮಿತಿ ತಾಲ್ಲೂಕ ಸಂಚಾಲಕ**

## ಕೆಲಸ ಮಾಡದ ಅಧಿಕಾರಿಗಳು ನಿರ್ಗಮಿಸಿ: ಶಾಸಕ

• ಉದಯವಾಹಿನಿ ಪುತ್ತೂರು

ಯಾವುದೇ ಅಧಿಕಾರಿ ಇರಲಿ, ಕ್ಷೇತ್ರದ ಜನರ ಕೆಲಸ ಮಾಡಬೇಕು. ಅದರಲ್ಲೂ ಬಡವರ ಕೆಲಸವನ್ನು ಚಾಚೂ ತಪ್ಪದೆ ಮಾಡಬೇಕು. ಕೆಲಸ ಮಾಡದ ಅಧಿಕಾರಿಗಳು ಇಲ್ಲಿರುವುದು ಬೇಡ. ಜನರ ಕೆಲಸ ಮಾಡುವಲ್ಲಿ ಹಿಂದೇಟು ಹಾಕಿದರೆ ಬೈಗುಳ ಕೇಳಬೇಕಾದೀತು ಎಂದು ಶಾಸಕ ಅಶೋಕ್ ರೈ ಎಚ್ಚರಿಸಿದರು.

ಪಾಣಾಜೆ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ಸಭಾಭವನದಲ್ಲಿ ನಡೆದ ಅಕ್ರಮ ಸಕ್ರಮ ಬೈಠಕ್ ಉದ್ಘಾಟಿಸಿ ಅವರು ಮಾತನಾಡಿದರು. ಚುನಾವಣಾ ಸಮಯದಲ್ಲಿ ರಾಜಕೀಯ ಪಕ್ಷದವರು, ಅಭ್ಯರ್ಥಿಗಳು ಜನರಿಗೆ ನಾನಾ ಭರವಸೆಗಳನ್ನು ನೀಡುತ್ತಾರೆ. ಚುನಾವಣೆಯ ಬಳಿಕ ಅದನ್ನು ಪೂರ್ಣವಾಗಿ ಮರೆತು ಬಿಡುತ್ತಾರೆ. ಆದರೆ ಕೊಟ್ಟ ಮಾತನ್ನು ಉಳಿಸಿಕೊಳ್ಳದಿದ್ದರೆ ಜನಪ್ರತಿನಿಧಿಗಳಿಗೆ ಜನರು ಗೌರವ ಕೊಡುವುದಿಲ್ಲ. ಕಳೆದ ಚುನಾವಣೆಯಲ್ಲಿ ನಾನು ಕ್ಷೇತ್ರದ ಜನತೆಗೆ ನೀಡಿದ್ದ 5 ಭರವಸೆಗಳ ಪೈಕಿ ಈಗಾಗಲೇ ನಾಲ್ಕನ್ನು ಈಡೇರಿಸಿದ್ದು. ಇನ್ನೊಂದು ಪ್ರಗತಿ ಹಂತದಲ್ಲಿದೆ ಎಂದರು.

ಪುತ್ತೂರಿಗೆ ಮೆಡಿಕಲ್ ಕಾಲೇಜು, ದೇವಸ್ಥಾನಗಳ ಅಭಿವೃದ್ಧಿ, ಅಕ್ರಮ-ಸಕ್ರಮ, 94ಸಿ, 94 ಸಿಸಿ ಹಕ್ಕುಪತ್ರ ವಿತರಣೆ, ನಿವೇಶನ ರಹಿತರಿಗೆ ನಿವೇಶನ ಹಂಚಿಕೆ. ತಾಲ್ಲೂಕು ಕ್ರೀಡಾಂಗಣ ಸೇರಿದಂತೆ ಹತ್ತು ಹಲವು ಅಭಿವೃದ್ಧಿ ಕೆಲಸವನ್ನು ಮಾಡಿದ್ದು, ಮುಂದಿನ ಮೂರು ವರ್ಷದಲ್ಲಿ ಪುತ್ತೂರಿನಲ್ಲಿ 30 ಸಾವಿರ ಉದ್ಯೋಗ ಸೃಷ್ಟಿಯಾಗಲಿದೆ ಎಂದರು.

ತಹಶೀಲ್ದಾರ್ ಬಿ.ಎಸ್.ಕೂಡಲಗಿ, ಅಕ್ರಮ ಸಕ್ರಮ ಸಮಿತಿ ಸದಸ್ಯರಾದ ರಾಮಣ್ಣ ಪಿಲಿಂಜ, ರೂಪರೇಖಾ ಆಳ್ವ, ಪಾಣಾಜೆ ಪಂಚಾಯಿತಿ ಅಧ್ಯಕ್ಷೆ ಮೈಮೂನತುಲ್ ಮೆಹ್ರಾ ಹಾಜರಿದ್ದರು. ಕಂದಾಯ ನಿರೀಕ್ಷಕ ಗೋಪಾಲ ಸ್ವಾಗತಿಸಿದರು. ಉಪತಹಶೀಲ್ದಾರ್ ರವಿಕುಮಾರ್ ವಂದಿಸಿದರು.


ಉದಯವಾಹಿನಿ ಚಿತ್ರ

**ಅಕ್ರಮ ಸಕ್ರಮ ಸಮಿತಿ ಸದಸ್ಯ ಮಹಮ್ಮದ್ ಬಡಗನ್ನೂರು ಮಾತನಾಡಿ, ಜಿಲ್ಲೆಯ ಬಿಜೆಪಿ ನಾಯಕರು ಶಾಸಕ ಅಶೋಕ್ ರೈ ಅವರ ಜತೆ ಸೇರಿಕೊಂಡು ಕುಮ್ಕಿ ವಿಚಾರದಲ್ಲಿ ಹೋರಾಟ ನಡೆಸಬೇಕು. -ಅಶೋಕ್ ರೈ, ಶಾಸಕ**

## ಮಾರಿಕಾಂಬಾ ಜಾತ್ರೆಗೆ ಭರದ ಸಿದ್ಧತೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಸಾಗರ

ಇಲ್ಲಿನ ಮಾರಿಕಾಂಬಾ ದೇವಿ ಜಾತ್ರೆ ಫೆ.3ರಿಂದ 9 ದಿನ ನಡೆಯಲಿದ್ದು, ಸಿದ್ಧತೆಗಳು ಭರದಿಂದ ಸಾಗಿವೆ ಎಂದು ಶಾಸಕ ಗೋಪಾಲಕೃಷ್ಣ ಬೇಳೂರು ಹೇಳಿದರು. ಇಲ್ಲಿನ ಉಪವಿಭಾಗಾಧಿಕಾರಿ ಕಚೇರಿಯಲ್ಲಿ ನಡೆದ ಅಧಿಕಾರಿಗಳ, ಸಂಘ ಸಂಸ್ಥೆಗಳ ಪ್ರಮುಖರ ಸಮಾಲೋಚನಾ ಸಭೆಯಲ್ಲಿ ಮಾತನಾಡಿದರು. 9 ದಿನಗಳ ಅವಧಿಯಲ್ಲಿ ಅಂದಾಜು 25 ಲಕ್ಷ ಜನರು ಭೇಟಿ ನೀಡುವ ನಿರೀಕ್ಷೆ ಇದೆ. ಮೊದಲ ದಿನ ಮಾರಿಕಾಂಬಾ ದೇವಿಯ ತವರುಮನೆ ದೇವಾಲಯದಲ್ಲಿ ಬೆಳಿಗ್ಗೆ 5ಕ್ಕೆ ಮೊದಲ ಪೂಜೆ ನಡೆಯಲಿದೆ. ದರ್ಶನಕ್ಕೆ ವಿಶೇಷ ಪಾಸ್ ವ್ಯವಸ್ಥೆ ಇಲ್ಲ. ಅಂಗವಿಕಲರು, ವೃದ್ಧರಿಗೆ ಪ್ರತ್ಯೇಕ ವ್ಯವಸ್ಥೆ ಮಾಡಲಾಗುವುದು. ಉಳಿದಂತೆ ಸರದಿ ಸಾಲಿನಲ್ಲಿ ದೇವಿಯ ದರ್ಶನ ಪಡೆಯಬೇಕು ಎಂದು ಅವರು ತಿಳಿಸಿದರು. ಜಾತ್ರೆಯ ವೇಳೆ ಪ್ರತಿ ದಿನವೂ ಹೆಚ್ಚಿನ ಪ್ರಮಾಣದಲ್ಲಿ ತ್ಯಾಜ್ಯ ಸಂಗ್ರಹವಾಗುತ್ತದೆ. ಸಕಾಲದಲ್ಲಿ ಸಮರ್ಪಕ ವಿಲೇವಾರಿಗೆ ಹೆಚ್ಚುವರಿ ಪೌರ ಕಾರ್ಮಿಕರನ್ನು ನೇಮಕ ಮಾಡಿಕೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಪ್ರಭುಲಿಂಗ ಕವಳಿಕಟ್ಟಿ ಹೇಳಿದರು.

ರಥದ ಸುರಕ್ಷತೆಯ ಬಗ್ಗೆ ಜಾತ್ರಾ ಸಮಿತಿಯವರು ಸಂಬಂಧಪಟ್ಟ ಇಲಾಖೆಯಿಂದ ದೃಢೀಕರಣ ಪತ್ರ ಪಡೆಯಬೇಕು. ವಾಹನಗಳ ನಿಲುಗಡೆಗೆ ಪ್ರತ್ಯೇಕ ವ್ಯವಸ್ಥೆ ಮಾಡಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್ ಬಿ. ತಿಳಿಸಿದರು. ಈ ಭಾಗದಲ್ಲಿ ಗಾಂಜಾ, ಮಟ್ಕಾ, ಇಸ್ಪೀಟ್ ದಂಧೆ ನಿಲ್ಲುವಂತೆ ಮಾಡಬೇಕು ಎಂದು ಶಾಸಕ ಬೇಳೂರು ಮಾಡಿದ ಮನವಿಗೆ ಪ್ರತಿಕ್ರಿಯಿಸಿದ ಅವರು, ಗಾಂಜಾ ವಹಿವಾಟು ತಡೆಯಲು ವಿಶೇಷ ನಿಗಾ ವಹಿಸಲಾಗಿದೆ. ಮಟ್ಕಾ, ಇಸ್ಪೀಟ್ ದಂಧೆ ನಡೆಸುವವರ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ ಕಲಂ 112 ರಡಿ ಸಂಘಟಿತ ಅಪರಾಧ ಎಸಗುವ ಆರೋಪದ ಮೇರೆಗೆ ಪ್ರಕರಣ ದಾಖಲಿಸಲಾಗುವುದು ಎಂದರು.

## ಪ್ರಧಾನಮಂತ್ರಿ ಆವಾಸ್ ಯೋಜನೆ: ಜ.24ರಂದು ಮನೆಗಳ ಹಸ್ತಾಂತರ

• ಉದಯವಾಹಿನಿ ಹುಬ್ಬಳ್ಳಿ

ನಗರದ ಮಂಟೂರು ರಸ್ತೆಯಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ (ಪಿಎಂಎವೈ) ನಿರ್ಮಿಸಿರುವ 1,008 ಮನೆಗಳು ಸೇರಿ ರಾಜ್ಯದ ವಿವಿಧೆಡೆ ನಿರ್ಮಿಸಿರುವ ಒಟ್ಟು 42,345 ಮನೆಗಳ ಹಸ್ತಾಂತರ ಕಾರ್ಯಕ್ರಮವನ್ನು ಜನವರಿ 24ರಂದು ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ' ಎಂದು ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಹೇಳಿದರು.

ಮುಖ್ಯಮಂತ್ರಿಯವರ ವಿಶೇಷ ಅನುದಾನದಡಿ ಮನೆಗಳನ್ನು ನಿರ್ಮಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮನೆಗಳ ಹಸ್ತಾಂತರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಅವರು ವಿಡಿಯೋ ಕಾನ್ಫರೆನ್ಸ್ ಮೂಲಕ ಸಂಡೂರು, ಗದಗ, ಬಳ್ಳಾರಿ, ಚಿತ್ರದುರ್ಗ, ತುಮಕೂರು ಸೇರಿ ವಿವಿಧೆಡೆ ನಿರ್ಮಿಸಿದ ಮನೆಗಳನ್ನು ಲೋಕಾರ್ಪಣೆ ಮಾಡುವರು. ಇದೇ ವೇಳೆ ಮನೆಗಳ ಹಕ್ಕುಪತ್ರ ವಿತರಣಾ ಕಾರ್ಯಕ್ರಮವನ್ನೂ ಹಮ್ಮಿಕೊಳ್ಳಲಾಗಿದೆ' ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಕೇಂದ್ರ ಸಚಿವ ಪ್ರಹ್ಲಾದ ಜೋಶಿ, ವಿಧಾನಸಭೆ ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ ಹಾಗೂ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಕೋರಲಾಗಿದೆ ಎಂದರು ಅವರು ತಿಳಿಸಿದರು.

ರಾಜ್ಯದಲ್ಲಿನ ವಸತಿ ರಹಿತ ಬಡವರಿಗೆ ಕನಿಷ್ಠ ಸೌಲಭ್ಯಗಳನ್ನು ಹೊಂದಿರುವ ಮನೆಗಳನ್ನು ನೀಡಬೇಕು ಎಂಬ ಉದ್ದೇಶದಿಂದ ಆರಂಭದಲ್ಲಿ ಆರ್ಥಿಕ ಇಲಾಖೆಯಿಂದ ಅನುಮತಿ ಪಡೆದು, ನಂತರ ಮುಖ್ಯಮಂತ್ರಿ ಅವರು ಮನವೊಲಿಸಿ ಸಚಿವ ಸಂಪುಟದಲ್ಲಿ ಈ ಬಗ್ಗೆ ಪ್ರಸ್ತಾಪಿಸಲಾಯಿತು' ಎಂದು ಅವರು ತಿಳಿಸಿದರು. ರಾಜ್ಯದಲ್ಲಿನ ವಸತಿ ರಹಿತ ಬಡವರಿಗೆ ಕನಿಷ್ಠ ಸೌಲಭ್ಯಗಳನ್ನು ಹೊಂದಿರುವ ಮನೆಗಳನ್ನು ನೀಡಬೇಕು ಎಂಬ ಉದ್ದೇಶದಿಂದ ಆರಂಭದಲ್ಲಿ ಆರ್ಥಿಕ ಇಲಾಖೆಯಿಂದ ಅನುಮತಿ ಪಡೆದು, ನಂತರ ಮುಖ್ಯಮಂತ್ರಿ ಅವರು ಮನವೊಲಿಸಿ ಸಚಿವ ಸಂಪುಟದಲ್ಲಿ ಈ ಬಗ್ಗೆ ಪ್ರಸ್ತಾಪಿಸಲಾಯಿತು' ಎಂದು ಅವರು ತಿಳಿಸಿದರು. 2024ರಲ್ಲಿ ಮೊದಲ ಹಂತದಲ್ಲಿ 36,789 ಮನೆಗಳನ್ನು ಹಂಚಿಕೆ ಮಾಡಲಾಯಿತು. ನಂತರ ಎರಡನೇ ಹಂತದಲ್ಲಿ 42,345 ಮನೆಗಳನ್ನು ಹಂಚಿಕೆ ಮಾಡಲಾಗುವುದು. ಇದರಲ್ಲಿಯೇ ಧಾರವಾಡ ಜಿಲ್ಲೆಯಲ್ಲಿ ನಿರ್ಮಿಸಿದ 2,780 ಮನೆಗಳೂ ಸೇರಿವೆ. ಮೂರನೇ ಹಂತದಲ್ಲಿ ಹೆಚ್ಚುವರಿಯಾಗಿ 30 ಸಾವಿರ ಮನೆಗಳನ್ನು ಬರುವ ಮೇ ತಿಂಗಳಲ್ಲಿ ಹಂಚಿಕೆ ಮಾಡಲಾಗುವುದು. ರಾಜೀವ್ ಗಾಂಧಿ ಆಶ್ರಯ ಯೋಜನೆಯಡಿ 47,860 ಮನೆಗಳನ್ನೂ ಶೀಘ್ರದಲ್ಲಿಯೇ ಹಂಚಿಕೆ ಮಾಡಲಾಗುವುದು ಎಂದು ವಿವರಿಸಿದರು.

ಪ್ರತಿ ಮನೆಯನ್ನು ರೂ.7.50 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾಗಿದೆ. ಇದರಲ್ಲಿ ಕೇಂದ್ರ ಸರ್ಕಾರದಿಂದ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ರೂ. 1.50ಲಕ್ಷ ಸಬ್ಸಿಡಿ ನೀಡಲಾಗಿದೆ. ಆದರೆ, ಇದಕ್ಕೂ ಶೇ 18ರಷ್ಟು ಜಿಎಸ್‌ಟಿ ಹಾಕಲಾಗಿದೆ. ಫಲಾನುಭವಿಗಳಿಂದ ರೂ.1ಲಕ್ಷ ಪಡೆದು, ಉಳಿದ ಹಣವನ್ನು ರಾಜ್ಯ ಸರ್ಕಾರದಿಂದಲೇ ಭರಿಸಿ, ಮನೆ ನಿರ್ಮಿಸಲಾಗಿದೆ ಎಂದರು.

ಈ ಹಿಂದೆ ಇದ್ದ ಬಿಜೆಪಿ, ಜೆಡಿಎಸ್ ಸರ್ಕಾರದ ಅವಧಿಯಲ್ಲಿ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ಒಂದೇ ಒಂದು ಮನೆ ನಿರ್ಮಿಸಿಕೊಟ್ಟಿಲ್ಲ. ಒಂದು ವೇಳೆ ಈ ಬಗ್ಗೆ ಸಾಬೀತುಪಡಿಸಿದರೆ ನಾನು ರಾಜಕೀಯದಿಂದ ನಿವೃತ್ತಿ ಪಡೆಯುತ್ತೇನೆ' ಎಂದರು.

**ಬಿಲ್ಡರ್‌ಗಳ ಸಹಯೋಗದಲ್ಲಿ ಸರ್ಕಾರದ ನಿವೇಶನದಲ್ಲೇ 'ಸಾರ್ವಜನಿಕ-ಖಾಸಗಿ ಸಹಭಾಗಿತ್ವ' (ಪಿಪಿಪಿ) ಮಾದರಿಯಲ್ಲಿ ವ್ಯವಸ್ಥಿತ ಮತ್ತು ಅಗತ್ಯ ಸೌಲಭ್ಯ ಒಳಗೊಂಡಿರುವ ಮನೆಗಳನ್ನು ನಿರ್ಮಿಸಿ ಫಲಾನುಭವಿಗಳಿಗೆ ಹಂಚುವ ಚಿಂತನೆ ಇದೆ. -ಜಮೀರ್ ಅಹಮದ್ ಖಾನ್**



## ಆಲಮಟ್ಟಿ ಜಲಾಶಯ ಭದ್ರತೆ ಪರಿಶೀಲನೆ

• ಉದಯವಾಹಿನಿ ಆಲಮಟ್ಟಿ


ಉದಯವಾಹಿನಿ ಚಿತ್ರ

ಅಲಮಟ್ಟಿ ಜಲಾಶಯದ ಭದ್ರತೆಗೆ ನಿಯೋಜಿಸಿದ ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ಪಡೆಯ (ಕೆಎಸ್ ಐಎಸ್ ಎಫ್) ಕಾರ್ಯವೈಖರಿ ಹಾಗೂ ಭದ್ರತೆಯ ಬಗ್ಗೆ ಧಾರವಾಡ ಮೂರನೇ ಪಡೆಯ ಕಮಾಂಡೆಂಟ್ ಗುರುನಾಥ ಪರಿಶೀಲನೆ ನಡೆಸಿದರು.

ಆಲಮಟ್ಟಿ ಜಲಾಶಯ, ಪ್ರವೇಶ ದ್ವಾರ, ನಾನಾ ಕಡೆ ನಿಗದಿಗೊಳಿಸಿರುವ ಪೊಲೀಸ್ ಚೆಕ್ ಪೋಸ್ಟ್, ಚೆಕ್ ಪಾಯಿಂಟ್‌ಗಳನ್ನು ಪರಿಶೀಲಿಸಿದರು. ಅಲಮಟ್ಟಿ ಪೆಟ್ರೋಲ್ ಪಂಪ್ ಬಳಿಯಿಂದ ಪ್ರವೇಶಿಸುವ ಪ್ರತಿ ವಾಹನಗಳ ಸಂಖ್ಯೆಯನ್ನು ಡೈರಿಯಲ್ಲಿ ನಮೂದಿಸಬೇಕು, ವಾಹನಗಳ ಡಿಕ್ಕಿ ತೆಗೆದು ಪರಿಶೀಲಿಸಬೇಕು, ಸಾರ್ವಜನಿಕರೊಂದಿಗೆ ಸೌಮ್ಯದಿಂದ ವರ್ತಿಸಬೇಕು ಎಂದು ಸೂಚಿಸಿದರು.

ಕೆಬಿಜೆಎನ್ ಎಲ್ ಮುಖ್ಯ ಎಂಜಿನಿಯರ್ ಡಿ. ಬಸವರಾಜ ಅವರೊಂದಿಗೆ ಚರ್ಚಿಸಿದ ಗುರುನಾಥ, ಭದ್ರತೆ ಕಟ್ಟುನಿಟ್ಟುಗೊಳಿಸಲು ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆ ಚರ್ಚಿಸಿದರು. ಸದ್ಯ ಅಲಮಟ್ಟಿ ಜಲಾಶಯದ ಹಿಂಭಾಗದಲ್ಲಿ ಬೋಟ್ ಇದೆ. ಜಲಾಶಯದ ಮುಂಭಾಗದಲ್ಲಿಯೂ ಒಂದು ಬೋಟ್ ವ್ಯವಸ್ಥೆ ಮಾಡಲು ತಿಳಿಸಿದರು. ಬೋಟ್ ನೀಡಿದರೆ ಜಲಾಶಯದ ನಿಷೇಧಿತ ಸ್ಥಳಗಳಲ್ಲಿ ಮೀನುಗಾರಿಕೆ ಸೇರಿದಂತೆ ನಾನಾ ಕ್ರಮಗಳನ್ನು ತಡೆಗಟ್ಟಲು ಸಹಾಯವಾಗಲಿದೆ ಎಂದರು. ಇನ್ನೊಂದು ಬೋಟ್ ಒದಗಿಸುವ ಕ್ರಮ ಕೈಗೊಳ್ಳುವ ಭರವಸೆಯನ್ನು ಡಿ.ಬಸವರಾಜ ನೀಡಿದರು.

# ಸಿಬ್ಬಂದಿ ಕೊರತೆ; ಜನರ ಪರದಾಟ ಸಕಾಲಕ್ಕೆ ಆಗುತ್ತಿಲ್ಲ ಕೆಲಸಗಳು

### ಕೂಡಲೇ ಸರ್ಕಾರ ನಿಗದಿತ ಹುದ್ದೆಗಳನ್ನು ಭರ್ತಿ ಮಾಡಬೇಕು ಎಂದು ಸಾರ್ವಜನಿಕರು ಆಗ್ರಹ

• ಉದಯವಾಹಿನಿ ಸಿರುಗುಪ್ಪ

ಇಲ್ಲಿನ ತಾಲ್ಲೂಕು ಕಚೇರಿಯು ಸಿಬ್ಬಂದಿ ಕೊರತೆಯಿಂದ ಬಳಲುತ್ತಿದ್ದು, ನಾಗರಿಕರು ತಮ್ಮ ಕೆಲಸ ಕಾರ್ಯಗಳಿಗೆ ಪರದಾಡುವಂತಾಗಿದೆ. ಸಿಬ್ಬಂದಿ ಕೊರತೆಯಿಂದಾಗಿ ಸಾರ್ವಜನಿಕರ ಕೆಲಸಗಳು ವಿಳಂಬವಾಗುತ್ತಿವೆ. ಇರುವ ಸಿಬ್ಬಂದಿಗೆ ಕೆಲಸದ ಒತ್ತಡ ಹೆಚ್ಚಾಗಿ, ಬೇಜವಾಬ್ದಾರಿ ಹೆಚ್ಚಾಗುತ್ತಿದ್ದು, ಇದು ಭ್ರಷ್ಟಾಚಾರಕ್ಕೆ ದಾರಿ ಮಾಡಿಕೊಟ್ಟಿದೆ ಎಂದು ಸಾರ್ವಜನಿಕರು ಬೇಸರ ವ್ಯಕ್ತಪಡಿಸುತ್ತಿದ್ದಾರೆ.

ಜನಸಾಮಾನ್ಯರಿಗೆ ಅತ್ಯಂತ ಹತ್ತಿರವಾಗಿ ಸರ್ಕಾರದ ಹಾಗೂ ವೈಯಕ್ತಿಕ ಕೆಲಸ ಕಾರ್ಯಗಳಿಗೆ ಗ್ರಾಮ ಆಡಳಿತಾಧಿಕಾರಿಗಳು ಸಾರ್ವಜನಿಕರಿಗೆ ಸ್ಪಂದಿಸುತ್ತಾರೆ. ಆದರೆ ಇಲ್ಲೂ ಅತಿ ಹೆಚ್ಚಿನ ಹುದ್ದೆಗಳು ಖಾಲಿ ಉಳಿದಿವೆ. ತಹಶೀಲ್ದಾರ್ ಗ್ರೇಡ್ 2 ಹುದ್ದೆ ಖಾಲಿ ಇದೆ. ಶಿರಸ್ತೇದಾರರ ಮೂರು ಹುದ್ದೆಗಳಲ್ಲಿ ಎರಡು ಖಾಲಿ ಇವೆ. ಪ್ರಥಮ ದರ್ಜೆ ಸಹಾಯಕರ ಆರು ಹುದ್ದೆಗಳಲ್ಲಿ ಇಬ್ಬರನ್ನು ನಿಯೋಜನೆ ಮಾಡಲಾಗಿದೆ. ಆಹಾರ ಇಲಾಖೆಯ ಶಿರಸ್ತೇದಾರ ಹಾಗೂ ದ್ವಿತೀಯ ದರ್ಜೆ ಸಹಾಯಕರ ತಲಾ ಒಂದು ಹುದ್ದೆ ಖಾಲಿ ಇದೆ.

14 ಜನ ದ್ವಿತೀಯ ದರ್ಜೆ ಸಹಾಯಕರಲ್ಲಿ ಆರು ಜನರನ್ನು ಇತರೆಡೆಗೆ ನಿಯೋಜನೆ ಮಾಡಲಾಗಿದೆ. ಬೆರಳಚ್ಚುಗಾರ ಹಾಗೂ ವಾಹನ ಚಾಲಕರ ಹುದ್ದೆಗಳು ಖಾಲಿ ಇವೆ. ಇದಲ್ಲದೆ ಭೂಮಿ ಕೇಂದ್ರದ ಆರು ಹುದ್ದೆಗಳಲ್ಲಿ ಒಂದು ಹುದ್ದೆ ಖಾಲಿಯಿದ್ದು ಒಬ್ಬರನ್ನು ಇತರೆಡೆ ನಿಯೋಜಿಸಲಾಗಿದೆ. ಸಾಂಖಿಕ ನಿರೀಕ್ಷಕರನ್ನು ಸಹ ಬೇರೆಡೆ ನಿಯೋಜಿಸಲಾಗಿದೆ. ಗ್ರೂಪ್ ಡಿ ನೌಕರರ ಆರು ಹುದ್ದೆ ಖಾಲಿ ಇವೆ. ಒಟ್ಟಾರೆ 52 ಅಧಿಕಾರಿಗಳು ಕಾರ್ಯನಿರ್ವಹಿಸಬೇಕಾದ ತಾಲ್ಲೂಕು ಕಚೇರಿಯಲ್ಲಿ 14 ಹುದ್ದೆ ಖಾಲಿ ಇವೆ. ಇಲ್ಲಿ ಕಾರ್ಯ ನಿರ್ವಹಿಸುತ್ತಿದ್ದ 10 ನೌಕರರನ್ನು ಜಿಲ್ಲಾ ಕೇಂದ್ರದ ವಿವಿಧ ಇಲಾಖೆಗಳಿಗೆ ನಿಯೋಜಿಸಲಾಗಿದೆ. ಇದಕ್ಕೆ ಪ್ರತಿಯಾಗಿ ಕೇವಲ 7 ಗ್ರಾಮ ಆಡಳಿತಾಧಿಕಾರಿಗಳ ಸೇವೆಯನ್ನು ಎರವಲು ಪಡೆದು ಕಚೇರಿಯಲ್ಲಿ ಕಾರ್ಯ ನಿರ್ವಹಣೆ ಮಾಡುತ್ತಿದ್ದಾರೆ. ಈಚೆಗೆ ಅಭಿಲೇಖಾಲಯ ವಿಭಾಗದಲ್ಲಿ ಲಂಚ ಪಡೆದ ವಿಡಿಯೋ ಭಾರಿ ಪ್ರಮಾಣದಲ್ಲಿ ಹರಿದಾಡಿದ ಪರಿಣಾಮವಾಗಿ ಇಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿದ್ದ ಮೂವರನ್ನು ಅಮಾನತುಗೊಳಿಸಿ, ವರ್ಗಾವಣೆ ಮಾಡಲಾಗಿದೆ.

ತಾಲ್ಲೂಕು ಕಚೇರಿಯಲ್ಲಿ ಸಿಬ್ಬಂದಿ ಕೊರತೆಯಿಂದ ಜನ ಸಾಮಾನ್ಯರಿಗೆ ತೀವ್ರ ತೊಂದರೆಯಾಗಿದೆ. ವಿದ್ಯಾರ್ಥಿಗಳಿಗೆ ಅಗತ್ಯವಿರುವ ಜಾತಿ, ಆದಾಯ ಪ್ರಮಾಣ ಪತ್ರ, ಸೇರಿದಂತೆ ವಿವಿಧ ದಾಖಲೆಗಳು ಸಿಗದೇ ವಿದ್ಯಾರ್ಥಿಗಳು ಮತ್ತು ಪೋಷಕರು ಅಲೆದಾಡುವಂತಾಗಿದೆ. ಕೂಡಲೇ ಸರ್ಕಾರ ನಿಗದಿತ ಹುದ್ದೆಗಳನ್ನು ಭರ್ತಿ ಮಾಡಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ತಾಲ್ಲೂಕು ಕಚೇರಿಯಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುವ ಸಿಬ್ಬಂದಿಯನ್ನು ಜಿಲ್ಲಾಡಳಿತವು ತಮ್ಮ ಕಚೇರಿಗೆ ನಿಯೋಜನೆ ಮಾಡಿದ್ದು ಇಲ್ಲಿನ ಕೆಲಸ ಕಾರ್ಯಗಳಿಗೆ ತೊಂದರೆಯಾಗಿದೆ. ಜಿಲ್ಲಾಡಳಿತ ಇಲ್ಲಿನ ಸಿಬ್ಬಂದಿಯನ್ನು ಬಿಡುಗಡೆಗೊಳಿಸಬೇಕು ಎಂದು ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಯು. ವೆಂಕೋಬ ಆಗ್ರಹಿಸಿದ್ದಾರೆ. ಸಮಸ್ಯೆಗೆ ಪರಿಹಾರ ಸಿಗದಿದ್ದರೆ ಕಾನೂನು ಹೋರಾಟದ ಎಚ್ಚರಿಕೆ ನೀಡಲಾಗಿದೆ. ಒಟ್ಟಾರೆಯಾಗಿ, ಸಿಬ್ಬಂದಿ ಕೊರತೆ ತಹಶೀಲ್ದಾರ್ ಕಚೇರಿಗಳಲ್ಲಿ ಸಾರ್ವಜನಿಕರಿಗೆ ಸಮಸ್ಯೆಯಾಗಿದ್ದು, ಇದನ್ನು ನಿವಾರಿಸಲು ಕಟ್ಟುನಿಟ್ಟಿನ ಕ್ರಮದ ಅಗತ್ಯವಿದೆ.



ಉದಯವಾಹಿನಿ ಚಿತ್ರ

**ಹೆಚ್ಚಿನ ಹುದ್ದೆಗಳು ಖಾಲಿ**

**ಸಿಬ್ಬಂದಿ ಕೊರತೆಗೆ ಸಂಬಂಧಿಸಿ ಮೇಲಧಿಕಾರಿಗಳಿಗೆ ಲಿಖಿತವಾಗಿ ದೂರು ನೀಡಲಾಗಿದೆ. ಸಾರ್ವಜನಿಕರಿಗೆ ತೊಂದರೆಯಾಗದ ರೀತಿಯಲ್ಲಿ ಪರ್ಯಾಯ ವ್ಯವಸ್ಥೆ ಕಲ್ಪಿಸಲಾಗುವುದು. -ಗೌಸಿಯಾ ಬೇಗಂ, ತಹಶೀಲ್ದಾರರು, ಸಿರುಗುಪ್ಪ**

# ಇಸ್ರೇಲ್ ವಿರೋಧ ಲೆಕ್ಕಿಸದೆ ಗಾಜಾ ಶಾಂತಿ ಮಂಡಳಿ ಸದಸ್ಯತ್ವ ಪಡೆದ ಪಾಕಿಸ್ತಾನ

1 ಬಿಲಿಯನ್ ಡಾಲರ್ ಎಲ್ಲಿದೆ?




**ದಾವೋಸ್:** ಇಸ್ರೇಲ್ ಮತ್ತು ಪ್ಯಾಲೆಸ್ಟೈನ್ ನಡುವಿನ ಯುದ್ಧ ಭೂಮಿಯಾಗಿರುವ ಗಾಜಾದಲ್ಲಿ ಶಾಶ್ವತ ಶಾಂತಿ ನೆಲೆಸುವಂತೆ ಮಾಡುವ ಪ್ರಯತ್ನದ ಭಾಗವಾಗಿ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಗಾಜಾ ಶಾಂತಿ ಮಂಡಳಿಯ ರಚನೆ ಮಾಡಿದ್ದಾರೆ. ಅಲ್ಲದೇ ಈ ಮಂಡಳಿಯನ್ನು ಸೇರುವಂತೆ ಜಗತ್ತಿನ ಅನೇಕ ದೇಶಗಳಿಗೆ ಆಹ್ವಾನ ಪತ್ರ ಕಳುಹಿಸಿದ್ದಾರೆ. ಡೊನಾಲ್ಡ್ ಟ್ರಂಪ್ ಅವರ ಈ ಆಹ್ವಾನವನ್ನು ಒಪ್ಪಿಕೊಂಡಿರುವ ನೆರೆಯ ದೇಶ ಪಾಕಿಸ್ತಾನ, ಗಾಜಾ ಶಾಂತಿ ಮಂಡಳಿ ಸೇರಿಕೊಳ್ಳುತ್ತಿರುವುದಾಗಿ ಅಧಿಕೃತವಾಗಿ ಘೋಷಣೆ ಮಾಡಿದೆ. ಇಸ್ರೇಲ್ ವಿರೋಧದ ಹೊರತಾಗಿಯೂ ಪಾಕಿಸ್ತಾನಕ್ಕೆ ಗಾಜಾ ಶಾಂತಿ ಮಂಡಳಿ ಸದಸ್ಯತ್ವ ದೊರೆಯುತ್ತಿದೆ. ಈ ಕುರಿತು ಅಧಿಕೃತ ಪ್ರಕಟಣೆ ಹೊರಡಿಸಿರುವ ಪಾಕಿಸ್ತಾನ ವಿದೇಶಾಂಗ ಸಚಿವಾಲಯ, ಗಾಜಾದಲ್ಲಿ ಶಾಶ್ವತ ಶಾಂತಿ ಸಾಧಿಸುವ ಉದ್ದೇಶದಿಂದ ಪಾಕಿಸ್ತಾನವು ಶಾಂತಿ ಮಂಡಳಿಗೆ ಸೇರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆಹ್ವಾನವನ್ನು ಸ್ವೀಕರಿಸಿದೆ ಎಂದು ಸ್ಪಷ್ಟಪಡಿಸಿದೆ. ಅಮೆರಿಕದ ಆಹ್ವಾನ ಸ್ವೀಕರಿಸಿದ ಮೊದಲ ದೇಶವಾಗಿ ಪಾಕಿಸ್ತಾನ ಹೊರಹೊಮ್ಮಿದೆ ಸ್ಥಿರತೆಯನ್ನು ಉತ್ತೇಜಿಸಲು, ಸಂಘರ್ಷದಿಂದ ಪ್ರಭಾವಿತವಾಗಿರುವ, ಬೆದರಿಕೆ ಇರುವ ಪ್ರದೇಶಗಳಲ್ಲಿ ಶಾಶ್ವತ ಶಾಂತಿಯನ್ನು ಖಚಿತಪಡಿಸಿಕೊಳ್ಳಲು ಪ್ರಯತ್ನಿಸುವ ಅಂತಾರಾಷ್ಟ್ರೀಯ ಸಂಸ್ಥೆಯನ್ನು ಸೇರಿಕೊಳ್ಳಲು ಸಂತಸವಾಗುತ್ತಿದೆ. ಗಾಜಾದಲ್ಲಿ ಶಾಶ್ವತ ಶಾಂತಿ ನೆಲೆಸುವಂತೆ ಮಾಡುವ ಪ್ರಯತ್ನಗಳಿಗೆ ಕೊಡುಗೆ ನೀಡುವುದು ಗೌರವದ ವಿಷಯ ಎಂದು ಪಾಕಿಸ್ತಾನ ಸರ್ಕಾರ ಹೇಳಿದೆ.

ಗಾಜಾ ಶಾಂತಿ ಮಂಡಳಿ ಸೇರುವಂತೆ ಭಾರತಕ್ಕೆ ಅಧಿಕೃತ ಆಹ್ವಾನ ಕಳುಹಿಸಲಾಗಿದೆ. ಆದರೆ ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಈ ವಿಚಾರವಾಗಿ ಇದುವರೆಗೂ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಆದಾಗ್ಯೂ, ಭಾರತ ಈ ಮಂಡಳಿಯನ್ನು ಸೇರಲಿದೆ ಎಂಬ ಭರವಸೆಯನ್ನು ಅಮೆರಿಕ ಇಟ್ಟುಕೊಂಡಿದೆ. ಪಾಕಿಸ್ತಾನ ಗಾಜಾ ಶಾಂತಿ ಮಂಡಳಿ ಸೇರುವುದನ್ನು ಇಸ್ರೇಲ್ ವಿರೋಧಿಸುತ್ತಿದೆ, ಏಕೆಂದರೆ ಪಾಕಿಸ್ತಾನವು ಆರಂಭದಿಂದಲೂ ಪ್ಯಾಲೆಸ್ಟೈನ್ ಪರವಾಗಿ ನಿಂತಿದ್ದು, ಗಾಜಾಪಟ್ಟಿಯಿಂದ ಇಸ್ರೇಲ್ ತನ್ನ ಸೇನೆಯನ್ನು ಹಿಂಪಡೆಯಬೇಕು ಎಂದು ಒತ್ತಾಯಿಸುತ್ತಿದೆ. ಅಲ್ಲದೇ ಪಾಕಿಸ್ತನದ ನಾಗರಿಕ ಸಮಾಜ ಕೂಡ ಪ್ಯಾಲೆಸ್ಟೈನ್ ರಾಷ್ಟ್ರ ರಚನೆಯ ಪರವಾಗಿದ್ದು, ಹಮಾಸ್‌ಗೆ ಬಹಿರಂಗ ಬೆಂಬಲ ವ್ಯಕ್ತಪಡಿಸುತ್ತದೆ. ಆದರೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇಸ್ರೇಲ್ ವಿರೋಧದ ನಡುವೆಯೂ ಪಾಕಿಸ್ತಾನಕ್ಕೆ ಗಾಜಾ ಶಾಂತಿ ಮಂಡಳಿ ಸೇರುವಂತೆ ಆಹ್ವಾನ ನೀಡಿದ್ದರು.

ಪಾಕಿಸ್ತಾನ ಇದೀಗ ಈ ಆಹ್ವಾನವನ್ನು ಸ್ವೀಕರಿಸಿದೆ. ನಿಯಮದ ಪ್ರಕಾರ ಗಾಜಾ ಶಾಂತಿ ಮಂಡಳಿ ಶಾಶ್ವತ ಸದಸ್ಯತ್ವ ಪಡೆಯುವ ಯಾವುದೇ ರಾಷ್ಟ್ರ 1 ಬಿಲಿಯನ್ ಅಮೆರಿಕನ್ ಡಾಲರ್ ಹಣವನ್ನು ಪಾವತಿಸಬೇಕು. ಆದರೆ ಪಾಕಿಸ್ತಾನ ಸಾಮಾನ್ಯ ಸದಸ್ಯತ್ವ ಪಡೆದುಕೊಂಡಿರುವ ಸಾಧ್ಯತೆ ಹೆಚ್ಚಿದೆ. ಇನ್ನು ಫ್ರಾನ್ಸ್ ಗಾಜಾ ಶಾಂತಿ ಮಂಡಳಿ ಸೇರದಿರುವ ತೀರ್ಮಾನ ಮಾಡಿದೆ. ಇದರಿಂದ ಕೆರಳಿರುವ ಡೊನಾಲ್ಡ್ ಟ್ರಂಪ್, ಫ್ರೆಂಚ್ ವೈನ್, ಶಾಂಪೇನ್ ಮೇಲೆ ಶೇ. 200ರಷ್ಟು ಸುಂಕ ವಿಧಿಸುವುದಾಗಿ ಬೆದರಿಕೆ ಹಾಕಿದ್ದಾರೆ. ಇಷ್ಟಕ್ಕೆ ಸುಮ್ಮನಾಗದ ಅಮೆರಿಕ ಅಧ್ಯಕ್ಷರು, ತಮ್ಮ ದಾವೋಸ್ ಭಾಷಣದಲ್ಲಿ ಫ್ರಾನ್ಸ್ ಅಧ್ಯಕ್ಷ ಇಮ್ಯಾನ್ಯುಯೆಲ್ ಮ್ಯಾಕ್ರನ್ ಅವರು ಧರಿಸಿದ್ದ ಕನ್ನಡಕದ ಬಗ್ಗೆ ಲೇವಡಿ ಕೂಡ ಮಾಡಿದ್ದಾರೆ.

# ಸಿಂಗಾಪುರದ ವೃಕ್ಷಮಾತೆ ನಿಧನ

**ಸಿಂಗಾಪುರ್:** ಕರ್ನಾಟಕದ ಮೂಲದ ಸಿಂಗಾಪುರದ ಪರಿಸರ ಪ್ರೇಮಿ ಕೀರ್ತಿದಾ ಮೆಕಾನಿ ಅವರು ಬುಧವಾರ ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ. 66 ವರ್ಷದ ಮೆಕಾನಿ, ಸಿಂಗಾಪುರದ ಪರಿಸರ ಸುಸ್ಥಿರತೆ, ಸಮುದಾಯ ಸೇವೆ ಮತ್ತು ಸಾಂಸ್ಕೃತಿಕ ಪರಂಪರೆಯಲ್ಲಿ ಹೆಚ್ಚು ಗುರುತಿಸಿಕೊಂಡಿದ್ದರು. ಪರಿಸರ ಕಾರ್ಯಕ್ಕಾಗಿ ಸಿಂಗಾಪುರದ ಅಧ್ಯಕ್ಷೀಯ ಪ್ರಶಸ್ತಿ ಪಡೆದಿರುವ ಇವರು, 2024ರಲ್ಲಿ ಸಿಂಗಾಪುರದ ಮಹಿಳಾ ಹಾಲ್ ಆಫ್ ಫೇಮ್‌ಗೂ ಭಾಜನರಾಗಿದ್ದರು. ದ್ವೀಪ ರಾಷ್ಟ್ರದ ಪರಿಸರ, ಸಮುದಾಯ ಉದ್ಯಾನಗಳು, ಶಿಕ್ಷಣ ಸಂಸ್ಥೆಗಳು ಮತ್ತು ಸಾಂಸ್ಕೃತಿಕ ಹೆಗ್ಗುರುತುಗಳಲ್ಲಿ ವಿಶೇಷ ಛಾಪು ಮೂಡಿಸಿದ್ದರು ಎಂದು ಆನ್‌ಲೈನ್ ಟ್ಯಾಬ್ಲಾಯ್ಡ್ ತಬಲಾ ವರದಿ ಮಾಡಿದೆ.



ವೃಕ್ಷ ಮಹಿಳೆ ಎಂದು ಕರೆಯಲ್ಪಡುತ್ತಿದ್ದ ಮೆಕಾನಿ ನಿಧನ ಸಿಂಗಾಪುರದ ಪರಿಸರ, ಕಲೆ ಮತ್ತು ನಾಗರಿಕ ಸಮುದಾಯಕ್ಕೆ ನಷ್ಟ ಉಂಟುಮಾಡಿದೆ. ಮೂರು ದಶಕಗಳಿಗೂ ಹೆಚ್ಚು ಕಾಲ ಸದ್ದಿಲ್ಲದೆ ಮತ್ತು ನಿರ್ಣಾಯಕ ಕೆಲಸಗಳಲ್ಲಿ ತೊಡಗಿಸಿಕೊಂಡಿದ್ದರು ಎಂದು ವರದಿ ತಿಳಿಸಿದೆ. ಮೆಕಾನಿ ಕರ್ನಾಟಕದಲ್ಲೇ ಹುಟ್ಟಿ ಬೆಳೆದವರು. ತಮ್ಮ ಜಮೀನು, ಇಲ್ಲಿನ ಪರಿಸರದಿಂದ ಪ್ರಕೃತಿ ಪ್ರೀತಿ ಬೆಳೆಸಿಕೊಂಡಿದ್ದರು. ಇಲ್ಲಿನ ನಾರಿನ ಕಾಂಪೋಸ್ಟ್ ಪಿಟ್ ಅನ್ನು ಫಲವತ್ತಾದ ಮಣ್ಣಾಗಿ ಮಾರ್ಪಡಿಸುವ ಮೂಲಕ ಪ್ರಕೃತಿಯ ಪುನರುತ್ಪಾದಕ ಶಕ್ತಿಗಳತ್ತ ಗಮನ ಹರಿಸಿದ್ದರು. ಪ್ರಕೃತಿಯನ್ನು ಅರ್ಥಮಾಡಿಕೊಂಡರೆ, ಗೌರವಿಸಿದರೆ, ಮಾನವೀಯತೆಗೆ ಸುಸ್ಥಿರವಾಗಿ ಬದುಕುವುದು ಹೇಗೆಂಬುದು ಗೊತ್ತಾಗುತ್ತದೆ ಎಂದು ಅವರು ಪ್ರತಿಪಾದಿಸುತ್ತಿದ್ದರು.

1990ರಲ್ಲಿ ಪತಿ ಭರತ್ ಮೆಕಾನಿ ಅವರೊಂದಿಗೆ ಸಿಂಗಾಪುರಕ್ಕೆ ತೆರಳಿದ್ದ ಇವರು, ಪರಿಸರ ಯೋಜನೆಗಳಲ್ಲಿ ತೊಡಗಿಸಿಕೊಂಡಿದ್ದರು. ತಳಮಟ್ಟದ ಪರಿಸರ ಶಿಕ್ಷಣದಲ್ಲಿ ಆಳವಾಗಿ ಕೆಲಸ ಮಾಡಿ, ಯುವ ನಾಯಕರಿಗೆ ಮಾರ್ಗದರ್ಶನ ಮತ್ತು ಸಂಸ್ಥೆಗಳಿಗೆ ಸಲಹೆ ನೀಡುತ್ತಿದ್ದರು. ಗಾರ್ಡನ್ ಸಿಟಿ ಫಂಡ್ ಅಡಿಯಲ್ಲಿ ಸಿಂಗಾಪುರದ ರಾಷ್ಟ್ರೀಯ ಉದ್ಯಾನವನಗಳ ಮಂಡಳಿಯ ಸಹಭಾಗಿತ್ವದಲ್ಲಿ 2007ರಲ್ಲಿ ಪ್ರಾರಂಭವಾದ ಪ್ಲಾಂಟ್-ಎ-ಟ್ರೀ ಕಾರ್ಯಕ್ರಮದಲ್ಲಿ ಮೆಕಾನಿ ಭಾಗಿತ್ವವು ಅವರ ಹೆಮ್ಮೆಯ ಕಾರ್ಯಗಳಲ್ಲಿ ಒಂದಾಗಿದೆ. ಮೆಕಾನಿ 76,000ಕ್ಕಿಂತ ಹೆಚ್ಚು ಮರಗಳನ್ನು ನೆಟ್ಟಿದ್ದಾರೆ. ಇವುಗಳಲ್ಲಿ 200ಕ್ಕೂ ಹೆಚ್ಚು ಸ್ಥಳೀಯ ಜಾತಿಗಳನ್ನು ಪರಿಚಯಿಸಿದ್ದರು. ಸಿಂಗಾಪುರದಲ್ಲಿ ನಿರಂತರವಾಗಿ ನಾಗರಿಕಚಾಲಿತ ಹಸಿರು ಉಪಕ್ರಮಗಳಲ್ಲಿ ತೊಡಗಿಸಿಕೊಂಡಿದ್ದರು. 2016ರಲ್ಲಿ ಬಯೋಮಿಮಿಕ್ರಿ ಸಿಂಗಾಪುರ್ ನೆಟ್‌ವರ್ಕ್ ಸ್ಥಾಪಿಸಿದ ಅವರು, ಇದರ ಮೂಲಕ ಪ್ರಕೃತಿಪ್ರೇರಿತ ನಾವೀನ್ಯತೆಯನ್ನು ಅನ್ವೇಷಿಸಲು ವಿಜ್ಞಾನಿಗಳು, ವಿನ್ಯಾಸಕರು, ಇಂಜಿನಿಯರ್‌ಗಳು ಮತ್ತು ಉದ್ಯಮಿಗಳನ್ನು ಒಂದುಗೂಡಿಸಿದರು. ಇವರಿಗೆ 2015ರಲ್ಲಿ ಪರಿಸರಕ್ಕಾಗಿ ಅಧ್ಯಕ್ಷೀಯ ಪ್ರಶಸ್ತಿ, ಸಿಂಗಾಪುರದ ಅತ್ಯುನ್ನತ ಪರಿಸರ ಗೌರವ, 2024ರಲ್ಲಿ ಪರಿಸರ ಚಾಂಪಿಯನ್ ಆಗಿ ಸಿಂಗಾಪುರದ ಮಹಿಳಾ ಹಾಲ್ ಆಫ್ ಫೇಮ್ ಗೌರವ ಲಭಿಸಿತ್ತು.

## ಹಿಂದೂ-ಮುಸ್ಲಿಂರಿಬ್ಬರಿಗೂ ಪ್ರಾರ್ಥನೆಗೆ ಅವಕಾಶ ; ಸುಪ್ರೀಂ ಕೋರ್ಟ್‌ನ ಆದೇಶ

# ವಿವಾದಿತ ಪ್ರಕರಣ ಮಧ್ಯಪ್ರದೇಶ ಹೈಕೋರ್ಟ್‌ಗೆ ವರ್ಗಾವಣೆ


**ಹೊಸದಿಲ್ಲಿ :** ಮಧ್ಯಪ್ರದೇಶದ ಧಾರ ಜಿಲ್ಲೆಯಲ್ಲಿರುವ ವಿವಾದಿತ ಭೋಜಶಾಲೆ ಸಂಕೀರ್ಣದಲ್ಲಿ , ಸರಸ್ವತಿ ಪೂಜೆಯು ಶುಕ್ರವಾರದ ಜುಮಾ ಪ್ರಾರ್ಥನೆ ಒಂದೇ ದಿನ ಬಂದಿದ್ದರಿಂದ ಹಿಂದೂ ಮತ್ತು ಮುಸ್ಲಿಂ ಭಕ್ತರಿಬ್ಬರಿಗೂ ಪ್ರಾರ್ಥನೆ ಸಲ್ಲಿಸಲು ಸುಪ್ರೀಂ ಕೋರ್ಟ್ ಅನುಮತಿ ನೀಡಿದೆ. ಈ ನಿರ್ಧಾರವು, ಎರಡು ಸಮುದಾಯಗಳ ಧಾರ್ಮಿಕ ಆಚರಣೆಗಳನ್ನು ಗೌರವಿಸುವ ಮತ್ತು ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ನೋಡಿಕೊಳ್ಳುವ ಉದ್ದೇಶದಿಂದ ಕೈಗೊಳ್ಳಲಾಗಿದೆ. ಸುಪ್ರೀಂ ಕೋರ್ಟ್, ಈ ವಿವಾದದ ಮೂಲ ಪ್ರಕರಣವನ್ನು ವಿಚಾರಣೆಗಾಗಿ ಮಧ್ಯಪ್ರದೇಶ ಹೈಕೋರ್ಟ್‌ಗೆ ವರ್ಗಾಯಿಸಿದ್ದು, ಅಲ್ಲಿ ಶೀಘ್ರದಲ್ಲೇ ವಿಚಾರಣೆ ನಡೆಸುವಂತೆ ನಿರ್ದೇಶಿಸಿದೆ. ಅಲ್ಲದೆ, ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ ಸಲ್ಲಿಸಿರುವ ಮುಚ್ಚಿದ ವರದಿಯನ್ನು ನ್ಯಾಯಾಲಯದ ಮುಂದೆ ತೆರೆದು, ಎರಡೂ ಕಡೆಯವರಿಗೆ ಅದರ ಪ್ರತಿಗಳನ್ನು ನೀಡಿ, ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ನೀಡುವಂತೆ ಆದೇಶಿಸಿದೆ.

**ಧಾರ್ಮಿಕ ಸಂಘರ್ಷದ ಹಿನ್ನೆಲೆ:** ಭೋಜಶಾಲೆ ಸಂಕೀರ್ಣವು 11ನೇ ಶತಮಾನದ ಪುರಾತತ್ವ ಸ್ಮಾರಕವಾಗಿದ್ದು, ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯ ರಕ್ಷಣೆಯಲ್ಲಿದೆ. ಹಿಂದೂಗಳು ಇದನ್ನು ದೇವತೆ ಸರಸ್ವತಿಗೆ ಸಮರ್ಪಿತವಾದ ದೇವಾಲಯವೆಂದು ನಂಬುತ್ತಾರೆ. ಆದರೆ ಮುಸ್ಲಿಮರು ಇದನ್ನು ಕಮಲ್ ಮೌಲಾ ಮಸೀದಿ ಎಂದು ಹೇಳುತ್ತಾರೆ. ಈ ಧಾರ್ಮಿಕ ಭಿನ್ನಾಭಿಪ್ರಾಯವು ಬಹಳ ಹಿಂದಿನಿಂದಲೂ ಇದೆ.

**ಪ್ರಾರ್ಥನೆಗೆ ಮಾರ್ಗಸೂಚಿ:** ಈ ಬಾರಿ, ಸರಸ್ವತಿ ಪೂಜೆಯು ಜನವರಿ 23 ರ ಶುಕ್ರವಾರದಂದು ಬಂದಿತ್ತು. ಭೋಜ ಉತ್ಸವ ಸಮಿತಿಯು ಪೂಜೆಗೆ ಅನುಮತಿ ಕೋರಿತ್ತು. ಅದೇ ಸಮಯದಲ್ಲಿ ಮುಸ್ಲಿಂ ಸಮುದಾಯವು ಜುಮಾ ಪ್ರಾರ್ಥನೆಗೆ ಅವಕಾಶ ಕೇಳಿತ್ತು. ಈ ಸಂದರ್ಭದಲ್ಲಿ, ಸುಪ್ರೀಂ ಕೋರ್ಟ್ ಒಂದು ಸೂಕ್ತ ಪರಿಹಾರವನ್ನು ಸೂಚಿಸಿತು. ಅದರ ಪ್ರಕಾರ, ಮಧ್ಯಾಹ್ನ 1 ರಿಂದ 3 ಗಂಟೆಯವರೆಗೆ, ಮಸೀದಿಯೊಳಗಿನ ನಿರ್ದಿಷ್ಟ ಪ್ರದೇಶದಲ್ಲಿ ಮುಸ್ಲಿಮರು ಪ್ರಾರ್ಥನೆ ಸಲ್ಲಿಸಬಹುದು. ಪ್ರಾರ್ಥನೆ ಮುಗಿದ ತಕ್ಷಣವೇ ಅಲ್ಲಿಂದ ನಿರ್ಗಮಿಸಬೇಕು. ಇದೇ ರೀತಿ,

### ಎರಡು ವಾರಗಳೊಳಗೆ ವಿಚಾರಣೆ

**ಸುಪ್ರೀಂ ಕೋರ್ಟ್, ಭೋಜಶಾಲೆ ಸಂಕೀರ್ಣದ ಮೂಲ ವಿವಾದವನ್ನು ವಿಚಾರಣೆಗಾಗಿ ಮಧ್ಯಪ್ರದೇಶ ಹೈಕೋರ್ಟ್‌ಗೆ ವರ್ಗಾಯಿಸಿದೆ. ಹೈಕೋರ್ಟ್‌ನ ವಿಭಾಗೀಯ ಪೀಠವು ಈ ಪ್ರಕರಣವನ್ನು ಶೀಘ್ರವಾಗಿ, ಅಂದರೆ ಎರಡು ವಾರಗಳೊಳಗೆ ವಿಚಾರಣೆ ನಡೆಸಬೇಕು ಎಂದು ಸುಪ್ರೀಂ ನಿರ್ದೇಶಿಸಿದೆ.**



ಹಿಂದೂ ಸಮುದಾಯದವರು ಸರಸ್ವತಿ ಪೂಜೆಯನ್ನು ನಡೆಸಲು ಪ್ರತ್ಯೇಕ ಸ್ಥಳವನ್ನು ಒದಗಿಸಲಾಗುವುದು. ಸುಪ್ರೀಂ ಕೋರ್ಟ್ ಹೇಳಿದಂತೆ, ನಮಾಜ್ ಗಾಗಿ ಮಧ್ಯಾಹ್ನ 1 ರಿಂದ 3 ರವರೆಗೆ, ಅದೇ ಆವರಣದೊಳಗೆ ಪ್ರತ್ಯೇಕ ಮತ್ತು ವಿಭಿನ್ನ ಪ್ರವೇಶ ಹಾಗೂ ನಿರ್ಗಮನ ಮಾರ್ಗಗಳೊಂದಿಗೆ ಒಂದು ನಿರ್ದಿಷ್ಟ ಪ್ರದೇಶವನ್ನು ಒದಗಿಸಲಾಗುವುದು, ಇದರಿಂದ ನಮಾಜ್ ಅನ್ನು ನಿರ್ವಹಿಸ ಬಹುದು.

### ಭದ್ರತಾ ವ್ಯವಸ್ಥೆ: ಬಿಗಿ ಕ್ರಮಗಳು

**ಈ ಸೂಕ್ಷ್ಮ ಪರಿಸ್ಥಿತಿಯನ್ನು ಗಮನದಲ್ಲಿ ಇಟ್ಟುಕೊಂಡು, ಧಾರ ಜಿಲ್ಲೆಯಾದ್ಯಂತ ಸುಮಾರು 8,000 ಪೊಲೀಸ್ ಸಿಬ್ಬಂದಿ, ಕೇಂದ್ರ ಮೀಸಲು ಪೊಲೀಸ್ ಪಡೆ ಮತ್ತು ತ್ವರಿತ ಕಾರ್ಯಾಚರಣೆ ಪಡೆಯನ್ನು ನಿಯೋಜಿಸಲಾಗಿದೆ. ನಗರದಾದ್ಯಂತ ಸಿಸಿಟಿವಿ ಕಣ್ಗಾವಲು, ಕಾಲ್ನಡಿಗೆ ಮತ್ತು ವಾಹನ ಕಾರ್ಯಾಚರಣೆಗಳನ್ನು ತೀವ್ರಗೊಳಿಸಲಾಗಿದೆ. ಸಾಮಾಜಿಕ ಮಾಧ್ಯಮ ಚಟುವಟಿಕೆಗಳನ್ನೂ ಹತ್ತಿರದಿಂದ ಗಮನಿಸಲಾಗುತ್ತಿದೆ.**

ಅದೇ ರೀತಿ, ವಸಂತ ಪಂಚಮಿಯ ಸಂದರ್ಭದಲ್ಲಿ ಹಿಂದೂ ಸಮುದಾಯಕ್ಕೆ ಸಾಂಪ್ರದಾಯಿಕ ಆಚರಣೆಗಳನ್ನು ನಡೆಸಲು ಪ್ರತ್ಯೇಕ ಸ್ಥಳವನ್ನು ಒದಗಿಸಲಾಗುವುದು.

**2016ರ ಘಟನೆ:** ಕಳೆದ 23 ವರ್ಷಗಳಿಂದ, ಎಎಸ್‌ಐ ಒಂದು ವ್ಯವಸ್ಥೆಯನ್ನು ಅನುಸರಿಸುತ್ತಿದೆ. ಅದರ ಪ್ರಕಾರ, ಮಂಗಳವಾರದಂದು ಹಿಂದೂಗಳಿಗೆ ಭೋಜಶಾಲೆಯಲ್ಲಿ ಪೂಜೆ ಸಲ್ಲಿಸಲು ಅವಕಾಶ ನೀಡಲಾಗುತ್ತದೆ, ಮತ್ತು ಶುಕ್ರವಾರದಂದು ಮುಸ್ಲಿಮರಿಗೆ ಪ್ರಾರ್ಥನೆ ಸಲ್ಲಿಸಲು ಅನುಮತಿ ಇದೆ. 2016ರಲ್ಲೂ ಇದೇ ರೀತಿಯ ಪರಿಸ್ಥಿತಿ ಎದುರಾಗಿತ್ತು. ವಸಂತ ಪಂಚಮಿಯು ಶುಕ್ರವಾರದಂದು ಬಂದಿದ್ದಾಗ, ಧಾರದಲ್ಲಿ ಪ್ರಾರ್ಥನೆ ಸಮಯದ ಬಗ್ಗೆ ಪ್ರತಿಭಟನೆಗಳು ಮತ್ತು ಘರ್ಷಣೆಗಳು ನಡೆದಿದ್ದವು.

**ಮುಂದಿನ ಕ್ರಮಗಳು:** ಈಗ ಪ್ರಕರಣವು ಹೈಕೋರ್ಟ್‌ಗೆ ವರ್ಗಾವಣೆಯಾಗಿರುವುದರಿಂದ, ಅಲ್ಲಿನ ವಿಚಾರಣೆ, ಎಎಸ್‌ಐ ವರದಿಯ ಮೇಲಿನ ಆಕ್ಷೇಪಣೆಗಳ ನಂತರವೇ ಭೋಜಶಾಲೆ ವಿವಾದಕ್ಕೆ ಸಂಬಂಧಿಸಿದಂತೆ ಮುಂದಿನ ನಿರ್ಧಾರಗಳು ಹೊರಬೀಳಲಿವೆ. ಅಲ್ಲಿಯವರೆಗೆ, ವಿವಾದಿತ ಸ್ಥಳದ ಪ್ರಸ್ತುತ ಸ್ಥಿತಿಯನ್ನು ಕಾಯ್ದುಕೊಳ್ಳುವಂತೆ ಸುಪ್ರೀಂ ಆದೇಶಿಸಿದೆ.

# ಎಐಎಡಿಎಂಕೆ ನೇತೃತ್ವದಲ್ಲಿ ಎನ್‌ಡಿಎ ಅಧಿಕಾರಕ್ಕೆ: ಸಚಿವ




**ಚೆನ್ನೈ:** ತಮಿಳುನಾಡಿನಲ್ಲಿ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಬಲಿಷ್ಠ ಎಐಎಡಿಎಂಕೆ ನೇತೃತ್ವದ ಎನ್‌ಡಿಎ ಅಧಿಕಾರಕ್ಕೆ ಬರಲಿದೆ ಎಂದು ತಮಿಳುನಾಡು ಬಿಜೆಪಿ ಚುನಾವಣಾ ಉಸ್ತುವಾರಿ ಪೀಯೂಷ್ ಗೋಯಲ್ ಹೇಳಿದರು.

ಚುನಾವಣೆ ಸಂಬಂಧ ಎಐಎಡಿಎಂಕೆ ಜೊತೆ ಮಾತುಕತೆ ನಡೆಸಲು ಇಲ್ಲಿಗೆ ಆಗಮಿಸಿರುವ ಪೀಯೂಷ್ ಗೋಯಲ್ ಅವರು ಸುದ್ದಿಗಾರರ ಜೊತೆ ಗುರುವಾರ ಮಾತನಾಡಿದರು. ಏಪ್ರಿಲ್ ತಿಂಗಳಲ್ಲಿ ವಿಧಾನಸಭಾ ಚುನಾವಣೆ ನಡೆಯುವ ಸಾಧ್ಯತೆ ಇದೆ. ಈ ಸಲ ಎನ್‌ಡಿಎ ಅಧಿಕಾರಕ್ಕೆ ಬರಲಿದೆ ಎಂದು ಪೀಯೂಷ್ ಗೋಯಲ್ ವಿಶ್ವಾಸ ವ್ಯಕ್ತಪಡಿಸಿದರು. ಎಐಎಡಿಎಂಕೆ ಪ್ರಧಾನ ಕಾರ್ಯದರ್ಶಿ ಪಳನಿಸ್ವಾಮಿ ಅವರೊಂದಿಗೆ ಸಭೆ ನಡೆಸಿದ ಬಳಿಕ ಮಾತನಾಡಿದ ಅವರು, ಎನ್‌ಡಿಎ ಮೈತ್ರಿಕೂಟ ಡಿಎಂಕೆ ಪಕ್ಷದ ಭ್ರಷ್ಟ ಹಾಗೂ ವಂಶಪಾರಂಪರ್ಯ ಆಡಳಿತಕ್ಕೆ ತೆರೆ ಎಳೆಯಲಿದೆ. ಜನರ ಕಲ್ಯಾಣಕ್ಕಾಗಿ ಶ್ರಮಿಸಿ ತಮಿಳುನಾಡಿನ ಗೌರವವನ್ನು ಪುನರ್ ಸ್ಥಾಪಿಸಲಿದೆ ಎಂದರು. ಇಂದು ಚೆನ್ನೈ ಸಮೀಪ ನಡೆಯಲಿರುವ ಚುನಾವಣೆ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಭಾಗವಹಿಸಲಿದ್ದಾರೆ. ಈ ರ್‍ಯಾಲಿ ತಮಿಳುನಾಡು ರಾಜಕೀಯದಲ್ಲಿ ಮಹತ್ವದ ತಿರುವು ಪಡೆಯಲಿದೆ. ಹಾಗೂ ಭ್ರಷ್ಟ ಡಿಎಂಕೆ ಆಡಳಿತದ ಸೋಲಿಗೆ ದಾರಿ ಮಾಡಿ ಕೊಡಲಿದೆ ಎಂದು ಪಳನಿಸ್ವಾಮಿ ಹೇಳಿದರು.

ಇಂದು ಉಭಯ ನಾಯಕರು ಸ್ಥಾನ ಹಂಚಿಕೆ ಬಗ್ಗೆ ಮಾತುಕತೆ ನಡೆಸಲಿದ್ದಾರೆ. ತಮಿಳುನಾಡಿನಲ್ಲಿ ಎನ್‌ಡಿಎಗೆ ಎಐಎಡಿಎಂಕೆ ನಾಯಕತ್ವ ವಹಿಸಿದೆ. ಈ ವೈತ್ರಿಕೂಟದಲ್ಲಿ ಬಿಜೆಪಿ, ಪಿಎಂಕೆ, ಎಎಂಎಂಕೆ, ಟಿಎಂಸಿ (ಎಂ) ಪಕ್ಷಗಳು ಸೇರಿವೆ. ಸನಾತನ ಧರ್ಮ ಕುರಿತು ಉಪಮುಖ್ಯಮಂತ್ರಿ ಉದಯನಿಧಿ ಸ್ಟಾಲಿನ್ ಅವರು ಮಾಡಿರುವ ಭಾಷಣದ ಬಗ್ಗೆ ಮದ್ರಾಸ್ ಹೈಕೋರ್ಟ್ ತರಾಟೆಗೆ ತೆಗೆದು ಕೊಂಡಿದ್ದು ಅವಹೇಳನ ಸಲ ಎಂದು ಹೇಳಿದೆ.

ಕೂಡಲೇ ಉದಯನಿಧಿ ಅವರನ್ನು ಸಂಪುಟದಿಂದ ಕೈ ಬಿಡಬೇಕು ಎಂದು ಪೀಯೂಷ್‌ಗೋಯಲ್ ಆಗ್ರಹಿಸಿದರು. ಉದಯನಿಧಿ ಅವರ ರಾಷ್ಟ್ರ ವಿರೋಧಿ ಹೇಳಿಕೆಗಳನ್ನು ನಾನು ಸಂಪೂರ್ಣವಾಗಿ ವಿರೋಧಿಸುತ್ತೇನೆ, ಜನರನ್ನು ವಿಭಜಿಸಿ ಅಶಾಂತಿ ಉಂಟುಮಾಡುವ ಅವರ ದ್ವೇಷ ಭಾಷಣದ ಕುರಿತು ಕ್ರಮ ಕೈಗೊಂಡು ಅವರನ್ನು ಸರ್ಕಾರದಿಂದ ವಜಾ ಮಾಡಬೇಕು ಎಂದರು.

# ಏರ್ ಇಂಡಿಯಾ ವಿಮಾನದಲ್ಲಿ ತಾಂತ್ರಿಕ ದೋಷ



**ನವದೆಹಲಿ:** 2025ರ ಜೂನ್ 12ರಂದು ಅಹಮದಾಬಾದ್‌ನಲ್ಲಿ ಅಪಘಾತಕ್ಕೀಡಾದ ಏರ್ ಇಂಡಿಯಾ ಬೋಯಿಂಗ್ 787 ವಿಮಾನವು ತನ್ನ ಸೇವಾ ಜೀವನದುದ್ದಕ್ಕೂ ಅನೇಕ ತಾಂತ್ರಿಕ ಸಮಸ್ಯೆಗಳಿಂದ ಬಳಲುತ್ತಿತ್ತು ಮತ್ತು ವಿಮಾನದ ಮಾದರಿಗೆ ಸಂಬಂಧಿಸಿದ ಸುರಕ್ಷತಾ ಸಮಸ್ಯೆಗಳನ್ನು ಜಾಗತಿಕವಾಗಿ ಕಡಿಮೆ ಮಾಡಲಾಗುತ್ತಿದೆ ಎಂದು ಅಮೆರಿಕ ಮೂಲದ ವಾಯುಯಾನ ಸುರಕ್ಷತಾ ಅಭಿಯಾನ ಗುಂಪು ಆರೋಪಿಸಿದೆ. ಫೌಂಡೇಶನ್ ಫಾರ್ ಏವಿಯೇಷನ್ ಸೇಫ್ಟಿ 2026 ರ ಜನವರಿ 12ರಂದು ಯುಎಸ್ ಸೆನೆಟ್‌ಗೆ ವರದಿಯನ್ನು ಸಲ್ಲಿಸಿದೆ ಎಂದು ಮೂಲಗಳು ತಿಳಿಸಿವೆ. ದಾಖಲೆಗಳ ಪ್ರಕಾರ, ನೋಂದಾಯಿತ ವಿಟಿ-ಎಎನ್ ಬಿ ವಿಮಾನವು ಏರ್ ಇಂಡಿಯಾದೊಂದಿಗೆ ಸೇವೆಯಲ್ಲಿ ಮೊದಲ ದಿನದಿಂದಲೇ ಸಿಸ್ಟಮ್ ವೈಫಲ್ಯಗಳನ್ನು ಅನುಭವಿಸಿದೆ ಎಂದು ಸೂಚಿಸುತ್ತದೆ.

ಇಂಜಿನಿಯರಿಂಗ್, ಉತ್ಪಾದನೆ, ಗುಣಮಟ್ಟ ಮತ್ತು ನಿರ್ವಹಣೆ ನ್ಯೂನತೆಗಳ ವ್ಯಾಪಕ ಮತ್ತು ಗೊಂದಲಮಯ ಮಿಶ್ರಣದಿಂದ ಸಮಸ್ಯೆಗಳು ಉದ್ಭವಿಸಿವೆ ಎಂದು ಎಫ್ ಎಎಸ್ ಆರೋಪಿಸಿದೆ. ಎಲೆಕ್ಟ್ರಾನಿಕ್, ಸಾಫ್ಟ್‌ವೇರ್ ದೋಷಗಳು, ಸರ್ಕಿಟ್ ಬ್ರೇಕರ್ ಗಳ ಪದೇ ಪದೇ ಮುಗ್ಗರಿಸುವುದು, ವೈರಿಂಗ್ ಹಾನಿ, ಶಾರ್ಟ್ ಸರ್ಕ್ಯೂಟ್ ಗಳು, ವಿದ್ಯುತ್ ಶಕ್ತಿಯ ನಷ್ಟ ಮತ್ತು ವಿದ್ಯುತ್ ವ್ಯವಸ್ಥೆಯ ಘಟಕಗಳ ಅತಿಯಾದ ಬಿಸಿಯಾಗುವಿಕೆ ಸೇರಿವೆ.

ಎಫ್‌ಎಎಸ್ ನ ಹಕ್ಕುಗಳ ಬಗ್ಗೆ ಕೇಳಿದಾಗ, ಬೋಯಿಂಗ್ ವಕ್ತಾರರು, ವಿಶ್ವಸಂಸ್ಥೆಯ ಅಂತಾರಾಷ್ಟ್ರೀಯ ನಾಗರಿಕ ವಿಮಾನಯಾನ ಸಂಸ್ಥೆಯ ಅನುಬಂಧ 13 ಎಂದು ಕರೆಯಲ್ಪಡುವ ಶಿಷ್ಟಾಚಾರಕ್ಕೆ ಅನುಸಾರವಾಗಿ ನಾವು ಭಾರತದ ವಿಮಾನ ಅಪಘಾತ ತನಿಖಾ ಬ್ಯೂರೋ (ಎಎಐಬಿ) ಗೆ ಮುಂದೂಡುತ್ತೇವೆ ಎಂದು ಹೇಳಿದ್ದಾರೆ. ವರದಿಯ ಬಗ್ಗೆ ಪ್ರತಿಕ್ರಿಯಿಸಲು ನಾಗರಿಕ ವಿಮಾನಯಾನ ಸಚಿವಾಲಯ ನಿರಾಕರಿಸಿದೆ.

# ಯಸ್..ನಾನು ಸರ್ವಾಧಿಕಾರಿ ಏನೀವಾಗ: ಟ್ರಂಪ್



**ವಾಷಿಂಗ್ಟನ್:** ಯಸ್ ನಾನು ಸರ್ವಾಧಿಕಾರಿ ಏನೀವಾಗ ಎಂದು ಸ್ವತಃ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿಕೊಂಡಿದ್ದಾರೆ. ಟ್ರಂಪ್ ಅಮೆರಿಕದ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದಾಗಿನಿಂದ ಹಲವು ಸಂದರ್ಭಗಳಲ್ಲಿ ಸರ್ವಾಧಿಕಾರಿಯಂತೆ ವರ್ತಿಸಿದ್ದಾರೆ. ಈಗ ಟ್ರಂಪ್ ಸ್ವತಃ ತಮ್ಮನ್ನು ಸರ್ವಾಧಿಕಾರಿ ಎಂದು ಕರೆದುಕೊಂಡಿದ್ದಾರೆ.

ದಾವೋಸ್‌ನಲ್ಲಿ ಜಾಗತಿಕ ಆರ್ಥಿಕ ವೇದಿಕೆ ಉದ್ದೇಶಿಸಿ ಮಾತನಾಡುವಾಗ ಟ್ರಂಪ್ ಹೇಳಿಕೆ ಎಲ್ಲರ ಗಮನ ಸೆಳೆಯಿತು. ಟ್ರಂಪ್ ತಮ್ಮನ್ನು ಸರ್ವಾಧಿಕಾರಿಯಂದು ಕರೆದು ಕೊಂಡಿದ್ದಷ್ಟೇ ಅಲ್ಲದೆ, ಯಾವಾಗಲೂ ಅಲ್ಲದಿದ್ದರೂ ಕೆಲವೊಮ್ಮೆ ಸರ್ವಾಧಿಕಾರಿಯಾಗುವುದು ಅವಶ್ಯಕ ಎಂದು ಹೇಳಿದ್ದಾರೆ. ಟ್ರಂಪ್ ತಮ್ಮ ಭಾಷಣಕ್ಕೆ ಬಂದ ಪ್ರತಿಕ್ರಿಯೆಯ ಬಗ್ಗೆ ಚರ್ಚಿಸುತ್ತಿದ್ದರು, ತಮ್ಮ ಭಾಷಣಕ್ಕೆ ಬಂದ ಸಕಾರಾತ್ಮಕ ಪ್ರತಿಕ್ರಿಯೆಯಿಂದ ತಮಗೆ ಆಶ್ಚರ್ಯವಾಯಿತು ಎಂದರು. ನಮಗೆ ಉತ್ತಮ ವಿಮರ್ಶೆಗಳು ಬಂದವು. ನನಗೆ ನಂಬಲು ಸಾಧ್ಯವಾಗುತ್ತಿಲ್ಲ ಎಂದು ಟ್ರಂಪ್ ಹೇಳಿದ್ದಾರೆ.

ತಮ್ಮ ಆಡಳಿತ ವಿಧಾನ ವಿವರಿಸಲು ಪ್ರಯತ್ನಿಸಿದ ಟ್ರಂಪ್ ನಂತರ ಅವರು ತಮ್ಮ ಆಡಳಿತ ವಿಧಾನವನ್ನು ವಿವರಿಸಲು ಪ್ರಯತ್ನಿಸಿದರು. ಟ್ರಂಪ್ ತಮ್ಮ ನಿರ್ಧಾರಗಳು ಯಾವುದೇ ಸಿದ್ಧಾಂತದಿಂದಲ್ಲ, ಬದಲಾಗಿ ಸಾಮಾನ್ಯ ಜ್ಞಾನದಿಂದ ಬಂದಿವೆ . ಇದು ಸಂಪ್ರದಾಯವಾದಿಯೂ ಅಲ್ಲ ಅಥವಾ ಉದಾರವಾದಿಯೂ ಅಲ್ಲ, ಇದು ಸುಮಾರು 95 ಪ್ರತಿಶತ ಸಾಮಾನ್ಯ ಜ್ಞಾನವನ್ನು ಆಧರಿಸಿದೆ ಎಂದರು. ಟ್ರಂಪ್ ಈ ಹಿಂದೆ ತಮ್ಮ ಭಾಷೆ ಕೆಲವೊಮ್ಮೆ ಉದ್ವಿಗ್ನತೆಯನ್ನು ಉಂಟುಮಾಡುತ್ತದೆ ಎಂದು ಒಪ್ಪಿಕೊಂಡಿದ್ದರು, ಆದರೆ ಅವರ ಉದ್ದೇಶಗಳನ್ನು ತಪ್ಪಾಗಿ ಅರ್ಥೈಸಿಕೊಳ್ಳಲಾಗಿದೆ ಎಂದು ಅವರು ಹೇಳಿದರು.

ದಾವೋಸ್‌ನಲ್ಲಿ, ಟ್ರಂಪ್ ಗ್ರೀನ್‌ಲ್ಯಾಂಡ್‌ಗೆ ಸಂಬಂಧಿಸಿದಂತೆ ಮಹತ್ವದ ಸೂಚನೆಯನ್ನು ನೀಡಿದರು. ಇತ್ತೀಚಿನ ವಾರಗಳಲ್ಲಿ ಅವರ ಬಲವಾದ ಹೇಳಿಕೆಗಳು ಮಿತ್ರರಾಷ್ಟ್ರಗಳನ್ನು ಕೆರಳಿಸಿದ್ದವು. ಆದರೆ ಈಗ ಟ್ರಂಪ್ ಅವರು ಮಿಲಿಟರಿ ಕ್ರಮ ಕೈಗೊಳ್ಳುವುದಿಲ್ಲ ಅಥವಾ ಒತ್ತಡ ಹೇರಲು ಸುಂಕಗಳನ್ನು ವಿಧಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಇದು ಎಲ್ಲರೂ ಸಂತೋಷಪಡುವ ಒಪ್ಪಂದವಾಗಿದೆ. ಇದು ದೀರ್ಘಾವಧಿಯ ಒಪ್ಪಂದವಾಗಿದೆ. ಟ್ರಂಪ್ ಇದನ್ನು ಶಾಶ್ವತ ಒಪ್ಪಂದ ಎಂದು ಕರೆದಿದ್ದಾರೆ.

ಡೆನ್ಮಾರ್ಕ್, ಗ್ರೀನ್‌ಲ್ಯಾಂಡ್ ಮತ್ತು ಯುನೈಟೆಡ್ ಸ್ಟೇಟ್ಸ್ ನಡುವಿನ ಮಾತುಕತೆಗಳು ಮುಂದುವರೆಯುತ್ತವೆ, ಇದರಿಂದಾಗಿ ರಷ್ಯಾ, ಚೀನಾ ಗ್ರೀನ್‌ಲ್ಯಾಂಡ್ ಮೇಲೆ ಎಂದಿಗೂ ಆರ್ಥಿಕ ಅಥವಾ ಮಿಲಿಟರಿ ನಿಯಂತ್ರಣವನ್ನು ಪಡೆಯಲು ಸಾಧ್ಯವಿಲ್ಲ ಎಂದು ಅವರು ಹೇಳಿದರು.

ವಿಧಿಸಲಾಗಿದ್ದ ಸುಂಕಗಳನ್ನು ಈಗ ತಡೆಹಿಡಿಯಲಾಗಿದೆ ಎಂದು ಅವರು ಘೋಷಿಸಿದರು. ಈ ವಿಷಯದ ಬಗ್ಗೆ ಟ್ರಂಪ್ ಮುಖಾಮುಖಿಯಾಗುವ ಬದಲು ರಾಜಿ ಮಾರ್ಗವನ್ನು ಅನುಸರಿಸಲು ಬಯಸುತ್ತಾರೆ ಎನ್ನುವುದಕ್ಕೆ ಅವರ ನಿಲುವು ಉದಾಹರಣೆಯಾಗಿದೆ.

# ಗಾಜಾ ಶಾಂತಿ ಮಂಡಳಿಗೆ ಸೇರಲು ಸಿದ್ಧ ಆದ್ರೆ 1 ಕಂಡಿಷನ್

## ಗ್ರೀನ್ ಲ್ಯಾಂಡ್ ಪರಿಸ್ಥಿತಿಯನ್ನು ಈ ಹಿಂದೆ ಅಮೆರಿಕಾಗೆ ರಷ್ಯಾ ಅಲಾಸ್ಕ ಮಾರಾಟ ಮಾಡಿದ್ದಕ್ಕೆ ಹೋಲಿಸಿದ ಪುಟಿನ್


**ಮಾಸ್ಕೋ:** ಅಮೆರಿಕಾ ಗ್ರೀನ್‌ಲ್ಯಾಂಡ್ ಸ್ವಾಧೀನ ಪಡಿಸಿಕೊಳ್ಳಲು ಪಣತೊಟ್ಟಿದ್ದು, ರಷ್ಯಾ, ಚೀನಾ ಆರ್ಕ್ಟಿಕ್ ಪ್ರದೇಶದಲ್ಲಿ ತಮ್ಮ ಯುದ್ಧನೌಕೆಗಳು. ಜಲಾಂತರ್ಗಾಮಿಗಳನ್ನು ನಿಯೋಜಿಸಿದ್ದಾರೆ ಹಾಗಾಗಿ ದೇಶದ ಭದ್ರತಾ ದೃಷ್ಟಿಯಿಂದ ದ್ವೀಪ ರಾಷ್ಟ್ರ ಅಗತ್ಯವೆಂದು ಪ್ರತಿಪಾದಿಸುತ್ತಿದ್ದಾರೆ. ಇದಕ್ಕೆ ಮೊದಲ ಬಾರಿಗೆ ಪ್ರತಿಕ್ರಿಯೆ ನೀಡಿದ ರಷ್ಯಾ ಅಧ್ಯಕ್ಷ ಪುಟಿನ್ ಗ್ರೀನ್‌ಲ್ಯಾಂಡ್ ಪ್ರದೇಶದ ವಿಚಾರದಲ್ಲಿ ನಮಗೆ ಯಾವುದೇ ಆಸಕ್ತಿ ಇಲ್ಲ ಎಂದು ಹೇಳಿದ್ದಾರೆ.

**ಗ್ರೀನ್ ಲ್ಯಾಂಡ್ ವಿಚಾರದಲ್ಲಿ ರಷ್ಯಾಗೆ ಯಾವುದೇ ಆಸಕ್ತಿಯಿಲ್ಲ ಎಂದ ಪುಟಿನ್:** ರಾಷ್ಟ್ರೀಯ ಭದ್ರತಾ ಮಂಡಳಿಯ ಸಭೆಯಲ್ಲಿ ಮಾತನಾಡಿದ ಪುಟಿನ್ ಗ್ರೀನ್‌ಲ್ಯಾಂಡ್ ವಿಚಾರದಲ್ಲಿ ಏನಾಗಲಿದೆ ಎಂಬುದು ನಮಗೆ ಆಸಕ್ತಿಯಿರದ. ಸಂಬಂಧ ಪಡದೆ ಇರುವ ವಿಚಾರ ಎಂದಿದ್ದು, ಡೆನ್ಮಾರ್ಕ್ ಯಾವಾಗಲೂ ಗ್ರೀನ್‌ಲ್ಯಾಂಡ್ ಅನ್ನು ವಸಾಹತು ಎಂದು ಪರಿಗಣಿಸಿದೆ ಮತ್ತು ಅದರ ಬಗ್ಗೆ ಕ್ರೂರವಲ್ಲದಿದ್ದರೂ, ಸಾಕಷ್ಟು ಕಠಿಣವಾಗಿ ವರ್ತಿಸಿದೆ. ಆದಾಗ್ಯೂ, ಈ ವಿಚಾರದಲ್ಲಿ ಸದ್ಯ ಯಾರಾದರೂ ಹೆಚ್ಚಿನ ಆಸಕ್ತಿ ಹೊಂದಿದ್ದಾರೆಂದು ನನಗೆ ಅನಿಸುವುದಿಲ್ಲಎಂದು ತಿಳಿಸಿದ್ದಾರೆ.

**ಅಮೆರಿಕಾಗೆ ಅಲಾಸ್ಕ ಮಾರಿದ್ದ ವಿಚಾರ ಪ್ರಸ್ತಾಪಿಸಿದ್ದ ಪುಟಿನ್ ಹೇಳಿದ್ದೇನು?:** ಇದೇ ವೇಳೆ ರಷ್ಯಾ ಅಮೆರಿಕಾಗೆ ಅಲಾಸ್ಕವನ್ನು ಮಾರಾಟ ಮಾಡಿದ ವಿಚಾರವನ್ನು ಸಹ ಪ್ರಸ್ತಾಪಿಸಿತ್ತಾ ಗ್ರೀನ್‌ಲ್ಯಾಂಡ್ ಹಾಗೂ ಅಲಾಸ್ಕದ ಸದ್ಯದ ಸಂದಂಭರ್ವನ್ನು ಹೋಲಿಕೆ ಮಾಡಿದ್ದಾರೆ.

### ಟ್ರಂಪ್ ಹೇಳಿಕೆಗಳಿಗೆ ಬ್ರೇಕ್

**ಆದರೆ, ಈ ಹಣಕಾಸಿನ ನೆರವು ರಷ್ಯಾ ಮತ್ತು ಉಕ್ರೇನ್ ನಡುವೆ ಶಾಂತಿ ಒಪ್ಪಂದ ಏರ್ಪಟ್ಟ ನಂತರವೇ ಸಾಧ್ಯವಾಗಲಿದೆ ಎಂಬುದನ್ನು ಪುಟಿನ್ ಸ್ಪಷ್ಟಪಡಿಸಿದ್ದಾರೆ. ಅಲ್ಲದೆ, ಈ ಯೋಜನೆಯಲ್ಲಿ ಟ್ರಂಪ್ ರಷ್ಯಾವನ್ನು ಆಹ್ವಾನಿಸಿರುವ ಬಗ್ಗೆ ತಿಳಿಸಿರುವ ಪುಟಿನ್ ಈ ಆಹ್ವಾನದ ಬಗ್ಗೆ ರಷ್ಯಾದ ವಿದೇಶಾಂಗ ಸಚಿವಾಲಯವು ದಾಖಲೆಗಳನ್ನು ಪರಿಶೀಲಿಸುತ್ತಿದೆ ಮತ್ತು ನಮ್ಮ ಪಾಲುದಾರರೊಂದಿಗೆ ಸಮಾಲೋಚನೆ ನಡೆಸುತ್ತಿದೆ. ನಂತರವೇ ನಾವು ಆಹ್ವಾನಕ್ಕೆ ಪ್ರತಿಕ್ರಿಯಿಸುತ್ತೇವೆ ಎಂದು ಹೇಳುವ ಮೂಲಕ ಈ ಹಿಂದೆ ಪುಟಿನ್ ಈ ಯೋಜನೆಯಲ್ಲಿ ಸೇರಲು ಒಪ್ಪಿಕೊಂಡಿದ್ದಾರೆಂಬ ಟ್ರಂಪ್ ಹೇಳಿಕೆಗಳಿಗೆ ಬ್ರೇಕ್ ಹಾಕಿದ್ದಾರೆ.**



ಸದ್ಯದ ಈ ಪರಿಸ್ಥಿತಿ, 19ನೇ ಶತಮಾನದಲ್ಲಿ ರಷ್ಯಾ ಅಲಾಸ್ಕಾವನ್ನು ಅಮೆರಿಕಕ್ಕೆ ಮಾರಾಟ ಮಾಡಿದ್ದನ್ನು ನೆನಪಿಸುತ್ತದೆ ಎಂದು ಹೇಳುತ್ತಾ, ಗ್ರೀನ್ ಲ್ಯಾಂಡ್‌ನ ಪ್ರಸ್ತುತ ಮೌಲ್ಯ 200-250 ಮಿಲಿಯನ್ ಡಾಲರ್‌ಗಳಿರಬಹುದು ಎಂದು ರಷ್ಯಾದ ಸುದ್ದಿ ಸಂಸ್ಥೆಗಳ ವರದಿಯನ್ನು ಉಲ್ಲೇಖಿಸಿ ಹೇಳಿದ್ದಾರೆ.

ಬಳಿಕ ಮಾತನಾಡಿದ ರಷ್ಯಾದ ವಿದೇಶಾಂಗ ಸಚಿವ ಸೆರ್ಗೆಯ್ ಲಾವ್ರೊವ್ ತತ್ವದ ಪ್ರಕಾರ, ಗ್ರೀನ್ ಲ್ಯಾಂಡ್ ಡೆನ್ಮಾರ್ಕ್‌ನ ಸಹಜ ಭಾಗವಲ್ಲ, ಅಲ್ಲವೇ? ಅದು ನಾರ್ವೆಯ ಸಹಜ ಭಾಗವೂ ಆಗಿರಲಿಲ್ಲ, ಡೆನ್ಮಾರ್ಕ್‌ನ ಸಹಜ ಭಾಗವೂ ಆಗಿರಲಿಲ್ಲ. ಇದು ಒಂದು ವಸಾಹತುಶಾಹಿ ಆಕ್ರಮಣ.ಈಗ ಅಲ್ಲಿನ ನಿವಾಸಿಗಳು ಅದಕ್ಕೆ ಒಗ್ಗಿಕೊಂಡಿದ್ದಾರೆ, ಆರಾಮದಾಯಕವಾಗಿದ್ದಾರೆ ಎಂದು ತಿಳಿಸಿದ್ದಾರೆ.

**ಗಾಜ ಶಾಂತಿ ಮಂಡಳಿಗೆ 1ಶತಕೋಟಿ ನೀಡಲು ಸಿದ್ಧ ಆದರೆ ಒಂದು ಕಂಡಿಷನ್ ಎಂದ ಪುಟಿನ್:** ಇದೇ ವೇಳೆ, ಟ್ರಂಪ್ ಅವರ ಬೋರ್ಡ್ ಆಫ್ ಪೀಸ್, ಗಾಜ ಶಾಂತಿ ಮಂಡಳಿ ಯೋಜನೆಗೆ 1 ಶತಕೋಟಿ ಡಾಲರ್ ದೇಣಿಗೆ ನೀಡಲು ಸಿದ್ಧ ಎಂದು ರಷ್ಯಾ ಅಧ್ಯಕ್ಷ ಘೋಷಿಸಿದ್ದಾರೆ. ರಷ್ಯಾ ಈ ಯೋಜನೆಗೆ ಅಮೆರಿಕಾದಲ್ಲಿ ಸರ್ಕಾರ ಸ್ಥಗಿತಗೊಳಿಸಿರುವ ರಷ್ಯಾದ ಆಸ್ತಿಗಳನ್ನು ಬಳಸಿಕೊಂಡು ದೇಣಿಗೆ ನೀಡಲು ಸಿದ್ಧ, ಇದರೊಂದಿಗೆ ಉಳಿದ ಹಣದಲ್ಲಿ ರಷ್ಯಾ ಮತ್ತು ಉಕ್ರೇನ್ ಯುದ್ಧದಿಂದ ನಾಶವಾದ ಪ್ರದೇಶಗಳ ಪುನರ್ನಿರ್ಮಾಣಕ್ಕೂ ಈ ಹಣವನ್ನು ಬಳಸಬಹುದು ಎಂದು ಹೇಳಿದ್ದಾರೆ.

### ನಾವು ಟ್ರಂಪ್ ಆಹ್ವಾನ ಒಪ್ಪಿಗೆ ನೀಡುವ ಬಗ್ಗೆ ಯೋಚಿಸುತ್ತಿದ್ದೇವೆ

**ಅಮೆರಿಕಾ ಗ್ರೀನ್‌ಲ್ಯಾಂಡ್ ಸ್ವಾಧೀನಕ್ಕೆ ಮುಂದಾಗಿರುವ ಬೆನ್ನಲ್ಲೇ, ರಷ್ಯಾ ಅಧ್ಯಕ್ಷ ಪುಟಿನ್ ಈ ವಿಚಾರದಲ್ಲಿ ನಮಗೆ ಆಸಕ್ತಿಯಿಲ್ಲ ಎಂದಿದ್ದಾರೆ. ಅಲ್ಲದೆ, 19ನೇ ಶತಮಾನದಲ್ಲಿ ಅಲಾಸ್ಕಾ ಮಾರಾಟಕ್ಕೆ ಹೋಲಿಸಿ, ಗ್ರೀನ್‌ಲ್ಯಾಂಡ್ ಮೌಲ್ಯವನ್ನು ಸಹ ಅಂದಾಜಿಸಿದ್ದಾರೆ. ಇದೇ ವೇಳೆ ಗಾಜ ಶಾಂತಿ ಮಂಡಳಿಗೆ 1 ಶತಕೋಟಿ ಡಾಲರ್ ದೇಣಿಗೆ ನೀಡಲು ಸಿದ್ಧ ಆದ್ರೆ ಇದು ರಷ್ಯಾ-ಉಕ್ರೇನ್ ಯುದ್ಧ ನಿಂತಾಗ ಮಾತ್ರ ಎಂದು ಕಂಡಿಷನ್ ವಿಧಿಸಿದ್ದು, ಇದರ ಜೊತೆಗೆ ಇನ್ನು, ನಾವು ಟ್ರಂಪ್ ಆಹ್ವಾನ ಒಪ್ಪಿಗೆ ನೀಡುವ ಬಗ್ಗೆ ಯೋಚಿಸುತ್ತಿದ್ದೇವೆ ಎಂದು ಹೇಳುವ ಮೂಲಕ ರಷ್ಯಾ ಯೋಜನೆಗೆ ಒಪ್ಪಿಕೊಂಡಿದೆ ಎಂಬ ಟ್ರಂಪ್ ಹೇಳಿಕೆಗಳಿಗೆ ಬ್ರೇಕ್ ಹಾಕಿದ್ದಾರೆ.**

# ಮಿನಿ ನ್ಯೂಸ್

## ಸೇನಾ ವಾಹನ ಕಮರಿಗೆ ಉರುಳಿ ಹತ್ತು ಯೋಧರು ಸಾವು

**ಜಮ್ಮು:** ಕಾಶ್ಮೀರದ ದೋಡಾ ಜಿಲ್ಲೆಯಲ್ಲಿ ಸೇನಾ ವಾಹನವೊಂದು ರಸ್ತೆಯಿಂದ ಜಾರಿ ಆಳವಾದ ಕಂದಕಕ್ಕೆ ಉರುಳಿದ ಪರಿಣಾಮ ಹತ್ತು ಯೋಧರು ಸಾವನ್ನಪ್ಪಿದ್ದಾರೆ. ಭಾದೇವಾರ್-ಚಂಬಾ ಅಂತರರಾಜ್ಯ ರಸ್ತೆಯ ಖನ್ನಿ ಮೇಲ್ಭಾಗದಲ್ಲಿ ಈ ಅಪಘಾತ ಸಂಭವಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಒಟ್ಟು 17 ಸಿಬ್ಬಂದಿಯನ್ನು ಹೊತ್ತೊಯ್ಯುತ್ತಿದ್ದ ಗುಂಡು ನಿರೋಧಕ ಸೇನಾ ವಾಹನವು ಎತ್ತರದ ಪೋಸ್ಟ್ ಕಡೆಗೆ ಹೋಗುತ್ತಿದ್ದಾಗ ಚಾಲಕನ ನಿಯಂತ್ರಣ ತಪ್ಪಿ 200 ಅಡಿ ಆಳದ ಕಂದಕಕ್ಕೆ ಉರುಳಿ ಬಿದ್ದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸೇನೆ ಮತ್ತು ಪೊಲೀಸರ ಜಂಟಿ ರಕ್ಷಣಾ ಕಾರ್ಯಾಚರಣೆಯನ್ನು ತಕ್ಷಣವೇ ಪ್ರಾರಂಭಿಸಲಾಯಿತು ಮತ್ತು ಹತ್ತು ಸೈನಿಕರು ಮೃತಪಟ್ಟಿದ್ದಾರೆ ಒಂಬತ್ತು ಮಂದಿ ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಗಾಯಗೊಂಡ ಸ್ಥಿತಿಯಲ್ಲಿ ಇತರ ಒಂಬತ್ತು ಸೈನಿಕರನ್ನು ರಕ್ಷಿಸಲಾಗಿದೆ ಮತ್ತು ಅವರಲ್ಲಿ ಗಂಭೀರ ಗಾಯಗೊಂಡ ಮೂವರನ್ನು ವಿಶೇಷ ಚಿಕಿತ್ಸೆಗಾಗಿ ಉಧಂಪುರ ಮಿಲಿಟರಿ ಆಸ್ಪತ್ರೆಗೆ ವಿಮಾನದ ಮೂಲಕ ಸಾಗಿಸಲಾಗಿದೆ ಎಂದು ಅವರು ಹೇಳಿದರು

## ಮಕ್ಕಳ ಅಶ್ಲೀಲ ಚಿತ್ರ ಪ್ರಸಾರ ಮಾಡುತ್ತಿದ್ದವನ ಬಂಧನ

**ಮಲಪ್ಪುರಂ:** ಸಾಮಾಜಿಕ ಮಾಧ್ಯಮ ವೇದಿಕೆಗಳು ಮತ್ತು ಅಶ್ಲೀಲ ವೆಬ್‌ಸೈಟ್‌ಗಳ ಮೂಲಕ ಮಕ್ಕಳ ಅಶ್ಲೀಲ ಚಿತ್ರಗಳನ್ನು ಪ್ರಸಾರ ಮಾಡಿದ ಆರೋಪದ ಮೇಲೆ ಕೇರಳದ ನೀಲಂಬೂರಿನಲ್ಲಿ 20 ವರ್ಷದ ಯುವಕನನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿಯನ್ನು ಇಲ್ಲಿಗೆ ಸಮೀಪದ ಚುಂಗಥರ ಮೂಲದ ಸಫಾನ್ ಎಂದು ಗುರುತಿಸಲಾಗಿದೆ ಎಂದು ಅವರು ಹೇಳಿದರು. ಮಲಪ್ಪುರಂ ಸೈಬರ್ ಪೊಲೀಸರ ಪ್ರಕಾರ, ಸಾಮಾಜಿಕ ಮಾಧ್ಯಮ ವೇದಿಕೆಗಳು, ವೆಬ್‌ಸೈಟ್‌ಗಳ ಮೂಲಕ ಅಶ್ಲೀಲ ವಿಷಯಗಳನ್ನು ಪ್ರಸಾರ ಮಾಡುವಲ್ಲಿ ಸಫಾನ್ ಭಾಗಿಯಾಗಿದ್ದಾನೆ ಎಂಬ ಸುಳಿವು ದೊರೆತ ನಂತರ ಆತನ ಮೇಲೆ ನಿಗಾ ಇಡಲಾಗಿತ್ತು. ಪ್ರಾಥಮಿಕ ತನಿಖೆಯ ನಂತರ, ಪೊಲೀಸರು ನಿನ್ನೆ ಆತನ ನಿವಾಸದ ಮೇಲೆ ದಾಳಿ ನಡೆಸಿ ಆತನನ್ನು ವಶಕ್ಕೆ ಪಡೆದರು.

ಆತನ ಮೊಬೈಲ್ ಫೋನ್‌ಗಳು ಸೇರಿದಂತೆ ಎಲೆಕ್ಟ್ರಾನಿಕ್ ಗ್ಯಾಜೆಟ್‌ಗಳನ್ನು ಪರಿಶೀಲಿಸುತ್ತಿದ್ದೇವೆ ಎಂದು ಪೊಲೀಸರು ತಿಳಿಸಿದ್ದಾರೆ. ಟೆಲಿಗ್ರಾಮ್ ಅಪ್ಲಿಕೇಶನ್‌ಮೂಲಕ ಮಕ್ಕಳ ಅಶ್ಲೀಲ ವಿಡಿಯೋಗಳನ್ನು ಪ್ರಸಾರ ಮಾಡಿದ ಶಂಕೆ ವ್ಯಕ್ತವಾಗಿದೆ. ಸಫಾನ್ ವಿರುದ್ಧ ಈ ಹಿಂದೆ ಮಾದಕ ದ್ರವ್ಯ ಸಂಬಂಧಿತ ಪ್ರಕರಣ ದಾಖಲಾಗಿತ್ತು ಎಂದು ಪೊಲೀಸರು ತಿಳಿಸಿದ್ದಾರೆ.ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ ಕಾಯ್ದೆ ಮತ್ತು ಮಾಹಿತಿ ತಂತ್ರಜ್ಞಾನ ಕಾಯ್ದೆಯ ಸಂಬಂಧಿತ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಆರೋಪಿಯನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

## ವಿಧಾನಸಭೆ ಚುನಾವಣೆಗೂ ಮುನ್ನ ವಿಜಯ್ ಪಕ್ಷಕ್ಕೆ ಸೀಟಿ ಹೊಡೆದ ಆಯೋಗ

**ಚೆನ್ನೈ:** ನಟ, ರಾಜಕಾರಣಿ ವಿಜಯ್ ಅವರ ತಮಿಳಗ ವೆಟ್ರಿ ಕಳಗಂ ಪಕ್ಷಕ್ಕೆ ಚುನಾವಣಾ ಆಯೋಗವು ಗುರುವಾರ ಚಿಹ್ನೆ ನಿಗದಿ ಮಾಡಿದೆ. 234 ಸದಸ್ಯ ಬಲದ ತಮಿಳುನಾಡು ವಿಧಾನಸಭೆಗೆ ಇದೇ ವರ್ಷ ಏಪ್ರಿಲ್-ಮೇ ಅವಧಿಯಲ್ಲಿ ಚುನಾವಣೆ ನಡೆಯಲಿದೆ. ಅದಕ್ಕೂ ಮುನ್ನ, ವಿಸಿಲ್ ಚಿಹ್ನೆಯನ್ನು ಟಿವಿಕೆಗೆ ನೀಡಲಾಗಿದೆ. ಕಮಲ್ ಹಾಸನ್ ಅವರ ಮಕ್ಕಳ ನಿಧಿ ಮಯಂ ಪಕ್ಷಕ್ಕೆ ಟಾರ್ಚ್ ಚಿಹ್ನೆ ನೀಡಲಾಗಿದೆ. ಈ ಸಂಬಂಧ ಚುನಾವಣಾ ಆಯೋಗವು ಹೇಳಿಕೆ ಬಿಡುಗಡೆ ಮಾಡಿದೆ. ಹೆಚ್ಚಿನ ಮಾಹಿತಿ ಇನ್ನಷ್ಟೇ ಲಭ್ಯವಾಗಬೇಕಿದೆ.

**ಎರಡು ಸುತ್ತಿನ ವಿಚಾರಣೆ:** ಕರೂರು ಕಾಲ್ತುಳಿತಕ್ಕೆ ಸಂಬಂಧಿಸಿದಂತೆ ಟಿವಿಕೆ ಮುಖ್ಯಸ್ಥ ವಿಜಯ್ ಅವರನ್ನು ಸಿಬಿಐ ಎರಡು ಸುತ್ತಿನ ವಿಚಾರಣೆಗೆ ಒಳಪಡಿಸಿದೆ. 2025ರ ಸೆಪ್ಟೆಂಬರ್ 27ರಂದು ಕರೂರಿನಲ್ಲಿ ಆಯೋಜನೆಗೊಂಡಿದ್ದ ಟಿವಿಕೆ ಸಮಾವೇಶದ ವೇಳೆ ಕಾಲ್ತುಳಿತ ಸಂಭವಿಸಿ, 41 ಮಂದಿ ಮೃತಪಟ್ಟು, 60ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದರು. ಈ ಸಂಬಂಧ ಜನವರಿ 12ರಂದು ಮೊದಲ ಬಾರಿಗೆ ಸಿಬಿಐ ಎದುರು ಹಾಜರಾಗಿದ್ದ ವಿಜಯ್, ಜನವರಿ 19ರಂದು ಸತತ ಆರು ತಾಸು ವಿಚಾರಣೆ ಎದುರಿಸಿದ್ದರು.

## ಛತ್ತೀಸಗಢ ಉಕ್ಕು ಕಾರ್ಖಾನೆಯಲ್ಲಿ ಸ್ಫೋಟ; 7 ಕಾರ್ಮಿಕರು ಸಾವು

**ಬಲೋದಾಬಜಾರ್:** ಇಲ್ಲಿನ ಉಕ್ಕು ಕಾರ್ಖಾನೆಯಲ್ಲಿ ಗುರುವಾರ ಬೆಳಗ್ಗೆ ಸಂಭವಿಸಿದ ಸ್ಫೋಟದಲ್ಲಿ ಕನಿಷ್ಠ 7 ಕಾರ್ಮಿಕರು ಮೃತಪಟ್ಟು ಹಲವರು ಗಾಯಗೊಂಡಿದ್ದಾರೆ. ಗ್ರಾಮೀಣ ಪ್ರದೇಶವಾದ ಬಕುಲಾಹಿ ಹಳ್ಳಿಯಲ್ಲಿರುವ ಸ್ಪಾಂಜ್ ಉಕ್ಕಿನ ಕಾರ್ಖಾನೆಯಲ್ಲಿ ಗುರುವಾರ ಬೆಳಗ್ಗೆ ಸ್ಫೋಟ ಸಂಭವಿಸಿದೆ. ಸುದ್ದಿ ತಿಳಿದ ತಕ್ಷಣ ಅಗ್ನಿಶಾಮಕ ಅಧಿಕಾರಿಗಳು ಮತ್ತು ಪೊಲೀಸರು ಸ್ಥಳಕ್ಕೆ ತೆರಳಿ ಕಾರ್ಯಾಚರಣೆ ನಡೆಸುತ್ತಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಘಟನೆಯಲ್ಲಿ 7 ಕಾರ್ಮಿಕರು ಮೃತಪಟ್ಟಿದ್ದು ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಈ ಪೈಕಿ ಕೆಲ ಕಾರ್ಮಿಕರ ಸ್ಥಿತಿ ಚಿಂತಾಜನಕವಾಗಿದ್ದು ಸಾವಿನ ಸಂಖ್ಯೆ ಹೆಚ್ಚುವ ಸಾಧ್ಯತೆ ಇದೆ ಎಂದು ಪೊಲೀಸರು ತಿಳಿಸಿದ್ದಾರೆ. ಕಾರ್ಯಾಚರಣೆ ಮುಂದುವರೆದಿದ್ದು ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗುತ್ತಿದೆ.

# 8ರಿಂದ ಸಂಜೆ 6ರವರೆಗೆ ಮಾತ್ರ ನಾನು ನಟ

ಆಸ್ಕರ್ ಮಟ್ಟವನ್ನು ತಲುಪಿದರೂ, ರಾಮ್ ಚರಣ್ ತಮ್ಮನ್ನು ಬೆಳಿಗ್ಗೆ 8ರಿಂದ ಸಂಜೆ 6ರವರೆಗೆ ಮಾತ್ರ ನಟ ಎಂದು ಪರಿಗಣಿಸುತ್ತಾರೆ. ಮೆಗಾಸ್ಟಾರ್ ಚಿರಂಜೀವಿ ಅವರ ಪುತ್ರನಾಗಿರುವುದು ಅನುಕೂಲವೇ ಹೊರತು ಒತ್ತಡವಲ್ಲ ಎನ್ನುತ್ತಾರೆ. ಕುಟುಂಬದ ಅನುಭವಗಳಿಂದ ವೇಗವಾಗಿ ಕಲಿಯಲು ಸಾಧ್ಯವಾಯಿತು. ಯಶಸ್ಸನ್ನು ಸರಳವಾಗಿ ಸ್ವೀಕರಿಸುವ ಈ ಜೀವನಶೈಲಿಯು ಅವರನ್ನು ಶಾಂತವಾಗಿರಿಸುತ್ತದೆಯಂತೆ. ಪ್ರಪಂಚದಾದ್ಯಂತ ಮನ್ನಣೆ ಗಳಿಸಿರುವ ರಾಮ್ ಚರಣ್ ಈಗ ಓಪನ್ ಆಗಿ ಮಾತನಾಡಿದ್ದಾರೆ.

ಅನೇಕ ನಾಯಕರು ತಮ್ಮ ಕುಟುಂಬದ ಪರಂಪರೆ ಒತ್ತಡ ಎಂದರೂ, ರಾಮ್ ಚರಣ್ ಮಾತ್ರ ಅನುಕೂಲ ಎನ್ನುತ್ತಿದ್ದಾರೆ. ಆಸ್ಕರ್ ಮಟ್ಟವನ್ನು ತಲುಪಿದ ನಂತರವೂ ಅವರು ತಮ್ಮನ್ನು ತಾವು ತುಂಬಾ ಗಂಭೀರವಾಗಿ ಪರಿಗಣಿಸುವುದಿಲ್ಲ ಎಂದು ಹೇಳಿದ್ದಾರೆ. ಚರಣ್ ತಮ್ಮ ವೃತ್ತಿಜೀವನ ಮತ್ತು ವ್ಯಕ್ತಿತ್ವದ ಬಗ್ಗೆ ಮಾತನಾಡಿದ್ದಾರೆ. ಇತ್ತೀಚೆಗೆ ಕಾರ್ಯಕ್ರಮವೊಂದರಲ್ಲಿ ಕಾಣಿಸಿಕೊಂಡಿದ್ದ ರಾಮ್ ಚರಣ್, ಮೆಗಾಸ್ಟಾರ್ ಚಿರಂಜೀವಿ ಅವರ ಮಗನಾಗಿ ಹುಟ್ಟಿದ್ದರಿಂದ ಆದ ಪ್ರಯೋಜನಗಳ ಬಗ್ಗೆ ಮುಕ್ತವಾಗಿ ಮಾತನಾಡಿದರು. 'ಸಿನಿಮಾ ಕುಟುಂಬದಿಂದ ಬಂದಿರುವುದು ಒಂದು ಅದ್ಭುತ ಅವಕಾಶ. ಮನೆಯಲ್ಲಿ ಸಾಕಷ್ಟು ಅನುಭವ ಹೊಂದಿರುವ ಜನರಿದ್ದಾಗ, ನೀವು ವಿಷಯಗಳನ್ನು ಬೇಗನೆ ಅರ್ಥಮಾಡಿಕೊಳ್ಳುತ್ತೀರಿ. ಅಂತಹ ವಾತಾವರಣದಲ್ಲಿ ಬೆಳೆದವರು ನಟನಾ ಶಾಲೆಗೆ ಹೋಗಿ ಹೊಸ ವಿಷಯಗಳನ್ನು ಕಲಿಯುವವರಿಗಿಂತ ಹೆಚ್ಚು ವೇಗವಾಗಿ ಕಲಿಯುತ್ತಾರೆ' ಎಂದು ಚರಣ್ ಹೇಳಿದರು. ಪರಂಪರೆಯು ತನ್ನ ಮೇಲೆ ಹೊರೆಯಾಗಿದೆ ಎಂದು ತಾನು ಎಂದಿಗೂ ಭಾವಿಸಲಿಲ್ಲ,

ಆದರೆ ಅದನ್ನು ಒಂದು ಅವಕಾಶವಾಗಿ ನೋಡಿದೆ' ಎಂದು ಅವರು ಸ್ಪಷ್ಟಪಡಿಸಿದರು. 'ಆರಂಭದಲ್ಲಿ ನನಗೆ ಕಷ್ಟವಾಗಲಿಲ್ಲ. ಆದರೆ ಪ್ರೇಕ್ಷಕರು ನನ್ನನ್ನು ನಟನಾಗಿ ಸ್ವೀಕರಿಸುವುದು ಕಷ್ಟಕರವಾಗಬಹುದು. ಏಕೆಂದರೆ ಅವರ ನಿರೀಕ್ಷೆಗಳು ತುಂಬಾ ಹೆಚ್ಚಿರುತ್ತವೆ. ಆದರೆ ಕಾಲಾನಂತರದಲ್ಲಿ, ನಾವು ಮಾಡುವ ಕೆಲಸದ ಮೂಲಕ ಅವರ ಅಭಿಪ್ರಾಯಗಳು ಬದಲಾಗುತ್ತವೆ ಎಂದು ನಾನು ನಂಬುತ್ತೇನೆ' ಎಂದು ಅವರು ಪ್ರಾಮಾಣಿಕವಾಗಿ ಹೇಳಿದರು.

'ನಾನು ನನ್ನನ್ನು ತುಂಬಾ ಗಂಭೀರವಾಗಿ ಪರಿಗಣಿಸುವುದಿಲ್ಲ. ನಾನು ಬೆಳಿಗ್ಗೆ 8 ರಿಂದ ಸಂಜೆ 6 ರವರೆಗೆ ಮಾತ್ರ ನನ್ನ ಕೆಲಸದ ಮೇಲೆ ಗಮನ ಹರಿಸುತ್ತೇನೆ. ಅದು ಮುಗಿದ ನಂತರ, ನಾನು ಏನು ಮಾಡುತ್ತಿದ್ದೇನೆ ಎಂಬುದನ್ನು ಸಂಪೂರ್ಣವಾಗಿ ಮರೆತುಬಿಡುತ್ತೇನೆ. ಯಶಸ್ಸಿನ ಬಗ್ಗೆ ನಾನು ಹೆಚ್ಚು ಯೋಚಿಸುವುದಿಲ್ಲ' ಎಂದು ಎಂದು ಚರಣ್ ತಮ್ಮ ಸರಳ ಜೀವನಶೈಲಿಯ ಬಗ್ಗೆ ವಿವರಿಸುತ್ತಾರೆ. ಈ ಅಭ್ಯಾಸವು ಅವರನ್ನು ಯಾವಾಗಲೂ ಶಾಂತವಾಗಿರಿಸುತ್ತದೆ ಎಂದು ಅವರು ಹೇಳಿದ್ದಾರೆ. ರಾಮ್ ಚರಣ್ ಪ್ರಸ್ತುತ ತಮ್ಮ ಮುಂದಿನ ಚಿತ್ರ 'ಪೆದ್ದಿ' ಚಿತ್ರೀಕರಣದಲ್ಲಿ ನಿರತರಾಗಿದ್ದಾರೆ.

ಮುಂದಿನ ಚಿತ್ರ ಪೆದ್ದಿ ಚಿತ್ರೀಕರಣ





ಸಿನಿ ವಾಹಿನಿ

# ನಾವು ಮದುವೆ ಆಗಿದ್ದೇವೆ

ಬಾಲಿವುಡ್ ನಟ ಆಮಿರ್ ಖಾನ್ ತಮ್ಮ ಗೆಳತಿ ಗೌರಿ ಸ್ಪ್ರಾಟ್ ಜೊತೆಗಿನ ಸಂಬಂಧವನ್ನು ಬಹಿರಂಗಪಡಿಸಿದ್ದಾರೆ. ಇಬ್ಬರೂ ಲಿವ್-ಇನ್ ಸಂಬಂಧದಲ್ಲಿದ್ದು, ಆಮಿರ್ ಗೌರಿಯನ್ನು ತಮ್ಮ 'ಹೃದಯದಲ್ಲಿ' ಮದುವೆಯಾಗಿದ್ದೇನೆ ಎಂದಿದ್ದಾರೆ. 25 ವರ್ಷಗಳ ಪರಿಚಯ ಮತ್ತು ಎರಡೂವರೆ ವರ್ಷಗಳ ಡೇಟಿಂಗ್ ನಂತರ, ಅವರು ಕಾನೂನುಬದ್ಧ ಮದುವೆಯ ಬಗ್ಗೆ ಯೋಚಿಸುತ್ತಿದ್ದಾರೆ. ಬಾಲಿವುಡ್‌ನ ಮಿಸ್ಟರ್ ಪರ್ಫೆಕ್ಷನಿಸ್ಟ್, ನಟ ಆಮಿರ್ ಖಾನ್ ತಮ್ಮ ಖಾಸಗಿ ಜೀವನದ ಬಗ್ಗೆ ಆಗಾಗ್ಗೆ ಸುದ್ದಿಯಲ್ಲಿರುತ್ತಾರೆ. ತಮ್ಮ 60ನೇ ಹುಟ್ಟುಹಬ್ಬದಂದು, ಅವರು ತಮ್ಮ ಗೆಳತಿ ಗೌರಿ ಸ್ಪ್ರಾಟ್ ಮೇಲಿನ ಪ್ರೀತಿಯನ್ನು ಸಾರ್ವಜನಿಕವಾಗಿ ಒಪ್ಪಿಕೊಂಡರು ಮತ್ತು ಅವರನ್ನು ಮುನ್ನೆಲೆಗೆ ತಂದರು. ಅದಾದ ನಂತರ, ಇಬ್ಬರೂ ವಿವಿಧ ಕಾರ್ಯಕ್ರಮಗಳಲ್ಲಿ ಒಟ್ಟಿಗೆ ಕಾಣಿಸಿಕೊಂಡರು. ಈಗ, ಇತ್ತೀಚಿನ ಸಂದರ್ಶನವೊಂದರಲ್ಲಿ, ಅವರು ತಮ್ಮ ಸಂಬಂಧ ಮತ್ತು ಮದುವೆಯ ಬಗ್ಗೆ ಮಾತನಾಡಿದ್ದಾರೆ. ಆಮಿರ್ ಮತ್ತು ಅವರ ಗೆಳತಿ ಗೌರಿ ಸ್ಪ್ರಾಟ್ ಲಿವ್-ಇನ್ ಸಂಬಂಧದಲ್ಲಿ ವಾಸಿಸುತ್ತಿದ್ದಾರೆ. ಎರಡೂ ಕುಟುಂಬಗಳಿಗೂ ಇದು ತಿಳಿದಿದೆ. ಇಬ್ಬರೂ ಕಳೆದ 25 ವರ್ಷಗಳಿಂದ ಪರಸ್ಪರ ಪರಿಚಿತರು ಮತ್ತು ಕಳೆದ ಎರಡೂವರೆ ವರ್ಷಗಳಿಂದ ಪರಸ್ಪರ ಡೇಟಿಂಗ್ ಮಾಡುತ್ತಿದ್ದಾರೆ.

# ಧುರಂಧರ್ 2 ಸೇರಲಿರುವ ಮತ್ತೊಬ್ಬ ಸ್ಟಾರ್ ಹೀರೋ

ಮಾರ್ಚ್‌ನಲ್ಲಿ ಬಿಡುಗಡೆ ಆಗಲಿರುವ 'ಧುರಂಧರ್ 2' ಭಾರತದ ಬಹುನಿರೀಕ್ಷಿತ ಸಿನಿಮಾಗಳಲ್ಲಿ ಒಂದೆನಿಸಿಕೊಂಡಿದೆ. 'ಧುರಂಧರ್' ದೊಡ್ಡ ಹಿಟ್ ಆಗಿರುವ ಕಾರಣ, 'ಧುರಂಧರ್ 2' ಸಿನಿಮಾವನ್ನು ಇನ್ನಷ್ಟು ದೊಡ್ಡ ಮಟ್ಟದಲ್ಲಿ ನಿರ್ಮಿಸಿಲು ಚಿತ್ರತಂಡ ಸಜ್ಜಾಗಿದ್ದು, ಇದೀಗ 'ಧುರಂಧರ್ 2' ಸಿನಿಮಾಕ್ಕೆ ಮತ್ತೊಬ್ಬ ಬಾಲಿವುಡ್ ಸ್ಟಾರ್ ನಟನ ಎಂಟ್ರಿ ಸಹ ಆಗಲಿದೆ ಎನ್ನಲಾಗುತ್ತಿದೆ. ರಣ್ವೀರ್ ಸಿಂಗ್ ನಟನೆಯ 'ಧುರಂಧರ್' ಸಿನಿಮಾ ಬಾಕ್ಸ್ ಆಫೀಸ್‌ನಲ್ಲಿ ದಾಖಲೆಗಳನ್ನು ಬರೆಯುತ್ತಿದೆ. ಸಿನಿಮಾ ಬಿಡುಗಡೆ ಆಗಿ ಎರಡು ತಿಂಗಳಾಗುತ್ತಾ ಬಂದಿದೆ, ಆದರೆ ಈಗಲೂ ಸಹ ಹಲವು ಕಡೆಗಳಲ್ಲಿ ತುಂಬಿದ ಗೃಹಗಳ ಪ್ರದರ್ಶನವನ್ನು ಕಾಣುತ್ತಿದೆ 'ಧುರಂಧರ್' ಸಿನಿಮಾ. ಸಿನಿಮಾದ ಹವಾ ಎಷ್ಟಿದೆಯಂತೆ ಮಾರ್ಚ್ ತಿಂಗಳಲ್ಲಿ ಬಿಡುಗಡೆ ಆಗಲಿರುವ ಸಿನಿಮಾದ ಎರಡನೇ ಭಾಗವಾದ 'ಧುರಂಧರ್ 2' ಭಾರತದ ಬಹುನಿರೀಕ್ಷಿತ ಸಿನಿಮಾಗಳಲ್ಲಿ ಒಂದೆನಿಸಿಕೊಂಡಿದೆ. 'ಧುರಂಧರ್' ದೊಡ್ಡ ಹಿಟ್ ಆಗಿರುವ ಕಾರಣ, 'ಧುರಂಧರ್ 2' ಸಿನಿಮಾವನ್ನು ಇನ್ನಷ್ಟು ದೊಡ್ಡ ಮಟ್ಟದಲ್ಲಿ ನಿರ್ಮಿಸಿಲು ಚಿತ್ರತಂಡ ಸಜ್ಜಾಗಿದ್ದು, ಇದೀಗ 'ಧುರಂಧರ್ 2' ಸಿನಿಮಾಕ್ಕೆ ಮತ್ತೊಬ್ಬ ಬಾಲಿವುಡ್ ಸ್ಟಾರ್ ನಟನ ಎಂಟ್ರಿ ಸಹ ಆಗಲಿದೆ ಎನ್ನಲಾಗುತ್ತಿದೆ. 'ಧುರಂಧರ್' ಸಿನಿಮಾ ನಿರ್ದೇಶಿಸಿರುವ ಆದಿತ್ಯ ಧರ್ ಅವರ ಮೊದಲ ಸಿನಿಮಾ 'ಉರಿ: ದಿ ಸರ್ಜಿಕಲ್ ಸ್ಟ್ರೈಕ್'. 'ಧುರಂಧರ್' ರೀತಿ ಆ ಸಿನಿಮಾ ಸಹ ಸೈನ್ಯ ಮತ್ತು ದೇಶಪ್ರೇಮದ ಜಾನರ್ ಅನ್ನು ಒಳಗೊಂಡಿತ್ತು. ಸಿನಿಮಾನಲ್ಲಿ ವಿಕ್ಕಿ ಕೌಶಲ್ ನಾಯಕನಾಗಿ ನಟಿಸಿದ್ದರು. 'ಉರಿ'ಗೆ ಮೊದಲು ಒಳ್ಳೆಯ ನಟ ಎಂದಷ್ಟೆ ಎನಿಸಿಕೊಂಡಿದ್ದ ವಿಕ್ಕಿ ಕೌಶಲ್, 'ಉರಿ'ಯ ಬಳಿಕ ಸ್ಟಾರ್ ನಟ ಆದರು. ರೊಮ್ಯಾಂಟಿಕ್, ರಿಯಲ್ ಲೈಫ್ ಕತೆಗಳಲ್ಲಿ ಮಾತ್ರವಲ್ಲ ಪಕ್ಕಾ ಆಕ್ಷನ್ ಸಿನಿಮಾಗಳಿಗೂ ಸರಿಹೊಂದುವ ನಟ ತಾವು ಎಂಬುದನ್ನು ವಿಕ್ಕಿ ಕೌಶಲ್ 'ಉರಿ' ಮೂಲಕ ಸಾಬೀತುಪಡಿಸಿದರು.



# ಟಾಕ್ಸಿಕ್ ಟ್ರೇಲರ್ ಯಾವಾಗ

ಯಶ್ ನಟನೆಯ 'ಟಾಕ್ಸಿಕ್' ಸಿನಿಮಾದ ಟೀಸರ್ ಬಳಿಕ ಈಗ ಟ್ರೇಲರ್ ಬಗ್ಗೆ ಕುತೂಹಲ ಹೆಚ್ಚಿದೆ. ಮಾರ್ಚ್ 19ರಂದು ಸಿನಿಮಾ ತೆರೆಕಾಣಲಿದೆ. ಬಾಲಿವುಡ್ ಚಿತ್ರದ ಸ್ಪರ್ಧೆಯ ನಡುವೆಯೂ ಯಶ್ ಚಿತ್ರ ಭಾರಿ ನಿರೀಕ್ಷೆ ಮೂಡಿಸಿದೆ. ಟ್ರೇಲರ್‌ನಲ್ಲಿ ಪ್ರಮುಖ ತಾರೆಯರಾದ ನಯನತಾರಾ, ರುಕ್ಮಿಣಿ, ಕಿಯಾರಾ ಅವರ ಪಾತ್ರಗಳ ಪರಿಚಯ ಆಗುವ ನಿರೀಕ್ಷೆ ಇದೆ.



ಯಶ್ ನಟನೆಯ 'ಟಾಕ್ಸಿಕ್' ಸಿನಿಮಾದ ಟೀಸರ್ ರಿಲೀಸ್ ಆಗಿ ಹಲವು ದಿನಗಳು ಕಳೆದರೂ ಅದರ ಬಗ್ಗೆ ಶುರುವಾದ ಚರ್ಚೆ ನಿಂತಿಲ್ಲ. ಅನೇಕರು ಸಿನಿಮಾ ಬಗ್ಗೆ ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಟೀಸರ್‌ನಲ್ಲಿ ಯಶ್ ಹೆಚ್ಚಿನ ವಿಷಯವನ್ನು ಬಿಟ್ಟುಕೊಟ್ಟಿಲ್ಲ. ಕೆಲ ಬೋಲ್ಡ್ ದೃಶ್ಯಗಳು ಚರ್ಚೆ ಹುಟ್ಟುಹಾಕಿದ್ದವು. ಟ್ರೇಲರ್ ರಿಲೀಸ್‌ಗೆ ಅಭಿಮಾನಿಗಳು ಕಾದಿದ್ದಾರೆ. ಇದಕ್ಕಾಗಿ ಮತ್ತಷ್ಟು ದಿನ ಕಾಯಬೇಕಾಗಿ ಬರಬಹುದು ಎಂದು ಹೇಳಲಾಗುತ್ತಾ ಇದೆ. ಆ ಬಗ್ಗೆ ಇಲ್ಲಿದೆ ವಿವರ. 'ಟಾಕ್ಸಿಕ್' ಸಿನಿಮಾ ರಿಲೀಸ್ ಮಾರ್ಚ್ 19ರಂದು ರಿಲೀಸ್ ಆಗಲಿದೆ. ಈದ್ ಹಾಗೂ ಯುಗಾದಿ ಪ್ರಯುಕ್ತ ಸಿನಿಮಾ ತೆರೆಗೆ ಬರುತ್ತಿದೆ. ಸಿನಿಮಾ ರಿಲೀಸ್‌ಗೆ ಎರಡು ತಿಂಗಳು ಮಾತ್ರ ಬಾಕಿ ಉಳಿದಿದೆ. ಸಿನಿಮಾ ಟೀಸರ್ ಈಗಾಗಲೇ ರಿಲೀಸ್ ಆಗಿ ಸಾಕಷ್ಟು ಸದ್ದು ಮಾಡುತ್ತಿದೆ. ಕೆಲವರು ಟೀಸರ್ ಬಗ್ಗೆ ನೆಗೆಟಿವ್ ಆಗಿ ಮಾತನಾಡುತ್ತಿದ್ದಾರೆಯಾದರೂ ಇದರಿಂದ ಚಿತ್ರಕ್ಕೆ ಪ್ರಚಾರ ಆಗಿದೆ. ಈಗ ಟ್ರೇಲರ್ ಮೂಲಕ ಜನರ ಎದುರು ಬರಲು ಯಶ್ ರೆಡಿ ಆಗುತ್ತಿದ್ದಾರೆ ಎಂದು ವರದಿ ಆಗಿದೆ.

# ಅಮೃತ ಅಂಜನ್ ಸಿನಿಮಾದ ಫೀಲಿಂಗ್ ಸಾಂಗ್ ರಿಲೀಸ್

ಜೀವನದಲ್ಲಿ ಆಸಕ್ತಿ, ಗುರಿ, ಛಲ ಇದ್ದರೆ ಖಂಡಿತ ದಡ ಸೇರಬಹುದು ಎಂಬ ನಂಬಿಕೆಯೊಂದಿಗೆ ಯುವ ಪ್ರತಿಭೆಗಳ ಸೇರಿಕೊಂಡು ಅಮೃತ ಅಂಜನ್ ಎಂಬ ಶಾರ್ಟ್ ಫಿಲಂ ಮಾಡಿ ಎಲ್ಲರ ಗಮನ ಸೆಳೆದಿದ್ದರು. ಈಗ ಇದೇ ತಂಡ ಅಮೃತ ಅಂಜನ್ ಎನ್ನುವ ಸಿನಿಮಾ ಮೂಲಕ ಬೆಳ್ಳಿ ಪರದೆಗೆ ಬರಲು ಸಜ್ಜಾಗಿದ್ದಾರೆ. ಈ ಚಿತ್ರದ ಒಂದು ಮನಮುಟ್ಟುವ ಭಾವನಾತ್ಮಕ ಹಾಡೊಂದು ಬಿಡುಗಡೆ ಮಾಡಲು ಜಿಟಿ ಮಾಲ್‌ನಲ್ಲಿರುವ ಉತ್ಸವ್ ಲಗೇಸಿಯಲ್ಲಿ ಆಯೋಜನೆ ಮಾಡುವುದರ ಜೊತೆಗೆ ಮಾಧ್ಯಮದೊಂದಿಗೆ ಚಿತ್ರದ ಕುರಿತು ಮಾಹಿತಿಯನ್ನ ಹಂಚಿಕೊಳ್ಳಲು ತಂಡ ಸಿದ್ಧತೆ ನಡೆಸಿತು.



ಅದೇ ರೀತಿ ಹಾಡು ಬಿಡುಗಡೆ ನಂತರ ಚಿತ್ರತಂಡ ಪತ್ರಿಕಾಗೋಷ್ಠಿಗೆ ಹಾಜರಾದ್ದರು. ಇನ್ನು ಮೊದಲಿಗೆ ಈ ಚಿತ್ರದ ನಿರ್ದೇಶಕ ಜ್ಯೋತಿ ರಾವ್ ಮೋಹಿತ್ ಮಾತನಾಡುತ್ತಾ, ನಾನು ಈ ಹಿಂದೆ ಸೋಡಾ ಬುಡ್ಡಿ ಎಂಬ ಚಿತ್ರವನ್ನ ಮಾಡಿದ್ದೆ. ಇದು ನನ್ನ 2ನೇ ಚಿತ್ರ. ಈ ಸಿನಿಮಾ ಆರಂಭಿಸುವುದಕ್ಕೆ ನನ್ನ ಅಮೃತ ಅಂಜನ್ ಕಿರುಚಿತ್ರವೇ ಕಾರಣ. ಈ ಚಿತ್ರದ ಟೈಟಲ್ ವಿಚಾರವಾಗಿ ಬಹಳಷ್ಟು ಸಮಸ್ಯೆಗಳನ್ನು ಎದುರಿಸಿದ್ವಿ. ಹಾಗಾಗಿ ಅಮೃತ ಅಂಜನ್ ಎಂಬ ಹೆಸರಿನೊಂದಿಗೆ ಚಿತ್ರ ನಿರ್ಮಾಣ ಮಾಡಿದ್ದು, ಇದೊಂದು ಕಂಪ್ಲೀಟ್ ಕಾಮಿಡಿ ಎಂಟರ್ಟೈನ್ಮೆಂಟ್ ಚಿತ್ರವಾಗಿದ್ದು 80 ಪರ್ಸೆಂಟ್ ಹಾಸ್ಯ, 20 ಪರ್ಸೆಂಟ್ ಸೆಂಟಿಮೆಂಟ್ ಅಂಶಗಳ ಒಳಗೊಂಡಿದ್ದು, ಸಂಪೂರ್ಣ ಮನೋರಂಜನೆ ಈ ಚಿತ್ರ ನೀಡಲಿದೆ. ನಮ್ಮ ಚಿತ್ರದಲ್ಲಿ ಒಟ್ಟು ಎರಡೂವರೆ ಹಾಡು ಇದೆ ಎನ್ನುತ್ತಾ, ಇಂದು ಬಿಡುಗಡೆ ಮಾಡಿರುವ ಭಾವನಾತ್ಮಕ ಹಾಡಿಗೆ ಮುಖ್ಯ ಕಾರಣವೇ ನಮ್ಮ ತಾಯಿ ತಂದೆ. ನಾನು ಬಾಲ್ಯದಲ್ಲಿ ಕಂಡಂತಹ ಒಂದು ಸತ್ಯದ ಅಂಶ. ನಮ್ಮ ತಾಯಿಗೆ ತಂದೆ ತುಂಬಾ ಟಾರ್ಚರ್ ಕೊಡ್ತಾ ಇದ್ರು, ಆ ಪ್ರೇರಣೆಯಿಂದ ಈ ಹಾಡು ಮಾಡಿದ್ದೇನೆ. ನೈಜಕ್ಕೆ ಪೂರಕವಾಗಿ ಬರಬೇಕೆಂದು ಬಹಳಷ್ಟು ಶ್ರಮಪಟ್ಟು ಕೆಲಸ ಮಾಡಿದ್ದೇವೆ. ಈ ಹಾಡಿನಲ್ಲಿ ನಟಿಸಿರುವ ಹಿರಿಯ ನಟ ನವೀನ್. ಡಿ. ಪಡೀಲ್ ತಂದೆಯಾಗಿ ಹಾಗೂ ಮಧುಮತಿ ತಾಯಿಯ ಪಾತ್ರವನ್ನ ಬಹಳ ಅದ್ಭುತವಾಗಿ ಅಭಿನಯಿಸಿದ್ದಾರೆ. ಈ ಹಾಡನ್ನ ವೆಂಕಟೇಶ್ ಕುಲಕರ್ಣಿ ಬರೆದಿದ್ದಾರೆ. ನಮ್ಮ ಸಿನಿಮಾದಲ್ಲಿ ಎಲ್ಲಾ ರೀತಿಯ ಅಂಶಗಳ ಜೊತೆ ಹೊಸ ಕಂಟೆಂಟ್ ಒಳಗೊಂಡಿದೆ ಎಂದರು.

# ಟಿ20 ವಿಶ್ವಕಪ್ ಬಹಿಷ್ಕರಿಸಿದ ಬಾಂಗ್ಲಾದೇಶ





ಢಾಕಾದಲ್ಲಿ ಬಿಸಿಬಿ ಮತ್ತು ಬಾಂಗ್ಲಾದೇಶ ಸರ್ಕಾರದ ನಡುವೆ ಸಭೆ ನಡೆದಿದ್ದು, ಬಾಂಗ್ಲಾದೇಶ ಕ್ರಿಕೆಟ್ ತಂಡವನ್ನು ಟಿ20 ವಿಶ್ವಕಪ್ ಆಡಲು ಭಾರತಕ್ಕೆ ಕಳುಹಿಸದಿರಲು ನಿರ್ಧರಿಸಲಾಗಿದೆ. ಇದೀಗ ಬಾಂಗ್ಲಾದೇಶ ತಂಡ ಟಿ20 ವಿಶ್ವಕಪ್‌ನಿಂದ ಹೊರಬಿದ್ದಿರುವ ಕಾರಣ ಅದರ ಸ್ಥಾನದಲ್ಲಿ ಸ್ಕಾಟ್ಲೆಂಡ್ ತಂಡಕ್ಕೆ ಟಿ20 ವಿಶ್ವಕಪ್‌ನಲ್ಲಿ ಆಡುವ ಅವಕಾಶ ಸಿಗಲಿದೆ.

ಬಿಸಿಬಿ ಅಧ್ಯಕ್ಷ ಅಮೀನುಲ್, ಸಿಇಒ ನಿಜಾಮುದ್ದೀನ್ ಮತ್ತು ಕೆಲವು ಬಾಂಗ್ಲಾದೇಶ ಆಟಗಾರರು ಭಾಗವಹಿಸಿದ್ದರು. ವರದಿಯ ಪ್ರಕಾರ, ಬಾಂಗ್ಲಾ ತಂಡದ ಆಟಗಾರರಿಗೆ ವಿಶ್ವಕಪ್‌ನಲ್ಲಿ ಭಾಗವಹಿಸುವ ಇರಾದೆಯಿದೆ.

ಆದರೆ ಬಿಸಿಬಿ ಮತ್ತು ಬಾಂಗ್ಲಾ ಸರ್ಕಾರಕ್ಕೆ ಮಾತ್ರ ತನ್ನ ತಂಡವನ್ನು ಭಾರತಕ್ಕೆ ಕಳುಹಿಸುವ ಮನಸ್ಸಿಲ್ಲ.


ಹೀಗಾಗಿ ಸಭೆಯ ಬಳಿಕ ಮಾತನಾಡಿದ ಬಾಂಗ್ಲಾದೇಶ ಕ್ರಿಕೆಟ್ ಮಂಡಳಿಯ ಅಧ್ಯಕ್ಷ, 'ಭಾರತದ ಹೊರಗೆ ಪಂದ್ಯಗಳನ್ನು ನಡೆಸಬೇಕೆಂಬ ನಮ್ಮ ಮನವಿಯನ್ನು ಐಸಿಸಿ ತಿರಸ್ಕರಿಸಿದೆ. ಹೀಗಾಗಿ ತಮ್ಮ ತಂಡವು ಕೂಡ ಭಾರತದಲ್ಲಿ ಒಂದೇ ಒಂದು ಪಂದ್ಯವನ್ನು ಆಡುವುದಕ್ಕೆ ಸಿದ್ಧವಿಲ್ಲ. ಇದು ಐಸಿಸಿಯ ವೈಫಲ್ಯ, ಐಸಿಸಿ ನಮ್ಮ ತಂಡದ ಪಂದ್ಯಗಳನ್ನು ಭಾರತದಿಂದ ಸ್ಥಳಾಂತರಿಸಲಿಲ್ಲ. ನಮಗೆ ವಿಶ್ವ ಕ್ರಿಕೆಟ್ ಬಗ್ಗೆ ತಿಳಿದಿಲ್ಲ, ಆದರೆ ಅದರ ಜನಪ್ರಿಯತೆ ದಿನದಿಂದ ದಿನಕ್ಕೆ ಕುಸಿಯುತ್ತಿದೆ. ಐಸಿಸಿ 200 ಮಿಲಿಯನ್ ಜನರನ್ನು ನಿರಾಶೆಗೊಳಿಸಿದೆ'.

ಕ್ರಿಕೆಟ್ ಈಗ ಒಲಿಂಪಿಕ್ಸ್‌ಗೆ ಹೋಗುತ್ತಿದೆ, ಆದರೆ ನಮ್ಮಂತಹ ದೇಶವು ಅಲ್ಲಿಗೆ ಹೋಗದಿದ್ದರೆ, ಅದು ಐಸಿಸಿಯ ವೈಫಲ್ಯ. ಐಸಿಸಿ ನಮಗೆ 24 ಗಂಟೆಗಳ ಅಂತಿಮ ಗಡುವನ್ನು ನೀಡಿತ್ತು. ಆದರೆ ಒಂದು ಜಾಗತಿಕ ಸಂಸ್ಥೆ ಎಂದಿಗೂ ಈ ರೀತಿ ಮಾಡುವುದಿಲ್ಲ ಆದಾಗ್ಯೂ, ನಮ್ಮ ಹೋರಾಟ ಇಲ್ಲಿಗೆ ನಿಲ್ಲುವುದಿಲ್ಲ, ನಾವು ನಮ್ಮ ಹೋರಾಟವನ್ನು ಮುಂದುವರಿಸುತ್ತೇವೆ. ಐಸಿಸಿ ಸಭೆಯಲ್ಲಿ ತಪ್ಪು ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ. ಐಸಿಸಿ ಸಭೆಯಲ್ಲಿ ಕೇವಲ ಬಿಸಿಸಿಐನ ಅಭಿಪ್ರಾಯಗಳನ್ನು ಮಾತ್ರ ಪರಿಗಣಿಸಲಾಗಿದೆ'. 'ಭಾರತದಲ್ಲಿ ನಮ್ಮ ತಂಡಕ್ಕೆ ಅಪಾಯವಿದೆ. ನಾವು ವಿಶ್ವಕಪ್‌ನಲ್ಲಿ ಆಡಲು ಬಯಸುತ್ತೇವೆ, ಆದರೆ ನಮ್ಮ ಆಟಗಾರರಿಗೆ ಭದ್ರತೆಯು ಸಮಸ್ಯೆಯಾಗಿಯೇ ಉಳಿದಿದೆ. ಭದ್ರತೆಯ ವಿಷಯದಲ್ಲಿ ಐಸಿಸಿ ಏನು ಬೇಕಾದರೂ ಹೇಳಬಹುದು, ಆದರೆ ನಮ್ಮ ಆಟಗಾರರಲ್ಲಿ ಒಬ್ಬರನ್ನು ಭದ್ರತಾ ದೃಷ್ಟಿಯಿಂದ ಐಪಿಎಲ್ ಪಂದ್ಯಾವಳಿಯಿಂದ ಹೊರಹಾಕಲಾಗಿದೆ. ನಮ್ಮ ಇಡೀ ತಂಡಕ್ಕೆ ಹೇಗೆ ಭದ್ರತೆಯನ್ನು ಒದಗಿಸುತ್ತಾರೆ ನಾವು ನಮ್ಮ ಆಟಗಾರರನ್ನು ಅಪಾಯಕ್ಕೆ ಸಿಲುಕಿಸಲು ಸಾಧ್ಯವಿಲ್ಲ' ಎಂದಿದ್ದಾರೆ.

# ಮತ್ತೊಂದು ಅವಮಾನಕ್ಕೂ ಮುನ್ನ ಅಝುಂ ಎಸ್ಕೇಪ್!

ಆಸ್ಟ್ರೇಲಿಯಾದ ಟಿ20 ಟೂರ್ನಿ ಬಿಗ್ ಬ್ಯಾಷ್ ಲೀಗ್‌ನಲ್ಲಿ ಕಣಕ್ಕಿಳಿದಿದ್ದ ಪಾಕಿಸ್ತಾನ್ ತಂಡದ ಸ್ಟಾರ್ ಬ್ಯಾಟರ್ ಬಾಬರ್ ಆಝುಂ ಟೂರ್ನಿ ಮುಗಿಯುವ ಮುನ್ನವೇ ತವರಿಗೆ ಮರಳಿದ್ದಾರೆ. ಅದು ಕೂಡ ಸಿಡ್ನಿ ಸಿಕ್ಸರ್ಸ್ ತಂಡವು ನಾಕೌಟ್ ಹಂತಕ್ಕೇರಿದ ಬಳಿಕ. ಅಂದರೆ ಬಿಬಿಎಲ್‌ನ ಕೊನೆಯ 2 ಪಂದ್ಯಗಳು ಮಾತ್ರ ಬಾಕಿ ಇರುವಾಗ ಬಾಬರ್ ಮುಂದಿನ ವಾರದ ಪಂದ್ಯಕ್ಕಾಗಿ ಪಾಕಿಸ್ತಾನಕ್ಕೆ ವಾಪಾಸ್ಸಾಗಿದ್ದಾರೆ.

ಆಸ್ಟ್ರೇಲಿಯಾದಲ್ಲಿ ನಡೆಯುತ್ತಿರುವ ಬಿಗ್ ಬ್ಯಾಷ್ ಲೀಗ್‌ನಿಂದ ಬಾಬರ್ ಆಝುಂ ಅರ್ಧದಲ್ಲೇ ಹೊರ ನಡೆದಿದ್ದಾರೆ. ಅದು ಸಹ ಮತ್ತೊಂದು ಅವಮಾನದ ಮುನ್ಸೂಚನೆ ಸಿಗುತ್ತಿದ್ದಂತೆ ಎಂಬುದು ವಿಶೇಷ. ಈ ಬಾರಿಯ ಬಿಬಿಎಲ್‌ನಲ್ಲಿ ಸಿಡ್ನಿ ಸಿಕ್ಸರ್ಸ್ ಪರ ಕಣಕ್ಕಿಳಿದಿದ್ದ ಬಾಬರ್ ಆಝುಂ ಸುದ್ದಿಯಾಗಿದ್ದು ಮಾತ್ರ ತನ್ನ ಕಳಪೆಯಾಟದಿಂದ. ಅದರಲ್ಲೂ ರನ್ ಗಳಿಸಲು ತಡಕಾಡುತ್ತಿದ್ದ ಬಾಬರ್ ಅವರಿಗೆ ಸ್ಟೀವ್ ಸ್ಮಿತ್ ಸ್ಟ್ರೈಕ್ ನೀಡದಿರುವುದು ಭಾರೀ ಚರ್ಚೆಗೆ ಕಾರಣವಾಗಿತ್ತು. ಅಷ್ಟೇ ಅಲ್ಲದೆ ಬಾಬರ್ ಆಝುಂ ಅವರ ಕಳಪೆ ಫೀಲ್ಡಿಂಗ್ ಕೂಡ ಸಿಡ್ನಿ ಸಿಕ್ಸರ್ಸ್ ಆಟಗಾರರಲ್ಲಿ ಅಸಮಾಧಾನವನ್ನು ಉಂಟು ಮಾಡಿತ್ತು.



ಇದಾಗ್ಯೂ ಕಳೆದ 11 ಪಂದ್ಯಗಳಲ್ಲಿ ಬಾಬರ್ ಆಝುಂ ಅವರನ್ನು ಕಣಕ್ಕಿಳಿಸಲಾಗಿತ್ತು. ಆದರೆ 11 ಪಂದ್ಯಗಳಿಂದ ಬಾಬರ್ ಆಝುಂ ಕಲೆಹಾಕಿದ್ದು ಕೇವಲ 202 ರನ್‌ಗಳು. ಅಂದರೆ 22.44 ರ ಸರಾಸರಿಯಲ್ಲಿ ಮಾತ್ರ ರನ್‌ಗಳಿಸಿದ್ದರು. ಅದು ಕೂಡ 103 ರ ಸ್ಟ್ರೈಕ್ ರೇಟ್‌ನಲ್ಲಿ. ಹೀಗಾಗಿಯೇ ಬಾಬರ್ ಆಝುಂ ಅವರನ್ನು ಚಾಲೆಂಜರ್ (ನಾಕೌಟ್) ಪಂದ್ಯದಿಂದ ಕೈ ಬಿಡಬೇಕು ಎಂಬ ಮಾತುಗಳು ಕೇಳಿ ಬಂದಿದ್ದವು. ಚಾಲೆಂಜರ್ ಪಂದ್ಯವು ಸಿಡ್ನಿ ಸಿಕ್ಸರ್ಸ್ ತಂಡದ ಪಾಲಿಗೆ ನಿರ್ಣಾಯಕ. ಈ ಮ್ಯಾಚ್‌ನಲ್ಲಿ ಗೆಲ್ಲುವ ತಂಡ ಫೈನಲ್ ಗೇರುತ್ತದೆ. ಅತ್ತ ಪರ್ತ್ ಸ್ಕಾಚರ್ಸ್ ವಿರುದ್ಧದ ನಿರ್ಣಾಯಕ ಪಂದ್ಯದಲ್ಲಿ ಆರಂಭಿಕನಾಗಿ ಕಣಕ್ಕಿಳಿದಿದ್ದ ಬಾಬರ್ ಮೊದಲ ಓವರ್‌ನಲ್ಲೇ ಸ್ಟಂಪ್ ಔಟ್ ಆಗಿದ್ದರು. ಹೀಗಾಗಿಯೇ ಚಾಲೆಂಜರ್ ಪಂದ್ಯದಲ್ಲಿ ಬಾಬರ್ ಆಝುಂ ಅವರ ಬದಲಿಗೆ ಬೇರೊಬ್ಬ ಆರಂಭಿಕನನ್ನು ಕಣಕ್ಕಿಳಿಸಬೇಕೆಂದು ಆಸ್ಟ್ರೇಲಿಯಾದ ಮಾಜಿ ಆಟಗಾರರು ಅಭಿಪ್ರಾಯಪಟ್ಟಿದ್ದರು. ಅತ್ತ ಸಿಡ್ನಿ ಸಿಕ್ಸರ್ಸ್ ಮ್ಯಾನೇಜ್ಮೆಂಟ್ ಕೂಡ ಬಾಬರ್ ಅವರನ್ನು ನಿರ್ಣಾಯಕ ಪಂದ್ಯದಿಂದ ಕೈ ಬಿಡಲು ಯೋಜನೆ ರೂಪಿಸಿದ್ದರು.

ಈ ಸೂಚನೆ ಸಿಕ್ಕ ಬೆನ್ನಲ್ಲೇ ಬಾಬರ್ ಆಝುಂ ಬಿಗ್ ಬ್ಯಾಷ್ ಲೀಗ್‌ನಿಂದ ಹೊರ ನಡೆದಿದ್ದಾರೆ. ಅದು ಕೂಡ ರಾಷ್ಟ್ರೀಯ ತಂಡದ ಪರ ಆಡುವ ನೆಪದೊಂದಿಗೆ. ಅಂದರೆ ಮುಂಬರುವ ಆಸ್ಟ್ರೇಲಿಯಾ ವಿರುದ್ಧದ ಟಿ20 ಸರಣಿಗೆ ಸಜ್ಜಾಗಲು ತವರಿಗೆ ಹಿಂತಿರುಗುತ್ತಿರುವುದಾಗಿ ಬಾಬರ್ ಆಝುಂ ತಿಳಿಸಿದ್ದಾರೆ. ಆದರೆ ಇಂಟ್ರೆಸ್ಟಿಂಗ್ ವಿಷಯ ಎಂದರೆ, ಪಾಕಿಸ್ತಾನ್ ಹಾಗೂ ಆಸ್ಟ್ರೇಲಿಯಾ ನಡುವಣ ಟಿ20 ಸರಣಿ ಶುರುವಾಗುವುದು ಜನವರಿ 29 ರಿಂದ ಎಂಬುದು. ಅಂದರೆ ಮುಂದಿನ ಸರಣಿಗೆ ಇನ್ನೂ ಒಂದು ವಾರವಿದೆ ಇತ್ತ ಬಿಗ್ ಬ್ಯಾಷ್ ಲೀಗ್‌ನಲ್ಲಿ ಉಳಿದಿರುವುದು ಕೇವಲ 2 ಮ್ಯಾಚ್‌ಗಳು ಮಾತ್ರ. ಅಂದರೆ ಜನವರಿ 23 ರಂದು ಸಿಡ್ನಿ ಸಿಕ್ಸರ್ಸ್ ಹಾಗೂ ಹೋಬಾರ್ಟ್ ಹರಿಕೇನ್ಸ್ ನಡುವೆ ಚಾಲೆಂಜರ್ ಪಂದ್ಯ ನಡೆಯಲಿದೆ. ಈ ಪಂದ್ಯದಲ್ಲಿ ಗೆಲ್ಲುವ ತಂಡ ಜನವರಿ 25 ರಂದು ಪರ್ತ್ ಸ್ಕಾಚರ್ಸ್ ವಿರುದ್ಧ ಫೈನಲ್ ಪಂದ್ಯವಾಡಲಿದೆ.


ಆದರೆ ಬಿಗ್ ಬ್ಯಾಷ್ ಲೀಗ್ ಮುಗಿಯಲು ಕೇವಲ ಮೂರು ದಿನಗಳಿರುವಾಗ ಬಾಬರ್ ಆಝುಂ ಟೂರ್ನಿಯಿಂದ ಹೊರ ನಡೆದಿದ್ದಾರೆ. ಅದು ಸಹ ಮುಂದಿನ ವಾರ ನಡೆಯಲಿರುವ ಆಸ್ಟ್ರೇಲಿಯಾ ವಿರುದ್ಧದ ಟಿ20 ಸರಣಿಯ ನೆನಪೊಡ್ಡಿ.ಇದರಾರ್ಥ ಬಾಬರ್ ಆಝುಂ ಅವರನ್ನು ಚಾಲೆಂಜರ್ ಪಂದ್ಯದಿಂದ ಸಿಡ್ನಿ ಸಿಕ್ಸರ್ಸ್ ಕೈ ಬಿಡುವುದು ಖಚಿತವಾಗಿತ್ತು. ಅಲ್ಲದೆ ಸಿಡ್ನಿ ತಂಡವು ಫೈನಲ್‌ಗೇರಿದರೂ ಬಾಬರ್‌ನನ್ನು ಕಣಕ್ಕಿಳಿಸದಿರಲು ನಿರ್ಧರಿಸಿತ್ತು.

# ಹಿಟ್‌ಮ್ಯಾನ್ ಇನ್ಮುಂದೆ ಡಾ. ರೋಹಿತ್ ಶರ್ಮಾ

ಭಾರತ ತಂಡಕ್ಕೆ ಟಿ20 ವಿಶ್ವಕಪ್ ಗೆಲ್ಲಿಸಿಕೊಟ್ಟ ನಾಯಕ ರೋಹಿತ್ ಶರ್ಮಾ ಅವರಿಗೆ ಪುಣೆಯ ಅಜಿಂಕ್ಯ ಡಿವೈ ಪಾಟೀಲ್ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಸಂದಿದೆ. ಕ್ರಿಕೆಟ್‌ಗೆ ಅವರ ಅಸಾಧಾರಣ ಕೊಡುಗೆಗಳು, ನಾಯಕತ್ವದಲ್ಲಿ ಎರಡು ಐಸಿಸಿ ಟ್ರೋಫಿಗಳನ್ನು ಗೆದ್ದ ಸಾಧನೆ ಮತ್ತು ಅಂತರರಾಷ್ಟ್ರೀಯ ದಾಖಲೆಗಳಿಗಾಗಿ ಈ ಗೌರವ ನೀಡಲಾಗಿದೆ. ಇನ್ನು ಮುಂದೆ ರೋಹಿತ್ ಶರ್ಮಾ ಡಾ. ರೋಹಿತ್ ಶರ್ಮಾ ಎಂದು ಗುರುತಿಸಿಕೊಳ್ಳಲಿದ್ದಾರೆ. ಭಾರತ ತಂಡಕ್ಕೆ ಟಿ20 ವಿಶ್ವಕಪ್ ಗೆಲ್ಲಿಸಿಕೊಟ್ಟ ನಾಯಕ ಮತ್ತು ಹಲವಾರು ಸ್ಮರಣೀಯ ಗೆಲುವುಗಳಲ್ಲಿ ತಂಡವನ್ನು ಮುನ್ನಡೆಸಿದ್ದ ಮಾಜಿ ನಾಯಕ ರೋಹಿತ್ ಶರ್ಮಾ ಅವರಿಗೆ ಗೌರವ ಡಾಕ್ಟರೇಟ್ ಸಂದಿದೆ. ಪುಣೆಯ ಅಜಿಂಕ್ಯ ಡಿವೈ ಪಾಟೀಲ್ ವಿಶ್ವವಿದ್ಯಾಲಯ ರೋಹಿತ್ ಶರ್ಮಾ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಲಿದೆ. ಜನವರಿ 24 ರಂದು ನಡೆಯುವ ವಿಶ್ವವಿದ್ಯಾಲಯದ 10 ನೇ ಘಟಿಕೋತ್ಸವ ಸಮಾರಂಭದಲ್ಲಿ ಈ ಗೌರವವನ್ನು ಪ್ರದಾನ ಮಾಡಲಾಗುವುದು. ಕ್ರಿಕೆಟ್‌ಗೆ ರೋಹಿತ್ ಶರ್ಮಾ ನೀಡಿದ ಅಸಾಧಾರಣ ಕೊಡುಗೆಗಳಿಗಾಗಿ ಅವರನ್ನು ಗೌರವಿಸಲಾಗುತ್ತಿದೆ ಎಂದು ವಿಶ್ವವಿದ್ಯಾಲಯವೇ ಘೋಷಿಸಿದೆ. ಕ್ರಿಕೆಟ್ ಲೋಕದಲ್ಲಿ ಹಿಟ್‌ಮ್ಯಾನ್ ಎಂದೇ ಪ್ರಸಿದ್ಧರಾಗಿರುವ ರೋಹಿತ್ ಶರ್ಮಾ ಇನ್ನು ಮುಂದೆ ಡಾ. ರೋಹಿತ್ ಶರ್ಮಾ ಎನಿಸಿಕೊಳ್ಳಲಿದ್ದಾರೆ. ರೋಹಿತ್ ಶರ್ಮಾ ಭಾರತದ ಅತ್ಯಂತ ಯಶಸ್ವಿ ಆಟಗಾರರಲ್ಲಿ ಒಬ್ಬರು. ಭಾರತದ ಪರ ಮೂರು ಮಾದರಿಯ ಕ್ರಿಕೆಟ್‌ನಲ್ಲಿ ತಂಡವನ್ನು ಮುನ್ನಡೆಸಿದ್ದ ರೋಹಿತ್ ಈಗಾಗಲೇ ಟೆಸ್ಟ್ ಮತ್ತು ಟಿ20 ಅಂತರರಾಷ್ಟ್ರೀಯ ಕ್ರಿಕೆಟ್‌ನಿಂದ ನಿವೃತ್ತರಾಗಿದ್ದಾರೆ. ಆದರೆ ಏಕದಿನ ಮಾದರಿಯಲ್ಲಿ ಅವರ ಪರಾಕ್ರಮ ಮುಂದುವರೆದಿದೆ. ಮೇಲೆ ಹೇಳಿದಂತೆ ಭಾರತದ ಅತ್ಯಂತ ಯಶಸ್ವಿ ನಾಯಕರಲ್ಲಿ ಒಬ್ಬರಾಗಿರುವ ರೋಹಿತ್ ತಮ್ಮ ನಾಯಕತ್ವದಲ್ಲಿ ಭಾರತ ತಂಡವನ್ನು ಎರಡೆರಡು ಐಸಿಸಿ ಟ್ರೋಫಿ ಗೆಲುವಿನತ್ತ ಮುನ್ನಡೆಸಿದ್ದರು.



# ಗಂಭೀರ್‌ಗೆ ಅತ್ಯಂತ ಕಷ್ಟಕರ ಕೆಲಸ



ಶಶಿ ತರೂರ್ ಟೀಮ್ ಇಂಡಿಯಾ ಕೋಚ್ ಅನ್ನು ಹಾಡಿ ಹೊಗಳಿದ್ದಾರೆ.ನನ್ನ ಹಳೆಯ ಗೆಳೆಯ ಗೌತಮ್ ಗಂಭೀರ್ ಅವರನ್ನು ನಾಗಪುರದಲ್ಲಿ ಭೇಟಿಯಾದೆ.

ಅವರೊಂದಿಗಿನ ಒಳ್ಳೆಯ ಮತ್ತು ಮುಕ್ತ ಚರ್ಚೆಯನ್ನು ಆನಂದಿಸಿದೆ. ಪ್ರಧಾನಿ ಹುದ್ದೆಯ ನಂತರ ಭಾರತದಲ್ಲಿ ಅತ್ಯಂತ ಕಠಿಣ ಕೆಲಸ ಮಾಡುವ ವ್ಯಕ್ತಿ ಗೌತಮ್ ಗಂಭೀರ್. ಪ್ರತಿದಿನ ಲಕ್ಷಾಂತರ ಜನರು ಅವರ ನಿರ್ಧಾರಗಳನ್ನು ಪ್ರಶ್ನಿಸುತ್ತಾರೆ. ಆದರೆ, ಅವರು ಸಂಪೂರ್ಣ ಶಾಂತತೆ ಮತ್ತು ದೃಢನಿಶ್ಚಯದಿಂದ, ಹಿಂಜರಿಯದೆ ಮುಂದುವರಿಯುತ್ತಿದ್ದಾರೆ. ಅವರ ಶಾಂತ ಸಂಕಲ್ಪ ಮತ್ತು ಸಮರ್ಥ ನಾಯಕತ್ವವನ್ನು ಶ್ಲಾಘಿಸಬೇಕು. ಮುಂದಿನ ಸವಾಲುಗಳಿಗೆ ಅವರು ಅವರಿಗೆ ಶುಭ ಹಾರೈಸುತ್ತೇನೆ ಎಂದು ಶಶಿ ತರೂರ್ ಸೋಷಿಯಲ್ ಮೀಡಿಯಾದಲ್ಲಿ ಬರೆದುಕೊಂಡಿದ್ದಾರೆ. ಶಶಿ ತರೂರ್ ಅವರ ಈ ಪೋಸ್ಟ್‌ಗೆ ಪ್ರತಿಕ್ರಿಯಿಸಿರುವ ಗೌತಮ್ ಗಂಭೀರ್, ಧನ್ಯವಾದಗಳು ಎಲ್ಲಾ ಗದ್ದಲ ಮತ್ತು ಟೀಕೆಗಳು ಕಡಿಮೆಯಾದಾಗ, ತರಬೇತುದಾರರ ಅಪರಿಮಿತ ಶಕ್ತಿಯ ಹಿಂದಿನ ಸತ್ಯ ಮತ್ತು ತರ್ಕವು ಸ್ಪಷ್ಟವಾಗುತ್ತದೆ.ಅಲ್ಲಿಯವರೆಗೆ, ಅತ್ಯುತ್ತಮವಾಗಿರುವ ನನ್ನವರ ವಿರುದ್ಧವೇ ನನ್ನನ್ನು ಎತ್ತಿಕಟ್ಟುತ್ತಿರುವುದನ್ನು ನೋಡುವುದೇ ಕುತೂಹಲಕಾರಿ ಎಂದು ಗಂಭೀರ್ ಬರೆದುಕೊಂಡಿದ್ದಾರೆ.

ಅಂದಹಾಗೆ ಶಶಿ ತರೂರ್ ಅವರು ಗೌತಮ್ ಗಂಭೀರ್ ಅವರು ಕಷ್ಟಕರ ಹುದ್ದೆಯಲ್ಲಿದ್ದಾರೆ ಎಂದು ಹೇಳಲು ಮುಖ್ಯ ಕಾರಣ ಟೀಮ್ ಇಂಡಿಯಾ ಕೋಚ್ ವಿರುದ್ಧ ಕೇಳಿ ಬರುತ್ತಿರುವ ಟೀಕೆ ಟಿಪ್ಪಣಿಗಳು. ಗಂಭೀರ್ ಕೋಚಿಂಗ್‌ನಲ್ಲಿ ಭಾರತ ಟೆಸ್ಟ್ ತಂಡವು ಅಧಃಪತನದತ್ತ ಸಾಗಿದೆ. ಅಷ್ಟೇ ಅಲ್ಲದೆ ಇತ್ತೀಚೆಗೆ ನಡೆದ ನ್ಯೂಝಿಲೆಂಡ್ ವಿರುದ್ಧದ ಏಕದಿನ ಸರಣಿಯಲ್ಲಿ ಟೀಮ್ ಇಂಡಿಯಾ 2-1 ಅಂತರದಿಂದ ಸೋಲನುಭವಿಸಿದೆ. ಈ ಮೂಲಕ ನ್ಯೂಝಿಲೆಂಡ್ ತಂಡವು ಇದೇ ಮೊದಲ ಬಾರಿಗೆ ಭಾರತದಲ್ಲಿ ಏಕದಿನ ಸರಣಿ ಗೆದ್ದುಕೊಂಡಿದೆ. ಅಂದರೆ ಕಳೆದ 37 ವರ್ಷಗಳಲ್ಲಿ ನ್ಯೂಝಿಲೆಂಡ್ ಒಮ್ಮೆಯೂ ಭಾರತದಲ್ಲಿ ಏಕದಿನ ಸರಣಿ ಗೆದ್ದಿರಲಿಲ್ಲ. ಹೀಗಾಗಿಯೇ ಭಾರತ ತಂಡದ ಸೋಲಿಗೆ ಟೀಮ್ ಇಂಡಿಯಾ ಕೋಚ್ ಗೌತಮ್ ಗಂಭೀರ್ ಅವರನ್ನು ಟೀಕಿಸಲಾಗಿತ್ತು. ಅವರ ಕಾರ್ಯ ವೈಖರಿಗಳ ಬಗ್ಗೆ ಪ್ರಶ್ನೆಗಳನ್ನೆತ್ತಲಾಗಿತ್ತು. ಹೀಗಾಗಿಯೇ ಶಶಿ ತರೂರ್ ಅವರು ಭಾರತದಲ್ಲಿ ಪ್ರಧಾನಿ ಹುದ್ದೆಯ ನಂತರ ಅತ್ಯಂತ ಕಷ್ಟಕರ ಕಷ್ಟಕರ ಕೆಲಸವನ್ನು ನಿರ್ವಹಿಸುತ್ತಿರುವುದು ಗಂಭೀರ್ ಎಂದಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966